ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಮಾರ್ಚ್ 30 ಶನಿವಾರ 2024

ಸಂಪುಟ: 44 | ಸಂಚಿಕೆ: 341 | ಪುಟಗಳು: 12

₹4

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್.ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ: Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ/ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

ಪಿಎಸ್ಐ ಮರುಪರೀಕ್ಷೆಗೆ ಹಾಜರಾಗಿದ್ದವರ ಅಂಕಗಳ ಅಂತಿಮ ಪಟ್ಟಿ ಪ್ರಕಟ

ಸಿಇಟಿಗೆ ಅರ್ಜಿ ಸಲ್ಲಿಸಲು ಮತ್ತೊಂದು ಅವಕಾಶ

ಬೆಂಗಳೂರು, ಮಾ.29 (ಕೆಎಂಶಿ)– ಪೊಲೀಸ್ ಸಬ್ ಇನ್ಸ್‌ಪೆಕ್ಟರ್ (ಪಿಎಸ್ಐ) ಹುದ್ದೆಗಳ ನೇಮಕಾತಿ ಅಂಗವಾಗಿ ಜ.23ರಂದು ನಡೆಸಿದ್ದ ಮರುಪರೀಕ್ಷೆಗೆ ಹಾಜರಾಗಿದ್ದ ಅಭ್ಯರ್ಥಿಗಳು ಪತ್ರಿಕೆ–1 ಮತ್ತು 2ರಲ್ಲಿ ಗಳಿಸಿರುವ ಅಂಕಗಳ ಅಂತಿಮ ಪಟ್ಟಿಯನ್ನು ಪ್ರಕಟಿಸಲಾಗಿದೆ ಎಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕಿ ಎಸ್.ರಮ್ಯಾ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಒಟ್ಟು 545 ಹುದ್ದೆಗಳ ನೇಮಕಕ್ಕೆ ಕೆಇಎ ಮರು ಪರೀಕ್ಷೆ ನಡೆಸಿತ್ತು. ಅಭ್ಯರ್ಥಿಗಳು ಪಡೆದ ಅಂಕಗಳ ಮಾಹಿತಿಯನ್ನು ಸದ್ಯದಲ್ಲೇ ಗೃಹ ಇಲಾಖೆಗೆ ಸಲ್ಲಿಸಲಾಗುತ್ತದೆ. ಅದರ ನಂತರ ರೋಸ್ಟರ್ ಆಧಾರದ ಮೇಲೆ ಆಯ್ಕೆ ಪಟ್ಟಿಯನ್ನು ಅವರು ಪ್ರಕಟಿಸಲಿದ್ದಾರೆ.

ಏ.18 ಮತ್ತು 19ರಂದು ನಡೆಸಲು ಉದ್ದೇಶಿಸಿರುವ ಸಿಇಟಿ ಪರೀಕ್ಷೆಗೆ ಆನ್‌ಲೈನ್ ಅರ್ಜಿ ಸಲ್ಲಿಸಲು ಮಾರ್ಚ್ 30ರ ಬೆಳಿಗ್ಗೆ 11 ಗಂಟೆಯಿಂದ ಏ.1ರ ಸಂಜೆ 4 ಗಂಟೆಯವರೆಗೆ ಮತ್ತೊಂದು ಅವಕಾಶ ಕೊಡಲಾಗಿದೆ. ಅರ್ಜಿ ಸಲ್ಲಿಸುವವರು ಏ.1ರ ರಾತ್ರಿ 8 ಗಂಟೆಯವರೆಗೂ ಶುಲ್ಕ ಪಾವತಿಸಬಹುದು. ಈ ಅವಕಾಶವನ್ನು ಬಳಸಿಕೊಳ್ಳುವ ವಿದ್ಯಾರ್ಥಿಗಳಿಗೆ ಬೆಂಗಳೂರಿನ ಕೇಂದ್ರಗಳಲ್ಲಿ ಮಾತ್ರ ಪರೀಕ್ಷೆ ಬರೆಯಲು ಅವಕಾಶ ಮಾಡಿಕೊಡಲಾಗುವುದು. ಜ.23 ರಂದು 42 ನಾನಾ ವಿಷಯಗಳಿಗೆ ನಡೆಸಲಾಗಿದ್ದ ಕೆಸೆಟ್ ಪರೀಕ್ಷೆಯ ಪೈಕಿ ಆಕ್ಷೇಪಣೆಗಳು ಕಂಡುಬಂದಿದ್ದ 23 ವಿಷಯಗಳಲ್ಲಿ ಮನಃಶಾಸ್ತ್ರವನ್ನು ಹೊರತುಪಡಿಸಿ, ಮಿಕ್ಕ 22 ವಿಷಯ ಗಳ ಪರಿಷ್ಕೃತ ಕೀ ಉತ್ತರಗಳನ್ನು ಪ್ರಕಟಿ ಸಲಾಗಿದೆ ಎಂದು ರಮ್ಯಾ ತಿಳಿಸಿದ್ದಾರೆ.

ಒಂದಾಗಿ ಹೋರಾಡೋಣ

ಬಿಜೆಪಿ–ಜೆಡಿಎಸ್ ಸಮನ್ವಯ ಸಮಿತಿ ಸಭೆಯಲ್ಲಿ ಮುಖಂಡರ ಒಗ್ಗಟ್ಟಿನ ಮಂತ್ರ

- ಒಂದಾಗಿ ಹೋರಾಟ ಮಾಡದಿದ್ದರೆ 28ಕ್ಕೆ 28 ಗೆಲ್ಲಲಾಗದು; ಸಿದ್ದರಾಮಯ್ಯರ ಗರ್ವಭಂಗ ಆಗಬೇಕು: ಹೆಚ್‌ಡಿಡಿ
- ನಾವೆಲ್ಲ ಒಂದೇ ತಾಯಿ ಮಕ್ಕಳಂತೆ ಎನ್‌ಡಿಎ ಅಭ್ಯರ್ಥಿ ಗೆಲುವಿಗೆ ಪಣ ತೊಡಬೇಕು: ಯಡಿಯೂರಪ್ಪ
- ಮೋದಿ ಮತ್ತೆ ಪ್ರಧಾನಿಯಾಗಲು ಮಾಜಿ ಪ್ರಧಾನಿ ದೇವೇಗೌಡಜೀ ಆಶೀರ್ವಾದ ಮಾಡಿದ್ದಾರೆ, ನಮಗೆ ಈಗ ಆನೆ ಬಲ ಬಂದಿದೆ: ವಿಜಯೇಂದ್ರ

ಬೆಂಗಳೂರು, ಮಾ.29 (ಕೆಎಂಶಿ)– ಸಣ್ಣಪುಟ್ಟ ಭಿನ್ನಾಭಿಪ್ರಾಯ ಮರೆತು ಕಾಂಗ್ರೆಸ್ ಅಭ್ಯರ್ಥಿಗಳ ವಿರುದ್ಧ ಒಂದಾಗಿ ಹೋರಾಟ ಮಾಡಿ ಎಂದು ಬಿಜೆಪಿ–ಜೆಡಿಎಸ್ ಮುಖಂಡರು ತಮ್ಮ ಪಕ್ಷಗಳ ಕಾರ್ಯಕರ್ತರು ಮತ್ತು ನಾಯಕರಿಗೆ ಇಂದಿಲ್ಲಿ ಕಿವಿಮಾತು ಹೇಳಿದ್ದಾರೆ.

ನಾವು ಒಂದಾಗಿ ಮುಂದೆ ಹೋಗುವುದರಿಂದ ಕರ್ನಾಟಕದಲ್ಲಿ ಕಾಂಗ್ರೆಸ್ ಹೇಳಲು ಹೆಸರಿಲ್ಲದಂತಾಗುತ್ತದೆ. ನಾವೇ ರಾಜ್ಯ ಮತ್ತು ಕೇಂದ್ರದಲ್ಲಿ ಅಧಿಕಾರದ ಚುಕ್ಕಾಣಿ ಹಿಡಿಯುತ್ತೇವೆ ಎಂದು ಮುಖಂಡರು ಹೇಳಿದ್ದಾರೆ.

ಲೋಕಸಭಾ ಚುನಾವಣೆಯಲ್ಲಿ ಮೈತ್ರಿ ಮಾಡಿಕೊಂಡ ನಂತರ ಉಭಯ ಪಕ್ಷಗಳ ಮುಖಂಡರು ಒಂದಾಗಿದ್ದರೂ, ಅಲ್ಲಲ್ಲಿ ಕಾರ್ಯಕರ್ತರ ಅಪಸ್ವರ ಇತ್ತು. ಇದರ ಬೆನ್ನಲ್ಲೇ ಇಂದು ರಾಜ್ಯಾದ್ಯಂತ ಎರಡೂ ಪಕ್ಷಗಳ ಮುಖಂಡರ ಸಮನ್ವಯ ಸಮಿತಿ ಸಭೆಯಲ್ಲಿ ನಾಯಕರು ಮೋದಿ ಪ್ರಧಾನಿಯಾಗಲು ನಾವು ಎಲ್ಲಾ ಬಿನ್ನಾಭಿಪ್ರಾಯ ಮರೆತು ಕಾಂಗ್ರೆಸ್ ವಿರುದ್ಧ ಹೋರಾಟ ಮಾಡುವ ಪಣತೊಟ್ಟಿದ್ದಾರೆ. ಸಭೆಯಲ್ಲಿ ಮಾತನಾಡಿದ ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡ, ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಹೆಚ್.ಡಿ. ಕುಮಾರಸ್ವಾಮಿ,



ಬಿಜೆಪಿ–ಜೆಡಿಎಸ್ ಪಕ್ಷಗಳ ಮುಖಂಡರ ಸಮನ್ವಯ ಸಮಿತಿ ಸಭೆಯಲ್ಲಿ ಉಭಯ ಪಕ್ಷಗಳ ನಾಯಕರು ಮತ್ತೊಮ್ಮೆ ಮೋದಿ ಪ್ರಧಾನಿ ಮಾಡಲು ಒಗ್ಗಟ್ಟಿನ ಬಲ ಪ್ರದರ್ಶಿಸಿದರು. ಚಿತ್ರದಲ್ಲಿ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ, ಮಾಜಿ ಮುಖ್ಯಮಂತ್ರಿಗಳಾದ ಬಿ.ಎಸ್.ಯಡಿಯೂರಪ್ಪ, ಹೆಚ್.ಡಿ.ಕುಮಾರಸ್ವಾಮಿ, ಬಸವರಾಜ ಬೊಮ್ಮಾಯಿ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಲೋಕಸಭಾ ಚುನಾವಣೆಯ ರಾಜ್ಯ ಬಿಜೆಪಿ ಉಸ್ತುವಾರಿ ರಾಧಾ ಮೋಹನ್‌ದಾಸ್ ಅಗರವಾಲ್ ಇನ್ನಿತರರಿದ್ದಾರೆ.

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ಲೋಕಸಭಾ ಚುನಾವಣೆಯ ರಾಜ್ಯ ಬಿಜೆಪಿ ಉಸ್ತುವಾರಿ ರಾಧಾ ಮೋಹನ್ ದಾಸ್ ಅಗರವಾಲ್ ವಿರೋಧ ಪಕ್ಷದ ನಾಯಕ ಆರ್.ಅಶೋಕ್, ಮಾಜಿ ಸಚಿವ ಜಿ.ಟಿ.ದೇವೇಗೌಡ, ತಮ್ಮ ಕಾರ್ಯಕರ್ತರು ಮತ್ತು ಮುಖಂಡರಿಗೆ ● 6ನೇ ಪುಟಕ್ಕೆ

> “ಜೆಡಿಎಸ್ ಎಲ್ಲಿದೆ ಎಂದು ಸಿದ್ದರಾಮಯ್ಯ ಕೇಳುತ್ತಾರೆ. ಅವರಿಗೆ ಅಧಿಕಾರದ ಮದ ಏರಿದೆ. ಮೈಸೂರು, ಚಾಮರಾಜನಗರ ಕ್ಷೇತ್ರ ಗೆಲ್ಲುವ ಶಕ್ತಿ ನಿಮಗೆ ಇದೆ ಜಿ.ಟಿ.ದೇವೇಗೌಡರೇ. ಸಿದ್ದರಾಮಯ್ಯನವರ ಗರ್ವಭಂಗ ಆಗಬೇಕು. ಪರಸ್ಪರ ಸಹಕಾರ, ಒಗ್ಗಟ್ಟಿಗೆ ಯಡಿಯೂರಪ್ಪ ಪಾತ್ರ ಮುಖ್ಯವಾಗಿದೆ. ಹಿಂದೆ ಆಗಿದ್ದೆಲ್ಲ ಮರೆತುಬಿಡಿ, ಕಾಲ ಕ್ಷಣಿಕ. ಹಿಂದೆ ಆಗಿರುವ ಲೋಪಗಳನ್ನು ಸರಿಪಡಿಸಿಕೊಂಡು ಮುಂದುವರೆಯೋಣ. ದೇಶದಲ್ಲಿ ಮೋದಿಯವರಂಥ ನಾಯಕ ಮತ್ತೊಬ್ಬರು ಇಲ್ಲ.
>
> – ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ

ಜೆಡಿಎಸ್–ಬಿಜೆಪಿ ಮೈತ್ರಿಯಿಂದ ಕಾಂಗ್ರೆಸ್ ವಲಯದಲ್ಲಿ ನಡುಕ

ಮೈ ಮರೆಯೋದು ಬೇಡ; ಮೋದಿ ಮತ್ತೆ ಪ್ರಧಾನಿ ಆಗೋದು ಗ್ಯಾರಂಟಿ: ಕುಮಾರಸ್ವಾಮಿ ಅಚಲ ವಿಶ್ವಾಸ

ಬೆಂಗಳೂರು, ಮಾ.29 (ಕೆಎಂಶಿ)– ರಾಜ್ಯದಲ್ಲಿ ಜೆಡಿಎಸ್ ಮತ್ತು ಬಿಜೆಪಿ ಮೈತ್ರಿಯಿಂದ ಕಾಂಗ್ರೆಸ್ ಪಕ್ಷಕ್ಕೆ ನಡುಕ ಹುಟ್ಟಿದೆ. ನಾವು ಎಲ್ಲಿಯೂ ಮೈ ಮರೆಯೋದು ಬೇಡ. ಸೂರ್ಯಚಂದ್ರರು ಹುಟ್ಟೋದು ಎಷ್ಟು ಸತ್ಯವೋ ಕೇಂದ್ರದಲ್ಲಿ ನರೇಂದ್ರ ಮೋದಿ ಅವರ ಸರಕಾರ ಮತ್ತೆ ಅಧಿಕಾರಕ್ಕೆ ಬರುವುದು ಅಷ್ಟೇ ಸತ್ಯ ಎಂದು ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಹೇಳಿದರು.

ನಗರದಲ್ಲಿ ನಡೆದ ಜೆಡಿಎಸ್–ಬಿಜೆಪಿ ಸಮನ್ವಯ ಸಮಿತಿ ಸಭೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು; ನಮ್ಮ ಎರಡು ಪಕ್ಷಗಳ ಸಮನ್ವಯತೆಯನ್ನು ಬೂತ್ ಮಟ್ಟದಿಂದ ಬಲಪಡಿಸಿಕೊಳ್ಳಬೇಕು. ಇವತ್ತಿನ ಮೈತ್ರಿಗೆ ಈ ಚುನಾವಣೆ ಮೂಲಕ ಭದ್ರ ಬುನಾದಿ ಹಾಕಿದರೆ ಭವಿಷ್ಯದಲ್ಲಿ ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷವನ್ನು ಇನ್ನಿಲ್ಲದಂತೆ ಮಾಡಬಹುದು ಎಂದರು.

ಮೋದಿ ಮತ್ತೆ ಪ್ರಧಾನಿ ಆಗುವ ಭಾವನೆ: ಕಾಂಗ್ರೆಸ್‌ನವರಿಗೆ ಮೈತ್ರಿಯ ಬಗ್ಗೆ ನಡುಕ ಉಂಟಾಗಿದೆ. ಇಡೀ ರಾಜ್ಯದ ಜನ ನಮ್ಮ ಮೈತ್ರಿಕೂಟದ ಬಗ್ಗೆ ಒಳ್ಳೆಯ ಅಭಿಪ್ರಾಯ ಹೊಂದಿದ್ದಾರೆ. ನರೇಂದ್ರ ಮೋದಿ ಅವರು ಪ್ರಧಾನಿ ಆಗಬೇಕು ಎಂದು ಎಲ್ಲರೂ ಬಯಸಿದ್ದಾರೆ. ಹೀಗಾಗಿ ನಮ್ಮಲ್ಲಿನ ವಿಶ್ವಾಸಕ್ಕೆ ಕಿಂಚಿತ್ತೂ ವ್ಯತ್ಯಾಸ ಬರಬಾರದು. ಏನೇ ಸಮಸ್ಯೆ ಇದ್ದರೂ, ನಮ್ಮ ಗಮನಕ್ಕೆ ತನ್ನಿ. ಯಾರೂ ವೈಯಕ್ತಿಕ ಪ್ರತಿಷ್ಠೆಗೆ ಬೀಳುವುದು ಬೇಡ. ನಮ್ಮ ಮನಸ್ಸು ಶುದ್ಧ, ಮೈತ್ರಿಯು ಈ ಚುನಾವಣೆಗೆ ಮಾತ್ರವಲ್ಲ, ಮುಂದೆಯೂ ಮುಂದುವರಿಸಿಕೊಂಡು ಹೋಗಬೇಕು. ಈ ಮೈತ್ರಿ ಅಧಿಕಾರಕ್ಕಾಗಿ ಅಲ್ಲ, ರಾಜ್ಯದ ಅಭಿವೃದ್ಧಿಗಾಗಿ ಎಂದು ಮಾಜಿ ಮುಖ್ಯಮಂತ್ರಿಗಳು ಒತ್ತಿ ಹೇಳಿದರು. 2006ರಲ್ಲಿ ಜೆಡಿಎಸ್–ಬಿಜೆಪಿ ಮೈತ್ರಿ ಆದಾಗ ದೇಶಕ್ಕೆ ಮಾದರಿಯಾಗುವ ● 6ನೇ ಪುಟಕ್ಕೆ

ಸುಮಲತಾ ಭೇಟಿ ಮಾಡಿದ ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ

- ಎನ್‌ಡಿಎ ಅಭ್ಯರ್ಥಿ ಕುಮಾರಸ್ವಾಮಿ ಬೆಂಬಲಿಸಲು ಮನವಿ
- ಇಂದು ನಿರ್ಧಾರ ಪ್ರಕಟಿಸುವುದಾಗಿ ಹೇಳಿರುವ ಸುಮಲತಾ



ಬೆಂಗಳೂರು, ಮಾ.29– ಮಂಡ್ಯ ಲೋಕಸಭಾ ಕ್ಷೇತ್ರದಿಂದ ಬಿಜೆಪಿ ಟಿಕೆಟ್ ಕೈತಪ್ಪಿದ್ದರಿಂದ ಮೌನಕ್ಕೆ ಶರಣಾಗಿರುವ ಸಂಸದೆ ಸುಮಲತಾ ಅಂಬರೀಶ್ ಅವರನ್ನು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ಬೆಂಗಳೂರಿನ ಜೆ.ಪಿ.ನಗರದ ಅವರ ನಿವಾಸದಲ್ಲಿ ಇಂದು ಭೇಟಿಯಾಗಿ, ಎನ್‌ಡಿಎ ಅಭ್ಯರ್ಥಿಯನ್ನು ಬೆಂಬಲಿಸುವಂತೆ ಮನವಿ ಮಾಡಿದರು.

ಶಾಸಕ ಪ್ರೀತಂಗೌಡ ಅವರೊಂದಿಗೆ ಸುಮಲತಾ ಅವರ ಮನೆಗೆ ತೆರಳಿದ ವಿಜಯೇಂದ್ರ, ಸುದೀರ್ಘ ಮಾತುಕತೆ ನಡೆಸಿ ದೇಶದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಮತ್ತೆ ಪ್ರಧಾನಿಯಾಗಲು ಕೈಜೋಡಿಸುವಂತೆ ಮನವಿ ಮಾಡಿದರು. ಮೈತ್ರಿ ಧರ್ಮ ಪಾಲನೆ ಮಾಡಿ ಪ್ರಚಾರಕ್ಕೆ ಬರುವಂತೆ ಮನವೊಲಿಸುವ ಪ್ರಯತ್ನ ಕೂಡ ಮಾಡಿದ್ದಾರೆ. ಆದರೆ, ಸುಮಲತಾ ಅವರು ಸದ್ಯಕ್ಕೆ ಯಾವುದೇ ಭರವಸೆ ನೀಡದೇ ಬೆಂಬಲಿಗರ ಅಭಿಪ್ರಾಯ ಪಡೆದು ಮಂಡ್ಯದಲ್ಲಿ ● 7ನೇ ಪುಟಕ್ಕೆ

ವಿಜಯಪುರದಲ್ಲಿ ಮೈಸೂರಿನ ತಾಯಿ–ಮಗನ ಘೋರ ಹತ್ಯೆ

- ಪ್ರಿಯಕರನ ಮಾತಿನ ಮೋಡಿಗೆ ಮರುಳಾಗಿ ಮಗನೊಂದಿಗೆ ಬಲಿಯಾದ ಮಹಿಳೆ; ವರ್ಷದ ಹಿಂದೆಯೇ ಮಹಾರಾಷ್ಟ್ರ ಗಡಿಯ ಬಾವಿಯೊಂದರಲ್ಲಿ ಶವ ದೊರೆತಿದ್ದವು
- ವಿಜಯಪುರ ಗ್ರಾಮಾಂತರ– ಮೈಸೂರು ಉದಯಗಿರಿ ಪೊಲೀಸರ ಜಂಟಿ ತನಿಖೆ; ಹಂತಕರ ಬಂಧನ

ಮೈಸೂರು, ಮಾ.29–ಮೈಸೂರಿನ ತಾಯಿ ಮತ್ತು ಮಗನನ್ನು ವಿಜಯಪುರ ಜಿಲ್ಲೆಯಲ್ಲಿ ಹತ್ಯೆಗೈಯ್ದು, ಶವಗಳನ್ನು ಬ್ಯಾಗ್‌ನಲ್ಲಿ ತುಂಬಿ ಬಾವಿಗೆ ಎಸೆದಿದ್ದ ಪ್ರಕರಣವನ್ನು ವಿಜಯಪುರ ಗ್ರಾಮಾಂತರ ಠಾಣೆ ಹಾಗೂ ಮೈಸೂರಿನ ಉದಯಗಿರಿ ಠಾಣೆ ಪೊಲೀಸರು ಜಂಟಿ ಕಾರ್ಯಾಚರಣೆಯಲ್ಲಿ ಭೇದಿಸಲಾಗಿದ್ದು, ಇಬ್ಬರನ್ನು ಬಂಧಿಸಲಾಗಿದೆ.

ಮೈಸೂರಿನ ಸಾತಗಳ್ಳಿ ನಿವಾಸಿ ಶೃತಿ (36) ಮತ್ತು ಆಕೆಯ ಪುತ್ರ ರೋಹನ್ (11) ಕಳೆದ ವರ್ಷ ಹತ್ಯೆಗೀಡಾಗಿದ್ದು, ಇವರನ್ನು ಹತ್ಯೆಗೈದ ಆರೋಪದಡಿ ಶೃತಿಯ ಪ್ರಿಯಕರ ವಿಜಯಪುರದ ಸಾಗರ್ ಲಮಾಣಿ ಮತ್ತು ಆತನ ಸ್ನೇಹಿತ ಲಕ್ಷ್ಮೀಕಾಂತ ಕುಂಬಾರ್ ಎಂಬುವರನ್ನು 6 ದಿನದ ಹಿಂದೆ ಬಂಧಿಸಲಾಗಿದೆ.

ವಿವರ: ವಿಜಯಪುರ ಜಿಲ್ಲೆಯ ಮಹಾರಾಷ್ಟ್ರ ಗಡಿ ತಿಕೋಟ ಸಮೀಪದ ಸಿದ್ದಾಪುರ ಗ್ರಾಮದ ಹೊರ ವಲಯದ ಬಾವಿಯಲ್ಲಿ 2023ರ ಮಾರ್ಚ್ 19ರಂದು ಲಗೇಜ್ ಬ್ಯಾಗ್‌ನಲ್ಲಿ ತಾಯಿ ಮತ್ತು ಮಗನ ಶವಗಳು ಪತ್ತೆ ಯಾಗಿತ್ತು. ಇವರನ್ನು ಹತ್ಯೆ ಮಾಡಲಾಗಿದೆ ಎಂಬ ನಿರ್ಧಾರಕ್ಕೆ ಬಂದಿದ್ದ ವಿಜಯಪುರ ಗ್ರಾಮಾಂತರ ಠಾಣೆ ಪೊಲೀಸರು ಕೊಲೆ ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸುತ್ತಿದ್ದರು. ಈ ನಡುವೆ 2024ರ ಫೆಬ್ರವರಿ 15ರಂದು ಸಾತಗಳ್ಳಿಯ ● 7ನೇ ಪುಟಕ್ಕೆ



ಆರೋಪಿ ಸಾಗರ್ ಲಮಾಣಿ



ಶೃತಿ ಮತ್ತು ಆಕೆಯ ಪುತ್ರ ರೋಹನ್

ಲೋಕಸಭಾ ಚುನಾವಣೆ–2024

ಕಾಂಗ್ರೆಸ್‌ನಿಂದ ಬಾಕಿ ಮೂರು ಕ್ಷೇತ್ರಗಳ ಅಭ್ಯರ್ಥಿ ಘೋಷಣೆ

ಚಾ.ನಗರದಲ್ಲಿ ಸುನೀಲ್ ಬೋಸ್ ಸ್ಪರ್ಧೆ

ಬೆಂಗಳೂರು, ಮಾ.29–ಕಾಂಗ್ರೆಸ್ ಹೈಕಮಾಂಡ್ ಕರ್ನಾಟಕದ ಬಾಕಿ 3 ಲೋಕಸಭಾ ಕ್ಷೇತ್ರಗಳಿಗೆ ಅಭ್ಯರ್ಥಿಗಳನ್ನು ಪ್ರಕಟಿಸಿದೆ. ಚಾಮರಾಜನಗರ ಕ್ಷೇತ್ರಕ್ಕೆ ಸಚಿವ ಡಾ. ಹೆಚ್.ಸಿ. ಮಹದೇವಪ್ಪ ಪುತ್ರ ಸುನೀಲ್ ಬೋಸ್, ಚಿಕ್ಕಬಳ್ಳಾಪುರಕ್ಕೆ ರಾಜ್ಯ ಯುವ ಕಾಂಗ್ರೆಸ್ ಮಾಜಿ ಅಧ್ಯಕ್ಷ ರಕ್ಷಾ ರಾಮಯ್ಯ ಮತ್ತು ಬಳ್ಳಾರಿಗೆ ಸಂಡೂರು ಶಾಸಕ ತುಕಾರಾಂ ಅವರನ್ನು ಅಭ್ಯರ್ಥಿಗಳನ್ನಾಗಿ ಘೋಷಿಸಲಾಗಿದೆ. ಕೋಲಾರ ಕ್ಷೇತ್ರ ಹೊರತುಪಡಿಸಿ 27 ಕ್ಷೇತ್ರಗಳಿಗೂ ಕಾಂಗ್ರೆಸ್ ತನ್ನ ಅಭ್ಯರ್ಥಿಗಳನ್ನು ಪ್ರಕಟಿಸಿದಂತಾಗಿದೆ.



ಸುನೀಲ್ ಬೋಸ್



ರಕ್ಷಾ ರಾಮಯ್ಯ



ತುಕಾರಾಂ

ಜೆಡಿಎಸ್ ಅಭ್ಯರ್ಥಿಗಳ ಪಟ್ಟಿ ಪ್ರಕಟ

ಮಂಡ್ಯದಿಂದ ಕುಮಾರಸ್ವಾಮಿ ಕಣಕ್ಕೆ

ಬೆಂಗಳೂರು: ಲೋಕಸಭಾ ಚುನಾವಣೆಗೆ ಜೆಡಿಎಸ್ ಅಭ್ಯರ್ಥಿಗಳ ಅಧಿಕೃತ ಪಟ್ಟಿ ಬಿಡುಗಡೆ ಆಗಿದೆ ಎನ್‌ಡಿಎ ಜೊತೆಗೆ ಮಾಡಿಕೊಂಡ ಚುನಾವಣಾ ಪೂರ್ವ ಮೈತ್ರಿಯಂತೆ ಜೆಡಿಎಸ್ ಮೂರು ಕ್ಷೇತ್ರಗಳಲ್ಲಿ ಸ್ಪರ್ಧಿಸುತ್ತಿದ್ದು, ಮಂಡ್ಯದಿಂದ ಮಾಜಿ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ, ಕೋಲಾರದಿಂದ ಮಲ್ಲೇಶ್ ಬಾಬು ಹಾಗೂ ಹಾಸನದಿಂದ ಹಾಲಿ ಸಂಸದ ಪ್ರಜ್ವಲ್ ರೇವಣ್ಣ ಅವರ ಹೆಸರನ್ನು ಅಂತಿಮಗೊಳಿಸಿ ಪಟ್ಟಿ ಬಿಡುಗಡೆ ಮಾಡಲಾಗಿದೆ.



ಕುಮಾರಸ್ವಾಮಿ



ಮಲ್ಲೇಶ್‌ಬಾಬು



ಪ್ರಜ್ವಲ್ ರೇವಣ್ಣ

ನರೇಂದ್ರ ಮೋದಿ ಮತ್ತೆ ಪ್ರಧಾನಿಯಾಗುತ್ತಾರೆ; ಆದರೆ ಕರ್ನಾಟಕದಲ್ಲಿ ಬಿಜೆಪಿ ಹೆಚ್ಚು ಸ್ಥಾನ ಗೆಲ್ಲುವುದು ಕಷ್ಟ


ಖ್ಯಾತ ಸಾಹಿತಿ ಡಾ.ಎಸ್.ಎಲ್.ಭೈರಪ್ಪ ಭವಿಷ್ಯ

- ಬಿಜೆಪಿಗೆ ಆಡಳಿತದ ಮೇಲೆ ಹಿಡಿತವಿರಲಿಲ್ಲ
- ಅಧಿಕಾರಿಗಳ ಮೇಲೆ ಕಾಂಗ್ರೆಸ್‌ಗೆ ಕಂಟ್ರೋಲ್ ಇದೆ
- ಮೋದಿ ಅಲೆ ಕಡಿಮೆ ಆಗಿರುವುದು ಗೊತ್ತಿಲ್ಲ

ಮೈಸೂರು, ಮಾ.29(ಬಿಎಲ್‌ಯು)– ನರೇಂದ್ರ ಮೋದಿ ಮತ್ತೊಮ್ಮೆ ಪ್ರಧಾನಮಂತ್ರಿ ಆಗುವುದು ಖಚಿತ. ಆದರೆ ಕರ್ನಾಟಕದಲ್ಲಿ ಬಿಜೆಪಿ ಹೆಚ್ಚು ಸ್ಥಾನಗಳನ್ನು ಗೆಲ್ಲುವುದು ಕಷ್ಟ ಎಂದು ಖ್ಯಾತ ಸಾಹಿತಿ ಡಾ.ಎಸ್.ಎಲ್.ಭೈರಪ್ಪ ಅಭಿಪ್ರಾಯಪಟ್ಟರು.

ಮೈಸೂರಿನ ಕುವೆಂಪುನಗರದ ನಿವಾಸದಲ್ಲಿ ತಮ್ಮನ್ನು ಯದುವೀರ್ ಭೇಟಿ ಮಾಡಿದ ನಂತರ ಪತ್ರಕರ್ತರ ಜೊತೆ ಮಾತನಾಡಿದ ಅವರು, ನರೇಂದ್ರ ಮೋದಿ ಮೂರನೆ ಬಾರಿಗೆ ಪ್ರಧಾನಮಂತ್ರಿ ಆಗೇ ಆಗುತ್ತಾರೆ. ಉತ್ತರ ಭಾರತದ ರಾಜ್ಯಗಳಲ್ಲಿ ಬಿಜೆಪಿ ಅತೀ ಹೆಚ್ಚು ಸ್ಥಾನ ಗೆಲ್ಲಲಿದೆ ಎಂದು ತಿಳಿಸಿದರು.

ಆದರೆ ಕರ್ನಾಟಕದಲ್ಲಿ ಕಾಂಗ್ರೆಸ್ ಹೆಚ್ಚು ಸ್ಟ್ರಾಂಗ್ ಆಗಿರುವ ಕಾರಣ ಬಿಜೆಪಿ ಹೆಚ್ಚು ಸ್ಥಾನಗಳಲ್ಲಿ ಗೆಲ್ಲುವುದು ಕಷ್ಟ. ರಾಜ್ಯದಲ್ಲಿ ಬಿಜೆಪಿ ದುರ್ಬಲವಾಗಿರುವುದು ಇದಕ್ಕೆ ಮೂಲ ಕಾರಣ ಎಂದು ಹೇಳಿದರು. ಉತ್ತರ ಪ್ರದೇಶದ ಮಾದರಿಯ ಬಿಜೆಪಿ ಸರ್ಕಾರ ಇಲ್ಲೂ ಅಸ್ತಿತ್ವದಲ್ಲಿದ್ದರೆ ಹೆಚ್ಚು ಸ್ಥಾನ ಗೆಲ್ಲುತ್ತದೆ ಎಂದು ಖಚಿತವಾಗಿ ಹೇಳಬಹುದಿತ್ತು. ಆದರೆ ಕರ್ನಾಟಕದಲ್ಲಿ ಬಿಜೆಪಿ ಅಧಿಕಾರದಲ್ಲಿದ್ದಾಗ ಅಧಿಕಾರಿಗಳ ಮೇಲೆ ಹಿಡಿತವಿರಲಿಲ್ಲ, ಗೊಂದಲವಿತ್ತು. ಈ ಕಾರಣದಿಂದ ● 7ನೇ ಪುಟಕ್ಕೆ



ಖ್ಯಾತ ಸಾಹಿತಿ ಡಾ.ಎಸ್.ಎಲ್.ಭೈರಪ್ಪ ಅವರನ್ನು ಮೈಸೂರಿನ ಕುವೆಂಪುನಗರದ ಅವರ ನಿವಾಸದಲ್ಲಿ ಶುಕ್ರವಾರ ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಭೇಟಿ ಮಾಡಿ, ಆಶೀರ್ವಾದ ಪಡೆದರು.

ಕಾಂಗ್ರೆಸ್ ನಾಯಕರಿಗೆ ಘನತೆಯೂ ಇಲ್ಲ, ಸಂಸ್ಕೃತಿಯೂ ಇಲ್ಲ...!

ಕಾಂಗ್ರೆಸ್ ನಾಯಕರ ಮಾತಿನಲ್ಲಿ ಸ್ವಲ್ಪವೂ ಘನತೆ, ಸಂಸ್ಕೃತಿ ಇಲ್ಲ ಎಂದು ಡಾ.ಎಸ್.ಎಲ್.ಭೈರಪ್ಪ ಕಿಡಿಕಾರಿದರು.

ಯಾರ ಬಗ್ಗೆ ಮಾತನಾಡಲಿ, ಆ ಮಾತಿನಲ್ಲಿ ಘನತೆ, ಗೌರವವಿರಬೇಕು. ಆದರೆ ಕಾಂಗ್ರೆಸ್ ನಾಯಕರ ಮಾತಿನಲ್ಲಿ ಅದಾವುದೂ ಇಲ್ಲ. ರಾಜಕಾರಣದಲ್ಲಿ ಟೀಕೆ ಮಾಡುವುದು ಸಹಜ. ಆದರೆ, ಟೀಕೆ ಮಾಡುವಾಗಲೂ ಮಾತಿನಲ್ಲಿ ಘನತೆ ಇರಬೇಕು, ಸಂಸ್ಕೃತಿ ಇರಬೇಕು. ಕಾಂಗ್ರೆಸ್ ನಾಯಕರಂತೆ ಬಿಜೆಪಿ ನಾಯಕರು ಇದನ್ನು ಅನುಸರಿಸಬಾರದು ಎಂದು ಇದೇ ವೇಳೆ ಡಾ.ಭೈರಪ್ಪ ಸಲಹೆ ನೀಡಿದರು. ಕಾಂಗ್ರೆಸ್ ಸರ್ಕಾರ ಹಲವು ಯೋಜನೆಗಳನ್ನು ಫ್ರೀ ಕೊಟ್ಟಿದೆ. ಇದರಿಂದ ರಾಜ್ಯದ ಆರ್ಥಿಕ ಪರಿಸ್ಥಿತಿ ಹದಗೆಡಲಿದೆ. ಕೇಂದ್ರ ಸರ್ಕಾರದಿಂದ ಬಂದ ಹಣವನ್ನೆಲ್ಲಾ ಗ್ಯಾರಂಟಿ ಯೋಜನೆಗಳಿಗೆ ಬಳಸಿಕೊಳ್ಳುತ್ತಿದ್ದಾರೆ. ಆದರೆ ಇದನ್ನು ಮರೆಮಾಚಿ ಅನುದಾನ ಕೊಟ್ಟಿಲ್ಲ ಎಂದು ಕೇಂದ್ರ ಸರ್ಕಾರದತ್ತ ಬೊಟ್ಟು ಮಾಡಿ ತೋರಿಸುತ್ತಿದ್ದಾರೆ ಎಂದು ಟೀಕಿಸಿದರು. ನಿಮಗೆ ಗೊತ್ತೆ ಗ್ಯಾರಂಟಿ ಯೋಜನೆಗಳಿಂದ ರಾಜ್ಯದ ಆರ್ಥಿಕ ಪರಿಸ್ಥಿತಿ ಮೇಲೆ ಕೆಟ್ಟ ಪರಿಣಾಮ ಬೀರುತ್ತಿದೆ. ಆದರೆ ಇದು ಜನರಿಗೆ ತಿಳಿಯುತ್ತಿಲ್ಲ ಎಂದು ಡಾ.ಭೈರಪ್ಪ ಪುನರುಚ್ಚರಿಸಿದರು.

ನಾಳೆ ಚಾಮುಂಡಿಬೆಟ್ಟದಲ್ಲಿ ಪಕ್ಷಿ, ಕೋತಿಗಳ ನೀರಿನ ದಾಹ ತಣಿಸಲು 'ವನ್ಯಜೀವಿ ಜಲಪಾತ್ರೆ' ಕಾರ್ಯಕ್ರಮ



ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಶುಕ್ರವಾರ ನಡೆದ ಸುದ್ದಿಗೋಷ್ಠಿಯಲ್ಲಿ ನಂಜುಂಡಸ್ವಾಮಿ ಮಾತನಾಡಿದರು.

ಮೈಸೂರು, ಮಾ.29(ಜಿಎ)–ಭಾರತೀಯ ಸೇನಾ ಮಾಜಿ ಮುಖ್ಯಸ್ಥ ಕೆ.ಎನ್.ತಿಮ್ಮಯ್ಯನವರ ಜನ್ಮದಿನದ ಅಂಗವಾಗಿ ಅಖಿಲ ಕರ್ನಾಟಕ ಮಾಜಿ ಸೈನಿಕರ ಸಂಘದ ಮೈಸೂರು ಜಿಲ್ಲಾ ಘಟಕದ ವತಿ ಯಿಂದ ಮಾ.31ರಂದು ಬೆಳಗ್ಗೆ 8 ಗಂಟೆಯಿಂದ ಚಾಮುಂಡಿಬೆಟ್ಟದಲ್ಲಿ ಪಕ್ಷಿ ಮತ್ತು ಕೋತಿಗಳ ದಣಿವಾರಿಸಲು 'ವನ್ಯಜೀವಿಗಳ ಜಲಪಾತ್ರೆ ಕಾರ್ಯಕ್ರಮದ ಮೂಲಕ ಸಿಮೆಂಟ್ ತೊಟ್ಟಿಗಳನ್ನು ಇರಿಸಲಾಗುತ್ತಿದೆ ಎಂದು ಜಿಲ್ಲಾಧ್ಯಕ್ಷ ಕೆ.ಪಿ.ದಿವಾಕರ್ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದಾದ್ಯಂತ ಬೀಸಿಲ ಬೇಗೆ ಹೆಚ್ಚಾಗುತ್ತಿದ್ದು, ಮೂಕ ಪ್ರಾಣಿಗಳು ನೀರಿಗಾಗಿ ಪರದಾಡುವಂತಾಗಿದೆ. ಆದ್ದರಿಂದ ನಾವು ಚಾಮುಂಡಿಬೆಟ್ಟದ ಮಾರ್ಗದಲ್ಲಿ ಜೀವಿಸುತ್ತಿರುವ ಪ್ರಾಣಿಗಳು ಹಾಗೂ ಪಕ್ಷಿಗಳಿಗೆ ನೀರಿನ ದಾಹ ನೀಗಿಸುವ ಸಲುವಾಗಿ 'ವನ್ಯಜೀವಿ ಜಲಪಾತ್ರೆ' ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದೇವೆ ಎಂದರು. ಸುಮಾರು 20 ಸಿಮೆಂಟ್ ತೊಟ್ಟಿಗಳನ್ನು, ಸೂಕ್ತ ಸ್ಥಳಗಳನ್ನು ಗುರುತಿಸಿ, ಇಡುತ್ತಿದ್ದೇವೆ. ಈ ತೊಟ್ಟಿಗಳಲ್ಲಿ 6ರಿಂದ 7 ಲೀಟರ್‌ನಷ್ಟು ನೀರು ತುಂಬಿಸಬಹುದಾಗಿದೆ. ಇದನ್ನು ಅರಣ್ಯ ಇಲಾಖೆ ಹಾಗೂ ಗ್ರಾಪಂ ವಶಕ್ಕೆ ಒಪ್ಪಿಸಲಾಗುವುದು. ಅಲ್ಲದೆ, ಪ್ರತಿ ಭಾನುವಾರ ಘಟಕದ ಸದಸ್ಯರು ನೀರು ತುಂಬಲಿದ್ದಾರೆ ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಉಪಾಧ್ಯಕ್ಷ ನೀಲಕಂಠ ಕುಮಾರಶೆಟ್ಟಿ, ರಜಿನಿ ಸುಬ್ಬಯ್ಯ, ಲಕ್ಷ್ಮಿ, ಕೋಮಲಾ ಉಪಸ್ಥಿತರಿದ್ದರು.

ಇಂದು ಒಡಿಸ್ಸಿ ನೃತ್ಯ ಪ್ರದರ್ಶನ

ಮೈಸೂರು, ಮಾ.29–ಮೈಸೂರಿನ ಶ್ರೀಕೃಷ್ಣ ಗಾನಸಭಾ ವತಿಯಿಂದ ಮಾ.30ರಂದು ಗೋಕುಲಂನಲ್ಲಿರುವ ಆಳ್ವಾರ್ ಕಲಾ ಭವನದಲ್ಲಿ ವಿದುಷಿ ಸಿಂಧು ಕಿರಣ್ ಮತ್ತು ಅವರ ಶಿಷ್ಯರಿಂದ ಸಾಂಪ್ರದಾಯಿಕ ಒಡಿಸ್ಸಿ ನೃತ್ಯ ಪ್ರದರ್ಶನ ಏರ್ಪಡಿಸಲಾಗಿದೆ.


ಪರಿಚಯ: ಸಿಂಧು ಕಿರಣ್ ಅವರು ಒಡಿಸ್ಸಿ ನೃತ್ಯದಲ್ಲಿ ಪ್ರವೀಣರಾಗಿದ್ದು, ಮೈಸೂರಿನಲ್ಲಿ ನೆಲೆಸಿದ್ದಾರೆ. ಇವರು ಯೂರೋಪ್, ಸೌತ್ ಈಸ್ಟ್ ಏಷಿಯಾ ಸೇರಿದಂತೆ ಭಾರತದಾದ್ಯಂತ ತಮ್ಮ ಶಿಷ್ಯರೊಂದಿಗೆ ಹಲವಾರು ಪ್ರಮುಖ ಕಾರ್ಯಕ್ರಮಗಳನ್ನು ನೀಡಿದ್ದಾರೆ. ಸಿಂಧು ಕಿರಣ್ ಅವರು 2006ರಲ್ಲಿ ಮೈಸೂರಿನಲ್ಲಿ ರುದ್ರ–ನೃತ್ಯ ಯೋಗಶಾಲೆಯನ್ನು ಸ್ಥಾಪಿಸಿದ್ದಾರೆ. ಈ ಶಾಲೆಯಲ್ಲಿ ವಿದೇಶಿ ವಿದ್ಯಾರ್ಥಿಗಳು ಮತ್ತು ಸ್ಥಳೀಯ ವಿದ್ಯಾರ್ಥಿಗಳು ಇವರಿಂದ ಒಡಿಸ್ಸಿ ನೃತ್ಯದ ವಿಧಾನವನ್ನು ಕಲಿಯುತ್ತಿದ್ದಾರೆ. ರುದ್ರ ಯೋಗಶಾಲೆಯು ನಿಯಮಿತ ತರಗತಿಗಳು, ಆನ್‌ಲೈನ್ ತರಗತಿಗಳು, ಕಾರ್ಯಾಗಾರಗಳು, ಪ್ರದರ್ಶನಗಳನ್ನು ನಡೆಸುತ್ತಿದೆ ಎಂದು ಸಭಾದ ಶ್ರೀಧರ್ ರಾಜೇ ಅರಸ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪಿಹೆಚ್.ಡಿ ಪದವಿ



ಮೈಸೂರು, ಮಾ.29– ಮೈಸೂರು ಜಿಲ್ಲಾ ಪ್ರೌಢಶಾಲಾ ಸಹಶಿಕ್ಷಕರ ಸಂಘದ ಅಧ್ಯಕ್ಷ ಹಾಗೂ ಜಿಲ್ಲಾ ಸರ್ಕಾರಿ ನೌಕರರ ಸಂಘದ ನಿರ್ದೇಶಕ ಸಿ.ಬಿ.ಅರುಣಕುಮಾರ ಅವರು ಕುವೆಂಪು ವಿಶ್ವವಿದ್ಯಾನಿಲಯದ ಶಿಕ್ಷಣಶಾಸ್ತ್ರ ವಿಭಾಗದ ಪ್ರಾಧ್ಯಾಪಕಿ ಡಾ.ಸಿ.ಗೀತಾ ಅವರ ಮಾರ್ಗದರ್ಶನದಲ್ಲಿ ಮಂಡಿಸಿದ 'ಕಾಗ್ನಿಟೀವ್, ಅಫೆಕ್ಟೀವ್ ಅಂಡ್ ಬಿಹೇವಿಯರಲ್ ಆಟ್ಟಿಟ್ಯೂಡ್ ಟುವರ್ಡ್ಸ್ ಲೆರ್ನಿಂಗ್ ಮ್ಯಾಥೆಮೆಟಿಕ್ಸ್ ಅಮಾಂಗ್ ಸೆಕೆಂಡರಿ ಸ್ಕೂಲ್ ಸ್ಟೂಡೆಂಟ್ಸ್' ಮಹಾಪ್ರಬಂಧವನ್ನು ಕುವೆಂಪು ವಿಶ್ವವಿದ್ಯಾನಿಲಯ ಪಿಹೆಚ್.ಡಿ ಪದವಿಗೆ ಅಂಗೀಕರಿಸಿದೆ ಎಂದು ವಿವಿಯ ಮೌಲ್ಯಮಾಪನ ವಿಭಾಗದ ಕುಲಸಚಿವ ಪ್ರೊ.ಎಸ್.ಎಮ್.ಗೋಪಿನಾಥ್ ತಿಳಿಸಿದ್ದಾರೆ.

ನಾಳೆ, ನಾಳಿದ್ದು ನೀರು ಸರಬರಾಜಲ್ಲಿ ವ್ಯತ್ಯಯ



ಮೈಸೂರು, ಮಾ.29–ಮೈಸೂರು ನಗರಕ್ಕೆ ಕುಡಿಯುವ ನೀರು ಸರಬರಾಜು ಮಾಡುವ ಕಬಿನಿ ನೀರು ಸರಬರಾಜು ಯೋಜನೆಯ ಮೂಲ ಸ್ಥಾವರಕ್ಕೆ ಕೆಪಿಟಿಸಿಎಲ್ ಇಲಾಖೆಯವರು 66/11 ಕೆ.ವಿ. ದೂರ ಸಬ್‌ಸ್ಟೇಷನ್ 4ನೇ ತ್ರೈಮಾಸಿಕ ನಿರ್ವಹಣಾ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗುವುದರಿಂದ ಮಾ.31 ಮತ್ತು ಏ.1ರಂದು ಈ ಕೆಳಕಂಡ ಪ್ರದೇಶಗಳಲ್ಲಿ ನೀರು ಸರಬರಾಜುವಿನಲ್ಲಿ ವ್ಯತ್ಯಯವುಂಟಾಗಲಿದೆ. ವಾರ್ಡ್ ನಂ.42ರಿಂದ 51 (ಕೆ.ಜಿ.ಕೊಪ್ಪಲು, ಜನತಾನಗರ, ಶಾರದಾದೇವಿನಗರ, ದಟ್ಟಗಳ್ಳಿ 3ನೇ ಹಂತ, ಕುವೆಂಪುನಗರ, ಜಯನಗರ, ಲಕ್ಷ್ಮೀಪುರಂ, ಸುಣ್ಣದಕೇರಿ, ಅಗ್ರಹಾರ) ಹಾಗೂ 54ರಿಂದ 65 (ಗುಂಡೂರಾವ್‌ನಗರ, ಚಾಮುಂಡಿಪುರಂ, ಕೃಷ್ಣಮೂರ್ತಿಪುರಂ, ಕುವೆಂಪುನಗರ ಸಿಐಟಿಬಿ, ರಾಮಕೃಷ್ಣನಗರ, ಕುವೆಂಪುನಗರ ಎಂ–ಬ್ಲಾಕ್, ಅಶೋಕಪುರಂ, ವಿದ್ಯಾರಣ್ಯಪುರಂ ಭಾಗಶಃ ಪ್ರದೇಶ, ವಿಶ್ವೇಶ್ವರನಗರ, ಜೆ.ಪಿ.ನಗರ, ಅರವಿಂದನಗರ, ಶ್ರೀರಾಂಪುರ) ಹಾಗೂ ಇತ್ಯಾದಿ ಪ್ರದೇಶಗಳಲ್ಲಿ ನೀರು ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದೆ ಎಂದು ವಾಣಿ ವಿಲಾಸ ನೀರು ಸರಬರಾಜು ಪಶ್ಚಿಮ ವಿಭಾಗದ ಪ್ರಕಟಣೆ ತಿಳಿಸಿದೆ.

ನಿಧನ

ಎಂ.ಗೋವಿಂದರಾಜು ಸ್ವಾಮಿ



ಮೈಸೂರು, ಮಾ. 29– ಮೈಸೂರಿನ ಗಾಯಿತ್ರಿಪುರಂ ನಿವಾಸಿ ಮತ್ತು ಮೈಸೂರು ಅರಮನೆ ಮಂಡಳಿ ನಿವೃತ್ತ ಉದ್ಯೋಗಿ ಎಂ. ಗೋವಿಂದರಾಜು (68) ಶುಕ್ರವಾರ ಮುಂಜಾನೆ ತಮ್ಮ ನಿವಾಸದಲ್ಲಿ ನಿಧನರಾದರು. ಮೃತರು ಪತ್ನಿ ಶಾಂತಮ್ಮ, ಮೂವರು ಪುತ್ರರು, ಓರ್ವ ಪುತ್ರಿ ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಶುಕ್ರವಾರ ಮಧ್ಯಾಹ್ನ ಚಾಮುಂಡಿಬೆಟ್ಟದ ತಪ್ಪಲಿನ ರುದ್ರಭೂಮಿಯಲ್ಲಿ ಅಂತ್ಯಕ್ರಿಯೆ ನೆರವೇರಿಸಲಾಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಲಲಿತಮ್ಮ



ಮೈಸೂರು, ಮಾ.29–ಮೈಸೂರಿನ ವನ್ಯಜೀವಿ ಛಾಯಾಗ್ರಾಹಕ ಮತ್ತು ಕುವೆಂಪು ನಗರದ ನಿವಾಸಿ ಎಸ್.ತಿಪ್ಪೇಸ್ವಾಮಿ ಅವರ ಪತ್ನಿ ಲಲಿತಮ್ಮ(75) ಗುರುವಾರ ರಾತ್ರಿ ನಿಧನರಾದರು. ಮೃತರು ಪತಿ, ಪತ್ರಿಕಾ ಛಾಯಾಗ್ರಾಹಕ ಅನೂಪ್ ಟಿ. ರಾಗಾ ಸೇರಿದಂತೆ ಇಬ್ಬರು ಪುತ್ರರು, ಸೊಸೆಯಂದಿರು, ಮೊಮ್ಮಕ್ಕಳು ಮತ್ತು ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಜಯನಗರದ ರುದ್ರಭೂಮಿಯಲ್ಲಿ ಶುಕ್ರವಾರ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಶೋಭಾ ರಾಜಣ್ಣ



ಮೈಸೂರು, ಮಾ.29–ಟಿ.ನರಸೀಪುರ ತಾಲೂಕಿನ ಮರಡಿಪುರ ಗ್ರಾಮದ ನಿವಾಸಿ ರಾಜಣ್ಣ ಅವರ ಧರ್ಮಪತ್ನಿ ಶೋಭಾ(49) ಶುಕ್ರವಾರ ನಿಧನರಾದರು. ಮೃತರು ಇಬ್ಬರು ಪತ್ರರು, ಓರ್ವ ಪುತ್ರಿ ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ನಾಳೆ ಮಧ್ಯಾಹ್ನ(ಮಾ.30) ಸ್ವಗ್ರಾಮದಲ್ಲಿ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಗೌರಮ್ಮ



ಮೈಸೂರು: ತಿ.ನರಸೀಪುರ ತಾಲೂಕು ವಾಟಾಳು ಗ್ರಾಮದ ನಿವಾಸಿ ವಾಟಾಳು ಮಠದ ದಿವಂಗತ ಶಿವರುದ್ರಸ್ವಾಮಿಯವರ ಧರ್ಮಪತ್ನಿ, ಗೌರಮ್ಮ(85) ಅವರು ಶುಕ್ರವಾರ ಮುಂಜಾನೆ ಸ್ವಗೃಹದಲ್ಲಿ ನಿಧನರಾದರು. ಮೃತರು ಮೂವರು ಪುತ್ರಿಯರು, ಇಬ್ಬರು ಪುತ್ರರು, ಅಳಿಯಂದಿರು, ಸೊಸೆ, ಮೊಮ್ಮಕ್ಕಳು ಹಾಗೂ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆಯು ಸಂಜೆ ಅವರ ಜಮೀನಿನಲ್ಲಿ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಶಾರದಮ್ಮ



ಮೈಸೂರು: ಮೈಸೂರು ಕುವೆಂಪುನಗರದ ನವಿಲು ರಸ್ತೆ ನಿವಾಸಿ ಹಾಗೂ ದಿವಂಗತ ಪರಮಶಿವಯ್ಯನವರ ಧರ್ಮಪತ್ನಿ ಶಾರದಮ್ಮ (84) ಇಂದು ಸಂಜೆ ನಿಧನರಾದರು. ಇವರು ಪುತ್ರ, ನಾಲ್ವರು ಪುತ್ರಿಯರು, ಅಳಿಯಂದಿರು, ಮೊಮ್ಮಕ್ಕಳು ಹಾಗೂ ಅಪಾರ ಬಂಧು ವರ್ಗವನ್ನು ಅಗಲಿದ್ದಾರೆ. ಇವರ ಅಂತ್ಯಕ್ರಿಯೆ ನಾಳೆ (ಶನಿವಾರ) ಮೈಸೂರು ವಿದ್ಯಾರಣ್ಯಪುರಂನ ವೀರಶೈವ ರುದ್ರಭೂಮಿಯಲ್ಲಿ ನೆರವೇರಲಿದೆ ಎಂದು ಕುಟುಂಬ ಸದಸ್ಯರು ತಿಳಿಸಿದ್ದಾರೆ.

ತಂಗಡಗಿ ಹೇಳಿಕೆ ಸರಿಯಾಗಿದೆ: ಚೇತನ್ ಕಾಂತರಾಜು ಸಮರ್ಥನೆ

ಮೈಸೂರು, ಮಾ. 29–ಸಚಿವ ಶಿವರಾಜ್ ತಂಗಡಗಿ ಪ್ರಧಾನಮಂತ್ರಿ ನರೇಂದ್ರ ಮೋದಿ ಬಗ್ಗೆ ನೀಡಿರುವ ಹೇಳಿಕೆ ಸರಿಯಾಗಿದೆ ಎಂದು ಜೈ ಭೀಮ್ ಜನಸ್ಪಂದನಾ ವೇದಿಕೆ ಅಧ್ಯಕ್ಷ ಚೇತನ್ ಕಾಂತರಾಜು ಸಮರ್ಥಿಸಿಕೊಂಡಿದ್ದಾರೆ.

ಮೋದಿಯವರು 2014ರ ಲೋಕಸಭಾ ಚುನಾವಣೆ ಸಂದರ್ಭದಲ್ಲಿ ಮಾಡಿದ ಭಾಷಣಗಳಲ್ಲಿ ಪ್ರತಿ ವರ್ಷ 2 ಕೋಟಿ ಉದ್ಯೋಗ ನೀಡುವುದಾಗಿ ಹೇಳಿದ್ದರು. ಆದರೆ ಕನಿಷ್ಠ ಒಂದು ಕೋಟಿಯಷ್ಟು ನಿರುದ್ಯೋಗಿ ಯುವಕರಿಗೂ ಉದ್ಯೋಗ ಸಿಕ್ಕಿಲ್ಲ, 2023ರ ಡಿಸೆಂಬರ್ ವೇಳೆಗೆ 100 ನಗರಗಳನ್ನು ಸ್ಮಾರ್ಟ್ ಸಿಟಿ ಮಾಡುವುದಾಗಿ ನೀಡಿದ್ದ ಭರವಸೆಯೂ ಹುಸಿಯಾಗಿದೆ ಎಂದು ದೂರಿದರು. ಶಿವರಾಜ ತಂಗಡಗಿಯವರು ದಲಿತ ಸಮುದಾಯದ ವ್ಯಕ್ತಿಯಾಗಿರುವುದರಿಂದ ಉದ್ದೇಶಪೂರ್ವಕವಾಗಿ ಬಿಜೆಪಿಯವರು ಟೀಕೆ ಮಾಡುತ್ತಿದ್ದಾರೆ. ಹಿಂದೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಯವರನ್ನು ಸಹ ಅವಹೇಳನ ಮಾಡಿದ್ದರು. ಇದು ಬಿಜೆಪಿಯವರ ಸಂಸ್ಕೃತಿ, ಸಿ.ಟಿ. ರವಿ ಬಳಸಿರುವ ಪದ ಸಂಘ ಪರಿವಾರದಿಂದ ಬಂದಿರುವ ಬಳುವಳಿ. ನಮ್ಮ ತಂಗಡಗಿಯವರು ಬಿಜೆಪಿ ಸರ್ಕಾರದ ವೈಫಲ್ಯ ಪ್ರಶ್ನಿಸುತ್ತಿರುವ ಕಾರಣ ಅವರ ವಿರುದ್ಧ ವಾಗ್ದಾಳಿ ನಡೆಸಲಾಗುತ್ತಿದೆ ಎಂದು ನುಡಿದರು.

ನೈರುತ್ಯ ರೈಲ್ವೆಯ ಮೈಸೂರು ವಿಭಾಗಕ್ಕೆ 1330 ಕೋಟಿ ಆದಾಯ

ಮೈಸೂರು ರೈಲ್ವೆ ವ್ಯವಸ್ಥಾಪಕಿ ಶಿಲ್ಪಿ ಅಗರವಾಲ್ ಮಾಹಿತಿ



ಮೈಸೂರಿನ ಯಾದವಗಿರಿಯ ಚಾಮುಂಡಿ ಆಫೀಸರ್ಸ್ ಕ್ಲಬ್‌ನಲ್ಲಿ ಶುಕ್ರವಾರ ನಡೆದ ನೈರುತ್ಯ ರೈಲ್ವೆಯ 68ನೇ ರೈಲ್ವೆ ಸಪ್ತಾಹ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಮೈಸೂರು ವಿಭಾಗೀಯ ರೈಲ್ವೆ ವ್ಯವಸ್ಥಾಪಕಿ ಶಿಲ್ಪಿ ಅಗರವಾಲ್ ರೈಲ್ವೆ ಇಲಾಖೆಯಲ್ಲಿ ಅಸಾಧಾರಣ ಕಾರ್ಯಕ್ಷಮತೆ ತೋರಿದ ಅತ್ಯುತ್ತಮ ಉದ್ಯೋಗಿಗಳಿಗೆ ಪ್ರಶಸ್ತಿ ನೀಡಿ ಗೌರವಿಸಿದರು.

ಮೈಸೂರು, ಮಾ.29(ಬಿಎಲ್‌ಯು)–ನೈರುತ್ಯ ರೈಲ್ವೆಯ ಮೈಸೂರು ವಿಭಾಗವು ಪ್ರಸಕ್ತ ಸಾಲಿನಲ್ಲಿ ಪ್ರಯಾಣಿಕರು ಹಾಗೂ ಸರಕು ಸಾಗಾಣಿಕೆಯಿಂದ 1330 ಕೋಟಿ ಆದಾಯ ಗಳಿಸಿದ್ದು, ಇದು ಹಿಂದಿನ ವರ್ಷದ ದಾಖಲೆ ಮೀರಿದೆ ಎಂದು ಮೈಸೂರು ವಿಭಾಗೀಯ ರೈಲ್ವೇ ವ್ಯವಸ್ಥಾಪಕಿ ಶಿಲ್ಪಿ ಅಗರವಾಲ್ ತಿಳಿಸಿದರು.

ಮೈಸೂರಿನ ಯಾದವಗಿರಿಯ ಚಾಮುಂಡಿ ಆಫೀಸರ್ಸ್ ಕ್ಲಬ್‌ನಲ್ಲಿ ಇಂದು ನಡೆದ ನೈರುತ್ಯ ರೈಲ್ವೆಯ 68ನೇ ರೈಲ್ವೆ ಸಪ್ತಾಹ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಮಾತನಾಡಿದ ಅವರು, ಕಳೆದ ವರ್ಷ 1304 ಕೋಟಿ ರೂಪಾಯಿ ಆದಾಯ ಬಂದಿತ್ತು. ಆದರೆ ಈ ವರ್ಷ 334 ದಿನದಲ್ಲೇ 1330 ಕೋಟಿ ಆದಾಯ ಗಳಿಸಿದೆ ಎಂದು ಮಾಹಿತಿ ನೀಡಿದರು. ಸರಕು ಸಾಗಾಣಿಕೆಯಲ್ಲಿ 907 ಕೋಟಿ ಆದಾಯ ಗಳಿಸಿದ್ದು, ಇದು ಕಳೆದ ವರ್ಷದ ಆದಾಯ ದಾಖಲೆಯನ್ನು ಮುರಿದಿದೆ. ಕಳೆದ ವರ್ಷ 897 ಕೋಟಿ ಆದಾಯ ಬಂದಿದ್ದರೆ, ಈ ವರ್ಷ 907 ಕೋಟಿ ಬಂದಿದೆ ಎಂದು ಅಂಕಿ ಅಂಶಗಳ ವಿವರ ನೀಡಿದರು. ಫೆಬ್ರವರಿ, 2024 ರವರೆಗೆ 30.47 ದಶಲಕ್ಷ ಪ್ರಯಾಣಿಕರನ್ನು ಸಾಗಿಸಿದ್ದು, ಹಿಂದಿನ ವರ್ಷಕ್ಕಿಂತ ಇದು ಶೇಕಡ 5.10 ರಷ್ಟು ಹೆಚ್ಚಾಗಿದೆ. 10.503 ಮಿಲಿಯನ್ ಟನ್ ಒಟ್ಟಾರೆ ಸಾಗಾಣಿಕೆಯಾಗಿದ್ದು, ಇದರಲ್ಲಿ ಅತ್ಯಧಿಕ ಸರಕಿನ ಸಾಗಾಣಿಯಾಗಿದೆ. ಇದು ಕಳೆದ ವರ್ಷಕ್ಕೆ ಹೋಲಿಸಿದರೆ ಶೇಕಡ 9.083 ರಷ್ಟು ಗಣನೀಯ ಹೆಚ್ಚಳವಾಗಿದೆ. ಕಳೆದ ವರ್ಷ 9.549 ಮಿಲಿಯನ್ ಟನ್ ಸಾಗಾಣಿಕೆಯಾಗಿತ್ತು. ಆದರೆ ಈ ವರ್ಷ ಹಿಂದಿನ ದಾಖಲೆ ಮುರಿಯಲಾಗಿದೆ. ಫೆಬ್ರವರಿ ತಿಂಗಳಲ್ಲಿ 395 ಕಿಲೋ ಮೀಟರ್‌ನಷ್ಟು ವಿದ್ಯುದ್ದೀಕರಣವಾಗಿದೆ. ಎಂದು ಶಿಲ್ಪಿ ಅಗರವಾಲ್ ಹೇಳಿದರು.

ಮಾನವ ಸಂಪನ್ಮೂಲದಲ್ಲಿ ಕೂಡ ಗಮನಾರ್ಹ ಪ್ರಗತಿ ಕಂಡಿದ್ದು, ಹಲವು ಹೊಸ ನೇಮಕಾತಿ, ಬಡ್ತಿ ಮತ್ತು ಪಿಂಚಣಿ ಪ್ರದಾನ ಕಾರ್ಯಕ್ರಮಗಳನ್ನು ನಡೆಸಲಾಗಿದೆ ಎಂದು ವಿವರಿಸಿದರು. ರೈಲ್ವೆ ಉದ್ಯೋಗಿಗಳು ಮತ್ತು ಅವರ ಕುಟುಂಬಗಳ ಅನುಕೂಲಕ್ಕಾಗಿ ಸಾಮಾಜಿಕ ಕಲ್ಯಾಣ ಚಟುವಟಿಕೆಗಳನ್ನು ಉತ್ತೇಜಿಸಲು ಪ್ರಯತ್ನ ಮಾಡಲಾಗಿದೆ ಎಂದು ಶಿಲ್ಪಿ ಅಗರವಾಲ್ ಹೇಳಿದರು. ರೈಲ್ವೆ ಇಲಾಖೆಯಲ್ಲಿ ಅಸಾಧಾರಣ ಕಾರ್ಯಕ್ಷಮತೆ ತೋರಿದ 22 ಅತ್ಯುತ್ತಮ ಉದ್ಯೋಗಿಗಳಿಗೆ ಪ್ರಶಸ್ತಿ ನೀಡಿ ಈ ವೇಳೆ ಗೌರವಿಸಿದರು.

ಹೆಚ್ಚುವರಿ ವಿಭಾಗೀಯ ರೈಲ್ವೆ ವ್ಯವಸ್ಥಾಪಕರಾದ ವಿನಾಯಕ್ ನಾಯಕ್, ಇ.ವಿಜಯ, ಹಿರಿಯ ವಿಭಾಗೀಯ ಸಿಬ್ಬಂದಿ ಅಧಿಕಾರಿ ವಿಷ್ಣು ಗೌಡ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಸಾಧಕ ಮಹಿಳೆಯರಿಗೆ ಅಹಲ್ಯ ಬಾಯಿ ಹೋಳ್ಕರ್ ಪ್ರಶಸ್ತಿ ಪ್ರದಾನ

ಮೈಸೂರು, ಮಾ.29(ಜಿಎ)–ಮೈಸೂರು ಕನ್ನಡ ವೇದಿಕೆ ವತಿಯಿಂದ ನಗರದ ಜಿಲ್ಲಾ ಪತ್ರಕರ್ತರ ಭವನದಲ್ಲಿ ಆಯೋಜಿಸಿದ್ದ ಮಹಿಳಾ ದಿನಾಚರಣೆ ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದ ಮಹಿಳೆಯರಿಗೆ ಅಹಲ್ಯಬಾಯಿ ಹೋಳ್ಕರ್ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಈ ವೇಳೆ ಸಹಾಯಕ ಸರ್ಕಾರಿ ಅಭಿಯೋಜಕರಾದ ಎ.ಐ.ದಿವ್ಯಾ ಮಾತನಾಡಿ, ಮಹಿಳೆ ಇಂದು ಅನೇಕ ಕ್ಷೇತ್ರಗಳಲ್ಲಿ ಮುಂದಿದ್ದು, ಪ್ರಗತಿ ಸಾಧಿಸಿದ್ದಾಳೆ. ಆದರೂ ಆಕೆಯ ಮೇಲಿನ ದೌರ್ಜನ್ಯ ನಿಂತಿಲ್ಲ. ಅದನ್ನು ತಡೆಗಟ್ಟಲು ಅನೇಕ ಕಾನೂನು, ಹಕ್ಕುಗಳು ಇದ್ದು ಮಹಿಳೆಯರಿಗೆ ಅದರ ಅರಿವಿರಬೇಕು. ಉದ್ಯೋಗ ಸ್ಥಳದಲ್ಲಿ ಸಮಾನ ವೇತನ ನೀಡಬೇಕು. ಇದಕ್ಕಾಗಿ ಕಾರ್ಮಿಕ ಕಾನೂನುಗಳಿವೆ. ಕೌಟುಂಬಿಕ ದೌರ್ಜನ್ಯ ಮೊದಲಾದವುಗಳ ತಡೆಗೂ ಕಾನೂನುಗಳಿವೆ. ಈ ಬಗ್ಗೆ ಮಹಿಳೆಯರಿಗೆ ತಿಳಿಸುವ ಉದ್ದೇಶ ವಿಶ್ವ ಮಹಿಳಾ ದಿನದ್ದಾಗಿದೆ ಎಂದರು.



ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಮೈಸೂರು ಕನ್ನಡ ವೇದಿಕೆ ವತಿಯಿಂದ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದ ಮಹಿಳೆಯರಿಗೆ ಅಹಲ್ಯಬಾಯಿ ಹೋಳ್ಕರ್ ಪ್ರಶಸ್ತಿ ನೀಡಿ ಅಭಿನಂದಿಸಲಾಯಿತು.

ಕಾರ್ಯಕ್ರಮದಲ್ಲಿ ಸಾಧಕಿಯರಾದ ಎಂ.ಮನೋನ್ಮಣಿ, ಧನಲಕ್ಷ್ಮಿ, ರುಕ್ಮಿಣಿ ಚಂದ್ರನ್, ಡಾ.ಜ್ಯೋತಿ ರೇಚಣ್ಣ, ಪಿ.ಎಸ್. ಪದ್ಮಲತಾ, ಎಸ್.ಶ್ವೇತಾ, ಸಂಜನಾ, ಕೆ.ಸಂಗೀತ, ಸರೋಜಾಬಾಯಿ, ಲಕ್ಷ್ಮಿ ಅವರಿಗೆ ಅಹಲ್ಯಬಾಯಿ ಹೋಳ್ಕರ್ ಪ್ರಶಸ್ತಿ ನೀಡಿ ಅಭಿನಂದಿಸಲಾಯಿತು. ಈ ವೇಳೆ ಪತ್ರಿಕೋದ್ಯಮಿ ರಶ್ಮಿ ಕೋಟಿ, ಡಾ.ಕೆ. ಲೀಲಾ ಪ್ರಕಾಶ್, ಭಾರತಿ, ವೇದಿಕೆ ಅಧ್ಯಕ್ಷ ಎಸ್.ಬಾಲಕೃಷ್ಣ, ನಾಲಾಬೀದಿ ರವಿ, ಮಾಲಿನಿ, ಕಾವೇರಮ್ಮ ಮತ್ತಿತರರು ಉಪಸ್ಥಿತರಿದ್ದರು.

ಇಂದು 'ಗಾನಸಿರಿ' ಕಾರ್ಯಕ್ರಮ

ಮೈಸೂರು, ಮಾ.29(ಜಿಎ)–ಮೈಸೂರಿನ ಭೂಮಿಕಾ ಅಸೋಸಿಯೇಟ್ಸ್ ಮತ್ತು ದಿವಂಗತ ಮೈಕ್ ಚಂದ್ರು ಗೆಳೆಯರ ಬಳಗದಿಂದ ಮಾ.30ರಂದು ಸಂಜೆ 5ಗಂಟೆಗೆ ನಗರದ ಕೃಷ್ಣಮೂರ್ತಿಪುರಂನ ಶಾರದಾ ವಿಲಾಸ ಕಾಲೇಜು ಶತಮಾನೋತ್ಸವ ಭವನದಲ್ಲಿ ಗಾನಸಿರಿ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ನಿರೂಪಕ ಮಂಜುನಾಥ್ ತಿಳಿಸಿದರು. ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಿದಂ ಪ್ಯಾಡ್ ಕಲಾವಿದ ವಿನಯ್ ರಂಗಧೋಳ್ ಸಾರಥ್ಯದಲ್ಲಿ ಕಾರ್ಯಕ್ರಮ ನಡೆಯಲಿದ್ದು, ಕನ್ನಡ, ಹಿಂದಿ, ತಮಿಳು ಹಾಗೂ ತೆಲುಗು ಚಿತ್ರಗಳ ಸುಮಾರು 30 ಹಾಡುಗಳನ್ನು ದೂರದರ್ಶನ ಹಾಗೂ ಖಾಸಗಿ ವಾಹಿನಿಗಳ ಕಲಾವಿದರು ಹಾಡಲಿದ್ದಾರೆ. ಎಲ್ಲರಿಗೂ ಉಚಿತ ಪ್ರವೇಶವಿದೆ ಎಂದರು. ಸುದ್ದಿಗೋಷ್ಠಿಯಲ್ಲಿ ಅಸೋಸಿಯೇಟ್ಸ್ ಅಧ್ಯಕ್ಷ ಕೆ.ಎಸ್.ಸುರೇಶ್, ಹಾಸ್ಯ ಕಲಾವಿದ ಮೈಸೂರು ಆನಂದ್, ಎಚ್.ಅಶ್ವತ್ಥನಾರಾಯಣ, ವಾಸುದೇವ್ ಉಪಸ್ಥಿತರಿದ್ದರು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

30.3.2024 ಶನಿವಾರ, ಮಳೆ ನಕ್ಷತ್ರ: ಉತ್ತರಾಭಾದ್ರ 17.03.2024ರಿಂದ 30.03.2024
ಶ್ರೀ ಶೋಭಕೃತ್ ನಾಮ ಸಂವತ್ಸರ, ಉತ್ತರಾಯಣ, ಶಿಶಿರ ಋತು, ಫಾಲ್ಗುಣ ಮಾಸ, ಕೃಷ್ಣ ಪಕ್ಷ,
ತಿಥಿ: ಪಂಚಮಿ, ನಕ್ಷತ್ರ: ಅನೂರಾಧ, ರಾಹುಕಾಲ: ಬೆಳಗ್ಗೆ 9 ರಿಂದ 10.30ರವರೆಗೆ

■ **ರಾಮ್‌ಸನ್ಸ್ ಬೊಂಬೆ ಮನೆ:** ದಸರೆ ಬೊಂಬೆ ಪ್ರದರ್ಶನ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, ನಜರ್‌ಬಾದ್ ಮುಖ್ಯ ರಸ್ತೆ, ಬೆಳಗ್ಗೆ 10ರಿಂದ ಸಂಜೆ 7 ರವರೆಗೆ.

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ:** ಶ್ರವಣ ಸಮಸ್ಯೆಗಳಿಗೆ ಚಿಕಿತ್ಸಾ ಶಿಬಿರ, ಸ್ಥಳ: ಆಸ್ಪತ್ರೆ ಆವರಣ, ಲಲಿತಾದ್ರಿಪುರ ರಸ್ತೆ, ಆಲನಹಳ್ಳಿ, ಬೆಳಗ್ಗೆಯಿಂದ.

■ **ಜೆಎಸ್‌ಎಸ್ ಕಾನೂನು ಕಾಲೇಜು :** ಆರ್ಟಿಫಿಷಿಯಲ್ ಇಂಟೆಲಿಜೆನ್ಸ್ ಕುರಿತು ರಾಷ್ಟ್ರೀಯ ವಿಚಾರ ಸಂಕಿರಣ, ಉದ್ಘಾಟನೆ : ನ್ಯಾಷನಲ್ ಲಾ ಸ್ಕೂಲ್ ಆಫ್ ಇಂಡಿಯಾ ಯೂನಿವರ್ಸಿಟಿ ಪ್ರಾಧ್ಯಾಪಕ ಡಾ. ಸಾಯಿರಾವ್ ಭಟ್, ಉಪಸ್ಥಿತರು : ಜೆಎಸ್‌ಎಸ್ ಕಾನೂನು ಕಾಲೇಜು ಕಾರ್ಯನಿರ್ವಾಹಕ ಪ್ರೊ. ಕೆ.ಎಸ್. ಸುರೇಶ್, ಜೆಎಸ್‌ಎಸ್ ಕಾನೂನು ಕಾಲೇಜು ಪ್ರಿನ್ಸಿಪಾಲ್ ಡಾ. ಎಸ್. ನಟರಾಜು, ಸ್ಥಳ: ಜೆಎಸ್‌ಎಸ್ ಕಾನೂನು ಕಾಲೇಜು ಆವರಣ, ಬೆಳಗ್ಗೆ 10ಕ್ಕೆ.

■ **ಕರ್ನಾಟಕ ಮಹಿಳಾ ದೌರ್ಜನ್ಯ ವಿರೋಧಿ ಒಕ್ಕೂಟ, ಅಪರಾಜಿತ ಪ್ರಕಾಶನ, ಮೈಸೂರು :** ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ, 'ನಡೆ ನುಡಿಯ ಹಾದಿ' ಪುಸ್ತಕ ಬಿಡುಗಡೆ ಕಾರ್ಯಕ್ರಮ, ಅಧ್ಯಕ್ಷತೆ: ಹಿರಿಯ ರಂಗಕರ್ಮಿ ಶ್ರೀಮತಿ ರಾಮೇಶ್ವರಿ ವರ್ಮಾ, ಕೃತಿ ಬಿಡುಗಡೆ : ಸಮತಾ ವೇದಿಕೆಯ ಶ್ರೀಮತಿ ಮೀರಾ ನಾಯಕ್, ಕೃತಿ ಕುರಿತು ಮಾತನಾಡುವವರು : ನಿವೃತ್ತ ಕನ್ನಡ ಪ್ರಾಧ್ಯಾಪಕರಾದ ಡಾ. ಪ್ರೀತಿ ಶುಭಚಂದ್ರ, ಉಪಸ್ಥಿತರು : ಅಖಿಲ ಭಾರತ ಪ್ರಗತಿಪರ ಮಹಿಳಾ ಸಂಘಟನೆ ಅಧ್ಯಕ್ಷೆ ಡಾ. ಇ. ರತಿರಾವ್, ಅಪರಾಜಿತ ಪ್ರಕಾಶನದ ಶ್ರೀಮತಿ ಮೀನಾ ಮೈಸೂರು, ಸ್ಥಳ: ಶ್ರೀರಂಗ ವೇದಿಕೆ, ರಂಗಾಯಣ, ಬೆಳಗ್ಗೆ 10.30ಕ್ಕೆ.

■ **ವುಮೆನ್ ಇನ್ ಸ್ಮಾಲ್ ಎಂಟರ್‌ಪ್ರೈಸಸ್, ಮೈಸೂರು ಛೇಂಬರ್ ಆಫ್ ಕಾಮರ್ಸ್ ಅಂಡ್ ಇಂಡಸ್ಟ್ರಿ ಮಹಿಳಾ ಘಟಕ :** ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ, ಮುಖ್ಯ ಅತಿಥಿಗಳು : ನಿವೃತ್ತ ಮುಖ್ಯ ಕಾರ್ಯದರ್ಶಿ ಶ್ರೀಮತಿ ಕೆ. ರತ್ನಪ್ರಭಾ, ಗೌರವ ಅತಿಥಿಗಳು : ಎಫ್‌ಕೆಸಿಸಿಐ ಉಪಾಧ್ಯಕ್ಷರಾದ ಶ್ರೀಮತಿ ಉಮಾರೆಡ್ಡಿ, ಎಂಸಿಸಿಐ ಅಧ್ಯಕ್ಷ ಕೆ.ಬಿ. ಲಿಂಗರಾಜು, ರೂಪಾ ಪಾಟೀಲ್, ಅಧ್ಯಕ್ಷತೆ : ವೈಸ್–ಎಂಸಿಸಿಐ ಅಧ್ಯಕ್ಷೆ ಟಿ.ಎ. ವಸಂತಕುಮಾರಿ, ಸ್ಥಳ: ಗ್ರ್ಯಾಂಡ್ ಮರ್ಕ್ಯೂರ್, ನೆಲ್ಸನ್ ಮಂಡೇಲಾ ಸರ್ಕಲ್, ನ್ಯೂ ಸಯ್ಯಾಜಿರಾವ್ ರಸ್ತೆ, ಬೆಳಗ್ಗೆ 10.30 ರಿಂದ.

■ **ವ್ಯವಸ್ಥಾಪಕರು :** ಚಾರ್ವಾಕ ಪ್ರಸ್ತುತಿಯ ವೈಚಾರಿಕ ಸಮ್ಮೇಳನ ದಮನಿತರ ಬಂಗಾರದ ದಿನ, ಸಾನ್ನಿಧ್ಯ: ಬಹುಜನ ಪೀಠದ ಶ್ರೀ ಜ್ಞಾನಪ್ರಕಾಶ ಸ್ವಾಮೀಜಿ, ಉದ್ಘಾಟನೆ : ಮುಖ್ಯಮಂತ್ರಿ ಸಿದ್ದರಾಮಯ್ಯ, ಅಧ್ಯಕ್ಷತೆ : ಅಹಿಂದ ಜವರಪ್ಪ, ಮುಖ್ಯ ಅತಿಥಿಗಳು : ಮುಖ್ಯಮಂತ್ರಿಗಳ ಕಾರ್ಯದರ್ಶಿ ಶಿವಸ್ವಾಮಿ, ಚಿಂತಕ ವಾಸು, ಮುಖ್ಯಮಂತ್ರಿಗಳ ವಿಶೇಷ ಕರ್ತವ್ಯ ಅಧಿಕಾರಿ ಆರ್. ಮಹದೇವ, ಚಿಂತಕ ಅನಂತ್ ನಾಯಕ್, ಯುವ ಚಿಂತಕ ಜಗದೀಶ್ ಜಾಣ ಜಾಣೆಯರು, ಸ್ಥಳ: ಕರ್ನಾಟಕ ಕಲಾಮಂದಿರ, ಹುಣಸೂರು ರಸ್ತೆ, ಬೆಳಗ್ಗೆ 11ಕ್ಕೆ.

■ **ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ವಾತ್ಸಲ್ಯ ಸೇವಾ ಫೌಂಡೇಷನ್ :** ಅಡಗೂರು ಹುಚ್ಚೇಗೌಡ ರಾಮಯ್ಯ, ಚಿರಂಜೀವಿ ಸಿಂಗ್, ಡಾ. ಎಚ್.ಕೆ.ಲಕ್ಕಪ್ಪಗೌಡ ಬದುಕು ಮತ್ತು ಸಾಹಿತ್ಯ ದತ್ತಿ ಉಪನ್ಯಾಸ ಕಾರ್ಯಕ್ರಮ, ಉದ್ಘಾಟನೆ: ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್, ಅಧ್ಯಕ್ಷತೆ: ವಾತ್ಸಲ್ಯ ಸೇವಾ ಫೌಂಡೇಷನ್ ಅಧ್ಯಕ್ಷ ಎ.ಸಿ. ರವಿಕುಮಾರ್, ಡಾ.ಎಚ್.ಕೆ.ಲಕ್ಕಪ್ಪಗೌಡ ಬದುಕು ಮತ್ತು ಸಾಹಿತ್ಯ ದತ್ತಿ; ಪ್ರೊ.ಎಚ್.ಜಿ.ಲಕ್ಕಪ್ಪಗೌಡ ಬದುಕು ಬರಹ ಮತ್ತು ಸಾಹಿತ್ಯ ಕುರಿತು, ಚಿರಂಜೀವಿಸಿಂಗ್ ದತ್ತಿ ಉರ್ದು ಭಾಷೆ ಹಾಗೂ ಸಾಹಿತ್ಯ ಕುರಿತು ಉಪನ್ಯಾಸ, ಉಪಸ್ಥಿತರ:ಉಪನ್ಯಾಸಕರಾದ ಶ್ರೀಮತಿ ಎಚ್. ನಿವೇದಿತಾ, ನಿವೃತ್ತ ಮುಖ್ಯೋಪಾಧ್ಯಾಯಿನಿ ಶ್ರೀಮತಿ ಬಿ.ಕೆ. ಮೀನಾಕ್ಷಿ, ವಾತ್ಸಲ್ಯ ಸೇವಾ ಫೌಂಡೇಷನ್ ಕಾರ್ಯದರ್ಶಿ ಶ್ರೀಮತಿ ನಾಗರತ್ನ, ಸ್ಥಳ: ವಾತ್ಸಲ್ಯ ಸೇವಾ ಫೌಂಡೇಷನ್, ಆಶ್ರಮ ರಸ್ತೆ, ಬೆಳಗ್ಗೆ 11.30ಕ್ಕೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10ಕ್ಕೆ ಸಿ.ಎಫ್.ಟಿ.ಆರ್.ಐ ಶೋಧ ಅನುಶೋಧ–ಪ್ರಾಯೋಜಿತ ಕಾರ್ಯಕ್ರಮ, 6.40 ಪದ ಸಂಸ್ಕೃತಿ–ಪರಮೇಶ್ವರ ವಿ.ಭಟ್, 6.50 ರೈತರಿಗೆ ಸಲಹೆ, 7.15 ಭಾವಗೀತೆಗಳು–ಡಾ. ಜಿ.ಎಸ್. ಶಿವರುದ್ರಪ್ಪ, 10.00 ಓ.ಎಸ್. ತ್ಯಾಗರಾಜನ್ – ಹಾಡುಗಾರಿಕೆ

ಮಧ್ಯಾಹ್ನ: 12.35 ದೇವರನಾಮ, 2.45 ಜನಪದ ಸಂಗೀತ, 1.20 ಭಾವಗೀತೆ–ಅಂಬಿಕಾ ಕೆ. ರಾವ್, 3.30 ಮಕ್ಕಳ ಮಂಟಪ–ಶ್ರೀ ಗುರುಕಲಾ ಶಾಲೆಯ ಮಕ್ಕಳಿಂದ ಕಾರ್ಯಕ್ರಮ ವೈವಿಧ್ಯ, 4.00 ನಾಟಕ, 4.30 ನೆನಪಿನಂಗಳ– ಬಿ.ಎಂ.ಶ್ರೀ ಒಂದು ನೆನಪು–ತ.ರಾ.ಸು ಅವರ ಭಾಷಣ, ಸ್ವರಚಿತ ಕವನಗಳ ವಾಚನ–ಎ.ಕೆ. ರಾಮಾನುಜಮ್, 6.50 ಕೃಷಿರಂಗ–ಕಿಸಾನ್‌ವಾಣಿ, ಸಮಗ್ರ ಕೃಷಿಯ ಪ್ರಾಮುಖ್ಯತೆ ಕುರಿತು ಸಂವಾದ. ಭಾಗವಹಿಸುತ್ತಾರೆ ಕೆ.ಎಸ್.ರಾಜೇಗೌಡ ಮತ್ತು ಕಾಂಚನ, 8.00 ಯುವವಾಣಿ–ಮೈಸೂರಿನ ಹಳೆ ಕೆಸರೆಯ ಬೆಥಾನಿಯಾ ಸಹೋದರರ ಸಭೆಯ ಯೌವನಸ್ಥರ ಬಳಗದ ಸದಸ್ಯರಿಂದ ಈಸರ್ ಹಬ್ಬದ ವಿಶೇಷ ಕಾರ್ಯಕ್ರಮ, 10.00 ರಾಷ್ಟ್ರೀಯ ಸಂಗೀತ ಕಾರ್ಯಕ್ರಮ, ಪಂಡಿತ್ ಸುದೀಪ್ ಚಟ್ಟೋಪಾಧ್ಯಾಯ –ಬಾನ್ಸುರಿ ವಾದನ

■ **ಕಲಾಸುರುಚಿ ಸುರುಚಿ ರಂಗಮನೆ :** ಕಥೆ ಕೇಳೋಣ ಬನ್ನಿ ಕಾರ್ಯಕ್ರಮ, ಕಥೆ ಹೇಳುವವರು: ಡಾ. ವಿಮಲಶ್ರೀ, ಮಾಲೀಕರು, ವೈಷ್ಣವಿ ಫುಡ್ ನೀಡ್ಸ್, ಮೈಸೂರು, ಸ್ಥಳ: ಸುರುಚಿ ರಂಗಮನೆ, ಚಿತ್ರಭಾನು ರಸ್ತೆ, ಕುವೆಂಪುನಗರ, ಸಂಜೆ 4.30 ರಿಂದ.

■ **ಅಭಿನವ ಶಂಕರಾಲಯ :** ಶತಮಾನೋತ್ಸವ ಸಂಭ್ರಮಾಚರಣೆ, ಸಾನ್ನಿಧ್ಯ : ಜಗದ್ಗುರು ಶಂಕರಾಚಾರ್ಯ ಶ್ರೀ ಶ್ರೀ ವಿಧುಶೇಖರ ಭಾರತೀ ಸನ್ನಿದಾನಂಗಳವರು, ಮುಖ್ಯ ಅಭ್ಯಾಗತರು : ಅಡಿಷನಲ್ ಸಾಲಿಸಿಟರ್ ಜನರಲ್ ಗುರುಭಕ್ತ ಮಣಿ ಎನ್. ವೆಂಕಟರಾಮನ್, ಬೆಳಗ್ಗೆ 9ಕ್ಕೆ ಸಹಸ್ರಮೋದಕ ಗಣಪತಿ ಹೋಮ, ಸಂಜೆ 6ಕ್ಕೆ ಮೈಸೂರು ಮಹಾನಗರದಲ್ಲಿ ಜಗದ್ಗುರು ಶ್ರೀ ಸನ್ನಿದಾನಂಗಳವರ ಪುರ ಪ್ರವೇಶ, ಸಂಜೆ 7ಕ್ಕೆ ಸಚ್ಚಿದಾನಂದ ವಿಲಾಸ ಗುರುಭವನ ಹಾಗೂ ಸಭಾಂಗಣದ ಉದ್ಘಾಟನೆ. ಸಂಜೆ 7:00 ರಿಂದ 8:30 ವಿದ್ವಾನ್ ಆರ್.ಕೆ.ಪದ್ಮನಾಭನ್ ಅವರಿಂದ ವೀಣಾ ವಾದನ, ವಿದ್ವಾನ್ ಪಿ.ಎಸ್.ಶ್ರೀಧರ ಮೃದಂಗ, ವಿದ್ವಾನ್ ವಿ.ಎಸ್.ರಮೇಶ್ ಘಟಂ, ಸ್ಥಳ:ಶ್ರೀ ವಿದ್ಯಾಶಂಕರ ನಿಲಯ ಕಲ್ಯಾಣ ಮಂಟಪದ ಆವರಣ.

■ **ಲಯಾಭಿನಯ ಪರ್‌ಫಾರ್ಮಿಂಗ್ ಆರ್ಟ್ಸ್ ಸೆಂಟರ್ :** ಸುವರ್ಣ ಕಲಾ ಉತ್ಸವ, ಸಾನ್ನಿಧ್ಯ: ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಅಧ್ಯಕ್ಷತೆ : ಶ್ರೀ ರವಿಶಂಕರ ವಿದ್ಯಾಮಂದಿರ ಪ್ರಾಂಶುಪಾಲರಾದ ಬಿ.ಗಾಯತ್ರಿ, ಮುಖ್ಯ ಅತಿಥಿಗಳು: ನಿವೃತ್ತ ಪ್ರಾಧ್ಯಾಪಕರಾದ ಡಾ. ಶೀಲಾ ಶ್ರೀಧರ್, ನಂದಿನಿ ನೃತ್ಯಾಲಯದ ಗುರು ವಿದ್ವಾನ್ ಆರ್. ಕಣ್ಣನ್, ನೂಪುರ ಕಲಾವಿದರು ಟ್ರಸ್ಟ್‌ನ ನಾಟ್ಯಾಚಾರ್ಯ ಪ್ರೊ. ಕೆ. ರಾಮಮೂರ್ತಿರಾವ್, ಅತಿಥಿ ಕಲಾವಿದರಿಂದ ನೃತ್ಯ ಪ್ರದರ್ಶನ, ಲಯಾಭಿನಯ ವಿದ್ಯಾರ್ಥಿಗಳಿಂದ ಭರತನಾಟ್ಯ, ಸ್ಥಳ: ಜಗನ್ಮೋಹನ ಅರಮನೆ, ಸಂಜೆ 5.30ಕ್ಕೆ

■ **ಜಿಪಿಐಇಆರ್ :** ರಾಷ್ಟ್ರೀಯ ರಂಗೋತ್ಸವ, ಸನ್ಮಾನಿತರು : ರಂಗ ವಿನ್ಯಾಸಕಾರ ಅಕ್ಮಲ್ ಪಾಷ, ರಂಗ ಸಜ್ಜಿಕೆ ವಿನ್ಯಾಸಗಾರ ಕೆ. ಪುರಂದರ, ಸ್ಥಳ: ಕಿರು ರಂಗಮಂದಿರ, ಕಲಾಮಂದಿರ ಆವರಣ, ಸಂಜೆ 6ಕ್ಕೆ.

■ **ಶ್ರೀರಾಮಕೃಷ್ಣ ಆಶ್ರಮ :** ಸ್ವಾಮಿ ಇಷ್ಟನಾಥಾನಂದ ಅವರಿಂದ ಆತ್ಮಬೋಧ ಕುರಿತು ಉಪನ್ಯಾಸ, ಸ್ಥಳ: ಆಶ್ರಮದ ಸಭಾಂಗಣ, ಯಾದವಗಿರಿ, ಸಂಜೆ 6ಕ್ಕೆ.

■ **ಶ್ರೀ ಕೃಷ್ಣ ಗಾನಸಭಾ :** ವಿದುಷಿ ಸಿಂಧು ಕಿರಣ್ ಮತ್ತು ಅವರ ಶಿಷ್ಯರಿಂದ ಸಾಂಪ್ರದಾಯಿಕ ಒಡಿಸ್ಸಿ ನೃತ್ಯ ಪ್ರದರ್ಶನ, ಸ್ಥಳ: ಆಳ್ವಾರ್ ಕಲಾ ಭವನ, ಗೋಕುಲಂ, ಸಂಜೆ 6.30ಕ್ಕೆ.

■ **ಜೆಎಸ್‌ಎಸ್ ಪ್ರಕಾಶನ:** ಪುಸ್ತಕ ಬಿಡುಗಡೆ ಸಮಾರಂಭ, ಮುಖ್ಯ ಅತಿಥಿಗಳು: ನಿವೃತ್ತ ಪ್ರಾಂಶುಪಾಲ ಪ್ರೊ.ಎಂ.ಕೃಷ್ಣೇಗೌಡ, ವಿಶೇಷ ಅತಿಥಿಗಳು: ವಿಜಯ ವಿಠ್ಠಲ ವಿದ್ಯಾಶಾಲೆ ಕಾರ್ಯದರ್ಶಿ ವಾಸುದೇವ ಭಟ್, ಮಹಾರಾಜ ಎಜುಕೇಶನ್ ಟ್ರಸ್ಟ್ ಅಧ್ಯಕ್ಷ ಮುರಳಿ, ಹಿರಿಯ ಪತ್ರಕರ್ತರಾದ ರಮೇಶ್ ಉತ್ತಪ್ಪ, ಎಂ.ಆರ್. ಸತ್ಯನಾರಾಯಣ್, ಸಿ.ಕೆ.ಮಹೇಂದ್ರ ಮತ್ತು ರಘುಲೀಲಾ ಸಂಗೀತ ಮಂದಿರ ನಿರ್ದೇಶಕರಾದ ಸುನೀತಾ ಚಂದ್ರಕುಮಾರ್, ಸ್ಥಳ:ಎಂಬಿಸಿಟಿ ಸಭಾಂಗಣ, ಇಂಡಸ್ಟ್ರಿಯಲ್ ಸಬರ್ಬ್, ವಿಶ್ವೇಶ್ವರನಗರ, ಸಂಜೆ 7ಕ್ಕೆ

ಸಿಂಧುವಳ್ಳಿಯಲ್ಲಿಂದು, ಮೈಸೂರು ತಾಲೂಕು

■ **ಮೈಸೂರು ವಿಶ್ವವಿದ್ಯಾನಿಲಯ, ಶ್ರೀ ನಟರಾಜ ಪ್ರತಿಷ್ಠಾನ, ಶ್ರೀ ನಟರಾಜ ಮಹಿಳಾ ವಸತಿ ಪ್ರಥಮ ದರ್ಜೆ ಕಾಲೇಜು :** ಎನ್‌ಎಸ್‌ಎಸ್ ವಾರ್ಷಿಕ ವಿಶೇಷ ಶಿಬಿರ, ಅಧ್ಯಕ್ಷತೆ : ಶ್ರೀ ನಟರಾಜ ಪಬ್ಲಿಕ್ ಸ್ಕೂಲ್ ಪ್ರಾಂಶುಪಾಲರಾದ ಶ್ರೀಮತಿ ಸತ್ಯ ಸುಲೋಚನಾ, ಸಹಾಯಕ ಪ್ರಾಧ್ಯಾಪಕ ಎಂ.ಡಿ. ಉಮೇಶ್ ಅವರಿಂದ ಗಾಂಧೀಜಿ ದೃಷ್ಟಿಯಲ್ಲಿ ಸಪ್ತ ಸಾಮಾಜಿಕ ಪಾಪಗಳು, ಸಹಾಯಕ ಪ್ರಾಧ್ಯಾಪಕರಾದ ಶ್ರೀಮತಿ ಡಿ.ಎನ್. ಆಶಾ ಅವರಿಂದ ಮಕ್ಕಳ ಶೈಕ್ಷಣಿಕ ಮಟ್ಟದಲ್ಲಿ ಮನೋವಿಜ್ಞಾನ ಕುರಿತು ಉಪನ್ಯಾಸ, ಮುಖ್ಯ ಅತಿಥಿಗಳು : ಗ್ರಾಪಂ ಸದಸ್ಯರಾದ ಶ್ರೀಮತಿ ನೀಲಾ, ಎಂ. ಮಹದೇವಸ್ವಾಮಿ, ಶ್ರೀಮತಿ ಉಮಾರಾಣಿ, ಶಿವಯ್ಯ, ಸ್ಥಳ: ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಸಂಜೆ 4ಕ್ಕೆ

ಮೈಸೂರು-ಕೊಡಗಿನ ನೈಸರ್ಗಿಕತೆ ಸಂರಕ್ಷಣೆ ಜೊತೆಗೆ ಪ್ರವಾಸೋದ್ಯಮ ಅಭಿವೃದ್ಧಿಗೆ ಒತ್ತು

● 'ಯುವ ಸಂವಾದ' ಕಾರ್ಯಕ್ರಮದಲ್ಲಿ ಭವಿಷ್ಯದ ಕನಸು ಕಾಣುತ್ತಿರುವ ಪೀಳಿಗೆಗೆ ಬಿಜೆಪಿ ಅಭ್ಯರ್ಥಿ ಯದುವೀರ್ ಭರವಸೆ ● ಅರಮನೆ ಅಂದಾಕ್ಷಣ ವಿಶೇಷವೇನಿಲ್ಲ; ನಮ್ಮ ಬದುಕು ನಿಮ್ಮ ಹಾಗೆಯೇ ಇದೆ ● ಕೃಷಿ ಆದರಿತ ಎರಡೂ ಜಿಲ್ಲೆಯ ಪರಂಪರೆ ಸಂರಕ್ಷಣೆಗೆ ಆದ್ಯತೆ ನೀಡಲಾಗುತ್ತದೆ





ಕುವೆಂಪುನಗರದ ಆದಿಶಕ್ತಿ ಬಂದಂತಮ್ಮ ಮತ್ತು ಕಾಳಮ್ಮ ದೇವಸ್ಥಾನದ ಆವರಣದಲ್ಲಿ ಶುಕ್ರವಾರ ನಡೆದ 'ಯುವ ಸಂವಾದ' ಕಾರ್ಯಕ್ರಮದಲ್ಲಿ ಮೈಸೂರು-ಕೊಡಗು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಯದುವೀರ್ ಮಾತನಾಡಿದರು. ಮತ್ತೊಂದು ಚಿತ್ರದಲ್ಲಿ ಯುವ ಸಂವಾದಕ್ಕೂ ಮುನ್ನ ಭರ್ಜರಿ ರೋಡ್ ಶೋ ನಡೆಸಲಾಯಿತು

ಮೈಸೂರು, ಮಾ.29(ಎಂಕೆ)- ಮೈಸೂರು-ಕೊಡುಗು ಜಿಲ್ಲೆಯಲ್ಲಿ ಕೃಷಿ ಪ್ರಧಾನವಾಗಿದ್ದು, ನೈಸರ್ಗಿಕ ಹಾಗೂ ಪ್ರವಾಸೋದ್ಯಮಕ್ಕೆ ಒತ್ತುಕೊಟ್ಟು ಎರಡು ಜಿಲ್ಲೆಗಳನ್ನು ಅಭಿವೃದ್ಧಿ ಮಾಡುವ ನಿಟ್ಟಿನಲ್ಲಿ ಸಿದ್ದನಾಗಿದ್ದೇನೆ ಎಂದು ಮೈಸೂರು-ಕೊಡಗು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಹೇಳಿದರು.

ಮೈಸೂರಿನ ಕುವೆಂಪುನಗರದಲ್ಲಿರುವ ಆದಿಶಕ್ತಿ ಬಂದಂತಮ್ಮ ಮತ್ತು ಕಾಳಮ್ಮ ದೇವಸ್ಥಾನದ ಆವರಣದಲ್ಲಿ ಬಿಜೆಪಿ ಯುವಮೋರ್ಚಾ ನಗರ(ಜಿಲ್ಲೆ) ವಿಭಾಗದ ವತಿಯಿಂದ ಆಯೋಜಿಸಿದ್ದ 'ಯುವ ಸಂವಾದ' ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಮೈಸೂರು ಭಾಗದಲ್ಲಿ ರಾಗಿ, ಹತ್ತಿ, ಭತ್ತ ಇನ್ನಿತರೆ ಹಾಗೂ ಕೊಡಗು ಭಾಗದಲ್ಲಿ ಕಾಫಿ, ಮೆಣಸು ಮತ್ತು ಕಿತ್ತಳೆ ಹೆಚ್ಚಾಗಿ ಬೆಳೆಯಲಾಗುತ್ತದೆ. ಎರಡು ಜಿಲ್ಲೆಗಳು ಕೃಷಿ ಅವಲಂಬಿತ ಜಿಲ್ಲೆಗಳಾಗಿದ್ದು, ಪ್ರವಾಸೋದ್ಯಮ ಕೇಂದ್ರಗಳು ಆಗಿವೆ. ಈ ನಿಟ್ಟಿನಲ್ಲಿ ಪ್ರವಾಸೋದ್ಯಮಕ್ಕೆ ಆದ್ಯತೆ ನೀಡುವ ಜೊತೆಗೆ ಎರಡು ಜಿಲ್ಲೆಗಳ ನೈಸರ್ಗಿಕತೆ ಹಾಗೂ ಪರಂಪರೆಗೆ ಅನುಗುಣವಾಗಿ ಕಾರ್ಯಯೋಜನೆಗಳನ್ನು ರೂಪಿಸುವ ಮೂಲಕ ಅಭಿವೃದ್ಧಿ ಮಾಡಲು ಸಿದ್ದನಾಗಿದ್ದೇನೆ. ಅದಕ್ಕೆ ನಿಮ್ಮೆಲ್ಲರ ಸಹಕಾರ, ಬೆಂಬಲ ಬೇಕಾಗಿದೆ ಎಂದರು.

ಮೈಸೂರು ಮಹಾರಾಜರು ಅರಮನೆ ಬಿಟ್ಟು ಹೊರಗಡೆ ಬರುವರೇ ಎಂಬ ಕಾರ್ಯಕರ್ತರ ಪ್ರಶ್ನೆಯೊಂದಕ್ಕೆ ಉತ್ತರಿಸಿ, ದೇಶದ ಪ್ರತಿ ದೃಷ್ಟಿಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ ಕಾರ್ಯವೈಖರಿ ಹಾಗೂ ಅವರು ಸ್ವದೇಶಿ ಉತ್ಪನ್ನಕ್ಕೆ ನೀಡುತ್ತಿರುವ ಆದ್ಯತೆ ನೋಡಿದರೆ ಅರಮನೆಯಲ್ಲಾ ಯಾವ ಮನೆಯೊಳಗಿದ್ದರೂ ಹೊರ ಬಂದು ಕೆಲಸ ಮಾಡಬೇಕು ಅನ್ನಿಸುತ್ತದೆ. ಅಲ್ಲದೆ ಅದು ನಮ್ಮ ಕರ್ತವ್ಯವೂ ಆಗಿದೆ. ಮೋದಿಯರಿಂದಲೇ ಪ್ರೇರಣೆ ಪಡೆದು ರಾಜಕೀಯ ಕ್ಷೇತ್ರಕ್ಕೆ ಬಂದಿದ್ದೇನೆ. ಮೈಸೂರು ಭಾಗಕ್ಕೆ ಅರಸರ ಆಳ್ವಿಕೆ ಕಾಲ ಸುವರ್ಣ ಯುಗವಾಗಿತ್ತು. ಅದರಂತೆ ಪ್ರಧಾನಿ ನರೇಂದ್ರ ಮೋದಿಯವರ ಕಾಲದಲ್ಲಿ ದೇಶದಲ್ಲಿ ಸುವರ್ಣಯುಗ ಸ್ಥಾಪನೆಯಾಗಬೇಕು ಎಂದರು.

ಒಂದೇ ಎಸಿ: ಅರಮನೆಯೊಳಗೆ ಹೇಗಿದೆ? ಎಂಬ ಪ್ರಶ್ನೆಗೆ ಅರಮನೆ ಹೊರಗಡೆಯಿಂದ ನೋಡಿದರೆ ದೊಡ್ಡದಾಗಿ ಕಾಣಬಹುದು. ಆದರೆ ಒಳಭಾಗದಲ್ಲಿ ಒಂದೊಂದು ತೊಟ್ಟಿಗಳನ್ನು ಸೇರ್ಪಡೆಗೊಳಿಸಿ ಕಟ್ಟಲಾಗಿರುತ್ತದೆ. ಹಳೇ ಕಾಲದಲ್ಲಿ ಬೆಡ್ ರೂಂ, ಶೌಚಾಲಯ ಎಂಬುದಿರಲಿಲ್ಲ. ಒಂದೊಂದು ಭಾಗಗಳಾಗಿ ಇರುತ್ತಿದ್ದವು. ಅದರಂತೆ ನಾವು ಒಂದು ವಿಭಾಗದಲ್ಲಿ ಇದ್ದೇವೆ. ನಾವು ಸಹ ಸಾಮಾನ್ಯರಂತೆ ಸಸ್ಯಹಾರಿ, ಅದರಲ್ಲೂ ಮೈಸೂರು ಭಾಗದ ಊಟವನ್ನೇ ತಯಾರಿಸುವುದು. ಬೆಡ್ ರೂಂ ಹೊರತು ಬೇರೆಲ್ಲೂ ಎಸಿ ಇಲ್ಲ ಎಂದು ತಿಳಿಸಿದರು.

ವಿಕಸಿತ ಭಾರತಕ್ಕೆ ಅಡಿಪಾಯ: ಪ್ರತಾಪ್ ಸಿಂಹ ಅವರಿಗಿಂತಲೂ ತಮ್ಮ ಮೇಲೆ ನಿರೀಕ್ಷೆ ಹೆಚ್ಚಿದ್ದು, ಅಭಿವೃದ್ಧಿ ಕಾರ್ಯಯೋಜನೆ ರೂಪಿಸಿದ್ದೀರಾ ಎಂಬ ಪ್ರಶ್ನೆಗೆ ಪ್ರತಾಪ್ ಸಿಂಹ ಅವರು ಸಾಕಷ್ಟು ಅಭಿವೃದ್ಧಿ ಕೆಲಸಗಳನ್ನು ಮಾಡಿದ್ದಾರೆ. 2047 ವಿಕಸಿತ ಭಾರತ ಕಲ್ಪನೆಗೆ ಮೈಸೂರಿನಿಂದಲೇ ಅಡಿಪಾಯ ಹಾಕುವ ನಿಟ್ಟಿನಲ್ಲಿ ಅಭಿವೃದ್ಧಿ ಕಾರ್ಯಕ್ರಮ ರೂಪಿಸಲಾಗುವುದು. ಮೈಸೂರು ಮಹಾರಾಜರು ಹಳ್ಳಿಗಳಿಗೆ ಭೇಟಿ ಕೊಡುತ್ತಾರಾ ಎಂಬುದಕ್ಕೆ ಈಗಾಗಲೇ ಹಲವಾರು ಹಳ್ಳಿಗಳಿಗೆ ಭೇಟಿ ನೀಡಿದ್ದೇನೆ. ಮುಂದೆಯೂ ಗ್ರಾಮೀಣ ಪ್ರದೇಶಗಳತ್ತ ಪ್ರಯಾಣ ಬೆಳೆಸಿ, ಅಗ ಬೇಕಾಗಿರುವ ಅಭಿವೃದ್ಧಿ ಕಾರ್ಯಗಳ ಬಗ್ಗೆ ಗಮನ ಹರಿಸಲಾಗುವುದು ಎಂದರು.

ತಂತ್ರಜ್ಞಾನ ಬಳಕೆ: ದಸರಾ ಸಂದರ್ಭದಲ್ಲಿ ಅರಮನೆಯಲ್ಲೇ ಉಳಿಯಬೇಕಾಗುವ ಪರಿಸ್ಥಿತಿಯಲ್ಲಿ ಜನರ ಸಮಸ್ಯೆಗಳಿಗೆ ಸ್ಪಂದಿಸುವಿರಾ ಎಂಬ ಪ್ರಶ್ನೆಗೆ ಖಂಡಿತವಾಗಿಯೂ ಸ್ಪಂದಿಸುತ್ತೇನೆ. ನಮ್ಮ ತಂದೆಯವರೂ ಎರಡೂ ಜವಾಬ್ದಾರಿಯನ್ನು ನಿರ್ವಹಿಸಿದ್ದಾರೆ. ಆದರೆ ಮೊದಲಿಗಿಂತ ಇಂದು ತಂತ್ರಜ್ಞಾನ ಬೆಳೆದಿದ್ದು, ಅದರ ನೆರವಿನಿಂದ ನವರಾತ್ರಿ ವೇಳೆಯೂ ಎಲ್ಲರೊಂದಿಗಿರುವ ಪ್ರಯತ್ನ ಮಾಡುತ್ತೇನೆ ಎಂದು ಭರವಸೆ ನೀಡಿದರು.

ಕುಸ್ತಿಗೆ ಪ್ರೋತ್ಸಾಹ, ಪ್ರಾಣಿಗಳ ಸ್ಮಶಾನ ಸ್ಥಾಪನೆಗೆ ಹೊತ್ತು: ಮೈಸೂರಿನಲ್ಲಿ ಕುಸ್ತಿ ಪರಂಪರೆಗೆ ತನ್ನದೆ ಆದ ಪ್ರಾಧಾನ್ಯತೆ ನೀಡಲಾಗಿತ್ತು. ಆದರೆ ಇತ್ತೀಚಿನ ದಿನಗಳಲ್ಲಿ ಕುಸ್ತಿ ಕಲೆಗೆ ಪ್ರೋತ್ಸಾಹ ದೊರೆಯುತ್ತಿಲ್ಲ ಹಾಗೆಯೇ ಪ್ರಾಣಿ ಸಂರಕ್ಷಣೆ ಕುರಿತ ತಮ್ಮ ನಿಲುವೇನು ಎಂಬುದಕ್ಕೆ ಪ್ರತ್ರಿಕ್ರಿಯಿಸಿದ ಯದುವೀರ್, ಕುಸ್ತಿ ಮಾತ್ರವಲ್ಲ ವಜ್ರಮುಷ್ಠಿ ಕಾಳಗಕ್ಕೂ ಪ್ರೋತ್ಸಾಹ ನೀಡಲಾಗುವುದು. ಮೈಸೂರು ಅರಮನೆ ಈ ಹಿಂದಿನಿಂದಲೂ ಪ್ರೋತ್ಸಾಹ ನೀಡಿರುವುದರ ಜೊತೆಗೆ ಮುಂದಿನ ದಿನಗಳಲ್ಲಿ ಇನ್ನಷ್ಟು ಹೆಚ್ಚಿನ ಪ್ರೋತ್ಸಾಹ ನೀಡಲಾಗುವುದು. ಹಾಗೆಯೇ ಪ್ರಾಣಿಗಳ ಸ್ಮಶಾನಕ್ಕೂ ಆದ್ಯತೆ ನೀಡಲಾಗುವುದು ಎಂದು ಹೇಳಿದರು.

ತಮ್ಮ ಶ್ರೀಮತಿಯವರು ತಮ್ಮನ್ನು ಏನೆಂದು ಕರೆಯುತ್ತಾರೆ: ಮಹಿಳಾ ಕಾರ್ಯಕರ್ತರೊಬ್ಬರು ತ್ರಿಷಿಕಾ ಕುಮಾರಿಯವರು ತಮ್ಮನ್ನು ಏನೆಂದು ಕರೆಯುತ್ತಾರೆ ಎಂಬ ಪ್ರಶ್ನೆಗೆ ಉತ್ತರಿಸಿ, ಮನೆಯಲ್ಲಿ ಚಿಕ್ಕಂದಿನಿಂದಲೂ ಯದು ಎಂದು ಕರೆಯುತ್ತಾರೆ. ಅದರಂತೆ ತ್ರಿಷಿಕ ಅವರು ಕೂಡ ಯದು ಎಂದೇ ಕರೆಯುತ್ತಾರೆ. ಚಿಕ್ಕ ವಯಸ್ಸಿನಿಂದ ತಾವು ಬೆಳೆದದ್ದು ಹೇಗೆ ಎಂಬ ಬಾಲಕರೊಬ್ಬರ ಪ್ರಶ್ನೆಗೆ ನಿಮ್ಮಂತೆಯೇ ಬೆಳೆದಿದ್ದೇನೆ. ಬೆಂಗಳೂರಲ್ಲಿ ಶಿಕ್ಷಣ ಪಡೆದಿದ್ದು, ರಜೆ ವೇಳೆ ಮೈಸೂರಿಗೆ ಬರುತ್ತಿದ್ದೆ ಎಂದು ತಿಳಿಸಿದರು.

ಮಾಜಿ ಉಪ ಮುಖ್ಯಮಂತ್ರಿ ಸಿ.ಎನ್.ಅಶ್ವಥ್ ನಾರಾಯಣ್, ಶಾಸಕ ಟಿ.ಎಸ್.ಶ್ರೀವತ್ಸ, ಬಿಜೆಪಿ ನಗರಾಧ್ಯಕ್ಷ ಎಲ್.ನಾಗೇಂದ್ರ, ಯುವ ಸಂವಾದ ಕಾರ್ಯಕ್ರಮದ ಸಂಚಾಲಕ ಎಂ.ಜೆ.ಕಿರಣ್‌ಗೌಡ, ಯುವ ಮೋರ್ಚಾ ನಗರಾಧ್ಯಕ್ಷ ರಾಕೇಶ್‌ಗೌಡ ಮತ್ತಿತರರಿದ್ದರು.

ಚಾಮುಂಡೇಶ್ವರಿಗೆ ಪೂಜೆ, ಭರ್ಜರಿ ರೋಡ್ ಶೋ...

ಯುವ ಸಂವಾದಕ್ಕೂ ಮುನ್ನ ಕೆ.ಜಿ.ಕೊಪ್ಪಲಿನ ಚಾಮುಂಡೇಶ್ವರಿ ದೇವಸ್ಥಾನಕ್ಕೆ ಭೇಟಿ ನೀಡಿ ಪೂಜೆ ಸಲ್ಲಿಸಿದ ಯದುವೀರ್, ಕುವೆಂಪುನಗರದಲ್ಲಿರುವ ಬಂದಂತಮ್ಮ ಮತ್ತು ಕಾಳಮ್ಮ ದೇವಸ್ಥಾನದ ಆವರಣದವರೆಗೂ ಭರ್ಜರಿ ರೋಡ್ ಶೋ ನಡೆಸಿದರು. ಅವರೊಂದಿಗೆ ಬಿಜೆಪಿ ಬಾವುಟಗಳನ್ನು ಹಿಡಿದು ಸಾಗಿದ ಬಿಜೆಪಿ ಯುವ ಮೋರ್ಚಾದ ನೂರಾರು ಕಾರ್ಯಕರ್ತರು ಮಾರ್ಗದುದ್ದಕ್ಕೂ ಜಯಘೋಷ ಮೊಳಗಿಸಿದರು. ಅಲ್ಲದೆ ಬೃಹತ್ ಬಾದಾಮಿ ಹಾರ ಹಾಕಿ ಸಂಭ್ರಮಿಸಿದರು. ಮಾಜಿ ಉಪಮುಖ್ಯಮಂತ್ರಿ ಸಿ.ಎನ್.ಅಶ್ವಥ್ ನಾರಾಯಣ್, ಮಾಜಿ ಶಾಸಕ ಎಲ್.ನಾಗೇಂದ್ರ ಸೇರಿದಂತೆ ಹಲವು ಮುಖಂಡರು ರೋಡ್ ಶೋನಲ್ಲಿ ಭಾಗವಹಿಸಿದ್ದರು.

ವಾಲ್ಮೀಕಿ ಸಮಾಜದ ಮುಖಂಡ ಎಂ.ಅಪ್ಪಣ್ಣ ಭೇಟಿ ಮಾಡಿದ ಯದುವೀರ್

ಸಂಪೂರ್ಣ ಬೆಂಬಲದ ಭರವಸೆ



ತಮ್ಮನ್ನು ಭೇಟಿಯಾದ ಯದುವೀರ್ ಅವರನ್ನು ಎಂ.ಅಪ್ಪಣ್ಣ ಅಭಿನಂದಿಸಿದರು.

ಮೈಸೂರು, ಮಾ.29(ಎಸ್‌ಬಿಡಿ)- ಮೈಸೂರು-ಕೊಡಗು ಬಿಜೆಪಿ ಅಭ್ಯರ್ಥಿ ಯದುವೀರ್, ರಾಜ್ಯ ವಾಲ್ಮೀಕಿ ಗುರುಪೀಠದ ಧರ್ಮದರ್ಶಿಯಾದ ಜಂಗಲ್ ಲಾಡ್ಜಸ್ ಮಾಜಿ ಅಧ್ಯಕ್ಷ ಎಂ.ಅಪ್ಪಣ್ಣ ಅವರನ್ನು ಭೇಟಿಯಾಗಿ, ಬೆಂಬಲ ಕೋರಿದರು.

ಮೈಸೂರಿನ ಸರಸ್ವತಿಪುರಂನಲ್ಲಿರುವ ಅಪ್ಪಣ್ಣ ಕಚೇರಿಗೆ ಶುಕ್ರವಾರ ಭೇಟಿ ನೀಡಿದ ಯದುವೀರ್, ವಾಲ್ಮೀಕಿ ಸಮಾಜವು ಮಹಾರಾಜರ ಕಾಲದಿಂದಲೂ ನಮ್ಮನ್ನು ಬೆಂಬಲಿಸಿಕೊಂಡು ಬಂದಿದೆ. ಭಾರತದ ಅಭಿವೃದ್ಧಿಗೆ ಪ್ರಧಾನಿ ಮೋದಿ ಅವರ ಕೈ ಬಲಪಡಿಸುವ ದೃಷ್ಟಿಯಿಂದ ಈ ಬಾರಿ ಬಿಜೆಪಿ-ಜೆಡಿಎಸ್ ಮೈತ್ರಿ ಅಭ್ಯರ್ಥಿಯಾಗಿರುವ ತಮ್ಮನ್ನು ಬೆಂಬಲಿಸುವಂತೆ ಮನವಿ ಮಾಡಿದರು.

ಈ ವೇಳೆ ಎಂ.ಅಪ್ಪಣ್ಣ ಮಾತನಾಡಿ, ಬಿಜೆಪಿ ರಾಜ್ಯಾಧ್ಯಕ್ಷರಾದ ಬಿ.ವೈ.ವಿಜಯೇಂದ್ರ ಅವರು ಭೇಟಿಯಾಗಿ ಮೈತ್ರಿ ಅಭ್ಯರ್ಥಿಗಳ ಗೆಲುವಿಗೆ ಶ್ರಮಿಸುವಂತೆ ನಿರ್ದೇಶನ ನೀಡಿದ್ದಾರೆ. ಮೈಸೂರು, ಚಾಮರಾಜನಗರ ಹಾಗೂ ಮಂಡ್ಯ ಜಿಲ್ಲೆಗಳಲ್ಲಿ ನಮ್ಮ ಸಮಾಜದ ಮುಖಂಡರನ್ನು ಪಕ್ಷಾತೀತವಾಗಿ ವಿಶ್ವಾಸಕ್ಕೆ ತೆಗೆದುಕೊಂಡು, ಒಗ್ಗಟ್ಟಿನಿಂದ ಶ್ರಮಿಸುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಬಿಜೆಪಿ ರಾಜ್ಯ ಉಪಾಧ್ಯಕ್ಷ ಎಂ.ರಾಜೇಂದ್ರ, ಚುನಾವಣಾ ಸಂಚಾಲಕ ಮೈ.ವಿ.ರವಿಶಂಕರ್, ಬಿಜೆಪಿ ಗ್ರಾಮಾಂತರ ಜಿಲ್ಲಾ ಘಟಕದ ಅಧ್ಯಕ್ಷ ಎಲ್.ಆರ್.ಮಹದೇವಸ್ವಾಮಿ, ಚಾಮರಾಜನಗರ ಜಿಪಂ ಮಾಜಿ ಅಧ್ಯಕ್ಷ ಮಹದೇವಯ್ಯ, ಉದ್ಯಮಿ ಶಬರೀಶ್, ವಸಂತ್ ಕುಮಾರ್, ಮಹೇಶ್ ಗೌಡ, ಪ್ರಭಾಕರ್, ರಾಜು, ಸುರೇಶ್, ನಾಗೇಂದ್ರ ಹಾಗೂ ನಾಯಕ ಸಮಾಜದ ಮುಖಂಡರು ಉಪಸ್ಥಿತರಿದ್ದರು.

ರಾಮೇಶ್ವರಂ ಕೆಫೆ ಸ್ಫೋಟದ ಬಾಂಬರ್, ಉಗ್ರ ಮತೀನ್ ಫೋಟೋ ಬಿಡುಗಡೆ

ಸುಳಿವು ನೀಡಿದ್ರೆ 10 ಲಕ್ಷ ರೂ. ಬಹುಮಾನ!



ಬೆಂಗಳೂರು: ರಾಮೇಶ್ವರಂ ಕೆಫೆ ಸ್ಫೋಟದ ಬಾಂಬರ್ ಮುಸ್ಸಾವೀರ್ ಹುಸೈನ್ ಶಾಜೀಬ್ ಹಾಗೂ ಉಗ್ರ ಅಬ್ದುಲ್ ಮತೀನ್ ಅಹ್ಮದ್ ತಾಹನ ಫೋಟೋ ಬಿಡುಗಡೆ ಮಾಡಿರುವ ಎನ್‌ಐಎ, ಸುಳಿವು ನೀಡುವವರಿಗೆ ತಲಾ 10 ಲಕ್ಷ ರೂಪಾಯಿ ಬಹುಮಾನ ನೀಡುವುದಾಗಿ ಘೋಷಿಸಿದೆ.

ರಾಮೇಶ್ವರಂ ಕೆಫೆ ಸ್ಫೋಟ ಪ್ರಕರಣ ಸಂಬಂಧ ಬಾಂಬ್ ತಯಾರಿಕೆಯ ಪ್ರಮುಖ ಆರೋಪಿ ಮುಜಾಮ್ಮಲ್ ಶರೀಫ್ ಎಂಬಾತನನ್ನು ನಿನ್ನೆ ಎನ್‌ಐಎ ಅಧಿಕಾರಿಗಳು ಬಂಧಿಸಿದ್ದರು. ಇದರ ಬೆನ್ನಲ್ಲೇ ಇದೀಗ ಮತ್ತಿಬ್ಬರ ಪ್ರಮುಖ ಆರೋಪಗಳ ಪತ್ತೆಗೆ ಬಲೆ ಬೀಸಿದೆ. 'ಬಾಂಬರ್' ಮುಸಾವೀರ್ ಹುಸೇನ್ ಶಾಜಿಬ್ ಹಾಗೂ ಉಗ್ರ ಅಬ್ದುಲ್ ಮತೀನ್ ಅಹ್ಮದ್ ತಾಹಾನ ಫೋಟೋವನ್ನು ಬಿಡುಗಡೆ ಮಾಡಲಾಗಿದೆ.

ಇನ್ನು ಬಾಂಬ್ ತಯಾರಿಕೆ ಮಾಡಿದ ಆರೋಪಿ ಮುಜಾಮಿಲ್ ಶರೀಫ್‌ನನ್ನು 7 ದಿನಗಳ ಕಾಲ ಎನ್‌ಐಎ ವಶಕ್ಕೆ ಒಪ್ಪಿಸಿ ಕೋರ್ಟ್ ಆದೇಶ ಹೊರಡಿಸಿದೆ. ರಾಮೇಶ್ವರಂ ಕೆಫೆ ಸ್ಫೋಟ ಪ್ರಕರಣ ಆರೋಪಿ ಮುಜಾಮಿಲ್ ಷರೀಫ್ ಬಾಂಬ್ ತಯಾರಿಕೆಯಲ್ಲಿ ಪ್ರಮುಖ ಪಾತ್ರ ವಹಿಸಿದ್ದನು. ಅಲ್ಲದೆ ಉಳಿದ ಆರೋಪಿಗಳ ಜೊತೆ ಸಂಪರ್ಕ ಹೊಂದಿದ್ದ ಬಗ್ಗೆಯೂ ಎನ್‌ಐಎ ಮಾಹಿತಿ ಸಂಗ್ರಹ ಮಾಡಿತ್ತು.

ಬೆಂಗಳೂರಿನ ಬ್ರೂಕ್‌ಫೀಲ್ಡ್‌ನ ಐಟಿಪಿಎಲ್ ರಸ್ತೆಯಲ್ಲಿರುವ ಜನನಿಬಿಡ ಜನಪ್ರಿಯ ರೆಸ್ಟೋರೆಂಟ್‌ನಲ್ಲಿ ಮಾರ್ಚ್ 1 ರಂದು ಹ್ಯಾಂಡ್ ಬ್ಯಾಗ್‌ನಲ್ಲಿ ಬಚ್ಚಿಟ್ಟಿದ್ದ ಸುಧಾರಿತ ಸ್ಫೋಟಕ ಸ್ಫೋಟಗೊಂಡ ನಂತರ ನೌಕರರು ಮತ್ತು ಗ್ರಾಹಕರು ಸೇರಿದಂತೆ ಒಂಬತ್ತಕ್ಕೂ ಹೆಚ್ಚು ಜನರು ಗಾಯಗೊಂಡಿದ್ದರು. ಸ್ಫೋಟದಿಂದ ಆಸ್ತಿಪಾಸ್ತಿಗೂ ಹಾನಿಯಾಗಿತ್ತು.

ಏ.1 ರಿಂದ ಮೈಸೂರು-ಬೆಂಗಳೂರು ಎಕ್ಸ್‌ಪ್ರೆಸ್ ವೇ ಟೋಲ್ ಹೆಚ್ಚಳ



ಮೈಸೂರು, ಮಾ.29(ಎಂಕೆ)- ಮೈಸೂರು-ಬೆಂಗಳೂರು ಎಕ್ಸ್‌ಪ್ರೆಸ್ ಹೈವೇ ಪ್ರಾರಂಭವಾದ ಬಳಿಕ ಎರಡನೇ ಪರಿಷ್ಕರಣೆಗೆ ಮುಂದಾಗಿರುವ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರವು ಟೋಲ್ ಶುಲ್ಕ ಹೆಚ್ಚಳಕ್ಕೆ ನಿರ್ಧರಿಸಿದೆ.

ಏ.1 ರಿಂದ ಅನ್ವಯವಾಗುವಂತೆ ಬೆಂಗಳೂರು- ಮೈಸೂರು ಎಕ್ಸ್‌ಪ್ರೆಸ್ ವೇ ಟೋಲ್ ದರ ಏರಿಕೆಯಾಗುತ್ತಿದ್ದು, ವಾಹನ ಸವಾರರ ಜೇಬಿಗೆ ಮತ್ತೆ ಕತ್ತರಿ ಬೀಳಲಿದೆ. 2023ರ ಮಾರ್ಚ್ ತಿಂಗಳಿನಲ್ಲಿ ಟೋಲ್ ಸಂಗ್ರಹ ಆರಂಭವಾಗಿತ್ತು. ನಂತರ ಜೂನ್‌ನಲ್ಲಿ ಶೇ.22 ರಷ್ಟು ಟೋಲ್ ದರ ಏರಿಕೆಯಾಗಿತ್ತು. ಈಗ ರಾಷ್ಟ್ರೀಯ ಹೆದ್ದಾರಿ ಶುಲ್ಕ ನಿಯಮ 2008- ನಿಯಮ 5ರ ಪ್ರಕಾರ ಬಳಕೆದಾರರ ಶುಲ್ಕ ದರದ ವಾರ್ಷಿಕ ಪರಿಷ್ಕರಣೆಯಂತೆ ಮತ್ತೆ ಟೋಲ್ ದರ ಹೆಚ್ಚಳ ಮಾಡಲಾಗಿದ್ದು, ಶೇ.3 ರಿಂದ 14 ರಷ್ಟು ಶುಲ್ಕ ಹೆಚ್ಚಾಗಲಿದೆ.



ಮೈಸೂರು ಜಿಲ್ಲಾ ಬಿಜೆಪಿ ಅಧ್ಯಕ್ಷ ಎಲ್.ಆರ್.ಮಹದೇವಸ್ವಾಮಿ ಜನ್ಮದಿನದ ಪ್ರಯುಕ್ತ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ಸಿಹಿ ತಿನಿಸಿ ಶುಭಾಶಯ ಕೋರಿದರು. ಈ ಸಂದರ್ಭದಲ್ಲಿ ರಾಜ್ಯ ಪ್ರಧಾನ ಕಾರ್ಯದರ್ಶಿ ಶರಣು ತಳ್ಳೀಕೆರೆ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮಹೇಶ್ ಮಡವಾಡಿ, ನಾಗೇಂದ್ರ ಒಡೆಯರ ಪಾಳ್ಯ, ನಗರ ಪ್ರಧಾನ ಕಾರ್ಯದರ್ಶಿ ಮಹೇಶ್ ಕೇಬಲ್, ರಾಜಣ್ಣ ದೂರ ಇನ್ನಿತರು ಉಪಸ್ಥಿತರಿದ್ದರು.

ನಕ್ಕರೆ ಅದೇ ಸ್ವರ್ಗ

ಪತಿ : "ನನ್ನ ಮೇಲೆ ಎಷ್ಟೊಂದು ಪ್ರೀತಿ ನಿನಗೆ, ನನಗೋಸ್ಕರ ಎರಡು ಬನಿಯನ್ ತಂದಿದ್ದೀಯ?"
ಪತ್ನಿ : "ಐದು ಸಾವಿರ ಕೊಟ್ಟು ರೇಷ್ಮೆ ಸೀರೆ ತಗೊಂಡೆ. ಅದಕ್ಕೆ ಫ್ರೀಯಾಗಿ ಕೊಟ್ಟರು ಅಷ್ಟೆ."

ಮೈಸೂರು ಮಿತ್ರ
ಶನಿವಾರ, 30 ಮಾರ್ಚ್ 2024
ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)
ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತವಾಹಿನಿ.........
ಇತರರ ಸುಖವನ್ನು ಬಯಸುವುದೇ ನಾವು ಸುಖವನ್ನು ಪಡೆಯುವುದಕ್ಕಿರುವ ಸುಲಭ ಮಾರ್ಗ – ಸ್ವಾಮಿ ವಿವೇಕಾನಂದ

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಪಥ್ಯ ಮಾಡಿ ಪಿತ್ತ ಹೆಚ್ಚಿತು

ನಿಮ್ಮ ಪತ್ರಗಳು

ಮಾರಿಕೊಂಡವರು...

ಮಾನ್ಯರೆ,
ಬದುಕೆ ಹಾಗೇ ಕೆಲವೊಂದು ಪ್ರಶ್ನೆಗಳನ್ನು ನಮ್ಮಲ್ಲೇ ಕೇಳಿಕೊಂಡರೆ ಬದುಕಿನಲ್ಲಿ ಅದೆಷ್ಟೋ ಉತ್ತರಗಳು ಸಿಗುತ್ತವೆ. ಆದರೆ ದೊರೆತ ಉತ್ತರಗಳನ್ನು ಒಪ್ಪಿಕೊಳ್ಳುವ ಮನೋಭಾವ ಇರಬೇಕಷ್ಟೆ. ಹೀಗೆಯೇ ನಮ್ಮಲ್ಲಿ ಮೂಡುವ ಒಂದು ಪ್ರಶ್ನೆಗೆ ಉತ್ತರ ಕಂಡುಕೊಳ್ಳೋಣ.

ಸಮಾಜದಲ್ಲಿ ಕೀಳು ಮಟ್ಟದಲ್ಲಿ ಕಾಣಲಾಗುವ ವೇಶ್ಯಾ ವೃತ್ತಿನಿರತ ಜೀವಿಗಳು ಅವರ ಹಣಕಾಸಿನ ತೊಂದರೆ ನೀಗಲು ಹಾಗೂ ತಮ್ಮವರನ್ನು ಸಲುಹಲು ಈ ವೃತ್ತಿಗೆ ಇಳಿಯುತ್ತಾರೆ.

ಅವರು ತಮ್ಮ ದೇಹವನ್ನು ಮಾರಿಕೊಂಡುಬಿಡುತ್ತಾರೆ. ಅದರ ಹಿಂದೆ ಅವರ ಕುಟುಂಬ ನಿರ್ವಹಣೆಯ ಹೊಣೆಯೋ ಅಥವಾ ಮತ್ತಾವುದೋ ಸಂಕಷ್ಟ ಸೆರೆಯಿಂದ ಈ ವೃತ್ತಿಗಿಳಿದು ಬಿಟ್ಟಿರುತ್ತಾರೆ. ಸಮಾಜ ಇವರನ್ನು ಕಾಣುವ ದೃಷ್ಟಿ ಒಂದೆಡೆಗೆ ಕೀಳುಮಟ್ಟದು. ಇದು ಒಂದು ತರಹನಾದ ಬದುಕಿನ ಬವಣೆ.

ಅಲ್ಲೊಬ್ಬ ತಾನು ಹುಟ್ಟುತ್ತಲೇ ಪಡೆದು ಬಂದ ಸಂಬಂಧಗಳನ್ನು ಕೇವಲ ದುಡ್ಡಿಗಾಗಿ ದೂರ ಮಾಡಿಕೊಂಡು, ತನಗೆ ತಾನೇ ಶ್ರೇಷ್ಠ ವ್ಯಕ್ತಿಯೆಂಬ ಹಗಲು ಕನಸು ಕಾಣುತ್ತಿದ್ದ. ಬದುಕಿನಲ್ಲಿ ಹಣವೇ ಎಲ್ಲವೂ ಅಲ್ಲ.

ತನ್ನವರನ್ನು ಸಲುಹಲು ದೇಹವನ್ನು ಮಾರಿಕೊಂಡವರು ಒಂದೆಡೆಯಾದರೆ ತನ್ನ ಸಿರಿತನದ ಅಹಂನಲ್ಲಿ ತನ್ನವರನ್ನೇ ಕಳೆದುಕೊಂಡವ ಮತ್ತೊಬ್ಬ. ಬಂಧಗಳನ್ನು ಉಳಿಸಿಕೊಳ್ಳಲು ಹಸಿವು ತುಂಬಲು ಮಾರಿಕೊಂಡವರು ಒಂದೆಡೆ, ವೈಭೋಗ ಹಣದ ಅಹಂನಲ್ಲಿ ಬಂಧಗಳನ್ನೇ ಮಾರಿಕೊಂಡವರು ಮತ್ತೊಂದೆಡೆ.

ಸಮಾಜದ ದೃಷ್ಟಿಯಲ್ಲಿ ದೇಹ ಮಾರಿಕೊಂಡವರೂ ಕೀಳಾದರೆ. ಹಣದ ಅಹಂನಲ್ಲಿ ಸಂಬಂಧಗಳನ್ನೇ ಮಾರಿಕೊಂಡವರು ಕೀಳಲ್ಲವೇ?

–ಮಂಜೇಶ್ ದೇವಗಳ್ಳಿ, ಮೈಸೂರು

ಕಾಲಚಕ್ರ ಉರುಳುತ್ತಿದೆ ಸ್ವಾಮಿ...!

ಮಾನ್ಯರೆ,
ಇತ್ತೀಚೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಕಾಂಗ್ರೆಸ್ ಸಮಾವೇಶದಲ್ಲಿ ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡರ ಬಗ್ಗೆ ಆಡಿದ ಮಾತು ಸ್ವಯಂ ಅವರ ಘನತೆ, ಗೌರವ ಜೊತೆಗೆ ಅವರಿಗಿರುವ ಸ್ಥಾನಮಾನಕ್ಕೆ ಚ್ಯುತಿ ತಂದುಕೊಂಡ ಆಗಲ್ಲವೆ?

ರಾಜಕಾರಣ ಮಾಡಿ ಸ್ವಾಮಿ. ಆದರೆ, ನಿಮ್ಮ ನಿಮ್ಮ ಗೌರವ ಘನತೆ ಕಾಪಾಡಿಕೊಳ್ಳಿ. 'ದೇವೇಗೌಡ ಅವರ ಅಳಿಯ ಮಂಜುನಾಥನ ಮೊದಲೇ ಕಳಿಸಿಬಿಟ್ಟ; ಅಲ್ಲಿ ಹೋಗಿ ನಿಂತ್ಕೊಳ್ಳಪ್ಪಾ ಬಿಜೆಪಿಲಿ, ನಾನ್ ಟಿಕೆಟ್ ಕೊಡಲ್ಲಾ ಅಂತಾ...!' ಇದು ಸಿದ್ದರಾಮಯ್ಯನವರು ಆಡಿದ ಮಾತು. ಸ್ವಾಮಿ, ಇದು ನಿಮ್ಮಿಬ್ಬರ ವಿಚಾರಕ್ಕೆ ಸಂಬಂಧಪಟ್ಟಂತಹ ಮಾತಲ್ಲ. ಇದು ಸಮಾಜದಲ್ಲಿ ಮೌಲ್ಯಗಳು ಸಾಯುತ್ತಿರುವುದಕ್ಕೆ ಸಾಕ್ಷಿ. ವ್ಯಕ್ತಿ ಗೌರವ ಹಾಳಾಗುತ್ತಿರುವುದಕ್ಕೆ ಪುರಾವೆ. ಮಾನವೀಯ ಸಂಬಂಧಗಳ ಅಧಃಪತನಕ್ಕೆ ಕನ್ನಡಿ ಹಿಡಿದಂತಿಲ್ಲವೆ.

ರಾಜಕೀಯ ದ್ವೇಷ ಏನಾದರೂ ಇರಲಿ. ಆದರೆ ಕನಿಷ್ಠ ವಯಸ್ಸಿಗಾದರೂ ಬೆಲೆ ಬೇಡವೆ? ಮಾತು ಆಡಿದರೆ ಹೋಯ್ತು, ಮುತ್ತು ಒಡೆದರೆ ಹೋಯ್ತು ಅಂತಾರೆ ಉನ್ನತ ಸ್ಥಾನದಲ್ಲಿರುವವರು. ಈ ರೀತಿ ಮಾತನಾಡುವುದರಿಂದ ಸಮಾಜದ ಮೇಲೆ ಯಾವ ಪರಿಣಾಮ ಬೀರುತ್ತದೆ ಎಂಬುದು ಅಧಿಕಾರ ಇಲ್ಲದಾಗ, ಜನಮನ್ನಣೆ ಕಳೆದುಕೊಂಡಾಗ ಮನವರಿಕೆ ಆಗುತ್ತದೆ. ಏಕೆಂದರೆ ಕಾಲಚಕ್ರ ಉರುಳುತ್ತಿರುತ್ತದೆ ಸ್ವಾಮಿ.


– ರಂಗಸ್ವಾಮಿ, ವಿದ್ಯಾರಣ್ಯಪುರಂ, ಮೈಸೂರು.

ಸ್ಥಳೀಯ ಸಂಸ್ಥೆಗಳಿಗೆ ಶೀಘ್ರ ಚುನಾವಣೆ ನಡೆಸಿ

ಮಾನ್ಯರೆ,
ರಾಜ್ಯದ ಸ್ಥಳೀಯ ಸಂಸ್ಥೆಗಳ ಅವಧಿ ಮುಗಿದು ಸಾಕಷ್ಟು ಸಮಯ ಕಳೆದಿದೆ. ಸ್ಥಳೀಯ ಸಂಸ್ಥೆಗಳಿಗೆ ಚುನಾವಣೆ ನಡೆಸಲು ರಾಜ್ಯ ಸರ್ಕಾರ ಹಾಗೂ ರಾಜ್ಯ ಚುನಾವಣಾ ಆಯೋಗ ಮೀನಾಮೇಷ ಎಣಿಸುತ್ತಿರುವುದು ಸರಿಯಲ್ಲ. ಸ್ಥಳೀಯ ಸರ್ಕಾರಗಳ ರಚನೆ ಮತ್ತು ಅದರ ಮಹತ್ವದ ಬಗ್ಗೆ ಸಂವಿಧಾನದಲ್ಲೇ ವಿವರವಾದ ಉಲ್ಲೇಖವಿದೆ. ಈ ನಿಟ್ಟಿನಲ್ಲಿ ಸ್ಥಳೀಯ ಸಂಸ್ಥೆಗಳಿಗೆ ಚುನಾವಣೆ ನಡೆಸದೇ ವಿಳಂಬ ಮಾಡುತ್ತಿರುವುದು ಸರಿಯಾದ ನಡೆಯಲ್ಲ. ಅವಧಿ ಪೂರೈಸುವ ಲೋಕಸಭೆ, ರಾಜ್ಯಗಳ ವಿಧಾನಸಭೆಗಳಿಗೆ ಸಮಯಕ್ಕೆ ಸರಿಯಾಗಿ ಚುನಾವಣೆಗಳು ನಡೆಯುತ್ತವೆ. ಆದರೆ, ಸ್ಥಳೀಯ ಸಂಸ್ಥೆಗಳ ಕಥೆ ಬೇರೆಯೇ ಇದೆ. ರಾಜ್ಯದಲ್ಲಿ ಹನ್ನೊಂದು ಮಹಾನಗರ ಪಾಲಿಕೆಗಳು, ಜಿಲ್ಲಾ ಪಂಚಾಯಿತಿ, ತಾಲೂಕು ಪಂಚಾಯಿತಿಗಳ ಪೈಕಿ ಯಾವುದರಲ್ಲೂ ಚುನಾಯಿತ ವ್ಯವಸ್ಥೆ ಅಸ್ತಿತ್ವದಲ್ಲಿಲ್ಲ. ಈ ಸ್ಥಳೀಯ ಸಂಸ್ಥೆಗಳ ಅವಧಿ ಮುಗಿದು ಸಾಕಷ್ಟು ಸಮಯ ಕಳೆದಿದ್ದರೂ ಚುನಾವಣೆ ನಡೆಸದೇ ಇರುವುದು ಬೇಜವಾಬ್ದಾರಿತನದ ಪರಮಾವಧಿ ಎನ್ನಬಹುದು. ಸ್ಥಳೀಯ ಸಂಸ್ಥೆಗಳಿಗೆ ಚುನಾವಣೆ ನಡೆಸಲು ರಾಜ್ಯ ಚುನಾವಣಾ ಆಯೋಗಕ್ಕೆ ಸಂವಿಧಾನ ಸಾಕಷ್ಟು ಅಧಿಕಾರ, ಸ್ವತಂತ್ರ ನೀಡಿದೆ. ಸಂವಿಧಾನದ ಉದ್ದೇಶಗಳನ್ನು ಮನಗಂಡು ರಾಜ್ಯ ಸರ್ಕಾರ, ರಾಜ್ಯ ಚುನಾವಣಾ ಆಯೋಗವು ಸ್ಥಳೀಯ ಸಂಸ್ಥೆಗಳಿಗೆ ಚುನಾವಣೆಯನ್ನು ಆದಷ್ಟು ಬೇಗ ನಡೆಸಿ, ಸ್ಥಳೀಯ ಸರ್ಕಾರಗಳು ಅಸ್ತಿತ್ವಕ್ಕೆ ಬರುವ ಹಾಗೆ ಮಾಡಬೇಕು. ಈ ಮೂಲಕ ಪ್ರಜಾಪ್ರಭುತ್ವದ ಬೇರನ್ನು ಇನ್ನಷ್ಟು ಗಟ್ಟಿಗೊಳಿಸಬೇಕು. ಸಂವಿಧಾನದ ನಿಜ ಆಶಯವನ್ನು ಈಡೇರಿಸಬೇಕು.

– ಜಿ.ಎಂ. ಪ್ರಸಾದ್, ಮೈಸೂರು.

ತಿದ್ದುಪಡಿ ಹಾಗೂ ಸ್ಪಷ್ಟೀಕರಣ


ಶ್ರೀ ಸಚ್ಚಿದಾನಂದ ಶಿವಾಭಿನವ ನೃಸಿಂಹಭಾರತೀ ಮಹಾಸ್ವಾಮಿ


ಶ್ರೀ ಶಂಕರಾಚಾರ್ಯ ವಿಧುಶೇಖರ ಭಾರತಿ ಸ್ವಾಮೀಜಿ

'ಮೈಸೂರು ಮಿತ್ರ'ನ ಶುಕ್ರವಾರದ ಸಂಚಿಕೆಯ 4ನೇ ಪುಟದಲ್ಲಿ ಪ್ರಕಟವಾಗಿರುವ **'ಅಭಿನವ ಶಂಕರಾಲಯದ ಶತಮಾನೋತ್ಸವ ಸಂಭ್ರಮಾಚರಣೆ'** ಲೇಖನದಲ್ಲಿರುವ ಚಿತ್ರ **ಶ್ರೀ ಶ್ರೀ ಶ್ರೀ ಸಚ್ಚಿದಾನಂದ ಶಿವಾಭಿನವ ನೃಸಿಂಹ ಭಾರತೀ ಮಹಾಸ್ವಾಮಿಗಳದ್ದು.** ಆದರೆ ಶ್ರೀ ಶಂಕರಾಚಾರ್ಯ ವಿಧುಶೇಖರ ಭಾರತಿ ಸನ್ನಿದಾನ ಎಂದು ತಪ್ಪಾಗಿ ಪ್ರಕಟವಾಗಿದೆ.



ಇದೇ ಸಂಚಿಕೆಯ ಐದನೇ ಪುಟದಲ್ಲಿ 'ಆಟೋದಲ್ಲಿ ಬಿಟ್ಟು ಹೋಗಿದ್ದ ಚಿನ್ನಾಭರಣ ಬ್ಯಾಗ್ ಮಾಲೀಕರ ವಶಕ್ಕೆ' ಶೀರ್ಷಿಕೆಯಡಿ ವರದಿಯಲ್ಲಿ ಪ್ರಕಟವಾಗಿರುವ ಚಿತ್ರ ಪಿಎಚ್.ಡಿ ಪದವೀಧರರಾದ ಸಿ.ಬಿ. ಅರುಣಕುಮಾರ ಅವರದ್ದು. ಆದರೆ ಮಹಮದ್ ನಜೀರ್ ಎಂದು ಪ್ರಕಟವಾಗಿದೆ. ಈ ತಪ್ಪುಗಳಿಗಾಗಿ ವಿಷಾದಿಸುತ್ತೇವೆ.

– ಸಂಪಾದಕ



ಡಾ. ವಿ. ರಂಗನಾಥ್
ಲೇಖಕರು ಹಾಗೂ ನಿವೃತ್ತ ತಹಸೀಲ್ದಾರರು
ಮೊ : 94482 08746 / 97421 79000

ಚಿಂತನೆ

ಎಲ್ಲಿ ಹೋದವೋ ಆ ಸತ್ಸಂಪ್ರದಾಯಗಳು!



ಪ್ರತಿಯೊಂದು ದೇಶವೂ ತನ್ನದೇ ಆದ ಸಂಸ್ಕೃತಿ ಹಾಗೂ ಸಭ್ಯತೆ ಹೊಂದಿರುತ್ತದೆ. ಅದು ಅಲ್ಲಿನ ಇತಿಹಾಸ, ಅಲ್ಲಿನ ಪರಿಸರ ಹಾಗೂ ಜನರ ಮನೋಭಾವಕ್ಕೆ ಅನುಗುಣವಾಗಿರುತ್ತದೆ. ಕೆಲವು ಆಚರಣೆಗಳು ಶತಶತಮಾನಗಳಿಂದ ಮುಂದುವರೆದುಕೊಂಡು ಬಂದಿರುತ್ತವೆ. ಕೆಲವು ಸಂಪ್ರದಾಯಗಳನ್ನು ಕಂಡಾಗ ಅದು ಇಂತಹುದೇ ದೇಶದ್ದು ಎಂದು ಹೇಳಿಬಿಡಬಹುದು.

ಹಾಗೆಯೇ ಭಾರತದ ಸಂಸ್ಕೃತಿಯೂ ತನ್ನದೇ ಆದ ವೈಶಿಷ್ಟ್ಯತೆಗಳನ್ನು ಹೊಂದಿದೆ. ಈ ದೇಶದ ಇತಿಹಾಸ ಪ್ರಪಂಚದ ಇನ್ನಿತರೆ ರಾಷ್ಟ್ರಗಳ ಇತಿಹಾಸಕ್ಕಿಂತ ಪುರಾತನವಾದುದು. ಇಲ್ಲಿನ ಸಂಸ್ಕೃತಿ ಹರಪ್ಪ ಮೊಹೆಂಜದಾರೋ ಕಾಲಕ್ಕೆ ಪೂರ್ವದಿಂದಲೂ ಇರುವಂತಹದ್ದು ಎಂಬುದು ಹಲವು ಸಂದರ್ಭಗಳಲ್ಲಿ ಸಾಬೀತಾಗಿದೆ. ಇವುಗಳು ಕ್ರಿಸ್ತಪೂರ್ವ 6000 ವರ್ಷಗಳ ಪೂರ್ವದಲ್ಲೇ ಇತ್ತು ಎಂದು ಹೇಳಲಾಗುತ್ತದೆ. ಇದನ್ನು ಸಿಂಧೂ ಕಣಿವೆಯ ಸಂಸ್ಕೃತಿ ಎಂದೂ ಹೇಳಲಾಗುತ್ತದೆ. ಇವೆರಡು ಮಹಾನಗರಗಳಾಗಿದ್ದವು, ಅವುಗಳಲ್ಲಿ ಮೂಲಸೌಲಭ್ಯಗಳು, ಅದರಲ್ಲೂ ಒಳಚರಂಡಿಯಂತಹ ಸೌಲಭ್ಯವಿತ್ತು ಎಂಬುದು ಕಂಡುಬರುತ್ತದೆ. ಇಂದಿಗೂ ಅಲ್ಲಲ್ಲಿ ಉತ್ಖನನಗಳು ನಡೆದು ಹೊಸ ಹೊಸ ವಿಷಯಗಳು ಬಯಲಿಗೆ ಬರುತ್ತಿರುತ್ತವೆ. ಇದು ನಮ್ಮ ದೇಶದ ಭವ್ಯ ಇತಿಹಾಸವನ್ನು ಹೇಳುತ್ತದೆ. ಇದರ ಬಗ್ಗೆ ನಾವೆಲ್ಲಾ ಹೆಮ್ಮೆಪಡಬೇಕು.

ನಮ್ಮ ಹಿಂದಿನ ಜನಜೀವನವನ್ನು ಒಮ್ಮೆ ಅವಲೋಕಿಸಿದಾಗ, ಶತಮಾನಗಳ ಹಿಂದೆ, ಯಾವುದೇ ವಾಹನ ಸೌಲಭ್ಯಗಳಿಲ್ಲದಾಗ ಹಾಗೂ ಅಂದಿನ ಜನಸಂಖ್ಯೆ ಕಡಿಮೆ ಇದ್ದಾಗ ಜನರು ಹೇಗೆ ಜೀವಿಸುತ್ತಿದ್ದರು? ಹಿಂದೆ ಜನರು ಸಣ್ಣಸಣ್ಣ ಗುಂಪುಗಳಾಗಿ, ಸಾಮಾನ್ಯವಾಗಿ ನದಿಗಳ ದಡದಲ್ಲಿ ಅಥವಾ ನೀರಿನ ಸೌಕರ್ಯ ಇರುವಂತಹ ಪ್ರದೇಶಗಳಲ್ಲಿ ವಾಸಿಸುತ್ತಿದ್ದರು ಎಂಬುದು ಗೊತ್ತಾಗುತ್ತದೆ. ಆಗ ಹೊರ ಪ್ರಪಂಚದೊಡನೆ ಅವರಿಗೆ ಸಂಬಂಧ ಇರುತ್ತಿರಲಿಲ್ಲ. ತಾವು ಜೀವಿಸುವ ಸಲುವಾಗಿ ಬೆಳೆ ಬೆಳೆಯುವುದು, ಆಹಾರ ಪದಾರ್ಥ ಉತ್ಪಾದನೆಗೆ ತಮ್ಮದೇ ಆದ ವಿಧಾನಗಳನ್ನು ಅನುಸರಿಸುತ್ತಿದ್ದರು ಎಂಬುದೂ ಗೊತ್ತಾಗುತ್ತದೆ. ಹಾಗೆಯೇ ತಮ್ಮದೇ ಆದ ಭಾಷೆ ಹಾಗೂ ಲಿಪಿಗಳನ್ನೂ ಅವರು ಅಭಿವೃದ್ಧಿಪಡಿಸಿಕೊಂಡರು. ಜೊತೆಗೆ ತಮ್ಮದೇ ಆದ ವೇಷಭೂಷಣ, ಹಾಡು, ನೃತ್ಯ ಇತ್ಯಾದಿಗಳನ್ನು ಅಳವಡಿಸಿಕೊಂಡಿದ್ದರು. ಅದೇ ಅವರ ಸಂಸ್ಕೃತಿಯಾಗಿತ್ತು.

ಯಾವಾಗ ವಾಹನಗಳ ಬಳಕೆ ಜಾಸ್ತಿಯಾಯಿತೋ ಆಗ ಜನರು ಒಂದು ಕಡೆಯಿಂದ ಮತ್ತೊಂದು ಕಡೆಗೆ ಚಲಿಸಲು ಪ್ರಾರಂಭಿಸಿದರು. ಹೀಗೆ ಹೋದಾಗ ತಮ್ಮದಲ್ಲದ ಮತ್ತೊಂದು ಪ್ರಪಂಚವಿದೆ, ನಮ್ಮದಲ್ಲದ ಭಾಷೆ ಇದೆ, ನಮ್ಮದಕ್ಕಿಂತ ವಿಭಿನ್ನವಾದ ಸಂಸ್ಕೃತಿ ಇದೆ ಎಂಬುದನ್ನು ಕಂಡುಕೊಂಡರು. ಕ್ರಮೇಣ ವ್ಯಾಪಾರ ವಹಿವಾಟು ಆರಂಭವಾಯಿತು. ಅಲ್ಲಿನವರೊಡನೆ ಇವರು, ಇಲ್ಲಿನವರೊಡನೆ ಅವರು ಸಂಭಾಷಣೆ ನಡೆಸಲು ಇಬ್ಬರಿಗೂ ಅರ್ಥವಾಗುವಂತಹ ಸಾಮಾನ್ಯ ಭಾಷೆ ಕಂಡುಕೊಂಡರು. ಸಂಸ್ಕೃತಿಗಳ ವಿನಿಮಯವಾಯಿತು. ಇವರದ್ದನ್ನು ಅವರು, ಅವರದ್ದನ್ನು ಇವರೂ ಕಲಿತರು.

ಆಶ್ಚರ್ಯವೆಂದರೆ ಪರಸ್ಪರ ಗೊತ್ತಿಲ್ಲದಿದ್ದಾಗಲೂ ಈ ದೇಶದಲ್ಲಿನ ಜನರ ಆಚರಣೆ, ಸಂಸ್ಕೃತಿಯಲ್ಲಿ ಬಹುತೇಕ ಸಾಮ್ಯತೆ ಕಂಡುಬರುತ್ತಿತ್ತು. ಅದು ಈ ದೇಶದ ಮಣ್ಣಿನ ಗುಣ. ಹೀಗೆ ಈ ದೇಶದ ಸಂಸ್ಕೃತಿ ತೆರೆದುಕೊಳ್ಳುತ್ತಾ ಹೋಯಿತು. ಪರಸ್ಪರ ಸಂಸ್ಕೃತಿಗಳ ವಿಲೀನವಾಗಿ ಅವುಗಳ ಧಾಟಿಯಲ್ಲೇ ನೃತ್ಯ, ಸಂಗೀತಗಳು ಸೃಷ್ಟಿಯಾದವು. ಸಂಚಾರ ವ್ಯವಸ್ಥೆ ಹಾಗೂ ಸವಲತ್ತುಗಳು ಹೆಚ್ಚಾದಂತೆ ಮತ್ತಷ್ಟು ಪ್ರದೇಶಗಳ ಸಂಪರ್ಕ ಹಾಗೂ ಸಂಸ್ಕೃತಿಗಳ ವಿಲೀನವಾಯಿತು. ಕೊನೆಗೆ ಈ ದೇಶದ ಸಂಸ್ಕೃತಿ ಎಂದರೆ ಇದು ಎಂಬಂತೆ ಬಿಂಬಿತವಾಯಿತು. ಜನ ನಮ್ಮದೇ ಆದ ಸಂಸ್ಕೃತಿಯನ್ನು ಅಭಿವೃದ್ಧಿ ಪಡಿಸಿದರು. ಅದು ಭಾರತೀಯ ಸಂಸ್ಕೃತಿ ಎಂದಾಯಿತು. ಇಷ್ಟಾದರೂ ಇನ್ನು ಈಗ ಅಸ್ತಿತ್ವದಲ್ಲಿರುವಂತಹ ಹಲವಾರು ದೇಶಗಳು ಆಗ ಅಸ್ತಿತ್ವದಲ್ಲಿರಲಿಲ್ಲ.

ನಮ್ಮ ದೇಶದ ಸಂಸ್ಕೃತಿ ಹೀಗೆ ಇಡೀ ದೇಶದ ಸಂಸ್ಕೃತಿಗಳನ್ನು ಒಳಗೊಂಡ ಅಪರೂಪದ ಸಂಸ್ಕೃತಿಯಾಗಿ ಬೆಳೆಯಿತು. ನಮ್ಮ ನಡೆ ನುಡಿಗಳು ವೈಜ್ಞಾನಿಕ ವ್ಯಾಪ್ತಿಗೆ ಒಳಪಟ್ಟವು. ಆಗಲೂ ಅನೇಕ ಋಷಿಮುನಿಗಳು ವೈಜ್ಞಾನಿಕ ಮನೋಭಾವದವರಾಗಿದ್ದುದರಿಂದ ನಮ್ಮ ಆಚರಣೆಗಳು ವೈಜ್ಞಾನಿಕವಾಗಿ ಮುಂದುವರೆಯಲು ಅನುವು ಮಾಡಿಕೊಟ್ಟರು. ಸಾಮಾನ್ಯವಾಗಿ ಇಡೀ ದೇಶದಲ್ಲಿ ನಮ್ಮ ಸಂಸ್ಕೃತಿಯಲ್ಲಿ ಸಾಮ್ಯತೆ ಕಂಡುಬರಲು ಇದೇ ಕಾರಣ ಎನ್ನಿಸುತ್ತದೆ. ಇಂದಿಗೂ ನಾವು ಆಚರಿಸಿಕೊಂಡು ಬಂದಿರುವ ಅನೇಕ ಆಚರಣೆಗಳು ಇಂತಹುದೇ ವೈಜ್ಞಾನಿಕ ಮನೋಭಾವ ಹೊಂದಿರುವುದನ್ನು ಕಾಣುತ್ತೇವೆ.

ಇಪ್ಪತ್ತನೇ ಶತಮಾನದವರೆಗೆ ಬೇರೆ ದೇಶಗಳಿಗೆ ಹೋಗುವುದೆಂದರೆ ಅದು ಸಮುದ್ರದ ಮೂಲಕ ಎಂಬಂತಾಗಿತ್ತು. ವಿಶಾಲವಾದ ಸಾಗರದ ನಡುವೆ ಮತ್ತೊಂದು ದೇಶದ ಮಾರ್ಗ ಕಂಡುಹಿಡಿಯುವುದು ಅಷ್ಟು ಸುಲಭದ ಕೆಲಸವಾಗಿರಲಿಲ್ಲ. ಆದರೆ ಅಲ್ಲಿ ವೈಜ್ಞಾನಿಕ ಮನೋಭಾವ ಹಾಗೂ ಬುದ್ಧಿವಂತಿಕೆ ಕೆಲಸ ಮಾಡಿತು. ಮಾರ್ಗಗಳು ಗೋಚರವಾದವು. ಆಗ ನಮ್ಮ ಸಂಸ್ಕೃತಿಯನ್ನು ಇತರೆ ದೇಶಗಳ ಸಂಸ್ಕೃತಿಯೊಡನೆ ಹೋಲಿಕೆ ಮಾಡಬಹುದಾದ ಅವಕಾಶಗಳಾದವು. ನಂತರ ವಿಮಾನಗಳ ಶೋಧನೆ ಹಾಗೂ ಬಳಕೆ ಹೆಚ್ಚಾದಾಗ ಇತರೆ ಪ್ರದೇಶಗಳಿಗೆ ಹೋಗುವುದು ಸುಲಭವಾಯಿತು. ಇಂದಂತೂ ಒಂದು ದಿನದಲ್ಲೇ ಎರಡು ಮೂರು ದೇಶಗಳನ್ನು ಸಂದರ್ಶಿಸಬಹುದಾದ ಅವಕಾಶಗಳು ಇವೆ.

> ದೇಶದಲ್ಲಿನ ಜನರ ಆಚರಣೆ, ಸಂಸ್ಕೃತಿಯಲ್ಲಿ ಬಹುತೇಕ ಸಾಮ್ಯತೆ ಕಂಡುಬರುತ್ತಿತ್ತು. ಅದು ಈ ದೇಶದ ಮಣ್ಣಿನ ಗುಣ. ಹೀಗೆ ಈ ದೇಶದ ಸಂಸ್ಕೃತಿ ತೆರೆದುಕೊಳ್ಳುತ್ತಾ ಹೋಯಿತು. ಪರಸ್ಪರ ಸಂಸ್ಕೃತಿಗಳ ವಿಲೀನವಾಗಿ ಅವುಗಳ ಧಾಟಿಯಲ್ಲೇ ನೃತ್ಯ, ಸಂಗೀತಗಳು ಸೃಷ್ಟಿಯಾದವು. ಸಂಚಾರ ವ್ಯವಸ್ಥೆ ಹಾಗೂ ಸವಲತ್ತುಗಳು ಹೆಚ್ಚಾದಂತೆ ಮತ್ತಷ್ಟು ಪ್ರದೇಶಗಳ ಸಂಪರ್ಕ ಹಾಗೂ ಸಂಸ್ಕೃತಿಗಳ ವಿಲೀನವಾಯಿತು. ಕೊನೆಗೆ ಈ ದೇಶದ ಸಂಸ್ಕೃತಿ ಎಂದರೆ ಇದು ಎಂಬಂತೆ ಬಿಂಬಿತವಾಯಿತು. ಜನ ನಮ್ಮದೇ ಆದ ಸಂಸ್ಕೃತಿಯನ್ನು ಅಭಿವೃದ್ಧಿ ಪಡಿಸಿದರು. ಅದು ಭಾರತೀಯ ಸಂಸ್ಕೃತಿ ಎಂದಾಯಿತು. ಇಷ್ಟಾದರೂ ಇನ್ನು ಈಗ ಅಸ್ತಿತ್ವದಲ್ಲಿರುವಂತಹ ಹಲವಾರು ದೇಶಗಳು ಆಗ ಅಸ್ತಿತ್ವದಲ್ಲಿರಲಿಲ್ಲ.

ಇದರಿಂದಾಗಿ ನಮಗೆ ಇತರೆ ದೇಶಗಳ ನಾಗರಿಕತೆ ಹಾಗೂ ಸಂಸ್ಕೃತಿಯ ಪರಿಚಯವಾಗುತ್ತದೆ. ನಮ್ಮ ದೇಶದಂತೆಯೇ ಆ ದೇಶಗಳಲ್ಲೂ ಅಲ್ಲಿನ ಪರಿಸರ ಹಾಗೂ ಜನಜೀವನಕ್ಕೆ ಅನುಗುಣವಾದ ಸಂಸ್ಕೃತಿ ಅಳವಡಿಸಿಕೊಳ್ಳಲಾಗಿರುವುದನ್ನು ಕಾಣಬಹುದು. ನಮ್ಮ ಸಂಸ್ಕೃತಿಗೆ ಧಕ್ಕೆಯಾದದ್ದು ಎಂದರೆ ನಾವು ಇತರರನ್ನು ಅನುಕರಿಸಲು ಪ್ರಾರಂಭಿಸಿದ್ದು. ಆ ಸಂಸ್ಕೃತಿ ಹೇಗೆ ಬೆಳೆದುಬಂದಿತು, ಅದಕ್ಕೆ ಆ ದೇಶದ ಹವಾಮಾನ ಹಾಗೂ ಆಹಾರಪದ್ಧತಿ ಹೇಗೆ ಕಾರಣವಾಗಿದೆ ಎಂಬುದನ್ನು ವಿಮರ್ಶಿಸದೆ, ವಿದೇಶಿಯೇ ಉತ್ತಮ ಎಂದು ಭಾವಿಸಿದ ನಮ್ಮವರು ಅದನ್ನು ಅನುಕರಿಸಲು ಆರಂಭಿಸಿದರು. ಇದನ್ನೇ ಅಂಧಾನುಕರಣೆ ಎನ್ನುವುದು. ಅತ್ಯಂತ ಚಳಿ ಪ್ರದೇಶದ ದೇಶಗಳ ಜನರು ಬೆಚ್ಚಗಿನ ಬಟ್ಟೆ ಧರಿಸುವುದು ಅನಿವಾರ್ಯವಾಯಿತು. ಆದರೆ ಅನುಕರಣೆಯ ಮನೋಭಾವದವರು ಈ ದೇಶದ ಸೆಖೆ ಪ್ರದೇಶದಲ್ಲೂ ಕೋಟು ಧರಿಸಿ ಬಸವಳಿಯುತ್ತಿದ್ದಾರೆ. ಅಲ್ಲಿ ಆ ಉಡುಪು ಅನಿವಾರ್ಯವಾದರೆ, ನಮ್ಮಲ್ಲಿ ಮೋಜು ಇಲ್ಲವೆ ಶೋಕಿಗಾಗಿ ಎಂಬಂತಾಗಿದೆ. ಅದೇ ರೀತಿ ನಮ್ಮ ದೇಶಕ್ಕೆ ನಮ್ಮದೇ ಆದ ಆಹಾರ ಪದ್ಧತಿ ಇದೆ. ಆಹಾರ ಪದ್ಧತಿಯೂ ಆಯಾ ದೇಶದ ಅಥವಾ ಪ್ರದೇಶದ ಹವಾಮಾನಕ್ಕೆ ಅನುಗುಣವಾಗಿಯೇ ರೂಪುಗೊಂಡಿರುತ್ತದೆ. ಆದರೆ ಅನುಕರಣೆಯ ಮನೋಭಾವದವರು ಆ ಆಹಾರ ನಮಗೆ ಒಗ್ಗುವುದಿಲ್ಲವಾದರೂ ಅದನ್ನು ಸೇವಿಸುವ ಮನೋಭಾವ ಬಲವಂತವಾಗಿ ರೂಢಿಸಿಕೊಂಡಿದ್ದಾರೆ. ಇದರಿಂದ ಆರೋಗ್ಯ ಸಮಸ್ಯೆ ದಿನದಿಂದ ದಿನಕ್ಕೆ ಜಾಸ್ತಿಯಾಗುತ್ತಿದೆ. ಆದರೂ ಅನುಕರಣೆಯೇ ಪರಮ ಸುಖ ಎಂದು ಭಾವಿಸಿ ದಾರಿ ತಪ್ಪುತ್ತಿದ್ದಾರೆ.

ನಮ್ಮ ದೇಶದಲ್ಲಿಯೇ ವಿಭಿನ್ನ ರೀತಿಯ ಹವಾಮಾನ ಇರುವ ಪ್ರದೇಶಗಳಿವೆ. ಅಲ್ಲೆಲ್ಲಾ ಅಲ್ಲಿನ ಹವಾಮಾನ ಅನುಸರಿಸಿ ಆಹಾರ ಪದ್ಧತಿ ಜಾರಿಯಲ್ಲಿದೆ. ನಮ್ಮ ದೇಶದ ದಕ್ಷಿಣ ಭಾಗದಲ್ಲಿ ಉಪಯೋಗಿಸುವ ಅಕ್ಕಿ, ರಾಗಿಯನ್ನು ಎಲ್ಲೆಡೆ ಬಳಸುವುದಿಲ್ಲ. ಅದಕ್ಕೆ ಕಾರಣ ಅಲ್ಲಿನ ಹವಾಮಾನ. ಉತ್ತರ ಭಾರತದ ರಾಜ್ಯಗಳಲ್ಲಿ ಸಹ ನಾವು ಆಹಾರದ ಪದ್ಧತಿಯ ವೈವಿಧ್ಯತೆ ಕಾಣುತ್ತೇವೆ. ನಮ್ಮ ದೋಸೆ, ಇಡ್ಲಿಗಳು ಅಲ್ಲಿನ ಜನರು ಇಷ್ಟಪಡುವುದಿಲ್ಲ. ಅವರ ರೋಟಿ, ಭಾಜಿ ಇತ್ಯಾದಿಗಳು ನಮಗೆ ಅಷ್ಟು ಸಹ್ಯವಾಗುವುದಿಲ್ಲ. ಇತ್ತೀಚಿನವರೆಗೆ ಸಕ್ಕರೆ ಖಾಯಿಲೆ ಬಂದವರು ಚಪಾತಿ ತಿನ್ನಬೇಕು ಎಂದು ಹೇಳಲಾಗುತ್ತಿದ್ದುದು, ಈಗ ಚಪಾತಿ ತಿಂದರೆ ಸಕ್ಕರೆ ಖಾಯಿಲೆಯ ಜೊತೆಗೆ ಇತರೆ ಆರೋಗ್ಯ ಸಂಬಂಧಿ ತೊಂದರೆಗಳಾಗುತ್ತವೆ ಎಂದು ಹೇಳಲಾಗುತ್ತಿದೆ. ಕೆಲವು ವೈದ್ಯರಂತೂ ನಾವು ನಮ್ಮ ಆಹಾರ ಪದ್ಧತಿ ಬಿಡಬಾರದು. ಆದರೆ ಅತಿಯಾಗಿ ತಿನ್ನದೆ ಸ್ವಲ್ಪಸ್ವಲ್ಪವೇ ತಿನ್ನಿ ಏನೂ ಆಗುವುದಿಲ್ಲ ಎಂದು ಭರವಸೆ ನೀಡುತ್ತಾರೆ.

ನಾವು ಉಪಯೋಗಿಸುವ ಅಕ್ಕಿಯಿಂದ ಮಾಡುವ ಅನ್ನ ಬೆಳ್ಳಗಿರಬೇಕೆಂದು ಹೆಚ್ಚು ಪಾಲಿಶ್ ಮಾಡಿಸಿ ತಿಂದು ಆರೋಗ್ಯಕ್ಕೆ ಹಾನಿ ತಂದುಕೊಳ್ಳುತ್ತಿದ್ದೇವೆ. ಈ ಹಿಂದೆ ಭತ್ತವನ್ನು ಕುಟ್ಟಿ ತೆಗೆದ ಕೆಂಪು ಅಕ್ಕಿಯಿಂದಲೇ ಅನ್ನ ಮಾಡಿ ತಿನ್ನುತ್ತಿದ್ದರು. ಅಂತಹವರ ಬಳಿ ಈಗಲೂ ಸಕ್ಕರೆ ಖಾಯಿಲೆ ಸುಳಿಯಲು ಸಾಧ್ಯವಾಗುತ್ತಿಲ್ಲ. ಈ ಸೂಕ್ಷ್ಮ ನಮಗೆ ಗೊತ್ತಾಗಬೇಕು.

ಇದು ಆಹಾರಕ್ಕೆ ಸಂಬಂಧಿಸಿದ ವಿಚಾರವಾದರೆ, ಆಧುನಿಕ ನಾಗರಿಕತೆಯ ಹೆಸರಿನಲ್ಲಿ ಇಂದು ನಮ್ಮ ಹಳೆಯ ಪದ್ಧತಿಗಳನ್ನು ಬಿಡುತ್ತಿದ್ದೇವೆ. ಈ ಹಿಂದೆ ಮೈಸೂರಿನಂತಹ ನಗರಕ್ಕೆ ಬರುವ ಬಡ ವಿದ್ಯಾರ್ಥಿಗಳಿಗೆ ಅವರ ಓದಿಗೆ ತೊಂದರೆಯಾಗಬಾರದು ಎಂಬ ಕಾರಣಕ್ಕೆ ಮನೆಮನೆಗಳಲ್ಲಿ 'ವಾರದ ಪದ್ಧತಿ' ಇತ್ತು. ಅಂದರೆ ಒಬ್ಬ ಅಥವಾ ಇಬ್ಬರು ವಿದ್ಯಾರ್ಥಿಗೆ ವಾರದಲ್ಲಿ ಒಂದು ದಿನ ತಮ್ಮ ತಮ್ಮ ಮನೆಯಲ್ಲಿ ಎರಡು ಹೊತ್ತು ಊಟ ಹಾಕುತ್ತಿದ್ದರು. ಈ ರೀತಿ ಓದಿದ ಹಲವಾರು ಮಂದಿ ನಂತರ ಉನ್ನತ ಹುದ್ದೆಗಳಲ್ಲಿ ಕೆಲಸ ಮಾಡಿದ್ದಾರೆ. ಈ ರೀತಿ ಊಟ ಹಾಕುವುದು ನಮ್ಮಲ್ಲಿ ಶ್ರೀಮಂತಿಕೆ ಇದೆ ಎಂಬ ಕಾರಣಕ್ಕಲ್ಲ. ಬದಲಾಗಿ ಅದೊಂದು ದೈವಿ ಪ್ರೇರಣೆ, ಸಾಮಾಜಿಕ ಬದ್ಧತೆ ಎಂದೇ ಜನರು ಭಾವಿಸುತ್ತಿದ್ದರು. ಈಗಲೂ ಹಲವರು ಈ ರೀತಿಯ ಊಟದ ವ್ಯವಸ್ಥೆ, ಮಕ್ಕಳ ಶಾಲಾ ಶುಲ್ಕದ ವ್ಯವಸ್ಥೆ ಮಾಡುತ್ತಾರೆ. ಆದರೆ ಅದನ್ನು ಎಲ್ಲೂ ಪ್ರಚಾರಕ್ಕೆ ಬಳಸಿಕೊಳ್ಳುವುದಿಲ್ಲ.

ಇತ್ತೀಚೆಗೆ ಸಿಕ್ಕ ಒಬ್ಬ ಹಿರಿಯರ ಜೊತೆಗೆ ಮಾತನಾಡುತ್ತಿದ್ದಾಗ ಅವರು ನಮ್ಮ ಹಿಂದಿನ ಪದ್ಧತಿಗಳನ್ನು ನೆನಸಿಕೊಂಡು ಈಗ ಹಾಗಿಲ್ಲ ಬಿಡಿ, ಅದೆಲ್ಲಾ ಹೋಯ್ತು ಬಿಡಿ ಎಂದು ನಿಟ್ಟುಸಿರು ಬಿಟ್ಟರು. ಹಿಂದೆ ನಮ್ಮ ಮನೆಯಲ್ಲಿ ರಾತ್ರಿ ಎಲ್ಲರ ಊಟವಾದ ನಂತರ ಉಳಿಯುವ ಅನ್ನ, ಸಾಂಬಾರ್ ಇತ್ಯಾದಿಗಳನ್ನು, ಪಕ್ಕದ ಮನೆಯವರ ಊಟವಾಗಿಲ್ಲದಿದ್ದರೆ ಅವರನ್ನು ಕೇಳಿ ಕೊಡಲಾಗುತ್ತಿತ್ತು. ಹಾಗೆಂದು ಪಕ್ಕದ ಮನೆಯವರು ಬಡವರು ಎಂದಲ್ಲ, ಬದಲಾಗಿ ಆಹಾರ ಪದಾರ್ಥ ವ್ಯರ್ಥ ಮಾಡಬಾರದು ಎಂಬ ಮನೋಭಾವ. ಹಾಗೇ ಮತ್ತೊಂದು ದಿನ ಆ ಮನೆಯವರು ಇವರ ಮನೆಗೆ ಹೆಚ್ಚುವರಿ ಆಹಾರ ಕಳುಹಿಸುತ್ತಿದ್ದರು. ಇಷ್ಟು ಮಾತ್ರವಲ್ಲ. ಒಂದೊಮ್ಮೆ ವಿಶೇಷ ಖಾದ್ಯ ಮಾಡಿದರೆ ವಿನಿಮಯವಾಗುತ್ತಿತ್ತು. ಹೀಗೆ ಕೊಟ್ಟು–ತೆಗೆದುಕೊಳ್ಳುವುದರಲ್ಲಿ ಅತ್ಯಂತ ಸಂಭ್ರಮವಿತ್ತು, ಸಂಬಂಧವೂ ಗಟ್ಟಿಯಾಗುತ್ತಿತ್ತು. ಅದೊಂದು ಉತ್ತಮ ಸಂಸ್ಕೃತಿಯೂ ಆಗಿತ್ತು. ಇಂದು ಆ ಪದ್ಧತಿ ಕಣ್ಮರೆಯಾಗಿದೆ. ಮತ್ತೊಂದು ಈಗ ಅಪರೂಪವಾದ, ಆದರೆ ಆಗ ಸಹಜವಾಗಿ ನಡೆಯುತ್ತಿದ್ದುದು ಎಂದರೆ ಪರಿಚಿತರ ಮನೆಯವರು ಯಾವುದೇ ವಿಚಾರಕ್ಕೆ ಪರಸ್ಥಳಕ್ಕೆ ಹೋದರೆ ರಾತ್ರಿ ಅವರ ಮನೆಗೆ ಹೋಗಿ ಮಲಗುತ್ತಿದ್ದುದು. ಹಾಗೆ ಊರಿಗೆ ಹೋಗುವವರು ಇವರು ರಾತ್ರಿ ನಮ್ಮಲ್ಲಿ ಮಲಗುತ್ತಾರೆ ಎಂದು ಅವರಿಗೆ ಹಾಸಿಗೆ, ಹೊದಿಕೆ, ಕುಡಿಯುವ ನೀರು, ಓದಲು ಪತ್ರಿಕೆಗಳು ಹಾಗೂ ಸ್ವಲ್ಪ ಹಣ್ಣು, ತಿಂಡಿ ಸಿದ್ಧಪಡಿಸಿ ಹೋಗುತ್ತಿದ್ದರು. ಇದು ಬಹುಶಃ ಇಂದಿನ ಹಿರಿಯರಿಗೆ ನೆನಪಿರುತ್ತದೆ. ಈ ರೀತಿ ನಾಲ್ಕಾರು ದಿನ ಊರಿನ ಹೊರಗೆ ಹೋಗಬೇಕಾದಾಗ ಮನೆಯ ಕಡೆ ಹಗಲಿನಲ್ಲಿ ಗಮನಿಸಲು ಹಾಗೂ ರಾತ್ರಿ ಮಲಗಲು ಕೋರುತ್ತಿದ್ದರು. ಅದೇ ರೀತಿ ಮಧ್ಯಾಹ್ನ ಯಾರಾದರೂ ಅತಿಥಿಗಳು ದಿಢೀರ್ ಆಗಮಿಸಿದರೆ ಅವರಿಗೆ ತಕ್ಷಣ ಆತಿಥ್ಯ ನೀಡುವ ವ್ಯವಸ್ಥೆ ಆಗುತ್ತಿತ್ತು. ಮಾಡಿಟ್ಟ ಅಡುಗೆ ಕಡಿಮೆಯಾದರೆ ಮತ್ತೆ ತಯಾರಿಸಿ ತಾವು ತಿನ್ನುತ್ತಿದ್ದರು. ಅತಿಥಿ ಸತ್ಕಾರ ಮೊದಲ ಆದ್ಯತೆಯಾಗಿತ್ತು.

ಕೆಲವೊಮ್ಮೆ ಅನಿರೀಕ್ಷಿತವಾಗಿ ಮನೆಗೆ ಹತ್ತಾರು ಜನ ನೆಂಟರಿಷ್ಟರು ಬಂದರೆ, ಅವರು ಉಳಿದುಕೊಳ್ಳಲು ಮನೆಯಲ್ಲಿ ಸ್ಥಳಾಭಾವವಿದ್ದರೆ ಪಕ್ಕದ ಮನೆಯಲ್ಲಿ ಮಲಗಲು ವ್ಯವಸ್ಥೆ ಮಾಡಲಾಗುತ್ತಿತ್ತು. ಹಾಗೇ ಯಾವಾಗಲಾದರೂ ಅವರ ಮನೆಗೆ ಬಂದ ನೆಂಟರಿಗೆ ಇವರ ಮನೆಯಲ್ಲೂ ತಂಗುವ ವ್ಯವಸ್ಥೆ ಮಾಡಲಾಗುತ್ತಿತ್ತು. ಹಾಗೆ ಬಂದವರನ್ನು ತಮ್ಮ ನೆಂಟರೂ ಎಂದೇ ಭಾವಿಸಿ ಕನಿಷ್ಠ ಬೆಳಗಿನ ಕಾಫಿಯನ್ನಾದರೂ ಕೊಟ್ಟು ಕಳುಹಿಸುತ್ತಿದ್ದರು. ಪರಸ್ಪರ ಸಹಕಾರ ಎಂಬುದು ಆಗಿನ ಜೀವನ ಪದ್ಧತಿಯಾಗಿತ್ತು. ಇಂದಿಗೂ ನಾವು ದಕ್ಷಿಣ ಕನ್ನಡ, ಉತ್ತರ ಕನ್ನಡ ಜಿಲ್ಲೆಗಳ ಗ್ರಾಮಾಂತರ ಭಾಗಗಳಲ್ಲಿ ಯಾರದ್ದಾದರೂ ಮನೆಯಲ್ಲಿ ಮದುವೆ ಇತ್ಯಾದಿ ಕಾರ್ಯಗಳಾದರೆ ಊರಿನ ಅನೇಕ ಯುವಕರು ರಾತ್ರಿ ಇವರ ಮನೆಗೆ ಬಂದು ತರಕಾರಿ ಹಚ್ಚುವುದು, ಚಪ್ಪರ ಹಾಕುವುದು ಇತ್ಯಾದಿ ಕೆಲಸವನ್ನು ತಾವಾಗಿಯೇ ಮಾಡುವುದನ್ನು ಕಾಣಬಹುದು. ಒಂದು ಮನೆಯಲ್ಲಿ ಶುಭ ಕಾರ್ಯವಾದರೆ ಇಡೀ ಊರಿಗೆ ಊರೇ ಸಂಭ್ರಮಿಸುತ್ತಿತ್ತು. ಹಾಗೆಯೇ ಸಾವು–ಸಂಕಷ್ಟಕ್ಕೀಡಾದಂತಹ ಕುಟುಂಬಕ್ಕೆ ಇಡೀ ಊರೇ ಮರುಗುತ್ತಿತ್ತು.

ಆದರೆ ಇಂದು ನಾಗರಿಕತೆ ಬೆಳೆದಂತೆ ನಾವು ಪರಸ್ಪರರನ್ನು ಅನುಮಾನದಿಂದಲೇ ಕಾಣುವಂತಾಗುತ್ತಿದೆ. ಆದರೆ 'ನೀ ನನಗಿದ್ದರೆ, ನಾ ನಿನಗೆ' ಎಂಬ ಮಾತನ್ನೇ ನಾವು ಮರೆತು ಏಕಾಂಗಿಯಾಗುತ್ತಿದ್ದೇವೆ. ಏನಾದರೂ ನಮ್ಮ ಸತ್ ಸಂಪ್ರದಾಯಗಳನ್ನು, ನಾವು ಮರೆಯಬಾರದಲ್ಲವೆ!?

ಅಯೋಧ್ಯೆ ಬಾಲರಾಮನ ರೂಪಿಸಿದ ಅರುಣ್ ಯೋಗಿರಾಜ್‌ಗೆ ಸನ್ಮಾನ

ಸಮಾರಂಭದಲ್ಲಿ ನೆರೆದವರಿಂದ ಯದುವೀರ್ ಗೆಲ್ಲಿಸುವ ಶಪಥ

ಮೈಸೂರು, ಮಾ.29(ಎಂಕೆ)– ಶಂಕರ ಜಯಂತಿ ಸಭಾ ಹಾಗೂ ಸರಸ್ವತಿಪುರಂ ಕನ್ನಡ ಗೆಳೆಯರ ಬಳಗದ ವತಿಯಿಂದ ಅಯೋಧ್ಯೆ ಶ್ರೀ ರಾಮಮಂದಿರದಲ್ಲಿ ಪ್ರತಿಷ್ಠಾಪನೆಗೊಂಡ ಬಾಲರಾಮನ ವಿಗ್ರಹ ರೂಪಿಸಿದ ಖ್ಯಾತ ಶಿಲ್ಪಿ ಅರುಣ್ ಯೋಗಿರಾಜ್ ಅವರನ್ನು ಅಭಿನಂದಿಸಲಾಯಿತಲ್ಲದೆ ಮೈಸೂರು ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಯದುವೀರ್ ಅವರನ್ನು ಬೆಂಬಲಿಸುವುದಾಗಿ ಶಪಥ ಮಾಡಲಾಯಿತು.

ನಗರದ ಸರಸ್ವತಿಪುರಂನ 2ನೇ ಮುಖ್ಯ ರಸ್ತೆಯಲ್ಲಿರುವ ತೆಂಗಿನತೋಪು ರಾಮಮಂದಿರದಲ್ಲಿ ಆಯೋಜಿಸಿದ್ದ ಅಭಿನಂದನಾ ಸಮಾರಂಭದಲ್ಲಿ ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಹಾಗೂ ರಾಜವಂಶಸ್ಥ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಸನ್ಮಾನಿಸಿ, ಅಭಿನಂದಿಸಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಮಾಜಿ ಮೇಯರ್ ಆರ್.ಲಿಂಗಪ್ಪ ನಾನೇನು ಮಹಾರಾಜನಲ್ಲ. ನಿಮ್ಮಂತೆಯೇ ನಾನು ಒಬ್ಬ ಎಂಬ ಸೇವಾಭಾವನೆಯೊಂದಿಗೆ ರಾಜಕೀಯ ಕ್ಷೇತ್ರಕ್ಕೆ ಬಂದಿರುವ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅವರನ್ನು ಬೆಂಬಲಿಸುವುದು ನಮ್ಮೆಲ್ಲರ ಕರ್ತವ್ಯವಾಗಿದ್ದು, ಅವರನ್ನು ಗೆಲ್ಲಿಸಲೇಬೇಕೆಂಬ ಶಪಥ ಮಾಡಬೇಕು. ಖಂಡಿತವಾಗಿಯೂ ಅವರು ಲೋಕಸಭಾ ಸದಸ್ಯರಾಗಲಿದ್ದು, ಸರಸ್ವತಿಪುರಂನ ಪ್ರತಿಯೊಬ್ಬ ಮತದಾರರು ಸ್ವಯಂ ಪ್ರೇರಣೆಯಿಂದ ಅವರಿಗೆ ಮತ ನೀಡಿ ಗೆಲ್ಲಿಸಬೇಕು ಎಂದು ಮನವಿ ಮಾಡಿದರಲ್ಲದೆ ಬಾಲರಾಮ ವಿಗ್ರಹ ರೂಪಿಸಿದ ಶಿಲ್ಪಿ ಅರುಣ್ ಯೋಗಿರಾಜ್ ಅವರ ಸಾಧನೆಗೆ ಮೆಚ್ಚುಗೆ ವ್ಯಕ್ತಪಡಿಸಿದರು.


ಶಂಕರ ಜಯಂತಿ ಸಭಾ ಹಾಗೂ ಸರಸ್ವತಿಪುರಂ ಕನ್ನಡ ಗೆಳೆಯರ ಬಳಗದ ವತಿಯಿಂದ ಖ್ಯಾತ ಶಿಲ್ಪಿ ಅರುಣ್ ಯೋಗಿರಾಜ್ ಅವರನ್ನು ಅಭಿನಂದಿಸಲಾಯಿತು. ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಯದುವೀರ್, ಮಾಜಿ ಶಾಸಕ ಎಲ್.ನಾಗೇಂದ್ರ, ಮಾಜಿ ಮೇಯರ್ ಆರ್.ಲಿಂಗಪ್ಪ, ನಗರಪಾಲಿಕೆ ಮಾಜಿ ಸದಸ್ಯೆ ಸಿ.ವೇದಾವತಿ ಮತ್ತಿತರರಿದ್ದರು.

ಪರಂಪರೆ ಉಳಿಸಲು ಸಹಕಾರ: ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಯದುವೀರ್ ಮಾತನಾಡಿ, ಮೈಸೂರು ಅರಸರು ಕನ್ನಡ ಭಾಷೆ ಜೊತೆಗೆ ಪರಂಪರೆಯನ್ನು ಉಳಿಸಲು ತಮ್ಮದೆ ರೀತಿಯಲ್ಲಿ ಕೊಡುಗೆ ನೀಡಿದ್ದಾರೆ. ಅದೇ ರೀತಿ ಪ್ರಧಾನಿ ನರೇಂದ್ರ ಮೋದಿಯವರು ಕೂಡ ದೇಶದ ಮೂಲ ಪರಂಪರೆಯನ್ನು ಉಳಿಸುವ ನಿಟ್ಟಿನಲ್ಲಿ ಕೆಲಸ ಮಾಡುತ್ತಿದ್ದಾರೆ. ಮುಂಬರುವ ಪೀಳಿಗೆಗೆ ಒಳ್ಳೆಯ ದೇಶವನ್ನು ಕೊಡುಗೆಯಾಗಿ ನೀಡುವ ನಿಟ್ಟಿನಲ್ಲಿ ಕೆಲಸ ಮಾಡುತ್ತಿದ್ದಾರೆ. ಅವರ ಕೈ ಬಲಪಡಿಸಬೇಕಾದರೆ ತಮ್ಮೆಲ್ಲರ ಸಹಕಾರ ಬೇಕಾಗಿದೆ ಎಂದು ಮನವಿ ಮಾಡಿದರು.

ಯದುವೀರ್‌ಗೆ ಮತ ನೀಡಿ: ಬಿಜೆಪಿ ನಗರಾಧ್ಯಕ್ಷ ಎಲ್.ನಾಗೇಂದ್ರ ಮಾತನಾಡಿ, ಕೆಆರ್‌ಎಸ್ ಡ್ಯಾಂ, ಕೆಆರ್ ಆಸ್ಪತ್ರೆ, ದೇವರಾಜ ಮಾರುಕಟ್ಟೆ ಸೇರಿದಂತೆ ಮೈಸೂರು ಪ್ರಾಂತ್ಯದ ಅಭಿವೃದ್ಧಿಗೆ ಅಪಾರ ಕೊಡುಗೆ ನೀಡಿರುವ ಮೈಸೂರು ಒಡೆಯರನ್ನು ಸ್ಮರಿಸಿ, ಕೃತಜ್ಞತೆ ಸಲ್ಲಿಸುವ ನಿಟ್ಟಿನಲ್ಲಿ ಯದುವೀರ್ ಅವರಿಗೆ ಮತದಾನದ ದಿನದಂದು ಬೆಳಗ್ಗೆ ತಿಂಡಿ ತಿನ್ನುವ ಮೊದಲೇ ಮತ ನೀಡಿ ಎಂದು ಕರೆ ನೀಡಿದರಲ್ಲದೆ ಐದು ದಶಕಗಳ ಹೋರಾಟದ ಫಲವಾಗಿ ನಿರ್ಮಾಣಗೊಂಡ ಅಯೋಧ್ಯೆ ಶ್ರೀ ರಾಮಮಂದಿರಕ್ಕೆ ಬಾಲರಾಮನ ವಿಗ್ರಹ ರೂಪಿಸಿದ ಶಿಲ್ಪಿ ಅರುಣ್ ಯೋಗಿರಾಜ್‌ಗೆ ಅಭಿನಂದನೆ ಸಲ್ಲಿಸಿದರು.


ಮೇಲುಕೋಟೆ ವೆಂಗೀಪುರ ನಂಬಿಮಠದ ಇಳೈಆಳ್ವಾರ್ ಸ್ವಾಮೀಜಿ, ಮಹಾನಗರಪಾಲಿಕೆ ಮಾಜಿ ಸದಸ್ಯೆ ಸಿ.ವೇದಾವತಿ ಮತ್ತಿತರರಿದ್ದರು.

ಒಡೆಯರ್ ಗೆಲ್ಲಿಸುವುದೇ ನಮ್ಮ ಜವಾಬ್ದಾರಿ...!

ಅಯೋಧ್ಯೆಯಲ್ಲಿ ಬಾಲರಾಮನ ವಿಗ್ರಹ ಕಾರ್ಯ ಪೂರ್ಣಗೊಂಡು ಅಲ್ಲಿಂದ ವಾಪಸ್ ಬಂದ ಕೂಡಲೇ ಮೊದಲು ಭೇಟಿ ಮಾಡಿದ್ದು ಮೈಸೂರು ಮಹಾರಾಜರನ್ನೇ. ನಮ್ಮ ಕುಟುಂಬಕ್ಕೆ ಆಶ್ರಯ ನೀಡಿ, ಕಲೆಗೆ ಪ್ರೋತ್ಸಾಹ ನೀಡಿದ್ದು ಮೈಸೂರು ಒಡೆಯರು. ಪ್ರಕೃತಿ, ಪ್ರಾಣಿ ಪಕ್ಷಿಗಳನ್ನು ಪ್ರೀತಿಸುವ ಒಡೆಯರು ನಮ್ಮನ್ನು ಪ್ರೀತಿಸದೆ ಇರುವರೇ? ಆದ್ದರಿಂದ ಅವರನ್ನು ಜಯಶೀಲರನ್ನಾಗಿ ಮಾಡುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ.

– ಅರುಣ್ ಯೋಗಿರಾಜ್, ಖ್ಯಾತ ಶಿಲ್ಪಿ

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Vishveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com



ಸಿದ್ದರಾಮಯ್ಯರ ಗ್ಯಾರಂಟಿ ಮುಂದೆ ಪ್ರಧಾನಿ ಮೋದಿ ಅಲೆ ನಡೆಯಲ್ಲ

ಕೋಟೆ ಎಂ.ಶಿವಣ್ಣ ಭವಿಷ್ಯ


ಎಂ.ಶಿವಣ್ಣ

ಮೈಸೂರು, ಮಾ.29(ಎಂಟಿವೈ)– ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಜಾರಿಗೆ ತಂದಿರುವ ಗ್ಯಾರಂಟಿ ಕಾರ್ಯಕ್ರಮಗಳ ಮುಂದೆ ಪ್ರಧಾನಿ ಮೋದಿ ಅಲೆ ಕೆಲಸ ಮಾಡುವುದಿಲ್ಲ. ಬಿಜೆಪಿಯಲ್ಲಿ ಈ ಹಿಂದೆ ಇದ್ದ ಸಿದ್ಧಾಂತ ಈಗ ಇಲ್ಲ. ಲೋಕಸಭಾ ಚುನಾವಣೆಯಲ್ಲಿ ಬಿಜೆಪಿಗೆ ಹಿನ್ನಡೆಯಾಗುತ್ತದೆ ಎಂದು ಮಾಜಿ ಸಚಿವ ಕೋಟೆ ಎಂ.ಶಿವಣ್ಣ ಭವಿಷ್ಯ ನುಡಿದಿದ್ದಾರೆ. ಬಿಜೆಪಿ ತೊರೆದು ಕಾಂಗ್ರೆಸ್ ಸೇರ್ಪಡೆಗೊಂಡ ಬಳಿಕ ಇಂದು ಬೆಳಗ್ಗೆ ಕಾಂಗ್ರೆಸ್ ಕಚೇರಿಗೆ ಭೇಟಿ ನೀಡಿದ ಅವರು, ಕಾಂಗ್ರೆಸ್ ಸದಸ್ಯತ್ವ ಪಡೆದರು. ಬಳಿಕ ಪತ್ರಕರ್ತರೊಂದಿಗೆ ಮಾತನಾಡಿ, ಬಿಜೆಪಿಯಲ್ಲಿ ನಾನೊಬ್ಬ ಹಿರಿಯ ನಾಯಕನಾಗಿ, ಚಾಮರಾಜನಗರ ಲೋಕಸಭಾ ಕ್ಷೇತ್ರದ ಟಿಕೆಟ್ ಆಕಾಂಕ್ಷಿಯಾಗಿದ್ದೆ. ಕೆಲವು ನಾಯಕರ ಹೆಸರನ್ನು ಹೇಳಲ್ಲ, ಅವರು ತಮಗಿಷ್ಟ ಬಂದವರಿಗೆ ಹುದ್ದೆ ನೀಡುವ ಕೆಲಸ ಮಾಡುತ್ತಾರೆ. ನಾನು ಈ ಹಿಂದೆ ಕಾಂಗ್ರೆಸ್‌ನಲ್ಲಿದ್ದವನೇ. ಈಗ ಮತ್ತೆ ಕಾಂಗ್ರೆಸ್ ಸೇರಿದ್ದು ಸಂತಸ ತಂದಿದೆ. ಮುಂದಿನ ದಿನಗಳಲ್ಲಿ ಎಲ್ಲಾ ಭಾಗದಲ್ಲೂ ಸಂಚರಿಸಿ ಅಭ್ಯರ್ಥಿಗಳ ಪರ ಕೆಲಸ ಮಾಡುತ್ತೇನೆ ಎಂದರು. ನನ್ನ ಜೀವನದ ಕೊನೆ ಉಸಿರು ಇರುವವರೆಗೆ ಇನ್ನು ಕಾಂಗ್ರೆಸ್‌ನಲ್ಲಿರುತ್ತೇನೆ. ನಾನು ಎಲ್ಲಾ ಪಕ್ಷದಲ್ಲೂ ಕೆಲಸ ಮಾಡಿದ್ದೇನೆ. ಜೀವನದ ಕೊನೆ ದಿನಗಳಲ್ಲಿ ಮತ್ತೆ ಕಾಂಗ್ರೆಸ್‌ಗೆ ಬಂದಿದ್ದೇನೆ. ಎಲ್ಲಾ ಸಮುದಾಯಗಳನ್ನು ಸಮಾನವಾಗಿ ಕಾಣುವ ಪಕ್ಷ ಕಾಂಗ್ರೆಸ್. ನಾನು ಕಾಂಗ್ರೆಸ್ ಸೇರ್ಪಡೆಯಾಗುತ್ತೇನೆ ಅಂದುಕೊಂಡಿರಲಿಲ್ಲ. ಸಿಎಂ ಸಿದ್ದರಾಮಯ್ಯನವರು ನನ್ನ ಜೊತೆ ಮಾತನಾಡಿದಾಗ ರೋಮಾಂಚನಗೊಂಡೆ. ಕಾಂಗ್ರೆಸ್ ಸೇರ್ಪಡೆಯಾಗುವ ವಿಚಾರ ಬಂದ ತಕ್ಷಣ ರಾಜ್ಯದ ಮೂಲೆ ಮೂಲೆಗಳಿಂದ ದೂರವಾಣಿ ಕರೆಗಳು ಬಂದವು ಎಂದರು.

ಮೈಸೂರು– ಕೊಡಗು ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಎಂ.ಲಕ್ಷ್ಮಣ ಸಮರ್ಥ ಅಭ್ಯರ್ಥಿಯಾಗಿದ್ದಾರೆ. ಪಕ್ಷದ ನಾಯಕರ ಅನುಮತಿ ಪಡೆದು ಪ್ರಚಾರಕ್ಕೆ ಹೋಗುತ್ತೇನೆ. ಕಾಂಗ್ರೆಸ್ ಅಭ್ಯರ್ಥಿಗಳ ಗೆಲುವಿಗೆ ಕೆಲಸ ಮಾಡುತ್ತೇನೆ ಎಂದರು.

ಸಿಎಂ ಸಿದ್ದರಾಮಯ್ಯರ ಜೈಲಿಗೆ ಕಳಿಸುವ ಸಂಚು!

ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಎಂ.ಲಕ್ಷ್ಮಣ ಅಚ್ಚರಿ ಹೇಳಿಕೆ


ಎಂ.ಲಕ್ಷ್ಮಣ

ಮೈಸೂರು, ಮಾ.29(ಎಂಟಿವೈ)– ದೆಹಲಿ ಮುಖ್ಯಮಂತ್ರಿ ಅರವಿಂದ ಕೇಜ್ರಿವಾಲ್ ಅವರನ್ನು ಜೈಲಿಗೆ ಹಾಕಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಜೈಲಿಗೆ ಕಳುಹಿಸುವ ಸಂಚು ನಡೆಸಲಾಗುತ್ತಿದೆ ಎಂದು ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಎಂ.ಲಕ್ಷ್ಮಣ ಆರೋಪಿಸಿದ್ದಾರೆ.

ಈಗಾಗಲೇ ಐಟಿ–ಇಡಿ–ಸಿಬಿಐ ಬಳಸಿಕೊಂಡು ವಿರೋಧ ಪಕ್ಷಗಳ ನಾಯಕರನ್ನು ಜೈಲಿಗೆ ತಳ್ಳಿ ಅಲ್ಲಿಂದ ಹೊರಬರದಂತೆ ಪಿತೂರಿ ನಡೆಸಲಾಗುತ್ತಿದೆ. ಇತ್ತೀಚೆಗೆ ದೆಹಲಿಯ ಮುಖ್ಯಮಂತ್ರಿ ಅರವಿಂದ ಕೇಜ್ರಿವಾಲ್ ಅವರನ್ನು ಜೈಲಿಗಟ್ಟಲಾಗಿದೆ. ಬಿಹಾರದ ಉಪ ಮುಖ್ಯಮಂತ್ರಿಯೊಬ್ಬರು ಒಂದೂವರೆ ವರ್ಷದಿಂದ ಜೈಲಿನಲ್ಲಿದ್ದಾರೆ. ಅದೇ ಮಾದರಿಯಲ್ಲಿ ಸಿದ್ದರಾಮಯ್ಯ ಅವರನ್ನು ಜೈಲಿಗೆ ಕಳುಹಿಸಲು ಯತ್ನಿಸಲಾಗುತ್ತಿದೆ ಎಂದು ಹೇಳಿದರು. ಕೇಂದ್ರದಲ್ಲಿ ಬಿಜೆಪಿ ಮತ್ತೆ ಅಧಿಕಾರಕ್ಕೆ ಬಂದರೆ ಅಲ್ಪಸಂಖ್ಯಾತರು, ದಲಿತರು, ಹಿಂದುಳಿದ ವರ್ಗಗಳನ್ನು ಭಿಕ್ಷುಕರನ್ನಾಗಿ ಮಾಡಲಿದೆ. ಈಗಾಗಲೇ ಸರ್ಕಾರಿ ಸಂಸ್ಥೆಗಳನ್ನು ಖಾಸಗೀಕರಣಗೊಳಿಸಿ ಮೀಸಲಾತಿ ಸೌಲಭ್ಯ ದೊರಕದಂತೆ ಮಾಡುತ್ತಿದೆ. ಏಕ ರೂಪ ಚುನಾವಣೆ ನಡೆಸಿ ಪ್ರಜಾಪ್ರಭುತ್ವವನ್ನು ಸಂಪೂರ್ಣ ನಾಶಗೊಳಿಸಲಿದೆ ಎಂದು ದೂರಿದರು.

ಕೇಂದ್ರ ಗೃಹ ಸಚಿವರ ಬಗ್ಗೆ ಯತೀಂದ್ರ ಹೇಳಿಕೆ ಸಂಬಂಧ ಚುನಾವಣಾ ಆಯೋಗಕ್ಕೆ ದೂರು

● ವಿಪಕ್ಷ ನಾಯಕ ಅಶೋಕ್ ಹೇಳಿಕೆ ● ಪ್ರಧಾನಿ, ರಾಷ್ಟ್ರಪತಿಗೆ ಏಕವಚನದಲ್ಲಿ ಸಂಬೋಧಿಸುವುದು ಸರಿಯಲ್ಲ


ಆರ್.ಅಶೋಕ

ಬೆಂಗಳೂರು, ಮಾ.29 (ಕೆಎಂಶಿ)– ಯತೀಂದ್ರ ಸಿದ್ದರಾಮಯ್ಯ ಅವರು ಕೇಂದ್ರ ಗೃಹ ಸಚಿವರ ಬಗ್ಗೆ ನೀಡಿದ ಹೇಳಿಕೆ ವಿರುದ್ಧ ಬಿಜೆಪಿ ವತಿಯಿಂದ ಚುನಾವಣಾ ಆಯೋಗಕ್ಕೆ ದೂರು ನೀಡಲಾಗುವುದು. ಯತೀಂದ್ರ ಹೀಗೆಯೇ ಮಾತನಾಡುತ್ತಿದ್ದರೆ ರಾಹುಲ್ ಗಾಂಧಿಯಂತೆ ಜೈಲಿಗೆ ಹೋಗುವ ಸ್ಥಿತಿ ಬರಲಿದೆ ಎಂದು ವಿಧಾನಸಭೆಯ ಪ್ರತಿಪಕ್ಷ ನಾಯಕ ಆರ್.ಅಶೋಕ ಹೇಳಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಿಎಂ ಸಿದ್ದರಾಮಯ್ಯ ಅವರ ಮಗ ಎನ್ನುವ ಕಾರಣಕ್ಕೆ ಹಾಗೂ ರಾಷ್ಟ್ರ ನಾಯಕರ ಬಗ್ಗೆ ಮಾತನಾಡಿದರೆ ದೊಡ್ಡ ವ್ಯಕ್ತಿಯಾಗುತ್ತೇನೆ, ಇದರಿಂದ ಬೆಲೆ ಬರುತ್ತದೆ ಎನ್ನುವ ಕಾರಣಕ್ಕೆ ಯತೀಂದ್ರ, ಕೇಂದ್ರ ಗೃಹ ಸಚಿವ ಅಮಿತ್ ಷಾ ಕುರಿತು ಟೀಕೆ ಮಾಡಿದ್ದಾರೆ. ಹತಾಶ ಮನೋಭಾವ, ಬುದ್ಧಿಭ್ರಮಣೆ ಹಾಗೂ ಅಪ್ರಬುದ್ಧತೆಯಿಂದ ಅವರು ಮಾತನಾಡಿದ್ದಾರೆ. ಅವರ ಪ್ರಜ್ಞೆಯ ಮಟ್ಟ ಬಹಳ ಕಡಿಮೆ ಇದೆ ಎಂದರು.

ಮೈಸೂರಿನ ರಾಜಕಾರಣದ ಬಗ್ಗೆ ಮಾತನಾಡಲು ಯತೀಂದ್ರ ಅವರಿಗೆ ಯೋಗ್ಯತೆ ಇಲ್ಲ. ಅಲ್ಲಿನ ರಾಜಕಾರಣ ಬಿಟ್ಟು ಕೇಂದ್ರದ ರಾಜಕಾರಣದ ಬಗ್ಗೆ ಅವರು ಮಾತನಾಡಿದ್ದಾರೆ. ಇಂತಹ ಬಾಲಿಶ ಹಾಗೂ ಕೊಬ್ಬಿನ ಹೇಳಿಕೆ ನೀಡುವುದು ಕಾಂಗ್ರೆಸ್ಸಿನ ಡಿಎನ್‌ಎನಲ್ಲೇ ಇದೆ. ಈಗಾಗಲೇ ರಾಹುಲ್ ಗಾಂಧಿ ಬಾಲಿಶ ಹೇಳಿಕೆ ನೀಡಿ ಜೈಲಿಗೆ ಹೋಗುವ ಸ್ಥಿತಿ ಬಂದಿದೆ. ಯತೀಂದ್ರ ಅವರೂ ಹೀಗೆ ಮಾತನಾಡುತ್ತಿದ್ದರೆ ಕೊನೆಗೆ ಜೈಲೇ ಗತಿಯಾಗಲಿದೆ. ಅವರು ಎಚ್ಚರದಿಂದ ಮಾತನಾಡಲಿ ಎಂದರು. ರಾಜ್ಯದಲ್ಲೀಗ ಅಪ್ಪ–ಮಕ್ಕಳ ಗೂಂಡಾಗಿರಿ ಜಾರಿಯಲ್ಲಿದೆ. ಸದನದಲ್ಲಿ ಪೊಲೀಸರನ್ನು ಬೆದರಿಸುವುದು, ಸ್ಪೀಕರ್‌ಗೆ ಧಮ್ಕಿ ಹಾಕುವುದು, ಮಹಿಳೆಯರ ಬಟ್ಟೆ ಎಳೆದು ದೌರ್ಜನ್ಯ ಮಾಡುವುದು, ಕಾರ್ಯಕರ್ತರ ಕಪಾಳಕ್ಕೆ ಹೊಡೆಯುವುದು–ಹೀಗೆ ಸಿಎಂ ಸಿದ್ದರಾಮಯ್ಯ ಮಾಡಿದ ರೌಡಿಸಂಗೆ ಲೆಕ್ಕವೇ ಇಲ್ಲ. ಪ್ರಧಾನಿಗೆ, ರಾಷ್ಟ್ರಪತಿಗೆ ಅವನು, ಇವಳು ಎಂದು ಕರೆಯುವವರು, ಪ್ರಧಾನಿಗೆ ಹೊಡೆಯುತ್ತೇನೆ ಎನ್ನುವವರು ನಿಜವಾದ ಗೂಂಡಾಗಳು. ಸಿದ್ದರಾಮಯ್ಯ ಹೆಸರಲ್ಲಿ ರಾಮ ಇದ್ದಾರೆ. ಆದರೆ ಇವರು ನಡೆಸುವುದು ರಾವಣ ರಾಜ್ಯ. ಯತಿ ಎಂದರೆ ಸನ್ಯಾಸಿ. ಆದರೆ ಇವರ ಬಾಯಲ್ಲಿ ಬರುವ ಮಾತು ರಾಕ್ಷಸನಂತಿದೆ. ಇವರ ಹೆಸರಿಗೂ, ಮಾತಿಗೂ ಸಂಬಂಧವೇ ಇಲ್ಲ ಎಂದರು.

ರಾಜ್ಯದಲ್ಲಿ ಗೂಂಡಾ ಸರ್ಕಾರವಿದ್ದು, ಸಿಎಂ ಸಿದ್ದರಾಮಯ್ಯ ಗೂಂಡಾಗುರುವಾಗಿ ವರ್ತಿಸುತ್ತಿದ್ದಾರೆ. ಕರಸೇವಕರನ್ನು ಬಂಧಿಸಿ, ಹನುಮ ಧ್ವಜ ಇಳಿಸಿ, ಮುಸ್ಲಿಂ ದಂಗೆಕೋರರಿಗೆ ಆಶ್ರಯ ನೀಡಿದ್ದು ಇದೇ ಗೂಂಡಾ ಕಾಂಗ್ರೆಸ್. ಹನುಮಾನ್ ಚಾಲಿಸಾ ಹಾಕಿದ್ದಕ್ಕೆ ಹೊಡೆದವರು ಹಾಗೂ ವಿಧಾನಸೌಧದಲ್ಲಿ ಪಾಕಿಸ್ತಾನ ಜಿಂದಾಬಾದ್ ಎಂದವರು ಗೂಂಡಾ ಕಾಂಗ್ರೆಸ್ಸಿಗರೇ ಆಗಿದ್ದಾರೆ. ಈ ಲೋಕಸಭಾ ಚುನಾವಣೆಯಲ್ಲಿ ಮತದಾರರು ಕಾಂಗ್ರೆಸ್‌ಗೆ ಪಾಠ ಕಲಿಸಲಿದ್ದಾರೆ ಎಂದರು.

ಬಿಜೆಪಿ–ಜೆಡಿಎಸ್ ಹಾಲು ಜೇನಿನಂತೆ ಕೆಲಸ ಮಾಡುತ್ತಿವೆ. ಇನ್ನಷ್ಟು ಚೆನ್ನಾಗಿ ಕಾರ್ಯನಿರ್ವಹಿಸಲು ಸಮನ್ವಯ ಸಭೆಗಳನ್ನು ನಡೆಸಲಾಗುತ್ತಿದೆ. ಪ್ರತಿ ಜಿಲ್ಲೆ ಹಾಗೂ ತಾಲೂಕು ಮಟ್ಟದಲ್ಲಿ ಸಭೆ ನಡೆಸಲಾಗುವುದು. ರೈತರಿಗೆ ಪರಿಹಾರ ಕೊಡದ, ಕುಡಿಯುವ ನೀರು ಕೊಡದ ಸರ್ಕಾರಕ್ಕೆ ಬಿಸಿ ಮುಟ್ಟಿಸಬೇಕಿದೆ ಎಂದರು.


ಮೈಸೂರಿನ ಗಾಂಧಿನಗರದಲ್ಲಿರುವ ಉರಿಲಿಂಗಿ ಪೆದ್ದಿ ಮಠಕ್ಕೆ ಚಾಮರಾಜನಗರ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಾಲರಾಜ್ ಅವರು ಶುಕ್ರವಾರ ಭೇಟಿ ನೀಡಿ ಶ್ರೀ ಜ್ಞಾನ ಪ್ರಕಾಶ್ ಸ್ವಾಮೀಜಿಗಳ ಆಶೀರ್ವಾದ ಪಡೆದುಕೊಂಡರು. ಈ ಸಂದರ್ಭದಲ್ಲಿ ಮುಖಂಡರಾದ ವಿ. ಗಿರಿಧರ್, ಡಾ.ರೇವಣ್ಣ ಇನ್ನಿತರರು ಉಪಸ್ಥಿತರಿದ್ದರು.

ಬ್ಯಾಂಕ್ ಖಾತೆಗಳ ಸಂಶಯಾಸ್ಪದ ವಹಿವಾಟಿನ ಬಗ್ಗೆ ಪ್ರತಿದಿನ ಪರಿಶೀಲಿಸಿ

ಅಧಿಕಾರಿಗಳಿಗೆ ಚುನಾವಣಾ ವೆಚ್ಚ ವೀಕ್ಷಕ ಯೋಗೀಶ್ ಮಿಶ್ರಾ ತಾಕೀತು

● 10 ಲಕ್ಷಕ್ಕಿಂತ ಹೆಚ್ಚಿನ ವಹಿವಾಟಿನ ಬಗ್ಗೆ ನಿಗಾ ವಹಿಸಿ ● ಒಂದೇ ಖಾತೆಯಿಂದ 10 ಖಾತೆಗೆ ಹಣ ವರ್ಗಾವಣೆ ಮಾಡಿದರೆ ಪರಿಶೀಲನೆ ಮಾಡಿ ● ಚೆಕ್ ಪೋಸ್ಟ್ ತಪಾಸಣೆ ಹೆಚ್ಚಿಸಿ ● ದಾಖಲೆ ರಹಿತ ಹಣ ಸಾಗಾಣಿಕೆ ತಡೆಯಿರಿ


ಮೈಸೂರಿನ ಜಿಲ್ಲಾಧಿಕಾರಿ ಕಚೇರಿಯಲ್ಲಿ ಶುಕ್ರವಾರ ಲೋಕಸಭಾ ಚುನಾವಣೆಯ ವೆಚ್ಚ ವೀಕ್ಷಕ ಯೋಗೀಶ್ ಮಿಶ್ರಾ ಹಾಗೂ ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ ಸಹಾಯಕ ವೆಚ್ಚ ವೀಕ್ಷಕ ಅಧಿಕಾರಿಗಳ ಸಭೆ ನಡೆಸಿದರು.

ಮೈಸೂರು, ಮಾ.29(ಬಿಎಲ್‌ಯು)– ಲೋಕಸಭಾ ಚುನಾವಣೆಯ ಹಿನ್ನೆಲೆ ಬ್ಯಾಂಕ್ ಖಾತೆಗಳಲ್ಲಿ ನಡೆಯುವ ಅನುಮಾನಾಸ್ಪದ ವಹಿವಾಟಿನ ಬಗ್ಗೆ ಪರಿಶೀಲನೆ ನಡೆಸಬೇಕು ಎಂದು ಚುನಾವಣಾ ವೆಚ್ಚ ವೀಕ್ಷಕ ಯೋಗೀಶ್ ಮಿಶ್ರಾ ಅಧಿಕಾರಿಗಳಿಗೆ ತಾಕೀತು ಮಾಡಿದ್ದಾರೆ.

ನಗರದ ಜಿಲ್ಲಾಧಿಕಾರಿ ಕಚೇರಿಯಲ್ಲಿ ಇಂದು ನಡೆದ ಚಾಮುಂಡೇಶ್ವರಿ, ನರಸಿಂಹರಾಜ, ಚಾಮರಾಜ ಹಾಗೂ ಕೃಷ್ಣರಾಜ ಕ್ಷೇತ್ರಗಳ ಸಹಾಯಕ ವೆಚ್ಚ ವೀಕ್ಷಕರ ತಂಡದ ಅಧಿಕಾರಿಗಳು ಹಾಗೂ ಸಿಬ್ಬಂದಿ ಸಭೆಯಲ್ಲಿ ಮಾತನಾಡಿದ ಅವರು, 10 ಲಕ್ಷಕ್ಕಿಂತ ಹೆಚ್ಚಿನ ಹಣ ವರ್ಗಾವಣೆ ಮಾಡಿದ್ದಲ್ಲಿ, ಒಂದು ಖಾತೆಯಿಂದ 10ಕ್ಕಿಂತ ಹೆಚ್ಚು ಖಾತೆಗೆ ಹಣ ವರ್ಗಾವಣೆ ಆಗುತ್ತಿರುವ ಬಗ್ಗೆ ಪ್ರತಿದಿನ ಪರಿಶೀಲನೆ ಮಾಡಬೇಕು ಎಂದು ಸೂಚನೆ ನೀಡಿದರು.

ಹಣ ಬಲದ ಮೇಲೆ ಚುನಾವಣೆ ನಡೆಯಬಾರದು. ಮುಕ್ತ ಹಾಗೂ ನ್ಯಾಯ ಸಮ್ಮತ ಚುನಾವಣೆ ನಡೆಸಬೇಕು. ಚೆಕ್‌ಪೋಸ್ಟ್‌ಗಳಲ್ಲಿ ತಪಾಸಣೆಯನ್ನು ಮತ್ತಷ್ಟು ಹೆಚ್ಚಿಸಬೇಕು. ದಾಖಲೆ ರಹಿತ ಹಣ ಅಥವಾ ಇನ್ನಿತರೆ ವಸ್ತುಗಳು ಸಾಗಾಣಿಕೆಯಾಗದಂತೆ ಎಚ್ಚರ ವಹಿಸಬೇಕು ಎಂದು ಹೇಳಿದರು.

ಮೈಸೂರು ಕೊಡಗು ಲೋಕಸಭಾ ಚುನಾವಣೆಯಲ್ಲಿ ಸ್ಪರ್ಧಿಸಿರುವ ಅಭ್ಯರ್ಥಿಗಳು ಪ್ರಚಾರಕ್ಕಾಗಿ ವೆಚ್ಚ ಮಾಡುವ ಹಣದ ಬಗ್ಗೆ ಪ್ರತಿ ದಿನ ನಿಗಾ ವಹಿಸಬೇಕು. ಅಭ್ಯರ್ಥಿಗಳ ಖರ್ಚು ವೆಚ್ಚದ ಬಗ್ಗೆ ಆಯಾ ದಿನವೇ ವರದಿ ನೀಡುವಂತೆ ಯೋಗೀಶ್ ಮಿಶ್ರಾ ಅಧಿಕಾರಿಗಳಿಗೆ ಕಟ್ಟಾಜ್ಞೆ ಮಾಡಿದರು.

ಚುನಾವಣಾ ಕೆಲಸಕ್ಕೆ ನೇಮಕಗೊಂಡಿರುವ ಎಫ್‌ಎಸ್‌ಟಿ, ಎಸ್‌ಎಸ್ ಟಿವಿವಿಟಿ ಹಾಗೂ ಇತರೆ ತಂಡಗಳು ಜವಾಬ್ದಾರಿಯಿಂದ ಕೆಲಸ ನಿರ್ವಹಿಸಬೇಕು. ಈ ಮೂಲಕ ಅಭ್ಯರ್ಥಿಗಳು ಚುನಾವಣಾ ಆಯೋಗ ನೀಡಿರುವ ನಿರ್ದೇಶನಗಳನ್ನು ಪಾಲಿಸುತ್ತಿದ್ದಾರೆಯೇ ಎಂಬ ಬಗ್ಗೆ ನಿಗಾ ವಹಿಸಬೇಕು ಎಂದು ಹೇಳಿದರು.

ಚುನಾವಣಾ ಕೆಲಸದ ಸಮಯದಲ್ಲಿ ಯಾವುದಾದರೂ ಗೊಂದಲಗಳು ಎದುರಾದಲ್ಲಿ ಹಿರಿಯ ಅಧಿಕಾರಿಗಳ ಗಮನಕ್ಕೆ ತಂದು ಬಗೆಹರಿಸಿಕೊಳ್ಳಬೇಕು ಎಂದು ಯೋಗೀಶ್ ಮಿಶ್ರಾ ಸಲಹೆ ನೀಡಿದರು.

ಈ ವೇಳೆ ಮಾತನಾಡಿದ ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ, ಚುನಾವಣಾ ಕೆಲಸಕ್ಕೆ ನಿಯೋಜನೆಗೊಂಡಿರುವ ವಿವಿಧ ತಂಡಗಳು ಮತ್ತು ಅಧಿಕಾರಿಗಳ ಕಾರ್ಯ, ಚೆಕ್‌ಪೋಸ್ಟ್‌ಗಳ ಕಾರ್ಯವೈಖರಿ ಕುರಿತಂತೆ ಮಾಹಿತಿ ನೀಡಿದರು.

ಸಭೆಯ ನಂತರ ಯೋಗೀಶ್ ಮಿಶ್ರಾ ಹಾಗೂ ಡಾ.ರಾಜೇಂದ್ರ, ಜಿಲ್ಲಾ ಚುನಾವಣಾ ವೆಚ್ಚ ಮೇಲ್ವಿಚಾರಕರ ಕೋಶ, ಜಿಲ್ಲಾ ಮಾಧ್ಯಮ ದೃಢೀಕರಣ ಹಾಗೂ ಉಸ್ತುವಾರಿ ಸಮಿತಿ ಕೇಂದ್ರಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಕೆ.ಎಂ. ಗಾಯಿತ್ರಿ, ಡಿಸಿಪಿ ಮುತ್ತುರಾಜ್ ಸೇರಿದಂತೆ ಇತರೆ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.



ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಯದುವೀರ್ ಒಡೆಯರ್, ಮೈಸೂರಿನ ಹೊಸಮಠಕ್ಕೆ ಶುಕ್ರವಾರ ಭೇಟಿ ನೀಡಿ ಶ್ರೀ ಚಿದಾನಂದ ಸ್ವಾಮೀಜಿಗಳು, ಮೈಸೂರಿನ ಆದಿಚುಂಚನಗಿರಿ ಶಾಖಾ ಮಠದಲ್ಲಿ ಶ್ರೀ ಸೋಮೇಶ್ವರನಾಥ ಸ್ವಾಮೀಜಿ ಅವರಿಂದ ಆಶೀರ್ವಾದ ಪಡೆದರು.

ಯುವ ಮತದಾರರು ತಪ್ಪದೇ ಮತ ಚಲಾಯಿಸಿ

ಸಹಾಯಕ ಚುನಾವಣಾಧಿಕಾರಿ ಕುಮುದಾ ಶರತ್ ವಿದ್ಯಾರ್ಥಿಗಳಿಗೆ ಕರೆ



ಹೆಚ್.ಡಿ.ಕೋಟೆ ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ತಾಲೂಕು ಸ್ವೀಪ್ ಸಮಿತಿ ವತಿಯಿಂದ ಲೋಕಸಭಾ ಚುನಾವಣೆ – 2024 ರ ಹಿನ್ನೆಲೆಯಲ್ಲಿ ಗುರುವಾರ ಹಮ್ಮಿಕೊಂಡಿದ್ದ ಯುವ ಮತದಾರರ ಮತದಾನ ಜಾಗೃತಿ ಹಾಗೂ ಹಸ್ತಾಕ್ಷರ ಸಂಗ್ರಹ ಅಭಿಯಾನವನ್ನು ಸಹಾಯಕ ಚುನಾವಣಾಧಿಕಾರಿ ಕುಮುದಾ ಶರತ್ ಉದ್ಘಾಟಿಸಿದರು.

ಮೈಸೂರು,ಮಾ.29– ಯುವ ಮತದಾರರ ಮುಕ್ತ ಹಾಗೂ ನ್ಯಾಯೋಚಿತವಾದ ಚುನಾವಣೆಯನ್ನು ಬೆಂಬಲಿಸಬೇಕು. ಏ.26 ರಂದು ನಡೆಯಲಿರುವ ಲೋಕಸಭಾ ಚುನಾವಣೆಯಲ್ಲಿ ತಪ್ಪದೇ ಮತ ಚಲಾಯಿಸಬೇಕು ಎಂದು ಸಹಾಯಕ ಚುನಾವಣಾಧಿಕಾರಿ ಕುಮುದಾ ಶರತ್ ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಹೆಚ್.ಡಿ.ಕೋಟೆ ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ತಾಲೂಕು ಸ್ವೀಪ್ ಸಮಿತಿ ವತಿಯಿಂದ ಲೋಕಸಭಾ ಚುನಾವಣೆ – 2024 ರ ಹಿನ್ನೆಲೆಯಲ್ಲಿ ಗುರುವಾರ ಹಮ್ಮಿಕೊಂಡಿದ್ದ ಯುವ ಮತದಾರರ ಮತದಾನ ಜಾಗೃತಿ ಹಾಗೂ ಹಸ್ತಾಕ್ಷರ ಸಂಗ್ರಹ ಅಭಿಯಾನವನ್ನು ಉದ್ಘಾಟಿಸಿದರು.

ತಾಲೂಕು ಸ್ವೀಪ್ ಸಮಿತಿ ಅಧ್ಯಕ್ಷರು ಹಾಗೂ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಪಿ.ಧರಣೇಶ್ ಮಾತನಾಡಿ, ಯಾವುದೇ ಆಸೆ ಆಮಿಷಗಳಿಗೆ ಯುವ ಮತದಾರರು ಒಳಗಾಗದೆ ಪ್ರಜಾ ಪ್ರಜಾಪ್ರಭುತ್ವವನ್ನು ಬಲಪಡಿಸಲು ತಪ್ಪದೇ ಮತದಾನ ಮಾಡಬೇಕು. ಜೊತೆಗೆ ತಮ್ಮ ಕುಟುಂಬದವರು, ನೆರೆಹೊರೆಯವರು, ಸಂಬಂಧಿಕರು ಹಾಗೂ ಮತದಾನದ ಬಗ್ಗೆ ಅಸಡ್ಡೆ ತೋರುವವರನ್ನು ಪ್ರೇರೇಪಿಸಿ ಮತಗಟ್ಟೆಗೆ ಕರೆದುಕೊಂಡು ಹೋಗಿ ಮತದಾನ ಮಾಡಿಸಬೇಕು. ಮತದಾನ ಮಾಡುವ ಪ್ರತಿಯೊಬ್ಬ ಯುವಕರಿಗೆ ಮೊದಲು ಮತದಾನ ಮಾಡುವ ದಿನದ ಬಗ್ಗೆ ಅರಿವು ಇರಬೇಕು. ಜೊತೆಗೆ VHA (ವೋಟರ್ ಹೆಲ್ಪ್‌ಲೈನ್ ಆಪ್)ನಲ್ಲಿ ನಿಮ್ಮ ಮತಗಟ್ಟೆಗಳ ಬಗ್ಗೆ ಮಾಹಿತಿ ತಿಳಿದುಕೊಳ್ಳಬಹುದು ಎಂದು ತಿಳಿಸಿದರು.

ವಿದ್ಯಾರ್ಥಿಗಳೇ ಭಾರತದ ಮುಂದಿನ ಭವಿಷ್ಯದ ಪ್ರಜೆಗಳು 'ವಿದ್ಯಾರ್ಥಿಗಳ ನಡೆ – ಮತಗಟ್ಟೆಯ ಕಡೆ' ಇರಬೇಕು. ಆದ್ದರಿಂದ ಎಲ್ಲರೂ ತಪ್ಪದೇ ಮತದಾನ ಪ್ರಕ್ರಿಯೆಯಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡು ಸಾಂವಿಧಾನಿಕ ಹಕ್ಕನ್ನು ನಿರ್ಭೀತಿಯಿಂದ ಚಲಾಯಿಸಬೇಕು ಎಂದು ಕಿವಿಮಾತು ಹೇಳಿದರು.

ಮೊದಲ ಬಾರಿಗೆ ಮತದಾನ ಮಾಡುವ ವಿದ್ಯಾರ್ಥಿನಿ ಶಿಲ್ಪಾ, ಮೊದಲ ಬಾರಿಗೆ ಮತದಾನ ಮಾಡಲು ತುಂಬಾ ಉತ್ಸುಕಳಾಗಿದ್ದೇನೆ ಹಾಗೂ ಸಂತೋಷವಾಗುತ್ತಿದೆ. ಹಿಂದೆ ಹೆಣ್ಣು ಮಕ್ಕಳಿಗೆ ಮತದಾನ ಮಾಡುವ ಹಕ್ಕು ಇರಲಿಲ್ಲ, ಕೇವಲ ಶ್ರೀಮಂತರು, ಪದವಿಧರರಿಗೆ ಮಾತ್ರ ಇತ್ತು. ಡಾ.ಬಿ.ಆರ್.ಅಂಬೇಡ್ಕರ್ ಹೆಣ್ಣು ಮಕ್ಕಳಿಗೂ ಮತದಾನದ ಹಕ್ಕನ್ನು ಕೊಡಿಸಿದ್ದಾರೆ. ಇದರಿಂದ ನಮ್ಮ ನಾಯಕರನ್ನು ನಾವೇ ಆಯ್ಕೆ ಮಾಡಿಕೊಳ್ಳಲು ಸಹಕಾರಿಯಾಗಿದೆ ಎಂದು ಅಭಿಪ್ರಾಯವನ್ನು ಹಂಚಿಕೊಂಡರು. ಇದೇ ವೇಳೆ ಯುವ ಮತದಾರರಿಂದ ಹಸ್ತಾಕ್ಷರ ಸಂಗ್ರಹ ಹಾಗೂ ಮಾನವ ಸರಪಳಿ ನಿರ್ಮಿಸಿ ಮತದಾನ ಪ್ರತಿಜ್ಞಾ ವಿಧಿ ಬೋಧಿಸಿ ಕಡ್ಡಾಯವಾಗಿ ಮತದಾನ ಮಾಡುವಂತೆ ಪ್ರೇರೇಪಿಸಲಾಯಿತು.

ಈ ವೇಳೆ ತಾಲೂಕು ಯೋಜನಾಧಿಕಾರಿ ಕೆ.ರಂಗಸ್ವಾಮಿ, ಕಾಲೇಜಿನ ಪ್ರಾಂಶುಪಾಲ ಅರುಣ್, ಕಾಲೇಜು ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಇದ್ದರು.

ಚಾಮರಾಜನಗರ ಲೋಕಸಭಾ ಕ್ಷೇತ್ರದಿಂದ ಸುಭಾಷ್ ಚಂದ್ರು ಪಕ್ಷೇತರರಾಗಿ ಸ್ಪರ್ಧೆ

ಮೈಸೂರು, ಮಾ.29(ಜಿಎ)– ಚಾಮರಾಜನಗರ ಲೋಕಸಭಾ ಕ್ಷೇತ್ರದಲ್ಲಿ ತಾವು ಪಕ್ಷೇತರ ಅಭ್ಯರ್ಥಿಯಾಗಿ ಸ್ಪರ್ಧಿಸಿದ್ದು, ಮತದಾರರು ತಮಗೆ ಮತ ಚಲಾಯಿಸಬೇಕೆಂದು ಅಭ್ಯರ್ಥಿ ಕೆ. ಸುಭಾಷ್ ಚಂದ್ರು ಮನವಿ ಮಾಡಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ತಾವು ಆಯ್ಕೆಯಾದಲ್ಲಿ ಕೃಷಿ ಹಾಗೂ ಕೌಶಲ್ಯಾಭಿವೃದ್ಧಿ ಯಂತ್ರಗಳ ತಯಾರಿಕೆ ಕಾರ್ಖಾನೆ ಸ್ಥಾಪಿಸಿ, ಗುತ್ತಿಗೆದಾರರು, ಹೊರ ಗುತ್ತಿಗೆದಾರರು, ಪೌರ ಕಾರ್ಮಿಕರು, ಆಶಾ ಕಾರ್ಯಕರ್ತೆಯರು, ಅತಿಥಿ ಉಪನ್ಯಾಸಕರಿಗೆ ಹಿರಿತನದ ಆಧಾರದ ಮೇಲೆ ಶೇ.40 ರಷ್ಟು ಮೀಸಲಾತಿಯಂತೆ ಉದ್ಯೋಗ ಕಲ್ಪಿಸಿಕೊಡುವೆ ಎಂದರು.

ಮಹಿಳೆಯರು ಮನೆಯಲ್ಲಿಯೆ ಸ್ವಯಂ ಉದ್ಯೋಗ ಮಾಡುವ ಅವಕಾಶ ಕಲ್ಪಿಸಿ ಪ್ರೋತ್ಸಾಹ ನೀಡಲಾಗುವುದು. ಹೊಲಿಗೆ ಯಂತ್ರವನ್ನು ಶೇ.40 ರ ರಿಯಾಯಿತಿ ದರದಲ್ಲಿ ನೀಡಲಾಗುವುದು. ರೈತರ ಬೆಳೆಗೆ ನಿರ್ದಿಷ್ಟ ದರ ನಿಗದಿ ಪಡಿಸುವುದು ಸೇರಿದಂತೆ ಮೊದಲಾದ ಕಾರ್ಯಕ್ರಮ ಹಮ್ಮಿಕೊಳ್ಳುವುದಾಗಿ ತಿಳಿಸಿದರು.

ಯದುವೀರ್‌ಗೆ ಈಗ ರಸ್ತೆ ಬದಿಯ ಸಣ್ಣ ಹೋಟೆಲ್ ಅಂದರೆ ಅಚ್ಚುಮೆಚ್ಚು!

ಕುವೆಂಪುನಗರದ ಸಣ್ಣ ಹೋಟೆಲ್‌ನಲ್ಲಿ ಕಾಫಿ ಕುಡಿದು ಹರಟಿದ ಬಿಜೆಪಿ ಅಭ್ಯರ್ಥಿ


ಮೈಸೂರಿನ ಕುವೆಂಪುನಗರದ ಸಣ್ಣ ಹೋಟೆಲ್‌ನಲ್ಲಿ ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಯದುವೀರ್ ಕಾಫಿ ಕುಡಿದು ಬಿಜೆಪಿ ಕಾರ್ಯಕರ್ತರ ಜೊತೆ ಲೋಕಾಭಿರಾಮವಾಗಿ ಮಾತುಕತೆ ನಡೆಸಿದರು.

ಮೈಸೂರು, ಮಾ.29(ಬಿಎಲ್‌ಯು)– ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಜನಸಾಮಾನ್ಯರಲ್ಲಿ ಬೆರೆಯುವ ಅವರ ಪರಿಪಾಟಲು ಅರಿಯುವ ತವಕವೇರ್ಪಟ್ಟಿರುವಂತಿದೆ. ಹಾಗಾಗಿ ಈಗ ರಸ್ತೆ ಬದಿಯ ಹೋಟೆಲ್‌ಗಳಲ್ಲಿ ಹೆಚ್ಚಾಗಿ ಕಾಣಿಸಿಕೊಳ್ಳುತ್ತಿದ್ದಾರೆ. ಚುನಾವಣಾ ಪ್ರಚಾರದ ಸಂದರ್ಭದಲ್ಲಿ ರಸ್ತೆ ಬದಿ ಮಾತ್ರವಲ್ಲ ಸಣ್ಣ ಹೋಟೆಲ್‌ಗೂ ಭೇಟಿ ನೀಡುವ ಯದುವೀರ್ ಅಲ್ಲಿ ಕಾಫಿ, ಟೀ ಕುಡಿಯುವ ಇಲ್ಲವೇ ತಿಂಡಿ ಸವಿಲಾರಂಭಿಸಿದ್ದಾರೆ.

ಮೈಸೂರು ಇಲ್ಲವೆ ಬೆಂಗಳೂರು ಅರಮನೆಯಲ್ಲಿ ಇರುತ್ತಿದ್ದ ಯದುವೀರ್, ಕೆಲವೊಂದು ಕಾರ್ಯಕ್ರಮಗಳಲ್ಲಿ ಭಾಗ ವಹಿಸುತ್ತಿದ್ದರು. ಶ್ರೀಕಂಠದತ್ತ ನರಸಿಂಹ ರಾಜ ಒಡೆಯರ್ ಅವರಿಗಿಂತಲೂ ಹೆಚ್ಚಾಗಿ ಸಾರ್ವಜನಿಕವಾಗಿ ಕಾಣಿಸಿಕೊಳ್ಳುತ್ತಿದ್ದರು.

ಈಗ ರಾಜಕಾರಣಕ್ಕೆ ಬಂದ ನಂತರ ಇತ್ತೀಚಿನ ದಿನಗಳಲ್ಲಿ ಸಾಮಾನ್ಯರಲ್ಲಿ ಸಾಮಾನ್ಯರಾಗಿದ್ದಾರೆ. ಜಾತಿ–ಧರ್ಮ, ಬಡವ–ಬಲ್ಲಿದ ಈ ಯಾವ ಪರಿಗಣನೆ ಇಲ್ಲದೆ ಎಲ್ಲರೊಡನೆ ಬೆರೆಯುತ್ತಿದ್ದಾರೆ. ಇದೇ ಅಲ್ಲವೇ ರಾಜಕಾರಣದ ಮೊದಲ ಪಾಠ! ಬಿಜೆಪಿ ಟಿಕೆಟ್ ಘೋಷಣೆಯಾದ ನಂತರ ಯದುವೀರ್ ಸಾಮಾನ್ಯರೊಂದಿಗೆ ಬೆರೆಯುತ್ತಿದ್ದಾರೆ. ಚುನಾವಣಾ ಪ್ರಚಾರದ ವೇಳೆ ಮಾರ್ಗದಲ್ಲಿ ಸಿಗುವ ಹೋಟೆಲ್‌ಗಳಿಗೆ ಹೋಗಿ ಕಾಫಿ, ಟೀ ಕುಡಿಯುವುದು, ಕೆಲವು ಕಡೆ ತಿಂಡಿ ಸವಿದಿದ್ದಾರೆ.

ಇಂದು ಮೈಸೂರಿನ ಕುವೆಂಪುನಗರದಲ್ಲಿ ರಸ್ತೆ ಬದಿಯ ಹೋಟೆಲ್ ಹೊರಗೆ ಫುಟ್‌ಪಾತ್‌ನಲ್ಲಿ ನಿಂತು ಎಲ್ಲರೊಡನೆ ಕಾಫಿ ಕುಡಿದರು. ಮುಖಂಡರು ಹಾಗೂ ಕಾರ್ಯಕರ್ತರ ಜೊತೆ ಲೋಕಾಭಿರಾಮವಾಗಿ ಹರಟಿದರು.

ಈ ರೀತಿಯ ದಿಢೀರ್ ಬೆಳವಣಿಗೆ ಬಗ್ಗೆ ಪ್ರತಿಕ್ರಿಯೆ ನೀಡಿದ ಯದುವೀರ್, ಅರಮನೆಯಲ್ಲಿದ್ದ ನಾನು ಈಗ ಸಾಮಾನ್ಯರೊಂದಿಗೆ ಬೆರೆಯುತ್ತಿದ್ದೇನೆ. ಎಲ್ಲೇ ಹೋಗಲಿ ಸಾಮಾನ್ಯ ಹೋಟೆಲ್‌ಗಳಲ್ಲಿ ಜೊತೆಗಿದ್ದವರ ಜೊತೆ ಕಾಫಿ–ಟೀ ಕುಡಿದಿದ್ದೇನೆ. ಲೋಕಾಭಿರಾಮವಾಗಿ ಮಾತನಾಡುತ್ತೇನೆ. ಇದು ನನಗೆ ಒಳ್ಳೆಯ ಅನುಭವ ನೀಡುತ್ತಿದೆ. ಜೊತೆಗೆ ಜನಸಾಮಾನ್ಯರ ಸಮಸ್ಯೆ ಅರಿಯಲು ಸದವಕಾಶವೂ ಆಗಿದೆ ಎಂದರು. ನಾನು ಹೋದಲ್ಲಿ ಆ ಜನರು ತಮ್ಮ ತಮ್ಮ ಸಮಸ್ಯೆಗಳನ್ನು ಹೇಳುತ್ತಾರೆ. ಜೊತೆಗೆ ಚುನಾವಣೆಯಲ್ಲಿ ಗೆದ್ದು ಬರುವಂತೆ ಹಾರೈಸುತ್ತಾರೆ. ಎಲ್ಲೇ ಹೋದರೂ ಮತದಾರರಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗುತ್ತಿದೆ ಎಂದು ಯದುವೀರ್ ಹೇಳಿದರು.

ವೈಯಕ್ತಿಕ ಟೀಕೆ ಮಾಡದ ಸಿದ್ದರಾಮಯ್ಯ ಹೇಳಿಕೆ ಒಳ್ಳೆಯ ಬೆಳವಣಿಗೆ ಬಿಜೆಪಿ ಅಭ್ಯರ್ಥಿ ಯದುವೀರ್ ಅಭಿಪ್ರಾಯ

ಮೈಸೂರು, ಮಾ.29(ಬಿಎಲ್‌ಯು)– ಲೋಕಸಭಾ ಚುನಾವಣೆಯ ಪ್ರಚಾರ ಭಾಷಣಗಳಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ವೈಯಕ್ತಿಕ ಟೀಕೆ ಮಾಡದಿರುವುದು ಒಳ್ಳೆಯ ಬೆಳವಣಿಗೆ ಎಂದು ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅಭಿಪ್ರಾಯಪಟ್ಟಿದ್ದಾರೆ.

ಮೈಸೂರಿನ ಕುವೆಂಪುನಗರದಲ್ಲಿ ಇಂದು ಖ್ಯಾತ ಸಾಹಿತಿ ಡಾ.ಎಸ್.ಎಲ್. ಭೈರಪ್ಪ ಅವರನ್ನು ಭೇಟಿ ಮಾಡಿದ ನಂತರ ಪತ್ರಕರ್ತರ ಜೊತೆ ಮಾತನಾಡಿದ ಅವರು, ಮೂರು ದಿನಗಳ ಕಾಲ ಮೈಸೂರಿನಲ್ಲೇ ವಾಸ್ತವ್ಯ ಹೂಡಿದ್ದ ಸಿದ್ದರಾಮಯ್ಯ ತಮ್ಮ ಬಗ್ಗೆ ಯಾವುದೇ ಟೀಕೆ ಮಾಡದೆ ಬಿಜೆಪಿ ಬಗ್ಗೆ ಮಾತ್ರ ಟಾರ್ಗೆಟ್ ಮಾಡಿ ಹೇಳಿಕೆ ನೀಡಿರುವ ಬಗ್ಗೆ ಪ್ರತಿಕ್ರಿಯೆ ನೀಡಿದರು. ಮುಖ್ಯಮಂತ್ರಿ ಸ್ಥಾನದಲ್ಲಿರುವ ಸಿದ್ದರಾಮಯ್ಯ ಬಗ್ಗೆ ನನಗೆ ಗೌರವಭಾವವಿದೆ. ವೈಯಕ್ತಿಕವಾಗಿ ಯಾರನ್ನೂ ಟೀಕೆ ಮಾಡದೆ ಸಿದ್ದರಾಮಯ್ಯ ನೀಡುತ್ತಿರುವ ಹೇಳಿಕೆ ಒಳ್ಳೆಯ ಬೆಳವಣಿಗೆ ಎಂದು ತಿಳಿಸಿದರು. ಈಗ ಡಾ.ಎಸ್.ಎಲ್.ಭೈರಪ್ಪ ಅವರನ್ನು ಭೇಟಿ ಮಾಡಿದ್ದೇನೆ. ಚುನಾವಣೆ ಸಂದರ್ಭವಾದ ಕಾರಣ ಕೆಲವು ಸಲಹೆ, ಮಾರ್ಗದರ್ಶನ ನೀಡಿದ್ದಾರೆ. ಗೆದ್ದು ಬರುವಂತೆ ಈ ವೇಳೆ ಆಶೀರ್ವದಿಸಿದ್ದಾರೆ ಎಂದು ಯದುವೀರ್ ಹೇಳಿದರು.

ನಿಮ್ಮ ನಡೆ ಸ್ವಾಭಿಮಾನಕ್ಕೆ ಅಪಮಾನವಾಗದಂತಿರಲಿ

ಸಂಸದೆ ಸುಮಲತಾ ಅಂಬರೀಶ್ ಅವರಲ್ಲಿ ಶಾಸಕ ನರೇಂದ್ರಸ್ವಾಮಿ ಮನವಿ



ಮಳವಳ್ಳಿಯಲ್ಲಿ ಶುಕ್ರವಾರ ನಡೆದ ಕಾಂಗ್ರೆಸ್ ಕಾರ್ಯಕರ್ತರ ಸಭೆಯನ್ನು ಸಚಿವ ಚಲುವರಾಯಸ್ವಾಮಿ ಉದ್ಘಾಟಿಸಿದರು.

ಮಳವಳ್ಳಿ,ಮಾ.29– ಕಳೆದ ಲೋಕಸಭಾ ಚುನಾವಣೆಯಲ್ಲಿ ಸಂಸದೆ ಸುಮಲತಾ ಅವರಿಗೆ ಸ್ವಾಭಿಮಾನದ ಸಂಕೇತವಾಗಿ ಜನರಿಂದ ಮತ ಕೊಡಿಸಿದ್ದೇವೆ. ಈ ಚುನಾವಣೆಯಲ್ಲಿ ನಮ್ಮ ಜೊತೆ ಬರ್ತಾರೊ ಇಲ್ಲವೋ ಗೊತ್ತಿಲ್ಲ, ಆದರೆ ಮಳವಳ್ಳಿ ಮತ್ತು ತಾಲೂಕಿನ ಸ್ವಾಭಿಮಾನಕ್ಕೆ ಅಪಮಾನ ಆಗದ ರೀತಿಯಲ್ಲಿ ನಿಮ್ಮ ನಡೆ ಇರಲಿ ಎಂದು ಶಾಸಕ ಪಿ.ಎಂ. ನರೇಂದ್ರಸ್ವಾಮಿ ಮನವಿ ಮಾಡಿದರು.

ಶುಕ್ರವಾರ ಪಟ್ಟಣದ ಟಿಎಪಿಸಿಎಂಎಸ್ ಮುಂಭಾಗ ಕಾಂಗ್ರೆಸ್ ನಿವೇಶನದಲ್ಲಿ ಲೋಕಸಭೆ ಚುನಾವಣೆ ಹಿನ್ನಲೆಯಲ್ಲಿ ನಡೆದ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿದ ಅವರು, ಲೋಕಸಭೆಯ ಎಲ್ಲಾ ಚುನಾವಣೆಯಲ್ಲೂ ಕಾಂಗ್ರೆಸ್ ಅಭ್ಯರ್ಥಿಗಳಿಗೆ ಲೀಡ್ ಕೊಟ್ಟಿದ್ದೇವೆ. ಅದರಲ್ಲೂ ಸುಮಲತಾ ಅವರ ಚುನಾವಣೆಯಲ್ಲಿ ಸ್ವಾಭಿಮಾನದ ಸಂಕೇತವಾಗಿ ಜನರಿಂದ ಮತ ಕೊಡಿಸಿದ್ದೇವೆ. ಈ ವೇದಿಕೆಯ ಮೂಲಕ ಮಳವಳ್ಳಿಯ ಹುಚ್ಚೇಗೌಡರ ಸೊಸೆಯಾಗಿರುವ ಸುಮಲತಾ ಅವರು ಈ ಚುನಾವಣೆಯಲ್ಲಿ ಮಳವಳ್ಳಿಯ ಸ್ವಾಭಿಮಾನವನ್ನು ಕಳೆಯಬಾರದು. ನಿಮ್ಮನ್ನು ವಿರೋಧ ಮಾಡಿ ಹೀಯಾಳಿಸಿ ಅವಮಾನ ಮಾಡಿದಂಥ ಸಂದರ್ಭದಲ್ಲಿ ಅತಿ ಹೆಚ್ಚು ಮತ ಕೊಟ್ಟಂಥಹ ನೆಲ ಮಳವಳ್ಳಿಗೆ ಅವಮಾನ ಮಾಡಕೊಡದು ಎಂದು ಈ ವೇದಿಕೆ ಮೂಲಕ ಬೇಡಿಕೆ ಇಡುವೆ. ಚುನಾವಣೆಯಲ್ಲಿ ನಮ್ಮ ಜೊತೆ ಬರುತ್ತಾರೋ ಇಲ್ಲವೋ ಗೊತ್ತಿಲ್ಲ, ಆದರೆ ಮಳವಳ್ಳಿಗೆ ಅವಮಾನ ಆಗದ ರೀತಿಯಲ್ಲಿ ನಿಮ್ಮ ನಡೆ ಇರಲಿ ಎಂದು ಮನವಿ ಮಾಡಿದರು.

ನಾಳೆ ನಡೆಯುವ ಸಭೆಯಲ್ಲಿ ತೀರ್ಮಾನ ಏನ್ ಇರಬೇಕು ಎಂದರೆ ಅವತ್ತು ಸ್ವಾಭಿಮಾನದ ಮಾತಾಡಿದರಲ್ಲ, ನಿಜವಾದ ಸ್ವಾಭಿಮಾನ ಉಳಿಸಿಕೊಳ್ಳುವಂಥ ಮಂಡ್ಯದ ಗೆಲುವನ್ನು ನಾವು ಕೇಳುತ್ತಿದ್ದೇವೆ. ಮಂಡ್ಯದ ಅಭ್ಯರ್ಥಿಯನ್ನು ತಂದು ಕೂರಿಸಿದ್ದೇವೆ. ನಾವು ಟೂರಿಂಗ್ ಟಾಕೀಸ್‌ನವರ ಬಗ್ಗೆ ಮಾತನಾಡುವುದಿಲ್ಲ, ರಾಮನಗರ, ಕನಕಪುರ, ಸಾತನೂರು, ಚಿಕ್ಕಬಳ್ಳಾಪುರ ಎಲ್ಲಾ ಕಡೆ ಟೆಂಟ್ ಎತ್ತಿ ಇವಾಗ ಮಂಡ್ಯಕ್ಕೆ ಬಂದಿದ್ದಾರೆ. ನಾವು ಅವರ ಹಿರಿಯತನಕ್ಕೆ ಅವರ ನಾಯಕತ್ವಕ್ಕೆ ಅಗೌರವವಾಗಿ ಮಾತಾಡುವುದಿಲ್ಲ ಎಂದು ಹೇಳಿದರು.

ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಮಾತನಾಡಿ, ಜಿಲ್ಲೆಯಲ್ಲಿ ಎಂದಾದರೂ ಧರ್ಮ ಮತ್ತು ಜಾತಿಗಳ ಮಧ್ಯೆ ಜಗಳ ಆಗಿದೀಯಾ, ಯಾವುದೇ ಬೇಧಭಾವವಿಲ್ಲದೇ ಬದುಕು ನಡೆಸುತ್ತಿದ್ದಾರೆ. ಜಿಲ್ಲೆಯ ಅಭಿವೃದ್ಧಿಗೆ ಎಲ್ಲ ಶಾಸಕರು ಹಾಗೂ ವಿಧಾನ ಪರಿಷತ್ ಸದಸ್ಯರು ಒಗ್ಗಟ್ಟಿನಿಂದ ಕೆಲಸ ಮಾಡುತ್ತಿದ್ದೇವೆ. ಜೆಡಿಎಸ್‌ನಲ್ಲಿ ಮೂರು ಬಣಗಳಿವೆ. ನಮ್ಮ ಒಗ್ಗಟ್ಟನ್ನು ಸಹಿಸದ ಇವರ ನಾಟಕ ಜಿಲ್ಲೆಯಲ್ಲಿ ನಡೆಯುವುದಿಲ್ಲ, ಜಿಲ್ಲೆಗೆ ಹೊಸ ಕಾರ್ಖಾನೆ, ಕೃಷಿ ವಿಶ್ವವಿದ್ಯಾಲಯ ಸೇರಿದಂತೆ ಸಾವಿರಾರು ಕೋಟಿ ಅನುದಾನ ನೀಡಿರುವ ಸಿದ್ದರಾಮಯ್ಯ ಅವರು ಒಕ್ಕಲಿಗರ ವಿರೋಧಿನಾ ಎನ್ನುವುದನ್ನು ಜನರು ಅರ್ಥ ಮಾಡಿಕೊಳ್ಳಬೇಕಿದೆ ಎಂದು ಹೇಳಿದರು.

ವಿಧಾನ ಪರಿಷತ್ ಮಾಜಿ ಸದಸ್ಯ ಮರಿತಿಬ್ಬೇಗೌಡ, ಶಾಸಕ ಎ.ಬಿ.ರಮೇಶ್‌ಬಾಬು ಬಂಡಿಸಿದ್ದೇಗೌಡ, ಮಾಜಿ ಶಾಸಕ ಬಿ.ರಾಮಕೃಷ್ಣ, ಅಭ್ಯರ್ಥಿ(ವೆಂಕಟರ ಮಣೇಗೌಡ), ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಸಿ.ಡಿ.ಗಂಗಾಧರ್, ಕಾರ್ಯಾಧ್ಯಕ್ಷ ಎಂ.ಎಸ್. ಚಿದಂಬರ್, ಮುಖಂಡರಾದ ದಡದಪುರ ಶಿವಣ್ಣ, ಸುರೇಶ್ ಸೇರಿದಂತೆ ಹಲವು ಮಂದಿ ಉಪಸ್ಥಿತರಿದ್ದರು.

ನಾಲೆಗಳಿಗೆ ನೀರು ಹರಿಸಿ, ಅಂತರ್ಜಲ ಉಳಿಸಿ

ಬೆಂಗಳೂರು-ಮೈಸೂರು ರಸ್ತೆಯಲ್ಲಿ ರೈತರ ಪ್ರತಿಭಟನೆ



ಬೆಂಗಳೂರು–ಮೈಸೂರು ರಸ್ತೆಯಲ್ಲಿ ಪ್ರತಿಭಟನೆ ನಡೆಸುತ್ತಿರುವ ರೈತರು

ಶ್ರೀರಂಗಪಟ್ಟಣ,ಮಾ.29–ನಾಲೆಗಳಿಗೆ ನೀರು ಹರಿಸಿ ಕೊಳವೆ ಬಾವಿಗಳ ಅಂತರ್ಜಲ ರಕ್ಷಿಸಿ ಬೆಳೆಗಳ ಉಳಿಸಬೇಕು ಎಂದು ಒತ್ತಾಯಿಸಿ ಭೂಮಿ ತಾಯಿ ಹೋರಾಟ ಸಮಿತಿ ಕಾರ್ಯಕರ್ತರು ಜಾನುವಾರುಗಳೊಂದಿಗೆ ಒಣ ಕಬ್ಬಿನ ಜೊಲ್ಲೆ ಹಿಡಿದು ಮೆರವಣಿಗೆ ನಡೆಸಿ ಪ್ರತಿಭಟಿಸಿದರು.

ಭೂಮಿತಾಯಿ ಹೋರಾಟ ಸಮಿತಿ ಅಧ್ಯಕ್ಷ ಬಲ್ಲೇನಹಳ್ಳಿ ಕೃಷ್ಣೇಗೌಡ ಹಾಗೂ ರೈತ ಮುಖಂಡ ಕೆ.ಎಸ್. ನಂಜುಂಡೇಗೌಡರ ನೇತೃತ್ವದಲ್ಲಿ ರೈತರು ಪಟ್ಟಣದ ಕುವೆಂಪು ವೃತ್ತದ ಬಳಿ ಜಮಾಯಿಸಿ ಮೈಸೂರು–ಬೆಂಗಳೂರು ಹೆದ್ದಾರಿ ತಡೆ ಮಾಡಿ ಸರ್ಕಾರದ ವಿರುದ್ದ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಜಲಾಶಯದಲ್ಲಿ ನೀರಿಲ್ಲದಿದ್ದರೂ ತಮಿಳುನಾಡಿಗೆ ನೀರು ಹರಿಸಿದ ಸರ್ಕಾರ ಇದೀಗ ಇಲ್ಲಿನ ಜನರಿಗೆ ಕುಡಿಯುವ ನೀರಿಗೂ ಬರ ಬರುವಂತೆ ಮಾಡುತ್ತಿದೆ. ರೈತರಿಗೆ ಅಲ್ಪ ಸ್ವಲ್ಪ ಬೆಳೆ ಬೆಳೆಯಲು ಕಟ್ಟು ನೀರಿಗೂ ಒಪ್ಪದ ಸರ್ಕಾರ ತಮಿಳುನಾಡಿನ ಪರ ನಿಂತು ಕೆಲಸ ಮಾಡಿ ನಾಡಿನ ಜನರಿಗೆ ಕುಡಿಯಲು ನೀರು ಕೊಡದೆ ಇಲ್ಲಿನ ಜನರಿಗೆ ವಿಷಕೊಟ್ಟು ಬಲಿ ತೆಗೆದುಕೊಳ್ಳುತ್ತಿದೆ ಎಂದು ಕಿಡಿಕಾರಿದರಲ್ಲದೆ ಸರ್ಕಾರ ತಕ್ಷಣ ನಾಲೆಗಳಿಗೆ ನೀರು ಹರಿಸದಿದ್ದರೆ ಉಗ್ರ ಪ್ರತಿಭಟನೆ ನಡೆಸಬೇಕಾಗುತ್ತದೆ ಎಂದು ಎಚ್ಚರಿಸಿದರು.

ಭೂಮಿತಾಯಿ ಹೋರಾಟ ಸಮಿತಿಯ ಮುಖಂಡರಾದ ಮಹದೇವು, ಕೃಷ್ಣ ರವಿಲಕ್ಷ್ಮಣ, ಶ್ರೀನಿವಾಸು, ರಾಮ ಚಂದ್ರು, ಮಹದೇವು, ಮಂಜುನಾಥ, ರಾಮಕೃಷ್ಣ, ಮಹೇಶ್, ಸೇರಿದಂತೆ ಇತರರು ಪಟ್ಟಣದ ಮುಖ್ಯ ರಸ್ತೆಯಲ್ಲಿ ಒಣ ಕಬ್ಬುಗಳ ಹಿಡಿದು ಎತ್ತಿನ ಬಂಡಿ ಮೂಲಕ ಮೆರವಣಿಗೆ ನಡೆಸಿದರು. ನಂತರ ತಾಲೂಕು ಕಚೇರಿ ಮುಂದೆ ಧರಣಿ ಕುಳಿತು ನೀರಾವರಿ ಇಲಾಖೆ ಹಾಗೂ ಸರ್ಕಾರದ ವಿರುದ್ದ ಆಕ್ರೋಶ ವ್ಯಕ್ತಪಡಿಸಿದರು.

ಕಾರುಗಳು, ಆಟೋ ಬೆಂಕಿಗಾಹುತಿ



ಬೆಂಕಿಯನ್ನು ನಂದಿಸುತ್ತಿರುವ ಅಗ್ನಿಶಾಮಕ ದಳದ ಸಿಬ್ಬಂದಿ

ನಾಗಮಂಗಲ: ಬೆಂಕಿ ತಗುಲಿ ಗ್ರಾಮಾಂತರ ಠಾಣೆಯ ಹಿಂಬಾಗದಲ್ಲಿದ್ದ ಎರಡು ಕಾರು ಮತ್ತು ಒಂದು ಆಟೋ ಸುಟ್ಟು ಹೋದ ಘಟನೆ ವರದಿಯಾಗಿದೆ.

ಎರಡು ದಿನಗಳ ಹಿಂದೆ ಠಾಣೆಯ ಹಿಂಬಾಗವನ್ನು ಸ್ವಚ್ಚಗೊಳಿಸಿ ಒಣಗಿದ ತ್ಯಾಜ್ಯಗಳನ್ನು ಒಂದೆಡೆ ಸಂಗ್ರಹಿಸಲಾಗಿತ್ತು. ಇಂದು ಮೂರು ಗಂಟೆಯ ಸಮಯದಲ್ಲಿ ಆ ತ್ಯಾಜ್ಯಕ್ಕೆ ಬೆಂಕಿ ತಗುಲಿ ನಿಧಾನವಾಗಿ ಠಾಣೆಯ ಹಿಂಭಾಗದಲ್ಲಿ ಕಾರು ಮತ್ತು ಆಟೋವೊಂದಕ್ಕೆ ಬೆಂಕಿ ಆವರಿಸಿ ಹೊತ್ತಿ ಉರಿಯತೊಡಗಿದ್ದು ಅದನ್ನು ನೋಡಿದ ಕೆಲವರು ತಕ್ಕಣವೇ ಅಗ್ನಿಶಾಮಕ ದಳಕ್ಕೆ ವಿಷಯ ತಿಳಿಸುತ್ತಿದ್ದಂತೆ ತಕ್ಷಣವೇ ಆಗಮಿಸಿ ಮುಂದಾಗಬಹುದಾಗಿದ್ದ ಭಾರೀ ಅವಘಡವನ್ನು ತಪ್ಪಿಸಿದ್ದಾರೆ. ಅಗ್ನಿಶಾಮಕ ದಳದ ಸಿಬ್ಬಂದಿ ಚಂದ್ರಶೇಖರ್, ಜನಾರ್ಧನ್, ಜೋಗಿ, ಗೋಪಾಲ್ ಹಾಗೂ ಸಿಬ್ಬಂದಿ ವರ್ಗದವರು ಬೆಂಕಿಯನ್ನು ನಂದಿಸಿದರು. ಈ ಕಾರುಗಳು ಮತ್ತು ಆಟೋ ವಿವಿಧ ಪ್ರಕರಣಗಳಲ್ಲಿ ವಶಪಡಿಸಿಕೊಂಡ ವಾಹನಗಳಾಗಿವೆ

ಕೋರ್ಟ್ ಆದೇಶ ಪಾಲಿಸದ ಗ್ರಾಪಂ ಕಚೇರಿ ಜಪ್ತಿ

ಮಂಡ್ಯ: ಕರ್ತವ್ಯದ ವೇಳೆ ಮೃತಪಟ್ಟಿದ್ದ ಗ್ರಾಮ ಪಂಚಾಯಿತಿ ನೌಕರನ ಕುಟುಂಬಕ್ಕೆ ಪರಿಹಾರ ನೀಡಲು ವಿಳಂಬ ಮಾಡಿದ ಕಾರಣ, ನ್ಯಾಯಾಲಯದ ಆದೇಶದಂತೆ ಮದ್ದೂರು ತಾಲೂಕಿನ ಕೊಪ್ಪ ಹೋಬಳಿಯ ಮರಳಿಗ ಗ್ರಾಪಂ ಕಚೇರಿಯ ಕಂಪ್ಯೂಟರ್, ಪೀಠೋಪಕರಣಗಳನ್ನು ಗುರುವಾರ ಜಪ್ತಿ ಮಾಡಲಾಯಿತು.

ಜ.20 2024ರಂದು ಹಿರಿಯ ಸಿವಿಲ್ ನ್ಯಾಯಾಧೀಶರ ನ್ಯಾಯಾಲಯವು ಮರಳಿಗ ಗ್ರಾಮ ಪಂಚಾಯಿತಿ ಕಚೇರಿಯ ಚರಾಸ್ತಿಗಳನ್ನು ಜಪ್ತಿ ಮಾಡಲು ಆದೇಶ ನೀಡಿದ ಮೇರೆಗೆ ನ್ಯಾಯಾಂಗ ಇಲಾಖೆಯ ಸಿಬ್ಬಂದಿ ಕಚೇರಿಯ ಕಂಪ್ಯೂಟರ್, ಪೀಠೋಪಕರಣಗಳನ್ನು ವಶಕ್ಕೆ ಪಡೆದರು. ಕಚೇರಿಗೆ ಎಂದಿನಂತೆ ಬಂದಿದ್ದ ಸಿಬ್ಬಂದಿ ಹಾಗೂ ಸಾರ್ವಜನಿಕರು ಜಪ್ತಿ ವಿಷಯ ಕೇಳಿದ ತಕ್ಷಣ ಕಂಗಾಲಾಗಿ, ಕಚೇರಿಯಿಂದ ಹೊರ ನಡೆದರು.

ಏನಿದು ಪ್ರಕರಣ: 2009ರಲ್ಲಿ ಮರಳಿಗ ಗ್ರಾಮ ಪಂಚಾಯಿತಿ ಕಛೇರಿಯಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿದ್ದ ರವಿ ಬೀದಿ ದೀಪಗಳ ನಿರ್ವಹಣೆ ಕೆಲಸ ಮಾಡುತ್ತಿದ್ದ ವೇಳೆ ವಿದ್ಯುತ್ ಸ್ಪರ್ಶದಿಂದ ಮೃತಪಟ್ಟಿದ್ದರು.

ಈ ವಿಚಾರವಾಗಿ ಗ್ರಾಮ ಪಂಚಾಯಿತಿಯವರು ಪರಿಹಾರ ನೀಡುವಂತೆ ಆತನ ಪತ್ನಿ ಸುಜಾತ ಮನವಿ ಸಲ್ಲಿಸಿದ್ದರು. ಸುಜಾತ ಅವರ ಮನವಿಯನ್ನು ಗಣನೆಗೆ ತೆಗೆದುಕೊಳ್ಳದ ಅಂದಿನ ಗ್ರಾಮ ಪಂಚಾಯಿತಿ ಅಧ್ಯಕ್ಷರು ಹಾಗೂ ಆಡಳಿತ ಮಂಡಳಿ ಬೇಜವಾಬ್ದಾರಿತನ ತೋರಿದ್ದರು.

ಈ ಸಂಬಂಧ ಮೃತ ರವಿ ಅವರ ಕುಟುಂಬದವರು 2009ರಲ್ಲಿ ನ್ಯಾಯಾಲಯದ ಮೆಟ್ಟಿಲೇರಿದ್ದರು. ಸತತ ವಿಚಾರಣೆ ನಡೆದು ಕರ್ನಾಟಕ ಹೈಕೋರ್ಟ್ ಪೀಠವು 2009 ರಿಂದ 2023 ರವರೆಗೆ ಶೇ 15ರ ಹೆಚ್ಚುವರಿ ಬಡ್ಡಿ ಸೇರಿ 11,46,623ರೂ ಪರಿಹಾರ ಹಣ ತುಂಬಿಕೊಡುವಂತೆ ಆದೇಶಿಸಿತ್ತು.

ನ್ಯಾಯಾಲಯದ ಆದೇಶದ ಪ್ರಕಾರ ಪರಿಹಾರದ ಪೂರ್ಣ ಹಣವನ್ನು ಮೃತ ರವಿ ಅವರ ಕುಟುಂಬಕ್ಕೆ ನೀಡದ ಕಾರಣ ಹಾಗೂ ನ್ಯಾಯಾಲಯದ ಆದೇಶ ಪಾಲನೆ ಮಾಡದ ಹಿನ್ನಲೆಯಲ್ಲಿ ಜಪ್ತಿ ಪ್ರಕ್ರಿಯೆ ಕೈಗೊಂಡಿದ್ದೇವೆ ಎಂದು ಹಿರಿಯ ವಕೀಲ ಬಿ.ರಾಮಕೃಷ್ಣೇಗೌಡ ತಿಳಿಸಿದರು.



ಕೆ.ಆರ್.ಪೇಟೆ ಪಟ್ಟಣದ ವ್ಯಾಪ್ತಿಯಲ್ಲಿರುವ ಹೊಸಹೊಳಲು ಗ್ರಾಮದ ತಿಗಳ ಜನಾಂಗದ ಶ್ರೀ ಧರ್ಮರಾಯಸ್ವಾಮಿ ಭವನದ ಆವರಣದಲ್ಲಿ 4ನೇ ವರ್ಷದ ಶ್ರೀ ಅಗ್ನಿಬನ್ನಿರಾಯ ಸ್ವಾಮಿಗಳ ಜಯಂತೋತ್ಸವದ ಅಂಗವಾಗಿ ಶ್ರೀ ಅಗ್ನಿಬನ್ನಿರಾಯಸ್ವಾಮಿಗಳ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಸಮಾಜದ ಮುಖಂಡ ಮಂಜು (ಟೈಲರ್) ಮಾತನಾಡಿದರು.

ಮೈತ್ರಿ ಅಭ್ಯರ್ಥಿ ಕುಮಾರಸ್ವಾಮಿ ಗೆಲ್ಲಿಸೋಣ



ಪಾಂಡವಪುರ ತಾಲೂಕಿನ ಜಕ್ಕನಹಳ್ಳಿಯಲ್ಲಿ ನಡೆದ ಬಿಜೆಪಿ ಕಾರ್ಯಕರ್ತ ಸಭೆಯನ್ನು ಬಿಜೆಪಿ ಜಿಲ್ಲಾಧ್ಯಕ್ಷ ಡಾ.ಎನ್.ಎಸ್.ಇಂದ್ರೇಶ್ ಉದ್ಘಾಟಿಸಿದರು.

ಪಾಂಡವಪುರ: ಮಂಡ್ಯ ಲೋಕಸಭಾ ಚುನಾವಣೆಯಲ್ಲಿ ಎನ್‌ಡಿಎ ಅಭ್ಯರ್ಥಿಯಾಗಿ ಸ್ಪರ್ಧಿಸಿರುವ ಮಾಜಿ ಸಿಎಂ ಎಚ್.ಡಿ.ಕುಮಾರಸ್ವಾಮಿ ಅವರ ಪರವಾಗಿ ಎಲ್ಲಾ ಬಿಜೆಪಿ ಹಾಗೂ ಜೆಡಿಎಸ್ ಕಾರ್ಯಕರ್ತರು ಒಗ್ಗಟ್ಟಿನಿಂದ ಕೆಲಸ ಮಾಡಿ ಗೆಲ್ಲಿಸಬೇಕು ಎಂದು ಬಿಜೆಪಿ ಜಿಲ್ಲಾಧ್ಯಕ್ಷ ಡಾ.ಎನ್.ಎಸ್. ಇಂದ್ರೇಶ್ ಕಾರ್ಯಕರ್ತರಲ್ಲಿ ಮನವಿ ಮಾಡಿದರು.

ತಾಲೂಕಿನ ಜಕ್ಕನಹಳ್ಳಿಯಲ್ಲಿ ಜಕ್ಕನಹಳ್ಳಿ ಮಹಾಶಕ್ತಿ ಕೇಂದ್ರದ ವತಿಯಿಂದ ನಡೆದ ನೂತನ ಬಿಜೆಪಿ ಜಿಲ್ಲಾಧ್ಯಕ್ಷ ಡಾ.ಎನ್.ಎಸ್.ಇಂದ್ರೇಶ್ ಅವರಿಗೆ ಅಭಿನಂದನೆ ಹಾಗೂ ಕಾರ್ಯಕರ್ತರ ಸಭೆಯಲ್ಲಿ ಭಾಗವಹಿಸಿ ಮಾತನಾಡಿದರು. ರಾಜ್ಯದಲ್ಲಿ ಕಾಂಗ್ರೆಸ್ ಸರಕಾರ ಅಧಿಕಾರಕ್ಕೆ ಬಂದ ಬಳಿಕ ಭೀಕರ ಬರಗಾಲ ಎದುರಾಗಿ ಕುಡಿಯುವ ನೀರಿಗೂ ಹಾಹಾಕಾರ ಎದುರಾಗಿದೆ. ಆದರೆ, ಕಾಂಗ್ರೆಸ್ ಸರಕಾರ ತಮಿಳುನಾಡಿನ ಸಿಎಂ ಸ್ಟಾಲಿನ್ ವಿಶ್ವಾಸ ಗಳಿಸಲು ರಾಜ್ಯದಿಂದ ತಮಿಳುನಾಡಿಗೆ ನೀರು ಹರಿಸಿ ರಾಜ್ಯದ ಜನರಿಗೆ ಅನ್ಯಾಯ ಮಾಡಿದೆ.ಕಾಂಗ್ರೆಸ್ ಅಧಿಕಾರಕ್ಕೆ ಬಂದ 10 ತಿಂಗಳಲ್ಲಿ ರಾಜ್ಯದಲ್ಲಿ 875 ಮಂದಿ ರೈತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಕಿಡಿಕಾರಿದರು.

ಏ.2ಕ್ಕೆ ಜಂಟಿ ಸಭೆ:ಲೋಕಸಭಾ ಚುನಾವಣಾ ಹಿನ್ನೆಲೆಯಲ್ಲಿ ಇದೇ ಏ.2 ರಂದು ಬಿಜೆಪಿ–ಜೆಡಿಎಸ್ ಜಂಟಿ ಕಾರ್ಯಕರ್ತರ ಸಭೆಯನ್ನು ಕರೆಯಲಾಗಿದೆ. ಮಂಗಳಾ ನವೀನ್ ಕುಮಾರ್ ನೇತೃತ್ವದಲ್ಲಿ ಹಲವಾರು ಮಹಿಳೆಯರು ಬಿಜೆಪಿ ಸೇರ್ಪಡೆಗೊಂಡರು.

ಒಂದನೇ ಪುಟದಿಂದ

ಒಂದಾಗಿ ಹೋರಾಡೋಣ

ಒಂದಾಗಿ ಹೋರಾಟ ಮಾಡಲು ಸಲಹೆ ಮತ್ತು ಕಿವಿಮಾತು ಹೇಳಿದರು. ಒಟ್ಟಾಗಿ ಹೋರಾಟ ಮಾಡುವುದರಿಂದ ರಾಜ್ಯದ 28 ಕ್ಷೇತ್ರಗಳಲ್ಲೂ ಬಿಜೆಪಿ ಮತ್ತು ಜೆಡಿಎಸ್ ಮೈತ್ರಿ ಅಭ್ಯರ್ಥಿಗಳು ಗೆಲ್ಲಲಿದ್ದಾರೆ. ಎಲ್ಲಾ ಕ್ಷೇತ್ರಗಳಲ್ಲೂ ಎನ್‌ಡಿಎ ಕೂಟದ ಪಕ್ಷಗಳ ಪರ ಅಲೆ ಇದೆ. ಈ ಅಲೆಯನ್ನು ನಾವು ಬಳಸಿಕೊಂಡು ಅಭ್ಯರ್ಥಿಗಳ ಗೆಲುವಿಗೆ ಒಗ್ಗಟ್ಟಿನಿಂದ ಕೆಲಸ ಮಾಡಬೇಕು ಎಂದರು.

ಒಂದಾಗಿ ಹೋರಾಡದೇ 28ಕ್ಕೆ 28 ಗೆಲ್ಲಲಾಗದು: ಇದೇ ಸಂದರ್ಭದಲ್ಲಿ ಮಾತನಾಡಿದ ದೇವೇಗೌಡರು ಎರಡು ಹಂತದಲ್ಲಿ ಚುನಾವಣೆ ನಡೆಯಲಿದೆ. ನಮ್ಮೆದುರು ಇರುವ ಕಾಲಾವಧಿ ಅತ್ಯಂತ ಕಡಿಮೆ. ನಾವು ಹಳೆಯದೆಲ್ಲವನ್ನು ಮರೆತು ಸಮನ್ವಯತೆಯಿಂದ ಕೆಲಸ ಮಾಡಬೇಕು ಎಂದು ಮನವಿ ಮಾಡಿದರು.

ನಮ್ಮ ವಿರೋಧಿಗಳು ಬಲಿಷ್ಠರಿದ್ದಾರೆ. ನಾವು ಭೂತಕಾಲದ ಎಲ್ಲವನ್ನು ಮರೆಯದೆ ಇದ್ದರೆ 28ಕ್ಕೆ 28 ಕ್ಷೇತ್ರಗಳನ್ನು ಗೆಲ್ಲಲು ಸಾಧ್ಯವಾಗದು ಎಂದು ಕಿವಿಮಾತು ಹೇಳಿದರು. ಕಾಂಗ್ರೆಸ್ ಪಕ್ಷವು ಹಣಬಲದಿಂದ ಗೆಲ್ಲಲು ಮುಂದಾಗಿದೆ. ಬೇರೆ ರಾಜ್ಯಗಳಿಗೂ ಅದು ಚುನಾವಣೆಗೆ ಹಣದ ನೆರವು ನೀಡುತ್ತಿದೆ. ಇವೆಲ್ಲವನ್ನೂ ನಾವು ಗಮನದಲ್ಲಿ ಇಟ್ಟುಕೊಳ್ಳಬೇಕು. ಭಿನ್ನಮತ ದೂರ ಮಾಡಲು ಯಾವುದೇ ನಾಯಕರ ಮನೆಗೆ ಹೋಗಲು ಸಿದ್ಧ ಎಂದು ನುಡಿದರು.

ಎರಡೂ ಪಕ್ಷದವರು ಜೊತೆಯಾಗಿ ಕೆಲಸ ಮಾಡಿದರೆ ಎಲ್ಲ ಕ್ಷೇತ್ರಗಳಲ್ಲಿ ನಮಗೆ ಗೆಲ್ಲುವ ಸಾಮರ್ಥ್ಯ ಇದೆ ಎಂದ ಅವರು, ಮೋದಿಯವರು ಮತ್ತು ತಮ್ಮ ನಡುವಿನ ಆತ್ಮೀಯ ಕ್ಷಣಗಳನ್ನು ಈ ಸಂದರ್ಭದಲ್ಲಿ ನೆನಪಿಸಿಕೊಂಡರು.

ಎನ್‌ಡಿಎ ಅಭ್ಯರ್ಥಿಗಳ ಗೆಲುವಿಗೆ ಪಣ ತೊಡಿ: ಯಡಿಯೂರಪ್ಪ ಮಾತನಾಡಿ ಈ ಸರಕಾರ ಜನರ ವಿಶ್ವಾಸ ಕಳೆದುಕೊಂಡಿದೆ. ಸರಕಾರದ ಖಜಾನೆ ಖಾಲಿಯಾಗಿದ್ದು, ಅಭಿವೃದ್ಧಿ ಕಾರ್ಯಗಳು ಸ್ಥಗಿತಗೊಂಡಿವೆ. ಕಿಸಾನ್ ಸಮ್ಮಾನ್ ಯೋಜನೆಯಡಿ ಕೇಂದ್ರದ 6 ಸಾವಿರ ಜೊತೆಗೆ ನಾನು ಮುಖ್ಯಮಂತ್ರಿ ಆಗಿದ್ದಾಗ 4 ಸಾವಿರ ಹೆಚ್ಚುವರಿಯಾಗಿ ಕೊಡುತ್ತಿದ್ದೆ. ಆ 4 ಸಾವಿರ ನಿಂತು ಹೋಗಿದೆ. ಸರಕಾರ ದಿವಾಳಿ ಆಗಿರುವುದಕ್ಕೆ ಇದಕ್ಕಿಂತ ಬೇರೆ ಉದಾಹರಣೆ ಬೇಕೇ ಎಂದು ಪ್ರಶ್ನಿಸಿದರು.

ಬಿಜೆಪಿ– ಜೆಡಿಎಸ್ ಬೇರೆ ಅಲ್ಲ. ನಾವೆಲ್ಲ ಒಂದೇ ತಾಯಿ ಮಕ್ಕಳಂತೆ. ಬಿಜೆಪಿ– ಜೆಡಿಎಸ್ ಅಭ್ಯರ್ಥಿ ಯಾರೇ ಇರಲಿ; ಅವರನ್ನು ಗೆಲ್ಲಿಸಲು ಪ್ರಾಮಾಣಿಕವಾಗಿ ಪಣ ತೊಡಿ. ಆಗ ರಾಜ್ಯದ ಎಲ್ಲ ಲೋಕಸಭಾ ಕ್ಷೇತ್ರಗಳಲ್ಲಿ ಗೆಲ್ಲುವ ನಮ್ಮ ಪ್ರಯತ್ನವನ್ನು ತಡೆಯಲು ಯಾರಿಂದಲೂ ಅಸಾಧ್ಯ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ದೇಶ– ವಿದೇಶಗಳಲ್ಲಿ ನಿರಂತರ ಪ್ರವಾಸ ಮಾಡುತ್ತಿರುವ, ಒಂದು ದಿನ ರಜೆ ಪಡೆಯದೆ ದೇಶದ ಅಭಿವೃದ್ಧಿಗೆ ಶ್ರಮಿಸುವ ಮಾನ್ಯ ಪ್ರಧಾನಿ ನರೇಂದ್ರ ಮೋದಿ ಮತ್ತು ಈ ಹರೆಯದಲ್ಲೂ ಅತ್ಯಂತ ಉತ್ಸಾಹದಿಂದ ರಾಜ್ಯ ಪ್ರವಾಸ ಮಾಡಲು ಸಿದ್ಧರಾಗಿರುವ ದೇವೇಗೌಡರು ನಮ್ಮೆಲ್ಲರಿಗೂ ಆದರ್ಶಪ್ರಾಯರು ಎಂದರಲ್ಲದೆ, ಕಾಯಾ, ವಾಚಾ, ಮನಸಾ ಕೆಲಸ ಮಾಡಿ 28ಕ್ಕೆ 28 ಕ್ಷೇತ್ರ ಗೆಲ್ಲೋಣ ಎಂದು ಮನವಿ ಮಾಡಿದರು.

ಕಾಂಗ್ರೆಸ್ ವಲಯದಲ್ಲಿ ನಡುಕ

ಸರಕಾರ ಮಾಡಿದ್ದೇವೆ. ನಾನು ಮುಖಸ್ತುತಿಗೆ ಈ ಮಾತು ಹೇಳುತ್ತಿಲ್ಲ. ಹಿರಿಯರಾದ ಯಡಿಯೂರಪ್ಪ ಮತ್ತು ನಾನು ಜನ ಮೆಚ್ಚುವ ರೀತಿಯಲ್ಲಿ ಕೆಲಸ ಮಾಡಿದ್ದೇವೆ. ಆ 20 ತಿಂಗಳುಗಳ ಆಡಳಿತ ಜನರ ಮನಸ್ಸಿನಲ್ಲಿ ಈಗಲೂ ಇದೆ. ಈ ಲೋಕಸಭೆ ಚುನಾವಣೆಯಲ್ಲಿ ಒಳ್ಳೆಯ ಫಲಿತಾಂಶ ಪಡೆಯುವ ಮೂಲಕ ಅಂತಹ ಮಾದರಿ ಸರಕಾರ ತರಲು ನಾವೆಲ್ಲರೂ ಪ್ರಯತ್ನ ಮಾಡಬೇಕು ಎಂದು ಕುಮಾರಸ್ವಾಮಿ ಹೇಳಿದರು.

ಬಿಜೆಪಿ ಮುಖಂಡರಿಗೆ ನನ್ನ ಮೇಲೆ ಪ್ರೀತಿಯಿದೆ: ಅಂದು–ಇಂದು ಬಿಜೆಪಿಯ ಅನೇಕ ನಾಯಕರು ನನ್ನ ಮೇಲೆ ಅಪಾರವಾದ ಪ್ರೀತಿ–ವಿಶ್ವಾಸ ಇಟ್ಟುಕೊಂಡಿದ್ದಾರೆ. ಮೈತ್ರಿ ಸಂದರ್ಭದಲ್ಲಿ ದೇವೇಗೌಡರಿಗೆ ಕೆಲವರು ತಪ್ಪು ಮಾಹಿತಿ ನೀಡಿದ್ದರಿಂದ ಸಮಸ್ಯೆಗಳು ಆದವು. ಆಗಲೇ ನನಗೆ ಬಿಜೆಪಿಯ ಜತೆ ದೀರ್ಘಾವಧಿ ಮೈತ್ರಿಯ ಉದ್ದೇಶ ಇತ್ತು. ಕಾರಣಾಂತರಗಳಿಂದ ಅದು ಸಾಧ್ಯವಾಗದಿರುವ ಬಗ್ಗೆ ನನಗೆ ಬೇಸರವಿದೆ ಎಂದು ಅವರು ಹೇಳಿದರು.

ವಿಧಿಯಾಟ...!: 2018ರಲ್ಲಿ ಬಿಜೆಪಿ ಹಾಗೂ ಜೆಡಿಎಸ್ ಮೈತ್ರಿ ಆಗಬೇಕಿತ್ತು. ಆಗ ಮೈತ್ರಿ ಆಗಿದ್ದಿದ್ದರೆ ಬಹುಶಃ ಇಂದಿಗೂ ರಾಜ್ಯದಲ್ಲಿ ನಮ್ಮ ಮೈತ್ರಿ ಸರ್ಕಾರವೇ ಇರುತ್ತಿತ್ತು. ವಿಧಿಯಾಟ, ಅವತ್ತು ಏನೋ ನಡೆದು ಹೋಗಿದೆ ಎಂದು ಕುಮಾರಸ್ವಾಮಿ ಅವರು ನುಡಿದರು.

ಕಾಂಗ್ರೆಸ್ ಜನರ ದಿಕ್ಕು ತಪ್ಪಿಸುತ್ತಿದೆ: ರಾಜ್ಯದ ಕಾಂಗ್ರೆಸ್ ಸರ್ಕಾರ ಎಲ್ಲಾ ಕ್ಷೇತ್ರಗಳಲ್ಲಿಯೂ ವಿಫಲವಾಗಿದೆ. ಅದನ್ನೇ ನಾವು ಜನರ ಮನಸ್ಸಿಗೆ ಮುಟ್ಟುವಂತೆ ಹೇಳಬೇಕು. ನಿತ್ಯವೂ ಕೇಂದ್ರ ಸರ್ಕಾರದ ವಿರುದ್ಧ ಕಾಂಗ್ರೆಸ್ ಆರೋಪ ಮಾಡುತ್ತಿದೆ. ಗ್ಯಾರಂಟಿಗಳನ್ನು ಕೊಟ್ಟು ಏನೋ ಸಾಧನೆ ಮಾಡಿದ್ದೇವೆ ಅಂತಾರೆ. ಐದು ವರ್ಷಗಳಲ್ಲಿ ಯಾವ ರಾಜ್ಯಕ್ಕೆ ಎಷ್ಟು ಹಣ ಹಂಚಿಕೆ ಮಾಡಬೇಕು ಎಂದು ಹಣಕಾಸು ಆಯೋಗ ತೀರ್ಮಾನ ಮಾಡಿರುತ್ತದೆ. ಆದರೆ, ಕಾಂಗ್ರೆಸ್ ಸರ್ಕಾರ ಸುಳ್ಳು ಹೇಳಿಕೊಂಡು ಜನರನ್ನು ದಿಕ್ಕು ತಪ್ಪಿಸುತ್ತಿದೆ ಎಂದು ಅವರು ನೇರ ಆರೋಪ ಮಾಡಿದರು.

ನುಡಿದಂತೆ ನಡೆದಿದ್ದೇವೆ ಎಂದು ಪ್ರತಿನಿತ್ಯವೂ ಪುಟಗಟ್ಟಲೆ ಜಾಹೀರಾತು ಕೊಡುತ್ತಿದ್ದಾರೆ. ಜನರು ಬರಗಾಲದಿಂದ ತತ್ತರಿಸಿದ್ದರೆ ಇವರು ಸಪ್ಲಿಮೆಂಟರಿ ಬಜೆಟ್‌ನಲ್ಲಿ ಪ್ರಚಾರಕ್ಕೆಂದು 200 ಕೋಟಿ ರೂಪಾಯಿ ಅನುದಾನಕ್ಕೆ ಒಪ್ಪಿಗೆ ಕೊಟ್ಟು ಕೊಂಡಿದ್ದಾರೆ. ಇದರ ಬಗ್ಗೆ ನಾವು ಜನರಿಗೆ ತಿಳಿಸಬೇಕು. ನಿಮ್ಮ ಹಣವನ್ನು ದುರ್ಬಳಕೆ ಮಾಡುತ್ತಿದ್ದಾರೆಂದು ಜನರಿಗೆ ಹೇಳಬೇಕು. ಹಿಂದೆ ಕಾಂಗ್ರೆಸ್ ನಡಿಗೆ ಕೃಷ್ಣೆಯ ಕಡೆಗೆ ಎಂದು ಪಾದಯಾತ್ರೆ ಮಾಡಿದ್ದರು. ಮೇಕೆದಾಟು ಪಾದಯಾತ್ರೆಯೂ ಆಯಿತು. ಸಿದ್ದರಾಮಯ್ಯನವರು ಆ ಯೋಜನೆಗಳಿಗೆ ಎಷ್ಟು ಹಣ ಕೊಟ್ಟರು? ಎಂದು ಕುಮಾರಸ್ವಾಮಿ ಕಿಡಿಕಾರಿದರು.

ಕನ್ನಡಿಗರಿಗೆ ಅನ್ಯಾಯ ಅಂತಾರೆ, ಪಾಪ ನಿನ್ನೆ ಕಾಂಗ್ರೆಸ್ ಬಾವುಟ ಬಿಟ್ಟು ತಲೆಗೆಲ್ಲ ಕನ್ನಡ ಬಾವುಟ ಕಟ್ಟಿಕೊಂಡು ಹೋಗಿದ್ದನ್ನು ನೋಡಿದ್ದೇವೆ. ಕನ್ನಡಕ್ಕೆ ನಿರಂತರವಾಗಿ ಅನ್ಯಾಯ ಮಾಡಿದ ಇವರಿಗೆ, ಕರ್ನಾಟಕದ ಬಗ್ಗೆ ಮಲತಾಯಿ ಧೋರಣೆ ಅನುಸರಿಸಿದ ಇವರಿಗೆ ಕನ್ನಡತನ ಎನ್ನುವುದು ಈಗ ನೆನಪಾಗಿದೆ ಎಂದು ಯಾರ ಹೆಸರನ್ನು ಹೇಳದೆಯೇ ಕಾಂಗ್ರೆಸ್ ನಾಯಕರನ್ನು ತರಾಟೆಗೆ ತೆಗೆದುಕೊಂಡರು.

ಎಚ್.ಡಿ.ದೇವೇಗೌಡರು ಐಟಿ ಅಧಿಕಾರಿಯೆ?: ಡಿ.ಕೆ.ಶಿವಕುಮಾರ್ ಪ್ರಶ್ನೆ

ಬೆಂಗಳೂರು: ಎಚ್.ಡಿ. ದೇವೇಗೌಡರು ಆದಾಯ ತೆರಿಗೆ (ಐ.ಟಿ) ಇಲಾಖೆ ಅಧಿಕಾರಿಯೇ ಎಂದು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಪ್ರಶ್ನಿಸಿದರು.

ಕರ್ನಾಟಕದಿಂದ ಕಾಂಗ್ರೆಸ್ ಹೈಕಮಾಂಡ್‌ಗೆ ಹಣ ರವಾನೆಯಾಗುತ್ತಿದೆ ಎಂಬ ದೇವೇಗೌಡರ ಆರೋಪ ಕುರಿತು ಶುಕ್ರವಾರ ಮಾಧ್ಯಮಗಳಿಗೆ ಪ್ರತಿಕ್ರಿಯಿಸಿದ ಅವರು, 'ಅವರ ಆರೋಪ ನಿರಾಧಾರ. ರಾಜಕೀಯಕ್ಕಾಗಿ ಆರೋಪ ಮಾಡಬೇಕೆಂದು ಈ ರೀತಿ ಆಪಾದನೆ ಮಾಡಿದ್ದಾರೆ' ಎಂದರು.

1,823 ಕೋಟಿ ಪಾವತಿಸುವಂತೆ ಆದಾಯ ತೆರಿಗೆ ಇಲಾಖೆ ಎಐಸಿಸಿಗೆ ನೋಟಿಸ್ ನೀಡಿದೆ. ವಿರೋಧ ಪಕ್ಷಗಳ ಮೇಲೆ ದಾಳಿ ನಡೆಯುತ್ತಿದೆ. ನಾವು ಯಾರಿಗೂ ಹಣ ಕಟ್ಟುವ ಅಗತ್ಯವಿಲ್ಲ. ನಮ್ಮ ಖಾತೆಗಳನ್ನು ಮುಟ್ಟುಗೋಲು ಹಾಕಿಕೊಂಡು ಅದರಲ್ಲಿದ್ದ ಹಣವನ್ನು ಕದ್ದಿದ್ದಾರೆ. ನಮ್ಮ ಪಕ್ಷ 20ಕ್ಕೂ ಹೆಚ್ಚು ಕ್ಷೇತ್ರ ಗೆಲ್ಲಲಿದೆ ಎಂಬುದು ಅವರಿಗೆ ಅರಿವಾಗಿದೆ. ಹೀಗಾಗಿ ಅಸೂಯೆಯಿಂದ ನಮ್ಮ ಮೇಲೆ ಆರೋಪ ಮಾಡುತ್ತಿದ್ದಾರೆ ಎಂದು ವಾಗ್ದಾಳಿ ನಡೆಸಿದರು. ತಮ್ಮದೇ ಪಕ್ಷ ಇಟ್ಟುಕೊಂಡು ತಮ್ಮ ಕುಟುಂಬದವರನ್ನು ಬೇರೆ ಪಕ್ಷದಿಂದ ಕಣಕ್ಕಿಳಿಸುತ್ತಾರಾ? ಜೆಡಿಎಸ್ ಅಸ್ತಿತ್ವದಲ್ಲಿಲ್ಲ ಎಂಬುದನ್ನು ಅವರೇ ತೋರಿಸಿದ್ದಾರೆ. ಆ ಪಕ್ಷ ಇರಬೇಕು, ಪ್ರಬಲ ವಿರೋಧ ಪಕ್ಷವಾಗಬೇಕು ಎಂಬುದು ನಮ್ಮ ಆಸೆ. ಆದರೆ ಅವರೇ ತಮ್ಮ ಪಕ್ಷವನ್ನು ಬಿಜೆಪಿ ಜತೆ ವಿಲೀನ ಮಾಡಿಕೊಳ್ಳುತ್ತಿದ್ದಾರೆ. ದೇಶದ ಪ್ರಧಾನಿಯಾದವರು, ಎರಡು ಬಾರಿ ಮುಖ್ಯಮಂತ್ರಿಯಾದವರು ಇರುವ ಪಕ್ಷವನ್ನು ವಿಲೀನ ಮಾಡುತ್ತಿರುವುದನ್ನು ನೋಡಿ ಬೇಸರವಾಗುತ್ತಿದೆ ಎಂದು ಶಿವಕುಮಾರ್ ಹೇಳಿದರು.

ವಿವಿಧ ಕ್ಷೇತ್ರದ 30 ಮಂದಿ ಮಹಿಳಾ ಸಾಧಕರಿಗೆ ಚಿತ್ರನಟಿ ರೂಪ ಅಯ್ಯರ್ ಸನ್ಮಾನ



ವಿಶ್ವ ಮಹಿಳಾ ದಿನಾಚರಣೆ ಅಂಗವಾಗಿ ವಿವಿಧ ಕ್ಷೇತ್ರದ 30 ಮಹಿಳಾ ಸಾಧಕರಿಗೆ ಸಿನಿಮಾ ನಟಿ ರೂಪ ಅಯ್ಯರ್ ಶುಕ್ರವಾರ ಪ್ರಶಸ್ತಿ ಪ್ರದಾನ ಮಾಡಿದರು.

ಮೈಸೂರು, ಮಾ.29(ಎಸ್‌ಪಿಎನ್)– ವಿಶ್ವ ಮಹಿಳಾ ದಿನಾಚರಣೆ ಅಂಗವಾಗಿ ಸಾಮಾಜಿಕ, ಸಾಂಸ್ಕೃತಿಕ, ಆರೋಗ್ಯ, ಶಿಕ್ಷಣ ಹಾಗೂ ಮಾನವಿಕ ಕಲಾ ವಿಭಾಗ ಸೇರಿದಂತೆ ವಿವಿಧ ಕ್ಷೇತ್ರದ 30 ಮಹಿಳಾ ಸಾಧಕರಿಗೆ ಸಿನಿಮಾ ನಟಿ ರೂಪ ಅಯ್ಯರ್ ಶುಕ್ರವಾರ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಮೈಸೂರು ವಿಶ್ವೇಶ್ವರ ನಗರದಲ್ಲಿರುವ ಖಾಸಗಿ ಕಲ್ಯಾಣ ಮಂಟಪದಲ್ಲಿ ಮೈಸೂರು ಜಿಲ್ಲಾ ಬ್ರಾಹ್ಮಣ ಯುವ ವೇದಿಕೆ ಹಾಗೂ ವಿಪ್ರ ಸಹಾಯವಾಣಿ ಸಹಯೋಗದೊಂದಿಗೆ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಸನ್ಮಾನಿಸಲಾಯಿತು. ವಿಪ್ರ ಮಹಿಳಾ ರತ್ನ ಪ್ರಶಸ್ತಿಗೆ ಭಾಜನರಾದ ಲೇಖಕಿ ಪುಷ್ಪ ಅಯ್ಯಂಗಾರ್ (ಸಾಹಿತ್ಯ), ಡಾ.ಸಿ.ಕೆ.ವನಮಾಲ (ಶಿಕ್ಷಣ), ಡಾ.ರೇಖಾ ಮನಃಶಾಂತಿ (ವೈದ್ಯಕೀಯ), ಜಯಶ್ರೀ ಶಿವರಾಂ (ಸಾಮಾಜಿಕ), ಎಚ್.ಎ.ಸುಮತಿ (ಶಿಕ್ಷಣ), ಯದುಗಿರಿ (ಸಾಂಸ್ಕೃತಿಕ), ಅನುಸೂಯ ಎಸ್ ರಾಜೀವ್ (ಮಾಧ್ಯಮ), ವಿದುಷಿ ಶ್ರೀವಾಣಿ (ಸಂಗೀತ), ಗಾಯಿತ್ರಿ ಸುಂದರೇಶ್ (ಸಾಹಿತ್ಯ), ಮ.ನಾ.ಲತಾ ಮೋಹನ್ (ಸಂಘಟನೆ), ಎಚ್.ಎಸ್.ನಾಗರತ್ನ (ಸಾಮಾಜಿಕ), ಚೂಡಾ ರತ್ನಮ್ಮ (ಸಾಂಸ್ಕೃತಿಕ), ತುಷಾರ್ ಎನ್ ಭಾರದ್ವಾಜ್ (ಸಾಂಸ್ಕೃತಿಕ), ಲತಾ ಹೆಗಡೆ (ಸಾಹಿತ್ಯ), ಎನ್.ಆರ್. ರೂಪಶ್ರೀ (ಶಿಕ್ಷಣ), ಪಾರ್ವತಿ ಎಸ್.ಕಾಶಿಕರ್ (ಸಾಹಿತ್ಯ), ಎಸ್.ಜಿ.ವಿಜಯ(ಕ್ರೀಡಾ), ವಿದುಷಿ ಅನುಸೂಯ ಸುದರ್ಶನ್ (ಸಂಗೀತ), ಪ್ರೀತಿ ಅಪ್ಪಯ್ಯ (ಕ್ರೀಡಾ), ಬಿ.ಕೆ.ಪರಿಮಿತಿ(ಕಲೆ), ಡಾ.ಸಂಜನಾ ಕುಮಾರ್ (ವೈದ್ಯಕೀಯ), ಆರ್.ಅಕ್ಷತಾ, (ಕಲಾ), ವಿ.ಮಾಲಿನಿ (ಸಂಗೀತ), ಜಿ. ಸುಮಾ (ಪರಿಸರ), ಪಿ.ಎಸ್.ಲಕ್ಷ್ಮಿ (ವಿಜ್ಞಾನ), ಎಚ್.ಆರ್. ಲಕ್ಷ್ಮೀಶ್ರೀ(ಕಲೆ), ವಿದುಷಿ ಸೌಮ್ಯ ಎಸ್.ರಾಣಿ. (ನೃತ್ಯ), ಪಿ.ಆರ್.ಸರ್ವ ಮಂಗಳ(ಸಾಹಿತ್ಯ), ಪಿ.ಎನ್.ಶೋಭಾ, ಎಸ್.ನೇತ್ರ(ಭರತ ನಾಟ್ಯ) ಅವರನ್ನು ಸನ್ಮಾನಿಸಲಾಯಿತು.

ನಂತರ ಮಾತನಾಡಿದ ನಟಿ ರೂಪಾ ಅಯ್ಯರ್, ಎಲ್ಲಾ ರಂಗಗಳಲ್ಲೂ ಮಹಿಳೆ ಗುರುತಿಸಿಕೊಳ್ಳುತ್ತಿದ್ದಾರೆ. ಮಹಿಳೆ ತನ್ನ ನಿರಂತರ ಶ್ರಮ, ಶ್ರದ್ಧೆಯ ಫಲವಾಗಿ ಆರ್ಥಿಕ, ಸಾಮಾಜಿಕ, ಸಾಂಸ್ಕೃತಿಕ, ಸಾಹಿತ್ಯ, ಶೈಕ್ಷಣಿಕ ರಂಗದಲ್ಲಿ ಪುರಿಷರಿಗೂ ಸರಿಸಮಾನನಾಗಿ ಗುರುತಿಸಿಕೊಳ್ಳುತ್ತಿದ್ದಾಳೆ. ಮನೆಯವರಿಗೂ ಹೇಳಿಕೊಳ್ಳಲಾಗದ ಸಂಕಟಗಳ ನಡುವೆಯೂ ಯಶಸ್ಸಿನ ಹೆಜ್ಜೆ ಇಡುವುದು ಸಾಮಾನ್ಯ ಸಂಗತಿಯಲ್ಲ ಎಂದರು.

ಈ ವೇಳೆ ಮೈಸೂರು ನಗರ ಮತ್ತು ಜಿಲ್ಲಾ ಬ್ರಾಹ್ಮಣ ಸಂಘದ ಅಧ್ಯಕ್ಷರಾದ ಡಿ.ಟಿ.ಪ್ರಕಾಶ್, ವಿಪ್ರ ಮುಖಂಡ ಕೆ.ರಘುರಾಂ ವಾಜಪೇಯಿ, ಉದ್ಯಮಿ ಜಾನ್ಹವಿ ಮೂರ್ತಿ, ಹೊಯ್ಸಳ ಕರ್ನಾಟಕ ಸಂಘದ ಅಧ್ಯಕ್ಷ ಕೆ.ಆರ್. ಸತ್ಯನಾರಾಯಣ್, ವಿಪ್ರ ಮಹಿಳಾ ಸಂಗಮ ಅಧ್ಯಕ್ಷೆ ಲಕ್ಷ್ಮಿದೇವಿ, ಕಿರುತರೆ ಕಲಾವಿದ ನಾರಾಯಣಸ್ವಾಮಿ, ಲೇಖಕ ಅನಿಲ್ ಕುಮಾರ್, ವಿಪ್ರ ಯುವ ಮುಖಂಡರಾದ ವಿಕ್ರಮ ಅಯ್ಯಂಗಾರ್, ಅಜಯ್ ಶಾಸ್ತ್ರಿ ಸಚೀಂದ್ರ, ಚಕ್ರಪಾಣಿ, ನಾಗಶ್ರೀ, ಲತಾ ಬಾಲಕೃಷ್ಣ ರಂಗನಾಥ್, ಮಹೇಶ್ ಕುಮಾರ್, ಮಿರ್ಲೆ ಮನೀಶ್ ಹಾಗೂ ಇನ್ನಿತರರಿದ್ದರು.

ಏ.16ರಿಂದ ಬೇಸಿಗೆ ಶಿಬಿರ

ಮೈಸೂರು,ಮಾ.29–ಯುವ ಸಬಲೀಕರಣ, ಕ್ರೀಡಾ ಇಲಾಖೆ ಮತ್ತು ಜನರಲ್ ತಿಮ್ಮಯ್ಯ ರಾಷ್ಟ್ರೀಯ ಸಾಹಸ ಆಕಾಡೆಮಿ ವತಿಯಿಂದ ಏ.16ರಿಂದ ಮೇ 16ರವರೆಗೆ 10ರಿಂದ 17 ವರ್ಷ ವಯೋಮಿತಿಯ ಶಾಲಾ–ಕಾಲೇಜಿನ ವಿದ್ಯಾರ್ಥಿಗಳಿಗೆ ಬೇಸಿಗೆ ತರಬೇತಿ ಶಿಬಿರವನ್ನು ಆಯೋಜಿಸಲಾಗಿದೆ. ಬೇಸಿಗೆ ಶಿಬಿರದಲ್ಲಿ ಭಾಗವಹಿಸಲು ಆಸಕ್ತಿ ಇರುವ ಶಾಲಾ–ಕಾಲೇಜು ವಿದ್ಯಾರ್ಥಿಗಳು www.gethnaa.arg ವೆಬ್‌ಸೈಟ್‌ನಲ್ಲಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬಹುದು. ಹೆಚ್ಚಿನ ಮಾಹಿತಿಗೆ ನಜರ್‌ಬಾದ್‌ನಲ್ಲಿರುವ ಚಾಮುಂಡಿ ವಿಹಾರ ಕ್ರೀಡಾಂಗಣದಲ್ಲಿನ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರ ದೂ.ಸಂ: 0821–2564179 ಅಥವಾ ಬೆಂಗಳೂರಿನ ನೃಪತುಂಗ ರಸ್ತೆಯಲ್ಲಿರುವ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ದೂ.ಸಂ: 18004251448 ಅನ್ನು ಸಂಪರ್ಕಿಸಬಹುದು ಎಂದು ಮೈಸೂರಿನ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಭಾಸ್ಕರ್ ನಾಯಕ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಮೈಸೂರು ವಕೀಲರ ಗೃಹ ನಿರ್ಮಾಣ ಸಹಕಾರ ಸಂಘದ ಅಧ್ಯಕ್ಷರಾಗಿ ಲೋಕೇಶ್ ಗೌಡ, ಉಪಾಧ್ಯಕ್ಷರಾಗಿ ಗೋಪಾಲ್‌ಗೌಡ ಅವಿರೋಧವಾಗಿ ಆಯ್ಕೆಯಾದರು. ಮಾಜಿ ಅಧ್ಯಕ್ಷ ಶಂಭುಗೌಡ, ನಿರ್ದೇಶಕರುಗಳಾದ ತೇಜಸ್ವಿ, ಪುರುಷೋತ್ತಮ್, ರಘು, ಪ್ರಸನ್ನ ಕುಮಾರ್ ಇತರರು ಈ ವೇಳೆ ಉಪಸ್ಥಿತರಿದ್ದರು. ನೂತನ ಅಧ್ಯಕ್ಷ, ಉಪಾಧ್ಯಕ್ಷರನ್ನು ಮೈಸೂರು ವಕೀಲರ ಸಂಘದ ಮಾಜಿ ಅಧ್ಯಕ್ಷ ಜಿ.ವಿ.ರಾಮಮೂರ್ತಿ ಅಭಿನಂದಿಸಿದ್ದಾರೆ.



ಹುಣಸೂರು ತಾಲೂಕಿನ ಚಿಕ್ಕಬೀಚನಹಳ್ಳಿ ಗ್ರಾಮದಲ್ಲಿ ಮಾರಿಹಬ್ಬದ ಪ್ರಯುಕ್ತ ಏರ್ಪಡಿಸಿದ್ದ ಕುರುಕ್ಷೇತ್ರ ಅಥವಾ ಧರ್ಮರಾಜ್ಯ ಸ್ಥಾಪನೆ ಪೌರಾಣಿಕ ನಾಟಕದಲ್ಲಿ ಮಾಜಿ ಗ್ರಾಪಂ ಸದಸ್ಯ ಹಾಗೂ ರಂಗಭೂಮಿ ಕಲಾವಿದ ಹುಯಿಲಾಳು ರಾಮಸ್ವಾಮಿ ಹಾಗೂ ಬೆಳವಾಡಿ ಗ್ರಾಪಂ ಉಪಾಧ್ಯಕ್ಷರೂ ಆದ ಜೆಡಿಎಸ್ ಮುಖಂಡ ಶಿವಕುಮಾರಸ್ವಾಮಿ ಅವರನ್ನು ಅಭಿನಂದಿಸಲಾಯಿತು. ಈ ವೇಳೆ ಹುಯಿಲಾಳು ಮಂಜುನಾಥ್‌ಪ್ರಸಾದ್, ಹಳೇಬೀಡು ರಘು ಉಪಸ್ಥಿತರಿದ್ದರು.

ಧ್ಯಾನದ ಪರಿಚಯ ಕಾರ್ಯಾಗಾರ

ಮೈಸೂರು: ಮೈಸೂರಿನ ಆರ್ಟ್ ಆಫ್ ಲಿವಿಂಗ್ ವತಿಯಿಂದ ಮಾ.31 ರಂದು ಸಂಜೆ 5.30 ರಿಂದ 6.30 ರವರೆಗೆ ಧ್ಯಾನದ ಪರಿಚಯ ಕಾರ್ಯಾಗಾರ ಹಮ್ಮಿಕೊಳ್ಳಲಾಗಿದೆ. ಏ.2 ರಿಂದ 7 ರವರೆಗೆ ಆನಂದದ ಅನುಭೂತಿ ಶಿಬಿರ ಹಮ್ಮಿಕೊಳ್ಳಲಾಗಿದ್ದು, ಶಿಬಿರವು ಬೆಳಗ್ಗೆ 6 ರಿಂದ 8 ಮತ್ತು ಸಂಜೆ 6 ರಿಂದ 8 ರವರೆಗೆ #8, 2ನೇ ಮಹಡಿ, ನಳಪಾಕ್ ಪಕ್ಕ, ವಿಶ್ವಮಾನವ ಡಬಲ್ ರೋಡ್, ಸರಸ್ವತಿಪುರಂ ಇಲ್ಲಿ ನಡೆಯಲಿದೆ. ಮಾಹಿತಿಗೆ ಮೊ.7892776706 ಸಂಪರ್ಕಿಸಿ.

ಒಂದನೇ ಪುಟದಿಂದ

ಬಿಜೆಪಿ ಹೆಚ್ಚು ಸ್ಥಾನ ಗೆಲ್ಲುವುದು ಕಷ್ಟ

ವಿಧಾನಸಭಾ ಚುನಾ ವಣೆಯಲ್ಲಿ ಬಿಜೆಪಿ ಸೋಲುಂಡಿತು. ಆದರೆ ಕಾಂಗ್ರೆಸ್ ಸರ್ಕಾರಕ್ಕೆ ಅಧಿಕಾರಿಗಳ ಮೇಲೆ ಸಂಪೂರ್ಣ ಹಿಡಿತವಿದೆ. ಆದ ಕಾರಣ ಬಿಜೆಪಿ ಹೆಚ್ಚು ಸ್ಥಾನ ಗೆಲ್ಲುವುದು ಕಷ್ಟ ಎಂದು ಡಾ.ಭೈರಪ್ಪ ಪುನರುಚ್ಚರಿಸಿದರು.

ಈ ಬಾರಿಯ ಚುನಾವಣೆಯಲ್ಲಿ ಮೋದಿ ಅಲೆ ಕಡಿಮೆ ಆಗಿದೆಯೇ ಎಂಬ ಪ್ರಶ್ನೆಗೆ ನನಗೆ ಗೊತ್ತಿಲ್ಲ ಎಂದು ತಿಳಿಸಿದ ಡಾ.ಭೈರಪ್ಪ, ನಾನು ಹೊರಗೆ ಹೋಗುತ್ತಿಲ್ಲ. ಬಹಳಷ್ಟು ವಿಚಾರಗಳನ್ನು ದಿನಪತ್ರಿಕೆಗಳನ್ನು ನೋಡಿ ತಿಳಿದುಕೊಳ್ಳುತ್ತಿದ್ದೇನೆ ಎಂದರು.

ಪ್ರಧಾನಮಂತ್ರಿ ನರೇಂದ್ರ ಮೋದಿ ದೇಶದ ಪ್ರಗತಿಗಾಗಿ ಶ್ರಮಿಸುತ್ತಿದ್ದಾರೆ. ಅವರು ಗುಜರಾತ್‌ನವರು ಎಂಬುದು ಇದಕ್ಕೆ ಕಾರಣ. ಏಕೆಂದರೆ ಗುಜರಾತ್‌ನವರು ಬಹಳ ಚುರುಕು ಹಾಗೂ ಪ್ರಾಮಾಣಿಕರಾಗಿ ಕೆಲಸ ಮಾಡುತ್ತಾರೆ. ಆದರೆ ನಮ್ಮ ಅಂಗಡಿ ವ್ಯಾಪರಿಗಳಲ್ಲಿ ಪೂರ್ಣ ಪ್ರಮಾಣಿಕರು ಎಂದು ಹೇಳಲು ಸಾಧ್ಯವಿಲ್ಲ. ಗುಜರಾತ್‌ನಲ್ಲಿ 6 ವರ್ಷದ ಮಗು ಕೈಯ್ಯಲ್ಲಿ ಹಣ ಕೊಟ್ಟು ಕಳುಹಿಸಿದ್ರೂ ಅಲ್ಲಿನ ವ್ಯಾಪಾರಸ್ಥರು ಪ್ರಮಾಣಿಕವಾಗಿ ಚಿಲ್ಲರೆ ಕೊಟ್ಟು ಕಳುಹಿಸುತ್ತಾರೆ. ಗುಜರಾತಿಗಳು ಸುಳ್ಳು ಹೇಳುವುದಕ್ಕೆ ಹೋಗುವುದಿಲ್ಲ. ಆ ನೆಲದ ಗುಣ ನರೇಂದ್ರ ಮೋದಿಯಲ್ಲಿದೆ ಎಂದು ಹೇಳಿದರು.

ಗುಜರಾತ್‌ನಲ್ಲಿ ಮುಖ್ಯಮಂತ್ರಿ ಆಗಿದ್ದಾಗ ನರೇಂದ್ರ ಮೋದಿ 23 ಲಕ್ಷ ಹಣವನ್ನು ಬಡ ಹೆಣ್ಣು ಮಕ್ಕಳಿಗೆ ನೀಡಿದ್ದರು. ಇದೇ ಮಾದರಿಯ ಹಲವು ಪ್ರಗತಿಯನ್ನು ಮೋದಿ ಕೇಂದ್ರ ಸರ್ಕಾರದಲ್ಲೂ ಅಳವಡಿಸಿಕೊಂಡಿದ್ದರು. ಇಂತಹ ಜನಪರ ಕಾರ್ಯ ಮಾಡಿರುವ ನರೇಂದ್ರ ಮೋದಿ ಮತ್ತೆ ಪ್ರಧಾನಮಂತ್ರಿ ಆಗುತ್ತಾರೆ. ಇದರಲ್ಲಿ ಯಾವುದೇ ಅನುಮಾನವಿಲ್ಲ ಎಂದು ಡಾ.ಭೈರಪ್ಪ ವಿಶ್ವಾಸ ವ್ಯಕ್ತಪಡಿಸಿದರು. ಶಾಸಕ ಟಿ.ಎಸ್.ಶ್ರೀವತ್ಸ, ಮಾಜಿ ಶಾಸಕ ಸಿದ್ದರಾಜು, ಮಾಜಿ ಕಾರ್ಪೊರೇಟರ್ ಎಂ.ಜೆ. ಮಹೇಶ್ ಕುಮಾರ್ ಸೇರಿದಂತೆ ಇತರರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ಪ್ರತಾಪ್ ಸಿಂಹ ಫೈಟಿಂಗ್ ಸ್ಪೀರಿಟ್ ಇರುವ ಡೈನಾಮಿಕ್ ಮನುಷ್ಯ

ಹಾಲಿ ಸಂಸದ ಪ್ರತಾಪ್ ಸಿಂಹ ಫೈಟಿಂಗ್ ಸ್ಪಿರಿಟ್ ಇರುವ ಡೈನಾಮಿಕ್ ಮನುಷ್ಯ. ಸಂಸದನಾಗಿ ಹತ್ತು ವರ್ಷ ಒಳ್ಳೆಯ ಕೆಲಸ ಮಾಡಿದ್ದಾರೆ. ಸಂಸದನಲ್ಲದಿದ್ದರೂ ಮುಂದೆ ಬೇರೆ ಕೆಲಸ ಮಾಡಲು ಪ್ರತಾಪ್ ಸಿಂಹಗೆ ಬಹಳಷ್ಟು ಅವಕಾಶಗಳಿವೆ ಎಂದರು. ಕೊಡಗಿನಲ್ಲಿ ಟಿಪ್ಪು ಜಯಂತಿ ಆಚರಣೆಯನ್ನು ತಡೆಯುವುದು ಸೇರಿದಂತೆ ಬಹಳಷ್ಟು ಒಳ್ಳೆಯ ಕೆಲಸ ಮಾಡಿದ್ದಾರೆ ಎಂದರು.

ಯದುವೀರ್ ರಾಜಕಾರಣಕ್ಕೆ ಬಂದಿರುವುದು ಒಳ್ಳೆಯ ಬೆಳವಣಿಗೆ. ಇವರು ಕೂಡ ವಿದೇಶದಲ್ಲಿ ಉನ್ನತ ವ್ಯಾಸಂಗ ಮಾಡಿದ್ದಾರೆ. ಉತ್ತರ ಭಾರತದ ರಾಜಮನೆತನದ ಜ್ಯೋತಿರಾಧಿತ್ಯಾ ಸಿಂಧಿಯಾರಂತೆ ರಾಜಕೀಯವಾಗಿ ಬೆಳೆಯುತ್ತಾರೆ. ಅವರಂತೆ ಯದುವೀರ್ ಕೂಡ ಉತ್ತಮವಾಗಿ ಜನಪರ ಕೆಲಸ ಮಾಡುತ್ತಾರೆ ಎಂದು ಡಾ.ಭೈರಪ್ಪ ವಿಶ್ವಾಸ ವ್ಯಕ್ತಪಡಿಸಿದರು.

ಎಡಪಂಥೀಯ ಸಾಹಿತಿಗಳು ಡಬಲ್ ಗೇಮ್ ಆಡ್ತಾರೆ

ಎಡಪಂಥೀಯ ಸಾಹಿತಿಗಳು ಡಬಲ್ ಗೇಮ್ ಆಡುತ್ತಿದ್ದಾರೆ ಎಂದು ಡಾ.ಭೈರಪ್ಪ ಇದೇ ವೇಳೆ ಆಕ್ರೋಶ ವ್ಯಕ್ತಪಡಿಸಿದರು. ಎಡಪಂಥೀಯ ಸಾಹಿತಿಗಳದ್ದು ಡಬಲ್ ಗೇಮ್ ಮನಸ್ಥಿತಿ. ಇದು ಬಹಳಷ್ಟು ಬಾರಿ ಸಾಬೀತಾಗಿದೆ. ತತ್ವ ಸಿದ್ಧಾಂತಗಳ ವಿಚಾರದಲ್ಲಿ ಎಡಪಂಥೀಯ ಸಾಹಿತಿಗಳು ದ್ವಿಮುಖ ನಿಲುವು ಹೊಂದಿದ್ದಾರೆ ಎಂದು ಡಾ.ಭೈರಪ್ಪ ಕಿಡಿಕಾರಿದರು. ಪಶ್ಚಿಮಬಂಗಾಳದ ಮುಖ್ಯಮಂತ್ರಿಯಾಗಿ ಜ್ಯೋತಿಬಸು 23 ವರ್ಷ ಅಧಿಕಾರ ನಡೆಸಿದರು. ಆದರೆ ಅವರ ಮಗ ವಿದೇಶಿ ಕಂಪನಿಗಳ ವಸ್ತುಗಳನ್ನು ತಂದು ಇಲ್ಲಿ ಮಾರಾಟ ಮಾಡಿ ಕ್ಯಾಪಿಲಿಸ್ಟ್ ಆಗಿದ್ದರು. ಇದು ಸಮಾಜವಾದವೇ ಎಂದು ಪ್ರಶ್ನಿಸಿದ ಡಾ.ಭೈರಪ್ಪ, ಈಗಿನ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಕೂಡ ಅದೇ ಹಾದಿಯಲ್ಲಿ ನಡೆಯುತ್ತಿದ್ದಾರೆ ಎಂದು ಆರೋಪಿಸಿದರು. ಪಶ್ಚಿಮ ಬಂಗಾಳದಲ್ಲಿರುವಷ್ಟು ಬಡತನ ಬೇರೆ ಯಾವ ರಾಜ್ಯದಲ್ಲೂ ಇಲ್ಲ. ಲೆಫ್ಟಿಸಂ ಎನ್ನುವುದು ಬರೀ ಮೋಸ ಮಾಡುವ ಕೆಲಸ. ಈ ಮೂಲಕ ಲೆಫ್ಟಿಸ್ಟ್‌ಗಳೆಲ್ಲಾ ಅಪ್ರಾಮಾಣಿಕರು ಎಂದು ಡಾ.ಭೈರಪ್ಪ ಟೀಕಾ ಪ್ರಹಾರ ನಡೆಸಿದರು.

ಮೈಸೂರಿನ ತಾಯಿ–ಮಗನ ಘೋರ ಹತ್ಯೆ

ಸಿದ್ದಯ್ಯ ಎಂಬುವರು ತಮ್ಮ ಪುತ್ರಿ ಶೃತಿ ಮತ್ತು ಮೊಮ್ಮಗ ರೋಹನ್ 2023ರ ಮಾ.12ರಂದು ಮನೆಯಿಂದ ಹೊರ ಹೋದವರು ಈವರೆವಿಗೂ ಹಿಂತಿರುಗಿಲ್ಲ. ಪತಿಯನ್ನು ತೊರೆದಿದ್ದ ಪುತ್ರಿ ಶೃತಿ ಫೇಸ್‌ಬುಕ್ ಮೂಲಕ ಸಾಗರ್ ಎಂಬಾತನನ್ನು ಪರಿಚಯಿಸಿಕೊಂಡು ಅವರಿಬ್ಬರೂ ಪ್ರೀತಿಸುತ್ತಿದ್ದರು ಎಂದು ಮೈಸೂರಿನ ಉದಯಗಿರಿ ಠಾಣೆಯಲ್ಲಿ ನಾಪತ್ತೆ ಪ್ರಕರಣ ದಾಖಲಿಸಿದ್ದರು. ಈ ವೇಳೆ ಉದಯಗಿರಿ ಇನ್ಸ್‌ಪೆಕ್ಟರ್ ಸುಧಾಕರ್ ಅವರು ಸಿದ್ದಯ್ಯ ಅವರಿಂದ ಹೆಚ್ಚಿನ ವಿವರಗಳನ್ನು ಕೇಳಿದಾಗ 2023ರ ಮಾ.12ರಂದು ಮನೆ ಬಿಟ್ಟು ಹೋಗಿದ್ದ ಶೃತಿ, ತಾನು ವಿಜಯಪುರ ತಲುಪಿರುವುದಾಗಿ ಕರೆ ಮಾಡಿ ತಿಳಿಸಿದ್ದಳು. ಆಕೆ ಸಾಗರ್‌ನನ್ನು ಭೇಟಿ ಮಾಡಲೆಂದೇ ಮಗನೊಂದಿಗೆ ಹೋಗಿದ್ದಳು ಎಂಬ ವಿಚಾರವನ್ನು ತಿಳಿಸಿದ್ದರು. ಈ ಹಿನ್ನೆಲೆಯಲ್ಲಿ ಸುಧಾಕರ್ ಅವರು ಬಿಜಾಪುರದ ಸಾಗರ್ ಲಮ್ಮಾಣಿಯನ್ನು ಕರೆಸಿ ವಿಚಾರಣೆ ನಡೆಸಿದರಾದರೂ ಆತ, ಅಂದು ಶೃತಿ ತನ್ನನ್ನು ಭೇಟಿ ಮಾಡಿದ ನಂತರ ಹೊರಟು ಹೋದಳು. ಎಲ್ಲಿಗೆ ಹೋದಳು ಎಂಬುದು ಗೊತ್ತಿಲ್ಲ ಎಂದಷ್ಟೇ ಹೇಳಿದ.

ಆದರೆ, ಇನ್ಸ್‌ಪೆಕ್ಟರ್ ಸುಧಾಕರ್, ವಿಜಯಪುರ ಜಿಲ್ಲೆಯ ಪೊಲೀಸ್ ಠಾಣೆಗಳಲ್ಲಿ 2023ರ ಮಾರ್ಚ್ 12ರಿಂದ ಅಪರಿಚಿತ ಶವಗಳು ಪತ್ತೆಯಾದ ಪ್ರಕರಣ ದಾಖಲಾಗಿದೆಯೇ? ಎಂಬುದರ ಬಗ್ಗೆ ಬಿಜಾಪುರ ಜಿಲ್ಲಾ ಪೊಲೀಸರಿಂದ ಮಾಹಿತಿ ಕೋರಿದ್ದರು. 2023ರ ಮಾ.13ರಂದು ಬಿಜಾಪುರ ಗ್ರಾಮಾಂತರ ಠಾಣಾ ವ್ಯಾಪ್ತಿಯಲ್ಲಿ ಮಹಿಳೆ ಮತ್ತು ಬಾಲಕನ ಶವಗಳು ಪತ್ತೆಯಾಗಿದ್ದು, ಕೊಲೆ ಪ್ರಕರಣ ದಾಖಲಾಗಿದೆ. ಆದರೆ ಅವರು ಯಾರು ಎಂಬುದು ಪತ್ತೆಯಾಗದೇ ತನಿಖೆ ಸ್ಥಗಿತಗೊಂಡಿದೆ ಎಂಬ ವಿವರ ಸುಧಾಕರ್ ಅವರಿಗೆ ತಲುಪಿತ್ತು. ಅಲ್ಲದೇ ಮಹಿಳೆ ಮತ್ತು ಬಾಲಕ ಧರಿಸಿದ್ದ ಬಟ್ಟೆ ಹಾಗೂ ಅವರ ಚಹರೆ ಗಮನಿಸಿದಾಗ ವರ್ಷದ ಹಿಂದೆ ಹತ್ಯೆಗೀಡಾದವರು ಶೃತಿ ಮತ್ತು ಆಕೆಯ ಮಗ ರೋಹನ್ ಇರಬಹುದು ಎಂಬ ನಿರ್ಧಾರಕ್ಕೆ ಬಂದ ಸುಧಾಕರ್, ತಮ್ಮ ಬಳಿ ಇದ್ದ ಮಾಹಿತಿಗಳನ್ನು ಬಿಜಾಪುರ ಠಾಣೆ ಪೊಲೀಸರಿಗೆ ಒದಗಿಸಿದ್ದರು. ತಕ್ಷಣವೇ ಕಾರ್ಯಪ್ರವೃತ್ತರಾದ ಬಿಜಾಪುರ ಗ್ರಾಮಾಂತರ ಠಾಣೆ ಪೊಲೀಸರು ಸಾಗರ್ ಲಮ್ಮಾಣಿಯನ್ನು ವಶಕ್ಕೆ ಪಡೆದು ವಿಚಾರಣೆಗೊಳಪಡಿಸಿದಾಗ ಆತ 2023ರ ಮಾ.12ರಂದು ರಾತ್ರಿಯೇ ಶೃತಿ ಮತ್ತು ಆಕೆಯ ಮಗನನ್ನು ಹತ್ಯೆಗೈದು ಶವಗಳನ್ನು ಆಕೆ ತಂದಿದ್ದ ಲಗೇಜ್ ಬ್ಯಾಗ್‌ಗಳಲ್ಲೇ ತುಂಬಿ ಸಿದ್ದಾಪುರ ಹೊರ ವಲಯದ ಬಾವಿಯಲ್ಲಿ ತನ್ನ ಸ್ನೇಹಿತ ಲಕ್ಷ್ಮೀಕಾಂತ ಕುಂಬಾರನ ಸಹಾಯದಿಂದ ಎಸೆದಿದ್ದ ಎಂಬುದು ಬೆಳಕಿಗೆ ಬಂದಿದೆ. ಈ ಹಿನ್ನೆಲೆಯಲ್ಲಿ ಅವರಿಬ್ಬರನ್ನೂ ಬಿಜಾಪುರ ಗ್ರಾಮಾಂತರ ಠಾಣೆ ಪೊಲೀಸರು ಬಂಧಿಸಿದ್ದಾರೆ.

ನಡೆದದ್ದೇನು?: ಪತಿಯನ್ನು ತೊರೆದಿದ್ದ ಶೃತಿಗೆ ಫೇಸ್‌ಬುಕ್ ಮೂಲಕ ಪರಿಚಯವಾದ ಸಾಗರ್ ಲಮ್ಮಾಣಿ ತಾನು ಡಾಕ್ಟರ್ ಎಂದು ಆಕೆಗೆ ಹೇಳಿಕೊಂಡಿದ್ದಾನೆ. ಆಕೆಯ ಪೂರ್ವಾಪರ ಎಲ್ಲವನ್ನೂ ಅರಿತುಕೊಂಡ ಆತ ಮದುವೆಯಾಗುವುದಾಗಿ ನಂಬಿಸಿ ದೈಹಿಕ ಸಂಪರ್ಕವನ್ನು ಹೊಂದಿದ್ದ ಎಂದು ಹೇಳಲಾಗಿದೆ. ತನ್ನನ್ನು ಮದುವೆ ಮಾಡಿಕೊಳ್ಳಬೇಕೆಂದು ಶೃತಿ ಪೀಡಿಸತೊಡಗಿದಾಗ ಆಕೆಯನ್ನು ಬಿಜಾಪುರಕ್ಕೆ ಬರುವಂತೆ ಕರೆದಿದ್ದಾನೆ. ಬಿಜಾಪುರದಲ್ಲಿ ಪ್ರಿಯಕರ ಸಾಗರ್‌ನನ್ನು ಮದುವೆಯಾಗಿ ಸುಖ ಜೀವನ ಸಾಗಿಸಬಹುದು ಎಂಬ ಕನಸಿನೊಂದಿಗೆ ಲಗೇಜ್ ಸಮೇತ ಶೃತಿ ತನ್ನ ಮಗ ರೋಹನ್‌ನನ್ನು ಕರೆದುಕೊಂಡು 2023ರ ಮಾ.12ರಂದು ವಿಜಯಪುರಕ್ಕೆ ತೆರಳಿದ್ದಾರೆ. ಆಕೆ ಮತ್ತು ಮಗನನ್ನು ಬಿಜಾಪುರದ ರಿಂಗ್ ರಸ್ತೆ ಬಳಿ ಇರುವ ಲಾಡ್ಜ್‌ವೊಂದರಲ್ಲಿ ಉಳಿಸಿದ್ದ ಸಾಗರ್ ಲಮ್ಮಾಣಿ ಅಂದು ರಾತ್ರಿಯೇ ಶೃತಿಯನ್ನು ಉಸಿರುಗಟ್ಟಿಸಿ ಕೊಲೆ ಮಾಡಿದ್ದಾನೆ. ಈ ಕೊಲೆಯನ್ನು ಕಂಡ ರೋಹನ್ ಸಾಕ್ಷಿಯಾಗಿ ಪರಿಣಮಿಸಿ ತಾನು ಪೊಲೀಸರಿಗೆ ಸಿಕ್ಕಿಹಾಕಿಕೊಳ್ಳಬಹುದು ಎಂಬ ಕಾರಣದಿಂದ ಆತನನ್ನೂ ಕೊಂದು ಶೃತಿ ತಂದಿದ್ದ ಭಾರೀ ಗಾತ್ರದ ಲಗೇಜ್ ಬ್ಯಾಗ್‌ಗಳಲ್ಲೇ ಶವಗಳನ್ನು ತುಂಬಿ ಸ್ನೇಹಿತ ಲಕ್ಷ್ಮೀಕಾಂತ ಕುಂಬಾರನ ಸಹಕಾರದೊಂದಿಗೆ ಮಹಾರಾಷ್ಟ್ರ ಗಡಿಯಲ್ಲಿರುವ ತಿಕೋಟ ಬಳಿಯ ಸಿದ್ದಾಪುರ ಹೊರ ವಲಯದ ಬಾವಿಯಲ್ಲಿ ಇಬ್ಬರ ಶವಗಳನ್ನು ಎಸೆದು ಬಂದಿದ್ದ ಎಂಬುದು ಪೊಲೀಸರ ವಿಚಾರಣೆ ವೇಳೆ ತಿಳಿದು ಬಂದಿದೆ.

ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ

ತಮ್ಮ ನಿಲುವು ಪ್ರಕಟಿಸುವುದಾಗಿ ಹೇಳಿದ್ದಾರೆ ನ್ನಲಾಗಿದೆ. ವಿಜಯೇಂದ್ರ ಭೇಟಿ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಸಂಸದೆ ಸುಮಲತಾ ಅಂಬರೀಶ್, ಎನ್‌ಡಿಎ ಮೈತ್ರಿ ಪಕ್ಷ ಜೆಡಿಎಸ್ ಅಭ್ಯರ್ಥಿಗೆ ಬೆಂಬಲ ನೀಡಬೇಕೆಂದು ವಿಜಯೇಂದ್ರ ಕೇಳಿದ್ದಾರೆ. ಆದರೆ, ಬೆಂಬಲಿಗರ ಸಭೆ ಬಳಿಕ ನಿರ್ಧಾರ ತಿಳಿಸುತ್ತೇನೆ ಎಂದು ಹೇಳಿದ್ದೇನೆ. ಮಂಡ್ಯ ಕ್ಷೇತ್ರ ಬಿಟ್ಟು ಹೋಗುತ್ತೇನೆ ಎಂದು ಎಲ್ಲೂ ಹೇಳಿಲ್ಲ. ಮಂಡ್ಯ ಲೋಕಸಭಾ ಕ್ಷೇತ್ರವನ್ನು ಬಿಜೆಪಿಯೇ ಉಳಿಸಿಕೊಳ್ಳಬೇಕಿತ್ತು. ನಾಳೆ(ಮಾ.30) ಮಂಡ್ಯದಲ್ಲಿ ನಾನು ಬೆಂಬಲಿಗರ ಜೊತೆ ಸಭೆ ನಡೆಸುತ್ತಿದ್ದೇನೆ. ನನ್ನ ನಿಲುವನ್ನು ಅಲ್ಲೇ ತಿಳಿಸಲು ಇಷ್ಟಪಡುತ್ತೇನೆ ಎಂದು ಸ್ಪಷ್ಟಪಡಿಸಿದರು. ಮಂಡ್ಯವೇ ನನ್ನ ಶಕ್ತಿ, ಮಂಡ್ಯವೇ ನನ್ನ ಅಸ್ತಿತ್ವ, ನಾನು ಮಂಡ್ಯ ಬಿಟ್ಟು ಎಲ್ಲೂ ಹೋಗಲ್ಲ ಎಂದ ಅವರು, ಇದು ಅಂಬರೀಶ್ ಅವರ ಮನೆ, ಯಾರೇ ಬಂದರೂ ಸ್ವಾಗತ. ಕುಮಾರಸ್ವಾಮಿ ಅವರು ಬಂದರೂ ನನ್ನ ಆಕ್ಷೇಪ ಇಲ್ಲ. ಅವರ ಜೊತೆ ಮಾತುಕತೆ ನಡೆಸಲು ಸಿದ್ಧಳಿದ್ದೇನೆ ಎಂದರು. ಮಂಡ್ಯದಲ್ಲಿ ಮುಖಂಡರು ಮತ್ತು ಬೆಂಬಲಿಗರ ಸಭೆ ಕರೆದು ಚರ್ಚೆ ಮಾಡಿ ನನ್ನ ನಿಲುವು ಪ್ರಕಟಿಸುವೆ. ವಿಜಯೇಂದ್ರ ಮತ್ತು ಪ್ರೀತಂಗೌಡ ಅವರು ತಮ್ಮ ಭಾವನೆ ವ್ಯಕ್ತಪಡಿಸಿದ್ದಾರೆ. ನಾನು ಕಾರ್ಯಕರ್ತರ ಜೊತೆ ಮಾತನಾಡಿ ಮುಂದಿನ ತೀರ್ಮಾನ ಕೈಗೊಳ್ಳುವೆ ಎಂದರು.

ವಿಜಯೇಂದ್ರ ಹೇಳಿದ್ದೇನು? ಸುಮಲತಾ ಭೇಟಿ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ವಿಜಯೇಂದ್ರ, ಇಂದು ಉತ್ತಮ ವಿಚಾರಗಳನ್ನು ಚರ್ಚೆ ಮಾಡಿದ್ದೇವೆ. ಅವರು ಚುನಾವಣಾ ಪ್ರಚಾರದಲ್ಲಿ ಪಾಲ್ಗೊಳ್ಳುವ ವಿಶ್ವಾಸವಿದೆ. ಅವರೂ ಸಕಾರಾತ್ಮಕವಾಗಿ ಸ್ಪಂದಿಸಿದ್ದು, ಒಳ್ಳೆ ನಿರ್ಧಾರ ಮಾಡುತ್ತಾರೆಂಬ ವಿಶ್ವಾಸವಿದೆ ಎಂದು ಹೇಳಿದರು.

ನನ್ನನ್ನು ಗೆಲ್ಲಿಸುವ ಮೂಲಕ ಸಿದ್ದರಾಮಯ್ಯರನ್ನ ಗೌರವಿಸಿ...

- ಮೈಸೂರು-ಕೊಡಗು ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಎಂ.ಲಕ್ಷ್ಮಣ ಮನವಿ
- ಈ ಬಾರಿಯೂ ನಾನು ಸೋತರೆ ಸತ್ತಂತೆಯೇ...!

ಮೈಸೂರು,ಮಾ.29(ಎಂಟಿವೈ)–ನುಡಿದಂತೆ ನಡೆದು, ಐದು ಗ್ಯಾರಂಟಿ ಯೋಜನೆಗಳನ್ನು ಯಶಸ್ವಿಯಾಗಿ ಜಾರಿಗೊಳಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಗೌರವಿಸಲು ಈ ಬಾರಿ ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿಯಾದ ತಮ್ಮನ್ನು ಗೆಲ್ಲಿಸುವಂತೆ ಎಂ.ಲಕ್ಷ್ಮಣ ಮನವಿ ಮಾಡಿದ್ದಾರೆ.



ಮೈಸೂರಿನ ಕಾಂಗ್ರೆಸ್ ಭವನದಲ್ಲಿ ಶುಕ್ರವಾರ ನಡೆದ ಪಕ್ಷದ ಮುಖಂಡರ ಸಭೆಯಲ್ಲಿ ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಎಂ.ಲಕ್ಷ್ಮಣ ಹಾಗೂ ಇನ್ನಿತರರು ಪಾಲ್ಗೊಂಡಿದ್ದರು.

ಮೈಸೂರಿನ ಕಾಂಗ್ರೆಸ್ ಭವನದಲ್ಲಿ ಶುಕ್ರವಾರ ಮೈಸೂರು ನಗರ, ಜಿಲ್ಲಾ ಕಾಂಗ್ರೆಸ್ ಸಮಿತಿ ಹಾಗೂ ಅಲ್ಪ ಸಂಖ್ಯಾತ ಘಟಕಗಳ ಪದಾಧಿಕಾರಿಗಳ ಸಭೆಯಲ್ಲಿ ಮಾತನಾಡಿದ ಅವರು, ಮೊದಲ ಬಾರಿಗೆ ಮುಖ್ಯಮಂತ್ರಿಯಾಗಿದ್ದ ಸಿದ್ದರಾಮಯ್ಯ ಅವರು ಅನ್ನಭಾಗ್ಯ, ಕ್ಷೀರಭಾಗ್ಯ, ವಿದ್ಯಾಸಿರಿ, ಮನಸ್ವಿನಿ, ಸಾಲಮನ್ನಾ ಸೇರಿದಂತೆ ಹಲವು ಜನಪರ ಯೋಜನೆಗಳನ್ನು ಜಾರಿಗೊಳಿಸಿದರು. ಅಲ್ಲದೆ, ಮೈಸೂರಲ್ಲಿ ಜಯದೇವ ಆಸ್ಪತ್ರೆ, ಜಿಲ್ಲಾಸ್ಪತ್ರೆ, ಟ್ರಾಮಾ ಸೆಂಟರ್ ಸೇರಿದಂತೆ ಹಲವು ಆಸ್ಪತ್ರೆಗಳನ್ನು ಕಟ್ಟಿಸಿದರು. ಎರಡನೇ ಬಾರಿಗೆ ಮುಖ್ಯಮಂತ್ರಿ ಯಾಗಿ ಗೃಹಲಕ್ಷ್ಮೀ, ಗೃಹಜ್ಯೋತಿ, ಶಕ್ತಿ, ಯುವನಿಧಿ, ಅನ್ನಭಾಗ್ಯ ಯೋಜನೆಯನ್ನು ಜಾರಿಗೊಳಿಸಿದ್ದಾರೆ. ಈ ಐದು ಗಾರಂಟಿ ಯೋಜನೆಗಳು ಎಲ್ಲಾ ಬಡ, ಮಧ್ಯಮ ವರ್ಗ ಸೇರಿದಂತೆ ಎಲ್ಲಾ ವರ್ಗದ ಜನರಿಗೆ ಉಪಯೋಗವಾಗಿವೆ. ನುಡಿದಂತೆ ನಡೆಯುವ ಮೂಲಕ ರಾಜ್ಯದ ಜನರ ಹಿತಕಾಯುತ್ತಿದ್ದಾರೆ. ಈ ಹಿನ್ನೆಲೆ ಯಲ್ಲಿ ಈ ಬಾರಿ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಯಾಗಿ ಸ್ಪರ್ಧಿಸಿರುವ ನನಗೆ ಬೆಂಬಲ ನೀಡಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಗೌರವ ನೀಡಬೇಕು ಎಂದು ಕೋರಿದರು.

ಸಿದ್ದರಾಮಯ್ಯರಿಗೆ ಕೊರಗಿದೆ: ಕಳೆದ ಎರಡು ಬಾರಿ ಸ್ವಂತ ಜಿಲ್ಲೆಯಲ್ಲಿ ಲೋಕಸಭಾ ಅಭ್ಯರ್ಥಿ ಸೋತಿರುವುದಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಮನಸ್ಸಿನಲ್ಲಿ ಕೊರಗಿದೆ. ಕುರುಬ ಸಮುದಾಯಕ್ಕೆ ಟಿಕೆಟ್ ನೀಡಿದ್ದರಿಂದ ಸೋಲಾಯಿತು ಎಂಬ ಮಾತು ಕೇಳಿ ಬಂದ ಹಿನ್ನೆಲೆಯಲ್ಲಿ ಈ ಬಾರಿ ಒಕ್ಕಲಿಗ ಸಮುದಾಯದ ನನಗೆ ಟಿಕೆಟ್ ಕೊಟ್ಟಿದ್ದಾರೆ. ನಾನು ಹಣೆಯ ಮೇಲೆ ಜಾತಿ ಹೆಸರು ಬರೆದುಕೊಂಡವನಲ್ಲ. ಆದರೆ, ಸಂಸದ ಪ್ರತಾಪ್ ಸಿಂಹ ಟಿಕೆಟ್ ತಪ್ಪಿರುವ ಹತಾಶೆಯಿಂದ ಮಾಧ್ಯಮಗಳ ಮುಂದೆ ನನ್ನ ಜಾತಿ ಪ್ರಶ್ನಿಸುತ್ತಿದ್ದಾರೆ. ನನ್ನನ್ನು ಜೈಲಿಗೆ ಕಳುಹಿ ಸುತ್ತೇನೆ ಎಂಬ ಬೆದರಿಕೆಗಳನ್ನು ಹಾಕುತ್ತಿದ್ದಾರೆ. ಅವರ ವಿರುದ್ಧ ಮಾತನಾಡಬಾರದು ಎಂದು ನ್ಯಾಯಾಲಯದಲ್ಲಿ ತಡೆಯಾಜ್ಞೆ ತಂದಿದ್ದಾರೆ. ಇದಕ್ಕೆ ಕಾರಣ ಕೇಳಿದರೆ ಅವರು ಉತ್ತರಿಸುತ್ತಿಲ್ಲ ಎಂದು ಹೇಳಿದರು.

ಮತ್ತೆ ಸೋತರೆ ನಾನು ಸತ್ತಂತೆ!: ನಾನು ಸಾಮಾನ್ಯ ವ್ಯಕ್ತಿ. ನನ್ನ ವಿರುದ್ಧ ಮೈಸೂರು ಅರಮನೆಯಲ್ಲಿರುವ ಮಹಾರಾಜರು ಕಣದಲ್ಲಿದ್ದಾರೆ. ನಾನು ಬೀದಿಯಲ್ಲಿ ಇರುವವನು. 30 ವರ್ಷಗಳಿಂದ ಹೋರಾಟ ಮಾಡಿ ಬಂದವನು. ರಿಯಲ್ ಎಸ್ಟೇಟ್ ಮಾಡುವವನಲ್ಲ, ಸಾವಿರಾರು ಕೋಟಿ ಒಡೆಯನಲ್ಲ. ಫುಟ್‌ಪಾತ್‌ನಲ್ಲಿ ಊಟ–ತಿಂಡಿ–ಟೀ ಕುಡಿಯುವವನು. ಈಗ ಜನ ಸಾಮಾನ್ಯರಿಗೆ ಸಿಗುವ ವ್ಯಕ್ತಿ ಬೇಕಾ ಎಂದು ಕ್ಷೇತ್ರದ ಜನತೆ ನಿರ್ಧರಿಸಬೇಕು. ಮೈಸೂರು–ಕೊಡಗು ಭಾಗದಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಪೂರಕ ವಾತಾವರಣವಿದೆ. ಇಂತಹ ಸಂದರ್ಭದಲ್ಲಿ ನನ್ನನ್ನು ಸೋಲಿಸಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಅವಮಾನ ಮಾಡಬೇಡಿ. ನಾನು ಸೋತು ಸೋತು ಸಾಕಾಗಿದೆ. ಕೊನೆಯದಾಗಿ ಕಾಂಗ್ರೆಸ್ ಪಕ್ಷ ಅವಕಾಶ ನೀಡಿದೆ. ಈ ಬಾರಿ ಸೋತರೆ ನಾನು ಸತ್ತಂತೆ ಎಂದು ಪುನರುಚ್ಚರಿಸಿದರು.

ಸಂಸದ ಪ್ರತಾಪ್ ಸಿಂಹ ಅವರನ್ನು ಸೋಲಿಸಬೇಕು ಎಂದು ಹೋರಾಟ ಮಾಡಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪ ಮುಖ್ಯಮಂತ್ರಿ ಡಿ.ಕೆ.ಶಿವ ಕುಮಾರ್ ಅವರಿಗೆ ಮನವರಿಕೆ ಮಾಡಿ ಟಿಕೆಟ್ ಪಡೆದುಕೊಂಡೆ. ಆದರೆ, ಈಗ ರಾಜಕೀಯ ಕುಸ್ತಿಗೆ ಅವರೇ ಇಲ್ಲ. ಬೇರೆಯವರನ್ನು ಕಳುಹಿಸಿದ್ದಾರೆ. ಪ್ರತಾಪ್ ಸಿಂಹ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ಜಾರಿಗೆ ತಂದ ಯೋಜನೆಗಳನ್ನು ಪುಸ್ತಕದಲ್ಲಿ ಪ್ರಕಟಿಸಿ ತನ್ನದು ಎಂದು ಸುಳ್ಳೇಳಿ ಊರೆಲ್ಲ ತಿರುಗಾಡುತ್ತಿದ್ದಾರೆ. ಇವರ ಸುಳ್ಳುಗಳನ್ನು ಕಾಂಗ್ರೆಸ್ಸಿಗರು ಬಯಲು ಮಾಡದ್ದಿದ್ದರೇ ಕೆಆರ್‌ಎಸ್ ಅಣೆಕಟ್ಟೆಯನ್ನು ನಮ್ಮ ತಾತ ನಿರ್ಮಿಸಿದರು ಎಂದು ಹೇಳುತ್ತಿದ್ದರು. ಇದನ್ನು ನಂಬುವ ಮೂರ್ಖರೂ ನಮ್ಮಲ್ಲಿದ್ದಾರೆ ಎಂದು ಟೀಕಿಸಿದರು.

ಇದಕ್ಕೂ ಮುನ್ನ 'ನಮ್ಮ ಸಂಸದರು ನಮ್ಮ ಹೆಮ್ಮೆ' ಪೋಸ್ಟರ್ ಬಿಡುಗಡೆಗೊಳಿಸಲಾಯಿತು. ಈ ಸಂದರ್ಭದಲ್ಲಿ ಕಾಂಗ್ರೆಸ್ ನಗರಾಧ್ಯಕ್ಷ ಆರ್. ಮೂರ್ತಿ, ಜಿಲ್ಲಾಧ್ಯಕ್ಷ ಡಾ. ಬಿ.ಜೆ ವಿಜಯಕುಮಾರ್, ಮಾಜಿ ಸಚಿವ ಕೋಟೆ ಎಂ. ಶಿವಣ್ಣ, ಪ್ರಧಾನ ಕಾರ್ಯದರ್ಶಿ ಎಂ.ಶಿವಣ್ಣ, ಅಲ್ಪಸಂಖ್ಯಾತರ ಘಟಕದ ಜಿಲ್ಲಾಧ್ಯಕ್ಷ ಮೋಸಿನ್ ಖಾನ್, ಶಿವಪ್ರಸಾದ್, ಮಾಧ್ಯಮ ವಕ್ತಾರ ಕೆ.ಮಹೇಶ್ ಮುಂತಾದವರು ಹಾಜರಿದ್ದರು.

ಕದಳಿ ಮಹಿಳಾ ವೇದಿಕೆಯಿಂದ ಮಹಿಳಾ ದಿನಾಚರಣೆ



ಮೈಸೂರಿನ ಜೆಎಸ್‌ಎಸ್ ಆಸ್ಪತ್ರೆ ಆವರಣದಲ್ಲಿರುವ ರಾಜೇಂದ್ರ ಭವನದಲ್ಲಿ ಕದಳಿ ಮಹಿಳಾ ವೇದಿಕೆ ಶುಕ್ರವಾರ ಆಯೋಜಿಸಿದ್ದ ಮಹಿಳಾ ದಿನಾಚರಣೆ ಕಾರ್ಯಕ್ರಮದಲ್ಲಿ ಮುಕ್ತ ವಿವಿಯ ಪ್ರಾಧ್ಯಾಪಕಿ ಡಾ.ಜ್ಯೋತಿ ಶಂಕರ್ ಅವರನ್ನು ಸನ್ಮಾನಿಸಲಾಯಿತು.

ಮೈಸೂರು, ಮಾ.29(ಎಂಟಿವೈ)–ನಾವು ತಿಳಿದಿರುವ ಜ್ಞಾನ ಕ್ಷೇತ್ರವೇ ಪ್ರಮುಖವಲ್ಲ. ಅದರ ಆಚೆಗೂ ಜ್ಞಾನವನ್ನು ಹುಡುಕುವ ಪ್ರಯತ್ನ ಮಾಡಬೇಕು ಎಂದು ಹಾಸ್ಯ ಸಾಹಿತಿ ಪ್ರೊ.ಎಂ. ಕೃಷ್ಣೇಗೌಡ ಸಲಹೆ ನೀಡಿದ್ದಾರೆ.

ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ ನಗರ ಘಟಕ ಹಾಗೂ ಕದಳಿ ಮಹಿಳಾ ವೇದಿಕೆ ವತಿಯಿಂದ ಜೆಎಸ್‌ಎಸ್ ಆಸ್ಪತ್ರೆ ಆವರಣದಲ್ಲಿರುವ ರಾಜೇಂದ್ರ ಭವನದಲ್ಲಿ ಶುಕ್ರವಾರ ಆಯೋಜಿಸಿದ್ದ ಮಹಿಳಾ ದಿನಾಚರಣೆಯನ್ನು ಉದ್ಘಾಟಿಸಿ ಮಾತನಾಡಿದ ಅವರು, ನಾವು ತಿಳಿದಿರುವುದೇ ಜಗತ್ತಲ್ಲ ಎನ್ನುವುದನ್ನು ಎಲ್ಲರೂ ಅರಿಯಬೇಕು. ನಮ್ಮ ಜ್ಞಾನ ಕ್ಷೇತ್ರದ ಆಚೆ ಇರುವ ಸತ್ಯವನ್ನು ವಿಶ್ವವಿದ್ಯಾಲಯಗಳು ವಿದ್ಯಾರ್ಥಿಗಳಿಗೆ ಕಲಿಸುತ್ತಿಲ್ಲ. ಇದರಿಂದ ನಾವು ಕಲಿತಿರುವುದೇ ಸತ್ಯ ಎಂಬ ಭ್ರಮೆಯಲ್ಲಿ ಹಲವರಿದ್ದಾರೆ. ವಾಸ್ತವತೆಯನ್ನು ಅರಿತು ಇನ್ನಾದರೂ ನಮ್ಮ ಜ್ಞಾನ ಕ್ಷೇತ್ರದ ಆಚೆಗೂ ಜ್ಞಾನವನ್ನು ಹುಡುಕುವ ಪ್ರಯತ್ನ ಮಾಡಬೇಕು ಎಂದರು.

ಮಹಿಳಾ ಸಮಾನತೆಯ ಕುರಿತು ಸಾಕಷ್ಟು ಚರ್ಚೆಗಳು ನಡೆಯುತ್ತಲೇ ಇರುತ್ತವೆ. ಆದರೆ, ಪ್ರಕೃತಿಯಲ್ಲಿ ಯಾವುದೂ ಸಮಾನವಾಗಿಲ್ಲ ಎಂಬುದು ವಿಶೇಷ. ಪ್ರಕೃತಿಯಲ್ಲಿ ನದಿಗಳೇ ಬೇರೆ, ಗುಡ್ಡಗಳೇ ಬೇರೆ. ಗಂಡು ಬೇರೆ, ಹೆಣ್ಣು ಬೇರೆ. ಆದರೆ ಹೆಣ್ಣು ಹಾಗೂ ಗಂಡಿನ ಎಲ್ಲ ಅಸ್ಮಿತೆಗಳನ್ನು ಗೌರವಿಸಬೇಕು ಎಂದು ಅಭಿಪ್ರಾಯಪಟ್ಟರು.

ಇದಕ್ಕೂ ಮುನ್ನ ಸನ್ಮಾನ ಸ್ವೀಕರಿಸಿ ಕರ್ನಾಟಕ ರಾಜ್ಯ ಮುಕ್ತ ವಿಶ್ವ ವಿದ್ಯಾಲಯದ ಪ್ರಾಧ್ಯಾಪಕಿ ಡಾ.ಜ್ಯೋತಿ ಶಂಕರ್ ಮಾತನಾಡಿ, ಭಾರತೀಯ ಪರಂಪರೆಯಲ್ಲಿ ಹೆಣ್ಣಿಗೆ ವಿಶೇಷ ಗೌರವ ನೀಡಲಾಗುತ್ತದೆ. ಮಹಿಳೆಯನ್ನು ಗೌರವಿಸುವುದು ಅಂದರೆ ಪುರುಷರು ತಮ್ಮನ್ನು ತಾವೇ ಗೌರವಿಸಿಕೊಂಡಂತೆ. ಶಾಲಾ, ಕಾಲೇಜುಗಳಲ್ಲಿ ಕಲಿಯುವ ಶಿಕ್ಷಣಕ್ಕಿಂತ ಜೀವನದ ಅನುಭವವೇ ದೊಡ್ಡ ಪಾಠವಾಗಿರುತ್ತದೆ. ಅದಕ್ಕಿಂತ ದೊಡ್ಡ ಪಾಠ ಇನ್ನೆಲ್ಲೂ ಕಲಿಯಲು ಸಾಧ್ಯವಿಲ್ಲ. ಆದರೂ ಇತ್ತೀಚಿನ ದಿನಗಳಲ್ಲಿ ವೃದ್ಧಾಶ್ರಮಗಳ ಸಂಖ್ಯೆ ಹಾಗೂ ವಿಚ್ಛೇದನವಾಗುತ್ತಿರುವವರ ಸಂಖ್ಯೆಯೂ ಹೆಚ್ಚುತ್ತಿದೆ. ಇದನ್ನು ಅಭಿವೃದ್ಧಿ ಎಂದು ಕರೆಯಲು ಸಾಧ್ಯವಿಲ್ಲ. ಈ ವಿಚಾರದಲ್ಲಿ ಪ್ರತಿಯೊಬ್ಬರು ಆತ್ಮವಿಮರ್ಶೆ ಮಾಡಿಕೊಳ್ಳಬೇಕು. ಸಂತರ ಮಾರ್ಗದರ್ಶನ ಮಾತ್ರ ಜನರ ಮನಸ್ಸನ್ನು ಶಾಂತಗೊಳಿಸಲು ಸಾಧ್ಯವಿಲ್ಲ. ಧಾರವಾಹಿಗಳಿಂದ ಮನಸ್ಸು ಶಾಂತಗೊಳ್ಳುವುದಿಲ್ಲ. ಆಧ್ಯಾತ್ಮಿಕ ಜಗತ್ತಿನೊಂದಿಗೆ ಸಂಪರ್ಕ ಹೊಂದಿದರೆ ಸಹಜವಾಗಿಯೇ ಮನಸ್ಸಿಗೆ ಶಾಂತಿ ದೊರೆಯುತ್ತದೆ ಎಂದು ಅಭಿಪ್ರಾಯಪಟ್ಟರು.

ನಾಗರಿಕ ಹಕ್ಕು ಜಾರಿ ನಿರ್ದೇಶನಾಲಯದ ಪೊಲೀಸ್ ವರಿಷ್ಠಾಧಿಕಾರಿ ಡಾ.ಬಿ.ಟಿ. ಕವಿತಾ ಮಾತನಾಡಿ, ಎಲ್ಲ ಕ್ಷೇತ್ರದಲ್ಲೂ ಮಹಿಳೆಯರು ಸಾಧನೆ ತೋರುತ್ತಿದ್ದಾರೆ. ಪ್ರತಿಯೊಂದು ಮನೆಯಲ್ಲಿರುವ ಮಹಿಳೆಯರು ಸಬಲೀಕರಣಗೊಳ್ಳಬೇಕು. ಮನೆಯಲ್ಲಿ ಪ್ರಮುಖ ನಿರ್ಧಾರ ಕೈಗೊಳ್ಳುವ ಸಂದರ್ಭ ಮಹಿಳೆಯರು ಸಹ ಪ್ರಮುಖ ಪಾತ್ರ ನಿರ್ವಹಿಸಬೇಕು. ಮಹಿಳೆಯರು ತಮ್ಮ ಗುರಿ ಸಾಧನೆಗೆ ತಾವೇ ಪ್ರಯತ್ನಿಸಬೇಕು. ಅದಕ್ಕಾಗಿ ಮತ್ತೊಬ್ಬರ ಬಳಿ ಅವಕಾಶಕ್ಕಾಗಿ ಕಾಯುತ್ತಾ ಕೂರುವುದು ಸರಿಯಲ್ಲ. ಇಲ್ಲದ ನೆಪಗಳನ್ನು ಹೇಳಿಕೊಂಡು ಸಾಧನೆಯಿಂದ ದೂರ ಸರಿಯಬಾರದು. ಇತ್ತೀಚೆಗೆ ಆನ್‌ಲೈನ್ ಮೂಲಕ ಹೆಚ್ಚು ವಂಚನೆಗಳು ಆಗುತ್ತಿವೆ. ಹೆಚ್ಚಿನ ಸಂಖ್ಯೆಯಲ್ಲಿ ಮಹಿಳೆಯರೇ ವಂಚನೆಗೆ ಒಳಗಾಗುತ್ತಿದ್ದಾರೆ. ವಂಚನೆಯಿಂದ ಪಾರಾಗಲು ಮಹಿಳೆಯರು ಜಾಗೃತರಾಗಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಶರಣ ಸಾಹಿತ್ಯ ಪರಿಷತ್ ನಗರಾಧ್ಯಕ್ಷ ಮ.ಗು. ಸದಾನಂದಯ್ಯ, ಕದಳಿ ಮಹಿಳಾ ವೇದಿಕೆ ಅಧ್ಯಕ್ಷೆ ಶಾರದಾ ಶಿವಲಿಂಗಸ್ವಾಮಿ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

ಮದ್ಯ ಮಾರಾಟ ನಿಷೇಧ

ಮೈಸೂರು,ಮಾ.29– ಮಾ.30 ರಿಂದ ಏ.2 ರವರೆಗೆ ಮೈಸೂರು ಜಿಲ್ಲಾ ಘಟಕದ ದಕ್ಷಿಣ ಪೊಲೀಸ್ ಠಾಣಾ ವ್ಯಾಪ್ತಿಯ ರಮ್ಮನಹಳ್ಳಿ ಗ್ರಾಮದಲ್ಲಿ ಶ್ರೀ ಲಕ್ಷ್ಮಿ ದೇವಿ, ಶ್ರೀ ಮಾರಮ್ಮನ ಜಾತ್ರಾ ಮಹೋತ್ಸವವು ನಡೆಯಲಿದ್ದು, ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಕಾನೂನು ಮತ್ತು ಸುವ್ಯವಸ್ಥೆ ಕಾಪಾಡಲು ಮುನ್ನೆಚ್ಚರಿಕೆ ಕ್ರಮವಾಗಿ ಮಾ.30 ರ ಮಧ್ಯರಾತ್ರಿ 12 ಗಂಟೆಯಿಂದ ಏ.2 ರ ಮಧ್ಯರಾತ್ರಿ 12 ಗಂಟೆಯವರೆಗೆ ರಮ್ಮನಹಳ್ಳಿ ಗ್ರಾಮದಲ್ಲಿರುವ ಉಗ್ರನರಸಿಂಹ ವೈನ್ ಶಾಪ್‌ನಲ್ಲಿ ಎಲ್ಲಾ ರೀತಿಯ ಮದ್ಯ ಮಾರಾಟವನ್ನು ನಿಷೇಧಿಸಿ ಮದ್ಯದ ಅಂಗಡಿಯನ್ನು ಮುಚ್ಚುವಂತೆ ಆದೇಶಿಸಲಾಗಿದೆ ಎಂದು ಜಿಲ್ಲಾಧಿಕಾರಿ ಡಾ. ಕೆ.ವಿ.ರಾಜೇಂದ್ರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮೈಸೂರು ಮಿತ್ರ

45ನೇ ವಾರ್ಷಿಕೋತ್ಸವ ಕಥಾ ಸ್ಪರ್ಧೆ

'ಮೈಸೂರು ಮಿತ್ರ' ಪ್ರಾದೇಶಿಕ ದಿನ ಪತ್ರಿಕೆ 44 ವರ್ಷಗಳನ್ನು ಯಶಸ್ವಿಯಾಗಿ ಪೂರೈಸಿ 45ನೇ ವರ್ಷಕ್ಕೆ ಪಾದಾರ್ಪಣೆಗೈಯ್ಯುವ ಈ ಸುಸಂದರ್ಭದಲ್ಲಿ 16–04–2024 (ಮಂಗಳವಾರ)ರಂದು ವರ್ಣರಂಜಿತ ಆಕರ್ಷಕ ವಿಶೇಷಾಂಕವನ್ನು ಹೊರತರಲಾಗುತ್ತಿದೆ. ಇದರ ಅಂಗವಾಗಿ ಪ್ರತಿ ವರ್ಷದಂತೆ ಈ ಬಾರಿಯೂ ಕಥಾ ಸ್ಪರ್ಧೆ ಏರ್ಪಡಿಸಲಾಗಿದೆ. 'ಮೈಸೂರು ಮಿತ್ರ' ಪ್ರಸರಣ ಹೊಂದಿರುವ ಐದು ಜಿಲ್ಲೆಗಳ (ಮೈಸೂರು, ಚಾಮರಾಜನಗರ, ಕೊಡಗು, ಮಂಡ್ಯ ಮತ್ತು ಹಾಸನ) ಪ್ರತಿಭಾವಂತ ಕಥೆಗಾರರನ್ನು ಬೆಳಕಿಗೆ ತರುವುದು ಸಹ ಈ ಸ್ಪರ್ಧೆಯ ಮೂಲ

ಉತ್ತಮವಾದ ಐದು ಕಥೆಗಳಿಗೆ ನಗದು ಬಹುಮಾನ

● ಪ್ರಥಮ ಬಹುಮಾನ	: ರೂ. 6,000
● ದ್ವಿತೀಯ ಬಹುಮಾನ	: ರೂ. 5,000
● ತೃತೀಯ ಬಹುಮಾನ	: ರೂ. 4,000
● ಪ್ರೋತ್ಸಾಹಕ ಬಹುಮಾನಗಳು (ಎರಡು)	: ರೂ. 2,500

ಸ್ಪರ್ಧೆಯ ನಿಯಮಗಳು

- ಒಬ್ಬರು ಒಂದೇ ಕಥೆಯನ್ನು ಕಳುಹಿಸಬೇಕು.
- ಕಥೆ ಕಂಪ್ಯೂಟರ್‌ನಲ್ಲಿ ಟೈಪ್ ಮಾಡಿ news@mysurumithra.com ಇ–ಮೇಲ್ ಮಾಡಬಹುದು. ಇಲ್ಲವೆ ಅಂಚೆ ಮೂಲಕವೂ ಕಳಿಸಬಹುದು. ಕಥೆ ಐದು ಪುಟಗಳನ್ನು (ಒಂದೇ ಮಗ್ಗಲು) ಮೀರದಂತಿರಬೇಕು. ಅನುವಾದ– ರೂಪಾಂತರಗಳನ್ನು ಪರಿಗಣಿಸುವುದಿಲ್ಲ.
- ಸ್ಪರ್ಧಿಗಳು ಕಥೆಯ ಶಿರೋನಾಮೆ, ತಮ್ಮ ಹೆಸರು–ವಿಳಾಸ, ಪಾಸ್‌ಪೋರ್ಟ್ ಸೈಜಿನ ಭಾವಚಿತ್ರ ಮತ್ತು ಕಿರು ಪರಿಚಯವನ್ನು ಪ್ರತ್ಯೇಕ ಹಾಳೆಯಲ್ಲಿ ಸ್ಫುಟವಾಗಿ ಬರೆದು ಕಥೆಯೊಡನೆ ಲಗತ್ತಿಸಬೇಕು.
- ಸ್ಪರ್ಧೆಗೆ ಕಳುಹಿಸಲಾಗುವ ಕಥೆ ಈಗಾಗಲೇ ಬೇರೆಲ್ಲೂ ಪ್ರಕಟವಾಗಿರಕೂಡದು. ತೀರ್ಪುಗಾರರ ಮಂಡಳಿಯ ತೀರ್ಮಾನವೇ ಅಂತಿಮ ವಾದುದು. ಪ್ರಥಮ ಬಹುಮಾನಿತ ಕಥೆಯನ್ನು ವಿಶೇಷಾಂಕದಲ್ಲಿಯೂ, ಇತರ ಬಹುಮಾನ ಪಡೆದ ಕಥೆಗಳನ್ನು ಯಥಾವಕಾಶ 'ವಾರದ ಮಿತ್ರ' ಸಾಪ್ತಾಹಿಕ ಪುರವಣಿಯಲ್ಲಿಯೂ ಪ್ರಕಟಿಸಲಾಗುವುದು.
- ಬಹುಮಾನಿತ ಕಥೆಗಳ ಸಂಪೂರ್ಣ ಸ್ವಾಮ್ಯ 'ಮೈಸೂರು ಮಿತ್ರ'ನಿಗೆ ಸೇರಿದ್ದು. ಅಂಚೆಯಲ್ಲಿ ಕಥೆಗಳು ಸೂಕ್ತ ಸಮಯಕ್ಕೆ ತಲುಪದಿದ್ದಲ್ಲಿ 'ಮೈಸೂರು ಮಿತ್ರ' ಜವಾಬ್ದಾರಿಯಲ್ಲ ಮತ್ತು ಕಥೆಗಳನ್ನು ಯಾವ ಕಾರಣಕ್ಕೂ ಹಿಂತಿರುಗಿಸಲಾಗುವುದಿಲ್ಲ. ಆದ್ದರಿಂದ ಸ್ಪರ್ಧಿಗಳು ಕಥೆಯ ಒಂದು ಪ್ರತಿಯನ್ನು ತಮ್ಮ ಬಳಿ ಇರಿಸಿಕೊಳ್ಳುವುದೊಳಿತು.
- ಈ ನಿಯಮಾವಳಿಯನ್ನು ಪಾಲಿಸದ ಕಥೆಗಳನ್ನು ತಿರಸ್ಕರಿಸಲಾಗುವುದು.
- ಯಾವುದೇ ರೀತಿ ಪ್ರಭಾವ ಬೀರುವುದನ್ನು ಅನರ್ಹತೆ ಎಂದು ಪರಿಗಣಿಸಲಾಗುವುದು.

ವಿ.ಸೂ.: 'ಮೈಸೂರು ಮಿತ್ರ' ಮತ್ತು 'ಸ್ಟಾರ್ ಆಫ್ ಮೈಸೂರ್' ಪತ್ರಿಕೆಗಳ ಉದ್ಯೋಗಿಗಳು ಹಾಗೂ ಅವರ ಸಂಬಂಧಿಗಳು ಸ್ಪರ್ಧೆಯಲ್ಲಿ ಭಾಗವಹಿಸುವಂತಿಲ್ಲ.

ಕಥೆ ನಮ್ಮ ಕೈಸೇರಲು ಕೊನೆಯ ದಿನಾಂಕ
05–04–2024

ವಿಳಾಸ: ಸಂಪಾದಕರು, 'ಮೈಸೂರು ಮಿತ್ರ' ವಾರ್ಷಿಕ ವಿಶೇಷಾಂಕ
ಇಂಡಸ್ಟ್ರಿಯಲ್ 'ಎ' ಲೇಔಟ್, ಬನ್ನಿಮಂಟಪ, ಮೈಸೂರು–570 015
ದೂರವಾಣಿ : 2496520, 2496521, 2496526, 2496527

ನಾನು ಹುಟ್ಟುತ್ತಾ ಒಕ್ಕಲಿಗ; ಬೆಳೆಯುತ್ತ ವಿಶ್ವಮಾನವನಾಗಿದ್ದೇನೆ

- ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಎಂ.ಲಕ್ಷ್ಮಣ ಸ್ಪಷ್ಟನೆ
- ಲಕ್ಷ್ಮಣ ಯಾವ ಒಕ್ಕಲಿಗ ಕಾಣೆ ಎಂಬ ಸಂಸದ ಪ್ರತಾಪ್ ಸಿಂಹರಿಗೆ ತಿರುಗೇಟು
- ಮೈಸೂರು–ಕೊಡಗು ಕ್ಷೇತ್ರ ಮಾದರಿ ಮಾಡುತ್ತೇನೆ, ಒಂದು ಅವಕಾಶ ಕೊಡಿ
- ಚಾಮುಂಡೇಶ್ವರಿಗೆ ಪೂಜೆ ಸಲ್ಲಿಸಿ ಪ್ರಚಾರಕ್ಕೆ ಲಕ್ಷ್ಮಣ ಚಾಲನೆ

ಮೈಸೂರು,ಮಾ.29(ಎಂಟಿವೈ)–ನಾನು ಹುಟ್ಟಿದಾಗ ಒಕ್ಕಲಿಗ, ಬೆಳೆಯುತ್ತ ವಿಶ್ವಮಾನವ. ಆದರೆ, ಬಿಜೆಪಿಗರು ನನ್ನ ವಿರುದ್ಧ ಅಪಪ್ರಚಾರ ಮಾಡುತ್ತಿದ್ದು, ಮತದಾರರು ಬಿಜೆಪಿಗರ ಸಂಚಿಗೆ ಮನ್ನಣೆ ನೀಡಬಾರದು ಎಂದು ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಎಂ.ಲಕ್ಷ್ಮಣ ಮನವಿ ಮಾಡಿದ್ದಾರೆ.



ಚಾಮುಂಡಿಬೆಟ್ಟಕ್ಕೆ ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಎಂ.ಲಕ್ಷ್ಮಣ ಭೇಟಿ ನೀಡಿ, ನಾಡದೇವಿಗೆ ವಿಶೇಷ ಪೂಜೆ ಸಲ್ಲಿಸಿ, ಪ್ರಚಾರ ಆರಂಭಿಸಿದರು.

ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಪ್ರಚಾರಕ್ಕೂ ಮುನ್ನ ಚಾಮುಂಡಿ ಬೆಟ್ಟಕ್ಕೆ ತೆರಳಿ ಚಾಮುಂಡೇಶ್ವರಿಗೆ ವಿಶೇಷ ಪೂಜೆ ಸಲ್ಲಿಸಿದ ಬಳಿಕ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ಮೈಸೂರು ತಾಲೂಕು ತಹಸೀಲ್ದಾರ್ ನೀಡಿರುವ ಒಕ್ಕಲಿಗ 3ಎ ಜಾತಿ ಪ್ರಮಾಣ ಪತ್ರ ಪ್ರದರ್ಶಿಸಿ, ನಾನು ಹುಟ್ಟುವಾಗ ಒಕ್ಕಲಿಗ ಸಮುದಾಯದಲ್ಲಿ ಹುಟ್ಟಿದ್ದೇನೆ. ಕುವೆಂಪು ಅವರ ಸಂದೇಶದಂತೆ ವಿಶ್ವಮಾನವನಾಗಿ ಬೆಳೆದಿದ್ದೇನೆ. ಯಾರೂ ತನ್ನ ಜಾತಿ ಹೆಸರನ್ನು ಹಣೆಯ ಮೇಲೆ ಬರೆದುಕೊಂಡು ಓಡಾಡುವುದಿಲ್ಲ. ಸಂಸದ ಪ್ರತಾಪ ಸಿಂಹ ನಾನು ಒಕ್ಕಲಿಗ ಸಮುದಾಯಕ್ಕೆ ಸೇರಿರುವ ಬಗ್ಗೆ ಪ್ರಶ್ನೆ ಎತ್ತಿ ಅನುಮಾನಕ್ಕೆ ಆಸ್ಪದ ಮಾಡಿಕೊಟ್ಟಿದ್ದಾರೆ. ಅಪಪ್ರಚಾರ ಮಾಡುತ್ತಿದ್ದಾರೆ. ಅದಕ್ಕಾಗಿ ನಾನು ನನ್ನ ಒಕ್ಕಲಿಗ ಜಾತಿಯ ಪ್ರಮಾಣ ಪತ್ರ ಪ್ರದರ್ಶಿಸುತ್ತಿದ್ದೇನೆ ಎಂದು ಸಂಸದ ಪ್ರತಾಪ ಸಿಂಹ ಅವರಿಗೆ ತಿರುಗೇಟು ನೀಡಿದರು.

ಚುನಾವಣೆ ರಂಗೇರಿದೆ. ಕಾಂಗ್ರೆಸ್ ಪರವಾಗಿ ಒಳ್ಳೆಯ ವಾತಾವರಣ ಸೃಷ್ಟಿಯಾಗುತ್ತಿದೆ. ಈಗ ಬಿಜೆಪಿಯವರು ಯಾವ ಹಂತಕ್ಕೆ ಬೇಕಾದರೂ ಹೋಗಲು ಸಿದ್ಧರಾಗಿದ್ದಾರೆ. ಯಾವ ಸುಳ್ಳನ್ನಾದರೂ ಹೇಳುತ್ತಾರೆ. ನಾನು ಒಕ್ಕಲಿಗ ಅಲ್ಲ ಅನ್ನುವುದಕ್ಕೆ ಏನಾದರೂ ದಾಖಲೆ ಸಲ್ಲಿಸಲಿ. ಜಾತಿಯನ್ನು ಪ್ರಶ್ನಿಸುವ ಕೆಳ ಮಟ್ಟದ ರಾಜಕೀಯ ಮಾಡದಂತೆ ಸಂಸದರಿಗೆ ಮನವಿ ಮಾಡುತ್ತೇನೆ. ಒಕ್ಕಲಿಗ ಸಮುದಾಯದ ಮತ ನನಗೆ ಬರುವುದನ್ನು ತಡೆಯಲು ಸುಳ್ಳು ಹೇಳುತ್ತಿದ್ದಾರೆ. ತುಳಸಿದಾಸಪ್ಪ ಬಳಿಕ 47 ವರ್ಷಗಳ ನಂತರ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯ ಮಂತ್ರಿ ಡಿ.ಕೆ.ಶಿವಕುಮಾರ್ ಒಕ್ಕಲಿಗ ಸಮಾಜಕ್ಕೆ ಟಿಕೆಟ್ ಕೊಟ್ಟಿದ್ದಾರೆ. ನಾನು ಯಾವುದೇ ಜಾತಿಗೆ ಸೀಮಿತ ಅಲ್ಲ. ಎಲ್ಲ ಜಾತಿಯ ಮತದಾರರು ಬೇಕು. ಪ್ರತಿಯೊಬ್ಬರನ್ನು ಒಟ್ಟಿಗೆ ತೆಗೆದುಕೊಂಡು ಹೋಗುವ ಕೆಲಸ ಮಾಡುತ್ತಿದ್ದೇನೆ ಎಂದು ಹೇಳಿದರು.

ಮೈಸೂರು–ಕೊಡಗು ಜಿಲ್ಲೆಗಳ ಒಕ್ಕಲಿಗ ಮತದಾರರು 10 ವರ್ಷ ಪ್ರತಾಪ್ ಸಿಂಹ ಅವರಿಗೆ ಅವಕಾಶ ಮಾಡಿಕೊಟ್ಟಿದ್ದಾರೆ. ನನಗೂ ಒಂದು ಅವಕಾಶ ಮಾಡಿಕೊಡಬೇಕು. 10 ವರ್ಷ ಮೈಸೂರು ಯಾವ ವ್ಯವಸ್ಥೆಯಲ್ಲಿತ್ತು? ಎಷ್ಟು ಹಾಳು ಮಾಡಿಕೊಂಡಿದ್ದೇವೆ ಎಂದು ಆಲೋಚಿಸಬೇಕು. ಗೆದ್ದು ಬಂದರೆ ಮೈಸೂರು–ಕೊಡಗು ಕ್ಷೇತ್ರವನ್ನು ಮಾದರಿಯಾಗಿ ರೂಪಿಸುತ್ತೇನೆ. ಪ್ರವಾಸೋದ್ಯಮ ಅಭಿವೃದ್ಧಿಪಡಿಸುತ್ತೇನೆ. ಐಟಿ ವಲಯದಲ್ಲಿ ಉದ್ಯೋಗ ಅವಕಾಶ ಸೃಷ್ಟಿಸಲು ಕಾರ್ಯಕ್ರಮ ರೂಪಿಸಲಾಗುತ್ತದೆ. ರಾಜ್ಯದಲ್ಲಿ 4 ವರ್ಷ ಕಾಂಗ್ರೆಸ್ ಸರ್ಕಾರ ಇರಲಿದ್ದು, ಹೆಚ್ಚಿನ ಅನುದಾನ ತಂದು ಅಭಿವೃದ್ಧಿ ಮಾಡಲು ಬದ್ಧನಾಗಿದ್ದೇನೆ ಎಂದು ಭರವಸೆ ನೀಡಿದರು.

ಬಿಜೆಪಿಯವರಂತೆ ನಾವು ಕೋಮು ಘರ್ಷಣೆ. ಜಾತಿ ಜಾತಿ ನಡುವೆ ತಂದಿಡುವ ಕೆಲಸ ಮಾಡುವುದಿಲ್ಲ. ಆ ಪ್ರವೃತ್ತಿ ಕಾಂಗ್ರೆಸ್‌ಗೆ ಇಲ್ಲ. ಬಿಜೆಪಿಯವರಂತೆ ಸುಳ್ಳು ಹೇಳದೇ ಜನರ ಪರವಾಗಿ ಕೆಲಸ ಮಾಡುತ್ತೇವೆ. ಎಐಸಿಸಿ ಪ್ರಕಟಿಸಿರುವ 20 ಗ್ಯಾರಂಟಿಗಳಲ್ಲಿ 10 ಗ್ಯಾರಂಟಿಗಳ ಬಗ್ಗೆ ಮಾಹಿತಿ ನೀಡುವ ಕರಪತ್ರವನ್ನು ವಿತರಿಸಲಿದ್ದೇವೆ. ರಾಜ್ಯ ಸರ್ಕಾರ ಐದು ಗ್ಯಾರಂಟಿಗಳನ್ನು ಜಾರಿಗೊಳಿಸಿ ನುಡಿದಂತೆ ನಡೆದುಕೊಂಡಿದೆ. ಈ ವರ್ಷ ಗ್ಯಾರಂಟಿಗೆ 36 ಸಾವಿರ ಕೋಟಿ ಖರ್ಚು ಮಾಡಿದೆ. ಮುಂದಿನ ವರ್ಷಕ್ಕೆ 52 ಸಾವಿರ ಕೋಟಿ ರೂ. ಮೀಸಲಿಟ್ಟಿದೆ. ಕೇಂದ್ರದಲ್ಲೂ ನಮ್ಮ ಸರ್ಕಾರ ಅಧಿಕಾರಕ್ಕೆ ಬಂದರೆ ಕೊಟ್ಟ ಮಾತನ್ನು ಈಡೇರಿಸಲಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ನಗರ ಕಾಂಗ್ರೆಸ್ ಅಧ್ಯಕ್ಷ ಆರ್.ಮೂರ್ತಿ, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಡಾ.ಬಿ.ಜೆ.ವಿಜಯ್‌ಕುಮಾರ್, ಮುಡಾ ಅಧ್ಯಕ್ಷ ಕೆ.ಮರಿಗೌಡ, ಮಾಜಿ ಶಾಸಕ ಎಂ.ಕೆ.ಸೋಮಶೇಖರ್, ಮಾಜಿ ಮೇಯರ್ ಬಿ.ಕೆ.ಪ್ರಕಾಶ್, ಮುಖಂಡರಾದ ಹೆಚ್.ವಿ.ರಾಜೀವ್, ಬಿ.ಎಂ.ರಾಮು, ಸೀತಾರಾಂ, ಭಾಸ್ಕರ್ ಎಲ್.ಗೌಡ, ಎನ್.ಆರ್.ನಾಗೇಶ್, ಸೇವಾದಳದ ಗಿರೀಶ್, ಕೆ.ವಿ.ಮಲ್ಲೇಶ್ ಇತರರು ಉಪಸ್ಥಿತರಿದ್ದರು.

ಪ್ರಧಾನಿ ನರೇಂದ್ರ ಮೋದಿ ವಿರುದ್ಧ ಹೇಳಿಕೆ ಖಂಡಿಸಿ

ಶಿವರಾಜ್ ತಂಗಡಗಿ ವಿರುದ್ಧ ಬಿಜೆಪಿ ಪ್ರತಿಭಟನೆ

ಮಡಿಕೇರಿ, ಮಾ.29–ಪ್ರಧಾನಿ ನರೇಂದ್ರ ಮೋದಿ ವಿರುದ್ಧ ಸಚಿವ ಶಿವರಾಜ್ ತಂಗಡಗಿ ನೀಡಿರುವ ಹೇಳಿಕೆ ಖಂಡಿಸಿ ಕೊಡಗು ಜಿಲ್ಲಾ ಬಿಜೆಪಿ ಯುವ ಮೋರ್ಚಾ ಕಾರ್ಯಕರ್ತರು ನಗರದ ಜನರಲ್ ಕೆ.ಎಸ್.ತಿಮ್ಮಯ್ಯ ವೃತ್ತದಲ್ಲಿ ಶುಕ್ರವಾರ ಪ್ರತಿಭಟನೆ ನಡೆಸಿದರು.

ಜನರಲ್ ತಿಮ್ಮಯ್ಯ ವೃತ್ತದಲ್ಲಿ ಸಮಾವೇಶಗೊಂಡ ಪಕ್ಷದ ಕಾರ್ಯಕರ್ತರು, ಸಚಿವ ಶಿವರಾಜ್ ತಂಗಡಗಿ ವಿರುದ್ಧ ಘೋಷಣೆ ಕೂಗಿ ಪ್ರತಿಭಟಿಸಿದರು.

ಬಿಜೆಪಿ ಜಿಲ್ಲಾಧ್ಯಕ್ಷ ನಾಪಂಡ ರವಿ ಕಾಳಪ್ಪ ಮಾತನಾಡಿ, ಕನ್ನಡ ಮತ್ತು ಸಂಸ್ಕೃತಿ ಸಚಿವ ಶಿವರಾಜ್ ತಂಗಡಗಿ ಅವರ ಹೇಳಿಕೆ ಕಾಂಗ್ರೆಸ್ ಸಂಸ್ಕೃತಿಯನ್ನು ತೋರಿಸುತ್ತದೆ. ಇಂತಹ ಹೇಳಿಕೆಗಳೆಲ್ಲವು ಚುನಾವಣೆಯನ್ನು ಗುರಿಯಾಗಿಸಿಕೊಂಡು ಕಾಂಗ್ರೆಸ್ ಮಾಡುತ್ತಿದೆ. ರಾಜ್ಯದ ಯಾವ ಲೋಕಸಭಾ ಕ್ಷೇತ್ರದಲ್ಲೂ ಕಾಂಗ್ರೆಸ್ ಗೆಲುವು ಪಡೆಯಲು ಸಾಧ್ಯವಿಲ್ಲದ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಆರೋಪಿಸಿದರು.

ಸಹಿಸಿಕೊಳ್ಳಲಾಗದೆ ಪ್ರಧಾನಿ ಮೋದಿ ವಿರುದ್ಧ ಅವಹೇಳನಕಾರಿ ಹೇಳಿಕೆಗಳನ್ನು ನೀಡಲಾಗುತ್ತಿದೆ. ಪ್ರಧಾನಿ ಮೋದಿ ವಿರುದ್ಧ ಇದೇ ರೀತಿ ಹೇಳಿಕೆ ನೀಡುವುದನ್ನು ಮುಂದುವರಿಸಿದಲ್ಲಿ ಉಗ್ರ ಪ್ರತಿಭಟನೆಗೆ ಮುಂದಾಗಬೇಕಾಗುತ್ತದೆ ಎಂದು ಎಚ್ಚರಿಸಿದರು. ಕಾಂಗ್ರೆಸ್ ನಾಯಕರ ಇಂತಹ ಧೋರಣೆ ಮತ್ತು ವರ್ತನೆಗಳಿಗೆ ರಾಜ್ಯದ ಜನತೆ ತಕ್ಕ ಉತ್ತರವನ್ನು ಲೋಕಸಭಾ ಚುನಾವಣೆಯಲ್ಲಿ ನೀಡಲಿದ್ದು, ರಾಜ್ಯದ ಎಲ್ಲಾ 28 ಕ್ಷೇತ್ರಗಳಲ್ಲೂ ಬಿಜೆಪಿ–ಜೆಡಿಎಸ್ ಮೈತ್ರಿ ಗೆಲುವು ಸಾಧಿಸಲಿದೆ ಎಂದರು.



ಮಡಿಕೇರಿಯ ಜನರಲ್ ಕೆ.ಎಸ್.ತಿಮ್ಮಯ್ಯ ವೃತ್ತದಲ್ಲಿ ಸಚಿವ ಶಿವರಾಜ್ ತಂಗಡಗಿ ವಿರುದ್ಧ ಬಿಜೆಪಿ ಯುವ ಮೋರ್ಚಾ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು. ಈ ವೇಳೆ ನಾಪಂಡ ರವಿ ಕಾಳಪ್ಪ,ರಾಬಿನ್ ದೇವಯ್ಯ, ಮಹೇಶ್ ಜೈನಿ, ಕನ್ನಿಕೆ ಇತರರಿದ್ದರು.

ಬಿಜೆಪಿ ಯುವ ಮೋರ್ಚಾ ಜಿಲ್ಲಾಧ್ಯಕ್ಷ ಮಹೇಶ್ ತಿಮ್ಮಯ್ಯ ಮಾತನಾಡಿ, ವಿಶ್ವ ಮಟ್ಟದಲ್ಲಿ ಗೌರವಕ್ಕೆ ಪಾತ್ರರಾಗಿರುವ ಪ್ರಧಾನ ನರೇಂದ್ರ ಮೋದಿ ಅವರ ಬಗ್ಗೆ ಸಚಿವ ಶಿವರಾಜ ತಂಗಡಗಿ 'ಮೋದಿ ಎಂದು ಹೇಳುವ ಯುವಕರ ಕಪಾಳಕ್ಕೆ ಹೊಡೆಯಿರಿ' ಎಂದು ಅವಹೇಳನಕಾರಿ ಹೇಳಿಕೆ ನೀಡಿದ್ದಾರೆ. ಇದನ್ನು ತೀವ್ರವಾಗಿ ಖಂಡಿಸಲಾಗುವುದು. ರಾಷ್ಟ್ರದ ಹೆಮ್ಮೆಯ ಪ್ರಧಾನಿ 'ಮೋದಿ' ಅವರ ಪರವಾಗಿ ಘೋಷಣೆ ಮೊಳಗಿಸುವ ನಮ್ಮ ಕಪಾಳಕ್ಕೆ ತಾಕತ್ತಿದ್ದರೆ ಹೊಡೆಯಿರಿ. ಅದಕ್ಕೆ ನಾವು ತಕ್ಕ ಪ್ರತಿಕ್ರಿಯೆ ನೀಡುತ್ತೇವೆ. ಇದೇ ರೀತಿ ಮೋದಿ ವಿರುದ್ಧ ನಾಲಿಗೆಯನ್ನು ಹರಿಯಬಿಟ್ಟಲ್ಲಿ ರಾಜ್ಯಾದ್ಯಂತ ಶಿವರಾಜ್ ತಂಗಡಗಿ ಹೋದಡೆಯಲ್ಲೆಲ್ಲ ಬಿಜೆಪಿ ಯುವ ಮೋರ್ಚಾದಿಂದ ಘೇರಾವ್ ಹಾಕಲಾಗುವುದು ಎಂದು ಎಚ್ಚರಿಕೆ ನೀಡಿದರು.

ಪ್ರತಿಭಟನೆಯಲ್ಲಿ ಜಿಲ್ಲಾ ಬಿಜೆಪಿ ಮಾಜಿ ಅಧ್ಯಕ್ಷ ರಾಬಿನ್ ದೇವಯ್ಯ, ಪಕ್ಷದ ಪ್ರಮುಖರಾದ ಮಹೇಶ್ ಜೈನಿ, ಅರುಣ್ ಕುಮಾರ್, ಜಗದೀಶ್, ಮನು ಮಂಜುನಾಥ್, ಉಮೇಶ್ ಸುಬ್ರಮಣಿ, ಪಿ.ಎಂ.ರವಿ, ಪೂಣಚ್ಚ ಕವನ್, ಮಹಿಳಾ ಮೋರ್ಚಾದ ಕನ್ನಿಕೆ, ಶ್ವೇತಾ ಪ್ರಶಾಂತ್, ಸಬಿತಾ, ಕಾರ್ಯಕರ್ತರು ಪಾಲ್ಗೊಂಡಿದ್ದರು.

ಸೋಮವಾರಪೇಟೆ, ವಿರಾಜಪೇಟೆಯಲ್ಲಿ ಪೊಲೀಸ್ ಅಧಿಕಾರಿಗಳ ಸಭೆ

ಮಡಿಕೇರಿ, ಮಾ.29–ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಜಿಲ್ಲೆಯ ಗಡಿ ಭಾಗಗಳಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವ ಸಲುವಾಗಿ ಅಂತರ ರಾಜ್ಯ ಮತ್ತು ಜಿಲ್ಲಾ ಪೊಲೀಸ್ ಅಧಿಕಾರಿಗಳ ಮಹತ್ವದ ಸಭೆ ವಿರಾಜಪೇಟೆ ಮತ್ತು ಸೋಮವಾರಪೇಟೆಯಲ್ಲಿ ಶುಕ್ರವಾರ ನಡೆಯಿತು.

ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆಯ ಹಿರಿಯ ಅಧಿಕಾರಿಗಳ ಸೂಚನೆಯಂತೆ ವಿರಾಜಪೇಟೆಯಲ್ಲಿ ಕೊಡಗು ಮತ್ತು ಕೇರಳದ ಪೊಲೀಸ್ ಅಧಿಕಾರಿಗಳ ಸಭೆ ಹಾಗೂ ಸೋಮವಾರಪೇಟೆಯಲ್ಲಿ ಕೊಡಗು, ಹಾಸನ, ಮೈಸೂರು ಮತ್ತು ದಕ್ಷಿಣ ಕನ್ನಡ ಜಿಲ್ಲೆಯ ಪೊಲೀಸ್ ಅಧಿಕಾರಿಗಳ ಸಭೆ ನಡೆಯಿತು.

ಕೊಡಗು, ಹಾಸನ, ಮೈಸೂರು ಮತ್ತು ದಕ್ಷಿಣ ಕನ್ನಡ ಜಿಲ್ಲೆ ಹಾಗೂ ಕೇರಳದ ಗಡಿ ಭಾಗದ ಪ್ರದೇಶಗಳಲ್ಲಿ ಕಾನೂನು ಸುವ್ಯವಸ್ಥೆ ಕಾಯ್ದುಕೊಳ್ಳುವುದು, ಅಕ್ರಮ ಚಟುವಟಿಕೆಗಳು, ನಕ್ಸಲ್, ಸಾಮಾಜಿಕ ವಿರೋಧಿ ಚಟುವಟಿಕೆ, ಕೋಮು ಗಲಭೆ, ಚೆಕ್‌ಪೋಸ್ಟ್‌ಗಳಲ್ಲಿ ತಪಾಸಣೆ, ರೌಡಿ ಶೀಟರ್‌ಗಳ ಮೇಲೆ ನಿಗಾ ಹಾಗೂ ಇನ್ನಿತರ ಭದ್ರತಾ ವಿಷಯಗಳ ಕುರಿತು ವಿಸ್ತೃತವಾಗಿ ಚರ್ಚಿಸಲಾಯಿತು.



ಸೋಮವಾರಪೇಟೆಯಲ್ಲಿ ಕೊಡಗು, ಹಾಸನ, ಮೈಸೂರು ಮತ್ತು ದಕ್ಷಿಣ ಕನ್ನಡ ಜಿಲ್ಲೆಯ ಪೊಲೀಸ್ ಅಧಿಕಾರಿಗಳ ಸಭೆ ನಡೆಯಿತು.

ಸಭೆಯಲ್ಲಿ ಮಡಿಕೇರಿ ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಕೆ.ಎಸ್.ಸುಂದರ್ ರಾಜ್, ಕೇರಳದ ಐರಿಟ್ಟಿ ಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ, ಯೋಗೇಶ್ ಮಾದಯ್ಯ, ಮಾನಂದವಾಡಿಯ ಡಿಎಸ್‌ಪಿ ಪಿ.ಬ್ರಿಜೇಶ್, ವಿರಾಜಪೇಟೆ ಡಿಎಸ್‌ಪಿ ಆರ್. ಮೋಹನ್ ಕುಮಾರ್, ನಾಗರಹೊಳೆ ಎಸಿಎಫ್ ಪಿ.ಅನುಷಾ, ಕುಟ್ಟ ಸರ್ಕಲ್ ಇನ್ಸ್‌ಪೆಕ್ಟರ್ ಸುನೀಲ್‌ಕುಮಾರ್, ವಿರಾಜಪೇಟೆ ಸರ್ಕಲ್ ಇನ್ಸ್‌ಪೆಕ್ಟರ್ ಶಿವರುದ್ರಪ್ಪ, ಸೋಮವಾರಪೇಟೆ ಡಿವೈಎಸ್‌ಪಿ ಆರ್.ವಿ.ಗಂಗಾಧರಪ್ಪ, ಹೊಳೆನರಸೀಪುರ ಡಿವೈಎಸ್‌ಪಿ ಅಶೋಕ್, ಸಕಲೇಶಪುರ ಡಿವೈಎಸ್‌ಪಿ ಪ್ರದೀಪ್‌ಕುಮಾರ್, ಕುಶಾಲನಗರ ಸರ್ಕಲ್ ಇನ್ಸ್‌ಪೆಕ್ಟರ್ ಕೆ. ರಾಜೇಶ್, ಬೈಲಕುಪ್ಪೆ ಸರ್ಕಲ್ ಇನ್ಸ್‌ಪೆಕ್ಟರ್ ವೀಣಾ, ಅರಕಲಗೂಡು ಸರ್ಕಲ್ ಇನ್ಸ್‌ಪೆಕ್ಟರ್ ಗೋವಿಂದ್‌ರಾಜ್ ಮತ್ತಿತರರ ಪೊಲೀಸ್ ಅಧಿಕಾರಿಗಳು ಪಾಲ್ಗೊಂಡಿದ್ದರು.

ಜನರಲ್ ತಿಮ್ಮಯ್ಯರ ಸಾಹಸಗಾಥೆ ನಿರಂತರವಾಗಿ ಪರಿಚಯಿಸಿ



ಮಡಿಕೇರಿಯ ಜನರಲ್ ತಿಮ್ಮಯ್ಯ ಪಬ್ಲಿಕ್ ಶಾಲೆಯ ಬೆಳ್ಳಿ ಮಹೋತ್ಸವದಲ್ಲಿ ವಿದ್ಯಾರ್ಥಿಗಳ ಕೋಲ್ ಡ್ರಿಲ್ ಪ್ರದರ್ಶನ ಎಲ್ಲರ ಗಮನ ಸೆಳೆಯಿತು.

ಮಡಿಕೇರಿ: ವೀರ ಅಮರ ಸೇನಾನಿ ಜನರಲ್ ಕೆ.ಎಸ್.ತಿಮ್ಮಯ್ಯ ಅವರ ಸಾಹಸಗಾಥೆಯನ್ನು ವಿದ್ಯಾರ್ಥಿಗಳಿಗೆ ನಿರಂತರ ಪರಿಚಯಿಸುವ ಕಾರ್ಯವಾಗಬೇಕು ಎಂದು ರಾಷ್ಟ್ರಪತಿ ಪ್ರಶಸ್ತಿ ಪುರಸ್ಕೃತರಾದ ಮೇಜರ್ ಬಿದ್ದಂಡ ಎ.ನಂಜಪ್ಪ ತಿಳಿಸಿದರು.

ನಗರದ ಜನರಲ್ ತಿಮ್ಮಯ್ಯ ಪಬ್ಲಿಕ್ ಶಾಲೆಯ ಬೆಳ್ಳಿ ಮಹೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ದೇಶ ವಿದೇಶಿಗರು ಜನರಲ್ ತಿಮ್ಮಯ್ಯ ಅವರ ಬಗ್ಗೆ ಅಪಾರ ಅಭಿಮಾನ ಮತ್ತು ಗೌರವ ಹೊಂದಿದ್ದಾರೆ. ಕೊಡಗಿನ ವಿದ್ಯಾರ್ಥಿಗಳಲ್ಲೂ ತಿಮ್ಮಯ್ಯ ಅವರ ಬಗ್ಗೆ ಅಭಿಮಾನ ಮೂಡಿಸಬೇಕು. ಅವರ ಆದರ್ಶಗಳನ್ನು ತಿಳಿಹೇಳಬೇಕು ಎಂದರು.

ಜನರಲ್ ತಿಮ್ಮಯ್ಯ ಅವರು ಹುಟ್ಟಿದ ಮನೆ ಸನ್ನಿಸೈಡ್ ಸ್ಮಾರಕ ಈಗ ವಿದ್ಯಾರ್ಥಿಗಳಿಗೆ ಸ್ಫೂರ್ತಿಯ ಭವನವಾಗಿದೆ. ಅಲ್ಲಿ ಅವರ ಇತಿಹಾಸ ಮಾತ್ರವಲ್ಲ, ಭಾರತೀಯ ಸೇನೆಯ ಇತಿಹಾಸವನ್ನು ತಿಮ್ಮಯ್ಯ ಅವರ ಮೂಲಕ ತೆರೆದಿಡಲಾಗಿದೆ. ಅಲ್ಲಿನ ಪ್ರತಿ ಕೋಣೆಯು ಸೈನಿಕರ ಕಥೆಗಳನ್ನು ಹೇಳುತ್ತಿದೆ. ಬೆಂಗಳೂರಿನ ಬ್ರಿಟಿಷ್ ಕಾಟನ್ ಶಾಲೆಯಲ್ಲಿ ಶಿಕ್ಷಣ ಪಡೆದ ತಿಮ್ಮಯ್ಯ ಅವರು ಕ್ರೀಡಾಕೂಟದಲ್ಲಿ ಕ್ರಿಯಾಶೀಲರಾಗಿದ್ದರು. ಸೈನಿಕರ ನಾಡು ಎಂಬ ಕೀರ್ತಿ ಹೊಂದಿರುವ ಕೊಡಗಿನಲ್ಲಿ ತಿಮ್ಮಯ್ಯ ಮ್ಯೂಸಿಯಂ ರೂಪುಗೊಂಡಿರುವುದು ಭಾರತಕ್ಕೆ ಹೆಮ್ಮೆ. ವಿದ್ಯಾರ್ಥಿಗಳಿಗೆ ಜನರಲ್ ತಿಮ್ಮಯ್ಯ ಸ್ಮಾರಕ ಭವನದ ಪರಿಚಯ ಮಾಡಿಕೊಟ್ಟು ಸೇನಾ ಸಾಹಸದ ಬಗ್ಗೆ ಅರಿವು ಮೂಡಿಸಬೇಕು ಎಂದು ಹೇಳಿದರು.

ತಿಮ್ಮಯ್ಯ ಶಾಲೆಯ ಕಾರ್ಯಾಧ್ಯಕ್ಷ ನಂದಿನೆರವಂಡ ಚೀಯಣ್ಣ ಮಾತನಾಡಿ, ಜನರಲ್ ಕೆ.ಎಸ್.ತಿಮ್ಮಯ್ಯ ಅವರು ಭಾರತೀಯ ಸೇನೆಯಲ್ಲಿ ತಮ್ಮದೇ ಆದ ಛಾಪು ಮೂಡಿಸಿದ್ದರು. ಸೇನೆಯನ್ನು ಬಲಿಷ್ಠಗೊಳಿಸುವಲ್ಲಿ ಶ್ರಮಿಸಿದ್ದರು. ತಿಮ್ಮಯ್ಯ ಅವರು ಸೇನಾ ಕ್ಷೇತ್ರದ ಮೂಲಕ ದೇಶಕ್ಕೆ ಅಪಾರ ಕೊಡುಗೆ ನೀಡಿದ್ದಾರೆ. ಇವರ ಆದರ್ಶಗಳನ್ನು ವಿದ್ಯಾರ್ಥಿಗಳು ಪಾಲಿಸಬೇಕು ಎಂದರು.

ಕರಾಟೆ ಪ್ರದರ್ಶನ: ಇದೇ ವೇಳೆ ವಿದ್ಯಾರ್ಥಿಗಳ ಕೋಲ್ ಡ್ರಿಲ್ ಮತ್ತು ಕರಾಟೆ ಪ್ರದರ್ಶನ ಎಲ್ಲರ ಗಮನ ಸೆಳೆಯಿತು. ಬೆಳ್ಳಿ ಮಹೋತ್ಸವದ ಪ್ರಯುಕ್ತ ವಿವಿಧ ವಿಭಾಗದಲ್ಲಿ ನಡೆದ ಕ್ರೀಡಾಕೂಟದ ವಿಜೇತರಿಗೆ ಗಣ್ಯರು ಬಹುಮಾನ ವಿತರಿಸಿ ಪ್ರಶಂಸೆ ವ್ಯಕ್ತಪಡಿಸಿದರು.

ಮಡಿಕೇರಿ ಕೊಡವ ಸಮಾಜದ ಅಧ್ಯಕ್ಷ ಮಂಡುವಂಡ ಪಿ.ಮುತ್ತಪ್ಪ, ತಿಮ್ಮಯ್ಯ ಶಾಲೆಯ ಪ್ರಾಂಶುಪಾಲೆ ಬಿ.ಎಂ.ಸರಸ್ವತಿ, ಕಾರ್ಯನಿರ್ವಾಹಕಿ ಮಕ್ಕಾಟಿರ ಪೊನ್ನಮ್ಮ, ಕರೆಸ್ಪಾಂಡೆಂಟ್ ಕನ್ನಂಡ ಕವಿತಾ ಬೊಳ್ಳಪ್ಪ, ನಿರ್ದೇಶಕ ಮಂಡೀರ ಸದಾ ಮುದ್ದಪ್ಪ, ಹಿರಿಯ ಸಲಹೆಗಾರರಾದ ಡಾ.ಅಮ್ಮಾಟಂಡ ಪಾರ್ವತಿ ಅಪ್ಪಯ್ಯ, ಶಿಕ್ಷಕರು, ಸಿಬ್ಬಂದಿ, ಪೋಷಕರು ಉಪಸ್ಥಿತರಿದ್ದರು.

ಶಾಸಕ ಪೊನ್ನಣ್ಣಗೆ ಮನವಿ ಸಲ್ಲಿಕೆ

ಆದಿವಾಸಿಗಳಿಗೆ ಭೂಮಿ ನೀಡುವಂತೆ ಒತ್ತಾಯ



ಭೂ ಗುತ್ತಿಗೆ ವಿರೋಧಿ ಹೋರಾಟ ಸಮಿತಿ ಹಾಗೂ ಪ್ರಗತಿಪರ ಸಂಘಟನೆಗಳ ಜಂಟಿ ವೇದಿಕೆಯ ಕಾರ್ಯಕರ್ತರು ಶಾಸಕ ಎ.ಎಸ್.ಪೊನ್ನಣ್ಣ ಅವರಿಗೆ ಮನವಿ ಸಲ್ಲಿಸಿದರು.

ವಿರಾಜಪೇಟೆ: ಜಿಲ್ಲೆಯಲ್ಲಿ ಕಾರ್ಪೋರೇಟರ್‌ಗಳು ಹಾಗೂ ದೊಡ್ಡ ಭೂ ಮಾಲೀಕರು ಒತ್ತುವರಿ ಮಾಡಿಕೊಂಡಿರುವ ಭೂಮಿಯನ್ನು ತೆರವುಗೊಳಿಸಬೇಕು. ಭೂ ರಹಿತ ಆದಿವಾಸಿ, ದಲಿತ ಸಮುದಾಯ ಹಾಗೂ ಜಾಗವಿಲ್ಲದ ನಿವಾಸಿಗಳಿಗೆ ಭೂಮಿ ನೀಡುವಂತೆ ಒತ್ತಾಯಿಸಿ ಕೊಡಗು ಜಿಲ್ಲಾ ಭೂ ಗುತ್ತಿಗೆ ವಿರೋಧಿ ಹೋರಾಟ ಸಮಿತಿ ಹಾಗೂ ಪ್ರಗತಿಪರ ಸಂಘಟನೆಗಳ ಜಂಟಿ ವೇದಿಕೆಯ ಕಾರ್ಯಕರ್ತರು ಶಾಸಕ ಎ.ಎಸ್.ಪೊನ್ನಣ್ಣ ಅವರಿಗೆ ಮನವಿ ಸಲ್ಲಿಸಿದರು.

ಭೂ ಗುತ್ತಿಗೆ ವಿರೋಧಿ ಹೋರಾಟ ಜಿಲ್ಲಾ ಸಮಿತಿ ಹೆಚ್.ಎಸ್.ಕೃಷ್ಣಪ್ಪ ಮಾತನಾಡಿ, ಕೊಡಗು ಜಿಲ್ಲೆಯಲ್ಲಿ ಭೂ ರಹಿತರ ದೊಡ್ಡ ಸಮಸ್ಯೆಯಾಗಿದೆ. ಬಹುತೇಕ ಆದಿವಾಸಿಗಳು ಹಾಗೂ ದಲಿತ ಸಮುದಾಯದವರು ಲೈನ್ ಮನೆ ಹಾಗೂ ಇತರೆಡೆ ವಾಸವಾಗಿದ್ದು, ಅವರಿಗೆ ಸ್ವಂತ ಭೂಮಿ ಇಲ್ಲದಂತಾಗಿದೆ. ಉಳ್ಳವರು ಒತ್ತುವರಿ ಮಾಡಿಕೊಂಡಿರುವ ಭೂಮಿಯನ್ನು ಸರ್ಕಾರ ವಶಪಡಿಸಿಕೊಂಡು ಭೂ ರಹಿತ ಬಡ ಕಾರ್ಮಿಕ ಕುಟುಂಬಗಳಿಗೆ ಹಂಚಿಕೆ ಮಾಡಬೇಕು ಎಂದು ಮನವಿ ಮಾಡಿದರು.

ಸರ್ಕಾರ ಜಾರಿಗೆ ತಂದಿರುವ ಭೂ ಗುತ್ತಿಗೆ ಕಂದಾಯ ಕಾಯ್ದೆ ತಿದ್ದುಪಡಿಯನ್ನು ರದ್ದು ಗೊಳಿಸಬೇಕು. ಅಕ್ರಮ–ಸಕ್ರಮ ಯೋಜನೆಯ ಬಾಕಿ ಇರುವ ಕಡತಗಳನ್ನು ಶೀಘ್ರವಾಗಿ ವಿಲೇವಾರಿ ಮಾಡಬೇಕು ಎಂದು ಆಗ್ರಹಿಸಿದರು.

ಮನವಿ ಸ್ವೀಕರಿಸಿದ ಮಾತನಾಡಿದ ಶಾಸಕ ಎ.ಎಸ್.ಪೊನ್ನಣ್ಣ ಈ ಸಮಸ್ಯೆ ಕೊಡಗಿನಲ್ಲಿ ಮಾತ್ರವಲ್ಲ. ಏಲಕ್ಕಿ, ಕಾಫಿ, ಕಾಳು ಮೆಣಸು, ರಬ್ಬರ್, ಟೀಸೊಪ್ಪು ಬೆಳೆಯುವ ಪ್ರದೇಶಗಳಾದ ಕೊಡಗು, ಚಿಕ್ಕಮಗಳೂರು, ಹಾಸನ, ಶಿವಮೊಗ್ಗ ಜಿಲ್ಲೆಯಲ್ಲೂ ಇದೆ.

ಈ ನಾಲ್ಕು ಜಿಲ್ಲೆಯ ಶಾಸಕರ ನಿಯೋಗ ತೆರಳಿ ಮುಖ್ಯಮಂತ್ರಿಗಳ ಬಳಿ ಚರ್ಚಿಸಿ ಬಗೆಹರಿಸಬೇಕು. ಶಾಸಕರ ನಿಯೋಗದೊಂದಿಗೆ ಭೂ ಗುತ್ತಿಗೆ ವಿರೋಧಿ ಹೋರಾಟ ಸಮಿತಿಯವರು ಬರುವಂತೆ ತಿಳಿಸಿದರು.

ಇದೇ ವೇಳೆ ಭೂ ಗುತ್ತಿಗೆ ವಿರೋಧಿ ಹೋರಾಟ ಸಮಿತಿಯ ಜಿಲ್ಲಾ ಪ್ರಧಾನ ಸಂಚಾಲಕರಾದ ರಮೇಶ್ ಮಯಮುಡಿ, ವೈ.ಕೆ.ಗಣೇಶ್, ಸಂಚಾಲಕರಾದ ಹೆಚ್.ಬಿ. ರಮೇಶ್, ವಿ.ಆರ್.ರಜನಿಕಾಂತ್, ಡಿ.ಎಸ್. ನಿರ್ವಣಪ್ಪ ಎ.ಆರ್.ಶಿವಪ್ಪ, ಹೆಚ್.ಎಂ. ಕಾವೇರಿ, ಗಾಯತ್ರಿ ನರಸಿಂಹ, ಸತೀಶ್ ಮತ್ತಿತರರು ಹಾಜರಿದ್ದರು.

ಮೌಢ್ಯ ಸರ್ಕಾರ ನಮಗೆ ಬೇಡ

ನರೇಂದ್ರ ಮೋದಿ ಸರ್ಕಾರದ ವಿರುದ್ಧ ಸಚಿವ ಡಾ.ಎಚ್.ಸಿ.ಮಹದೇವಪ್ಪ ವಾಗ್ದಾಳಿ

ಚಾಮರಾಜನಗರ, ಮಾ.29–ಜಾಗಟೆ ಬಾರಿಸಿ, ಚಪ್ಪಾಳೆ ತಟ್ಟಿ ಹಾಗೂ ದೀಪಹಚ್ಚಿ ಕೊರೊನಾ ಹೋಡಿಸಿ ಎಂದು ಹೇಳಿ ಜನರನ್ನು ಮೂಢನಂಬಿಕೆಗೆ ತಳ್ಳುವ ಪ್ರಧಾನಿ ನಮ್ಮನ್ನು ಆಳುತ್ತಿದ್ದಾರೆ. ಇದನ್ನೇ ಅವರು ಸನಾತನವಾದ ಎಂದು ಹೇಳುತ್ತಾರೆ. ಇಂತಹ ಮೌಢ್ಯವುಳ್ಳ ಸರ್ಕಾರ ನಮಗೆ ಬೇಡ ಎಂದು ಸಮಾಜ ಕಲ್ಯಾಣ ಸಚಿವ ಡಾ.ಎಚ್.ಸಿ.ಮಹದೇವಪ್ಪ ಮೋದಿ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದರು.

ನಗರದ ಮಾಂಗಲ್ಯ ಕಲ್ಯಾಣ ಮಂಟಪದಲ್ಲಿ ಶುಕ್ರವಾರ ನಡೆದ ಚಾಮರಾಜನಗರ ಬ್ಲಾಕ್ ಮತ್ತು ಗ್ರಾಮಾಂತರ ಬ್ಲಾಕ್ ಕಾಂಗ್ರೆಸ್ ಮುಖಂಡರ ಮತ್ತು ಕಾರ್ಯಕರ್ತರ ಸಭೆ ಉದ್ಘಾಟಿಸಿ ಮಾತನಾಡಿದ ಅವರು, ಕೋಮುವಾದ ಬಿಜೆಪಿಯನ್ನು ತೊಲಗಿಸುವ ಜವಾಬ್ದಾರಿ ಕಾಂಗ್ರೆಸ್‌ನ ಮುಖಂಡರು ಹಾಗೂ ಕಾರ್ಯಕರ್ತರ ಮೇಲಿದೆ. ಇದನ್ನು ಲೋಕಸಭೆ ಚುನಾವಣೆಯಲ್ಲಿ ನಾವೆಲ್ಲರೂ ಸಾಬೀತುಪಡಿಸಬೇಕು ಎಂದು ತಿಳಿಸಿದರು.

> ರಸ್ತೆಗಳ ಅಭಿವೃದ್ಧಿ, ಬಿ.ರಾಚಯ್ಯನವರ ಸ್ಮಾರಕ, ಮೆಡಿಕಲ್ ಕಾಲೇಜು ಸೇರಿದಂತೆ ಹಲವು ಕೊಡುಗೆಗಳನ್ನು ಜಿಲ್ಲೆಗೆ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ನೀಡಿದೆ. ಎಲ್ಲಾ ವರ್ಗ, ಧರ್ಮದ ಅಭಿವೃದ್ಧಿ ರಾಜ್ಯ ಕಾಂಗ್ರೆಸ್ ಸರ್ಕಾರ ಮಾಡಿದ್ದು, ಇದನ್ನು ಕ್ಷೇತ್ರದ ಪ್ರತಿಯೊಬ್ಬ ಮತದಾರರಿಗೂ ಪಕ್ಷದ ಕಾರ್ಯಕರ್ತರು ತಿಳಿಸಿ, ಕಾಂಗ್ರೆಸ್ ಗೆಲುವಿಗೆ ಶ್ರಮಿಸಬೇಕು.
> –ಎ.ಆರ್.ಕೃಷ್ಣಮೂರ್ತಿ, ಶಾಸಕ

> ಚುನಾವಣೆಗೆ ಸಮಯ ಕಡಿಮೆ ಇದ್ದು, ಎಲ್ಲಾ 8 ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಮನೆ–ಮನೆಗೆ ಅಭ್ಯರ್ಥಿ ತೆರಳಿ ಪ್ರಚಾರ ಮಾಡಲು ಸಾಧ್ಯವಿಲ್ಲ. ಕಾರ್ಯಕರ್ತರು ಪಕ್ಷದ ಪರವಾಗಿ ಮತ ಪ್ರಚಾರ ಮಾಡಿ, ಪಕ್ಷಕ್ಕೆ ಹೆಚ್ಚಿನ ಮತ ತರಲು ಪ್ರಯತ್ನಿಸಬೇಕು.
> –ಯತ್ರೀಂದ್ರ ಸಿದ್ದರಾಮಯ್ಯ, ಮಾಜಿ ಶಾಸಕ

ಯುಪಿಎ ಸರ್ಕಾರ ತನ್ನ ಅಧಿಕಾರಾವಧಿಯಲ್ಲಿ ಆಹಾರ ಭದ್ರತೆ ಕಾಯ್ದೆ ಹಾಗೂ ಉದ್ಯೋಗ ಭದ್ರತೆ ಯೋಜನೆಗಳನ್ನು ಜಾರಿಗೊಳಿಸಿತು. ಆದರೆ, ಬಿಜೆಪಿ ಪ್ರತಿವರ್ಷ ಎರಡು ಕೋಟಿ ಉದ್ಯೋಗ ಕೊಡುವುದಾಗಿ ಹಾಗೂ ಪ್ರತಿಯೊಬ್ಬರ ಖಾತೆಗೆ 15 ಲಕ್ಷ ರೂ. ಹಾಕುವುದಾಗಿ ಹೇಳಿತ್ತು. ಯಾವುದನ್ನೂ ಮಾಡಲಿಲ್ಲ. ಆದರೆ, ಬಿಜೆಪಿಯನ್ನು ಪ್ರಶ್ನೆ ಮಾಡುವವರ ವಿರುದ್ಧ ಪ್ರಕರಣಗಳನ್ನು ದಾಖಲಿಸಲಾಗುತ್ತಿದೆ ಎಂದರು.

ದೇಶದ ಮೂಲ ಕಸುಬು ಕೃಷಿ ಇನ್ನೂ ತೆವಳುತ್ತಿದೆ. ಬಾಕ್ರಾನಾಂಗಲ್ ಅಣೆಕಟ್ಟೆ ಕಟ್ಟದಿದ್ದರೆ ದೇಶದಲ್ಲಿ ಹಸಿರು ಕಾಂತ್ರಿ ಮಾಡಲು ಸಾಧ್ಯವಾಗುತ್ತಿರಲಿಲ್ಲ. ಆದರೆ, ಬಿಜೆಪಿಯವರು ತಮ್ಮ 10 ವರ್ಷದ ಅಧಿಕಾರಾವಧಿಯಲ್ಲಿ ದೇಶದ ಯಾವ ಭಾಗದಲ್ಲೂ ಒಂದು ಅಣೆಕಟ್ಟೆಯನ್ನು ನಿರ್ಮಾಣ ಮಾಡಲಿಲ್ಲ. ರೈತರ ಆದಾಯವನ್ನು ಹೆಚ್ಚಿಸುವುದಾಗಿ ಹೇಳಿದ್ದ ಬಿಜೆಪಿ ಭೂ ಶಾಸನ ಕಾಯ್ದೆಯನ್ನು ರದ್ದು ಮಾಡಿತು. ಇವರಿಂದಾಗಿ ರೈತರ ಹಾಗೂ ಹಳ್ಳಿಯ ಬದುಕು ಕಂಗಾಲಾಗಿದೆ ಎಂದು ಆರೋಪಿಸಿದರು.

ಈ ಬಾರಿ ಜಿಲ್ಲೆಯಲ್ಲಿ ಕಾಂಗ್ರೆಸ್‌ಗೆ ಯಾವುದೇ ಅಪಸ್ವರವಿಲ್ಲ. ಎಲ್ಲಾ ಶಾಸಕರು ಹಾಗೂ ಮುಖಂಡರು ಉತ್ಸಾಹದಿಂದ ಇದ್ದಾರೆ. ಹೀಗಾಗಿ ಎಲ್ಲರೂ ಒಗ್ಗೂಡಿ ಚುನಾವಣೆಯನ್ನು ಎದುರಿಸೋಣ. ಪ್ರತಿಯೊಬ್ಬರು ಮನೆ–ಮನೆಗೆ ತೆರಳಿ ಪಕ್ಷದ ಪರವಾಗಿ ಪ್ರಚಾರ ನಡೆಸಿ, ಕಾಂಗ್ರೆಸ್ ಅಭ್ಯರ್ಥಿ ಗೆಲುವಿಗೆ ಶ್ರಮಿಸೋಣ ಎಂದರು.



ಚಾಮರಾಜನಗರದ ಮಾಂಗಲ್ಯ ಕಲ್ಯಾಣ ಮಂಟಪದಲ್ಲಿ ನಡೆದ ಕಾಂಗ್ರೆಸ್ ಮುಖಂಡರ ಮತ್ತು ಕಾರ್ಯಕರ್ತರ ಸಭೆಯನ್ನು ಸಚಿವ ಡಾ.ಎಚ್.ಸಿ.ಮಹದೇವಪ್ಪ ಉದ್ಘಾಟಿಸಿದರು. ಈ ವೇಳೆ ಶಾಸಕರಾದ ಎ.ಆರ್.ಕೃಷ್ಣಮೂರ್ತಿ, ಎಚ್.ಎಂ. ಗಣೇಶಪ್ರಸಾದ್, ವಿಧಾನಪರಿಷತ್ ಸದಸ್ಯ ತಿಮ್ಮಯ್ಯ, ಮಾಜಿ ಶಾಸಕರಾದ ಯತ್ರೀಂದ್ರ ಸಿದ್ದರಾಮಯ್ಯ, ಜಿ.ಎನ್.ನಂಜುಂಡಸ್ವಾಮಿ ಇತರರಿದ್ದರು.

ಸಿಎಂ ಜೊತೆ ನಾಮಪತ್ರ ಸಲ್ಲಿಕೆ: ಚಾಮರಾಜನಗರ ಲೋಕಸಭೆ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಸುನೀಲ್‌ಬೋಸ್ ಏ.3ರಂದು ನಾಮಪತ್ರ ಸಲ್ಲಿಸುತ್ತಿದ್ದು, ಈ ವೇಳೆ ಮುಖ್ಯಮಂತ್ರಿ ಸಿದ್ದರಾಮಯ್ಯ ಪಾಲ್ಗೊಳ್ಳಲಿದ್ದಾರೆ ಎಂದು ಶಾಸಕ ಸಿ.ಪುಟ್ಟರಂಗಶೆಟ್ಟಿ ತಿಳಿಸಿದರು.

ನಾಮಪತ್ರ ಸಲ್ಲಿಕೆಗೆ ಎಲ್ಲಾ ಸಿದ್ಧತೆ ಮಾಡಿಕೊಳ್ಳಲಾಗಿದೆ. ಅದೇ ದಿನ ಮಧ್ಯಾಹ್ನ 3 ಗಂಟೆ ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಲಕ್ಷ್ಮಣ ಅವರ ನಾಮಪತ್ರ ಸಲ್ಲಿಕೆ ವೇಳೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಜರಾಗಲಿದ್ದಾರೆ ಎಂದರು.

ಕಾರ್ಯಕ್ರಮದಲ್ಲಿ ಶಾಸಕ ಎಚ್.ಎಂ. ಗಣೇಶಪ್ರಸಾದ್, ವಿಧಾನಪರಿಷತ್ ಸದಸ್ಯ ತಿಮ್ಮಯ್ಯ, ರಾಜ್ಯ ಆಹಾರ ಉಗ್ರಾಣ ನಿಗಮದ ಅಧ್ಯಕ್ಷ ಎಸ್.ಜಯಣ್ಣ, ಕಾಡಾಧ್ಯಕ್ಷ ಪಿ.ಮರಿಸ್ವಾಮಿ, ಮಾಜಿ ಶಾಸಕ ಜಿ.ಎನ್.ನಂಜುಂಡಸ್ವಾಮಿ, ಮಾಜಿ ಸಂಸದ ಕಾಗಲವಾಡಿ ಶಿವಣ್ಣ, ಅಭ್ಯರ್ಥಿ ಸುನೀಲ್ ಬೋಸ್, ಮುಖಂಡರಾದ ಎಚ್.ಸಿ.ಬಸವರಾಜು, ಯೋಗೇಶ್, ಶ್ರೀನಿವಾಸನಾಯಕ್, ಲತಾಜತ್ತಿ, ಕೆ.ಪಿ.ಸದಾಶಿವಮೂರ್ತಿ, ಎಚ್.ವಿ.ಚಂದ್ರು, ಮಹಮ್ಮದ್ ಅಸ್ಗರ್ ಮುನ್ನಾ, ಬಿ.ಕೆ.ರವಿಕುಮಾರ್, ಎ.ಎಸ್. ಗುರುಸ್ವಾಮಿ, ಆರ್.ಮಹದೇವು, ನಾಗೇಂದ್ರ, ಕೆರಹಳ್ಳಿ ನವೀನ್ ಇತರರು ಇದ್ದರು.

ಏ.4, ಹಿಮವದ್ ಗೋಪಾಲಸ್ವಾಮಿ ರಥೋತ್ಸವ

ಗುಂಡ್ಲುಪೇಟೆ, ಮಾ.29– ತಾಲೂಕಿನ ಶ್ರೀ ಹಿಮವದ್ ಗೋಪಾಲಸ್ವಾಮಿ ಬೆಟ್ಟದಲ್ಲಿ ಏಪ್ರಿಲ್ 4ರಂದು ಸ್ವಾಮಿಯ ಬ್ರಹ್ಮರಥೋತ್ಸವ ಹಾಗೂ ಜಾತ್ರೆ ನಡೆಯಲಿದೆ.

ಜಾತ್ರೆ ಅಂಗವಾಗಿ ಏ.1ರಂದು ಬೆಳಗ್ಗೆ ಫಲ ಪಂಚಾಮೃತಾಭಿಷೇಕ, ಸಂಜೆ ಆದಿವಾಸರ, ಅಂಕುರಾರ್ಪಣ ಗರುಡ ಪ್ರತಿಷ್ಠಾ ರಕ್ಷಾಬಂಧನ, 2ರಂದು ಬೆಳಗ್ಗೆ ಉತ್ಸವ ಪುಷ್ಪಬಲಿ, ಧ್ವಜಾರೋಹಣ, ಸಂಜೆ ಭೇರಿ ತಾಡನ ಯಾಗಶಾಲಾ ಪ್ರವೇಶ ಹಾಗೂ 3ರಂದು ಬೆಳಗ್ಗೆ ಸ್ವಾಮಿಯ ಉತ್ಸವ, ಸಂಜೆ ಕಾಶಿಯಾತ್ರಾ ಉತ್ಸವ, ಮಾಲಾ ಪೂರ್ವಕ ಶ್ರೀ ರುಕ್ಮಿಣಿ ಸತ್ಯಭಾಮ ಸಹಿತ ಹಿಮವದ್ ಗೋಪಾಲಸ್ವಾಮಿಯ ಕಲ್ಯಾಣೋತ್ಸವ ನಡೆಯಲಿದೆ.

ಏ.4ರಂದು ಬೆಳಗ್ಗೆ ಬ್ರಹ್ಮರಥೋತ್ಸವ ಹಾಗೂ ಸಂಜೆ ಶಾಂತ್ಯುತ್ಸವ ಜರುಗಲಿದೆ. 5ರಂದು ಬೆಳಗ್ಗೆ ಉತ್ಸವ ಕೈಂಕರ್ಯ ಮತ್ತು ಬೆಳ್ಳಿ ಗರುಡೋತ್ಸವ, ಸಂಜೆ ಡೋಲೋತ್ಸವ ಶಯನೋತ್ಸವ, 6ರಂದು ಬೆಳಗ್ಗೆ ಸಂಧಾನ ಲೀಲೋತ್ಸವ, ಅವಭೃತ ಸ್ನಾನ, ಸಂಜೆ ಉತ್ಸವ ಫಣಿಮಾಲಾ ಪ್ರಬಂಧಸೇವೆ, ಪೂರ್ಣಾಹುತಿ ಹಾಗೂ 7ರಂದು ಬೆಳಗ್ಗೆ ಮಹಾಭಿಷೇಕ, ಮಹಾ ಮಂಗಳಾರತಿ, ದ್ವಾದಶಾರಾಧನಾ, ಪುಷ್ಪಯಾಗ ಧ್ವಜಾವರೋಹಣ, ಉದ್ವಾಸನ ಪ್ರಬಂಧ ಸೇವೆ ಸೇತೂ ಸೇವೆ ಮೂಕಬಲಿ ನಡೆಯಲಿದೆ ಎಂದು ಪ್ರಕಟಣೆ ತಿಳಿಸಿದೆ.

ರಾಜ್ಯ ಬಿಜೆಪಿ ಸುಡುವ ಮನೆಯಾಗಿದೆ



ಗುಂಡ್ಲುಪೇಟೆಯಲ್ಲಿ ಆಯೋಜಿಸಿದ್ದ ಕಾಂಗ್ರೆಸ್ ಕಾರ್ಯಕರ್ತರ ಸಭೆಯನ್ನು ಸಚಿವ ಡಾ.ಹೆಚ್.ಸಿ.ಮಹದೇವಪ್ಪ, ಶಾಸಕ ಗಣೇಶ್ ಪ್ರಸಾದ್ ಉದ್ಘಾಟಿಸಿದರು. ಈ ವೇಳೆ ಶಾಸಕ ಎ.ಆರ್.ಕೃಷ್ಣಮೂರ್ತಿ, ಮಾಜಿ ಶಾಸಕ ಯತ್ರೀಂದ್ರ ಸಿದ್ದರಾಮಯ್ಯ ಇತರರಿದ್ದರು.

ಗುಂಡ್ಲುಪೇಟೆ ಮಾ.29–ಟಿಕೆಟ್ ಹಂಚಿಕೆ ನಂತರ ರಾಜ್ಯ ಬಿಜೆಪಿಯಲ್ಲಿ ಬಂಡಾಯ ಬುಗಿಲೆದಿದ್ದು ಸುಡುವ ಮನೆಯಾಗಿದೆ ಎಂದು ಸಚಿವ ಡಾ.ಹೆಚ್.ಸಿ.ಮಹದೇವಪ್ಪ ವ್ಯಂಗ್ಯವಾಡಿದರು.

ಪಟ್ಟಣದ ಬಸವ ಭವನದಲ್ಲಿ ಶುಕ್ರವಾರ ಆಯೋಜಿಸಿದ್ದ ಕಾಂಗ್ರೆಸ್ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿದ ಅವರು, ಲೋಕಸಭೆ ಚುನಾವಣೆಯ ಟಿಕೆಟ್ ಹಂಚಿಕೆ ವಿಚಾರವಾಗಿ 15ಕ್ಕೂ ಹೆಚ್ಚಿನ ಕ್ಷೇತ್ರಗಳಲ್ಲಿ ಬಿಜೆಪಿ ವಿರೋಧ ಎದುರಿಸುತ್ತಿದೆ. ಸುಳ್ಳು ಹೇಳಿ ಅಧಿಕಾರಕ್ಕೆ ಬಂದ ಬಿಜೆಪಿ ರೈತರು, ಬಡವರು, ಮಹಿಳೆಯರು, ಮಕ್ಕಳು ಮತ್ತು ಶೈಕ್ಷಣಿಕ, ಸಾಮಾಜಿಕ ಕ್ಷೇತ್ರಗಳ ಬಗ್ಗೆ ಯೋಚಿಸುತ್ತಿಲ್ಲ ಎಂದು ಆರೋಪಿಸಿದರು.

ವಿಶ್ವದಲ್ಲಿ ಭಾರತ ಆರ್ಥಿಕ ವ್ಯವಸ್ಥೆಯಲ್ಲಿ 126ನೇ ಸ್ಥಾನಕ್ಕಿಳಿದಿದ್ದು, ಬಿಜೆಪಿ ಧಾರ್ಮಿಕ ಭಾವನಾತ್ಮಕ ವಿಚಾರಗಳನ್ನು ಮುಂದಿಟ್ಟುಕೊಂಡು ಅಧಿಕಾರಕ್ಕೆ ಬರುತ್ತಿದೆ. ಜನಪರವಾದ ಸರ್ಕಾರ ಬರಬೇಕು ಎಂದರೆ ಕೋಮುವಾದ ತೊಲಗಬೇಕು. ನಾವು ಹಲವಾರು ಸವಾಲುಗಳನ್ನು ಮುಂದೆ ಇಟ್ಟು ಲೋಕಸಭೆ ಚುನಾವಣೆ ಎದುರಿಸುತ್ತಿದ್ದೇವೆ ಎಂದರು.

ಶಾಸಕ ಹೆಚ್.ಎಂ.ಗಣೇಶ್ ಪ್ರಸಾದ್ ಮಾತನಾಡಿ, ಕಾಂಗ್ರೆಸ್ ಅಭ್ಯರ್ಥಿಗೆ ಗುಂಡ್ಲುಪೇಟೆ ವಿಧಾನಸಭೆ ಕ್ಷೇತ್ರದಲ್ಲಿ ಹೆಚ್ಚಿನ ಮತಗಳನ್ನು ನೀಡಬೇಕು. ವಿರೋಧ ಪಕ್ಷದವರು ಅನವಶ್ಯಕವಾಗಿ ಟೀಕೆ ಮಾಡುತ್ತಿದ್ದಾರೆ. ಬಿಜೆಪಿ ಶಾಸಕರ ಅವಧಿಯಲ್ಲಿ ತಾಲೂಕು ಅಭಿವೃದ್ಧಿಯಾಗಿಲ್ಲ. ಕಾಂಗ್ರೆಸ್ ಸರ್ಕಾರ ಬಂದ ಮೇಲೆ ಅಭಿವೃದ್ಧಿ ಕಾರ್ಯಗಳು ನಡೆಯುತ್ತಿವೆ. ಇದನ್ನು ಸಹಿಸದೆ ಮಾಜಿ ಶಾಸಕರು ಕಾಂಗ್ರೆಸ್ ವಿರುದ್ಧ ಮಾತನಾಡುತ್ತಿದ್ದಾರೆ ಎಂದು ತಿಳಿಸಿದರು.

ಚಾಮುಲ್ ನಿರ್ದೇಶಕ ಹೆಚ್.ಎಸ್. ನಂಜುಂಡಪ್ರಸಾದ್, ಕಾಡಾ ಮಾಜಿ ಅಧ್ಯಕ್ಷ ನಂಜಪ್ಪ, ಮುಖಂಡರಾದ ಎ.ಸಿದ್ದರಾಜು, ಮುನಿರಾಜು, ರಾಜಶೇಖರ್, ನಾಜಿಮುದ್ದೀನ್, ಜಯರಾಮು, ಲೋಕೇಶ್, ಜಿಪಂ ಮಾಜಿ ಉಪಾಧ್ಯಕ್ಷ ಕಬ್ಬಹಳ್ಳಿ ಮಹೇಶ್, ಕಾರ್ಯಕರ್ತರು ಉಪಸ್ಥಿತರಿದ್ದರು.

ವಿಧುಶೇಖರ ಭಾರತಿ ಸ್ವಾಮೀಜಿಗೆ ಪೂರ್ಣಕುಂಭ ಸ್ವಾಗತ

ಚಾಮರಾಜನಗರ: ನಗರಕ್ಕೆ ಆಗಮಿಸಿದ ಶೃಂಗೇರಿ ಶಾರದಾ ಪೀಠದ ಶ್ರೀ ವಿಧುಶೇಖರ ಭಾರತಿ ಸ್ವಾಮೀಜಿ ಅವರಿಗೆ ಪೂರ್ಣಕುಂಭದೊಂದಿಗೆ ಸ್ವಾಗತಿಸಿ, ಆಶೀರ್ವಾದ ಪಡೆಯಲಾಯಿತು. ತಾಲೂಕಿನ ಪ್ರಸಿದ್ಧ ಧಾರ್ಮಿಕ ಕ್ಷೇತ್ರ ಕಮರವಾಡಿ ಶ್ರೀ ಸಪ್ತಮಾತೃಕ ದೇವಸ್ಥಾನಕ್ಕೆ ಆಗಮಿಸಿದ ವಿಧುಶೇಖರ ಭಾರತಿ ಶ್ರೀಗಳು, ಪೂಜಾ ಕಾರ್ಯ ನೆರವೇರಿಸಿ, ಭಕ್ತರಿಗೆ ಆಶೀರ್ವಚನ ನೀಡಿದರು. ಚಾಮರಾಜನಗರ ಜಿಲ್ಲಾ ಕೇಂದ್ರಕ್ಕೆ ಆಗಮಿಸಿದಾಗ ಗಡಿ ಭಾಗದಲ್ಲಿ ನೂರಾರು ವಿಪ್ರ ಸಮುದಾಯದವರು ಜಿಲ್ಲಾ ಬ್ರಾಹ್ಮಣ ಸಂಘದ ನೇತೃತ್ವದಲ್ಲಿ ವೇದ ಮಂತ್ರಘೋಷ, ನಾದಸ್ವರದೊಂದಿಗೆ ಪೂರ್ಣಕುಂಭ ಸ್ವಾಗತದೊಂದಿಗೆ ಪ್ರಣಾಮ ಸಲ್ಲಿಸಿದರು.



ಚಾಮರಾಜನಗರದಲ್ಲಿ ಶೃಂಗೇರಿ ಶಾರದಾ ಪೀಠದ ಶ್ರೀ ವಿಧುಶೇಖರ ಭಾರತಿ ಸ್ವಾಮೀಜಿ ಅವರಿಗೆ ಪೂರ್ಣಕುಂಭದೊಂದಿಗೆ ಸ್ವಾಗತಿಸಲಾಯಿತು.

ಹೆಬ್ಬಸೂರು ಗ್ರಾಮದಲ್ಲಿ ನೂತನವಾಗಿ ನಿರ್ಮಿಸಿರುವ ಶಾರದಾ ಕೃಪ ಸಭಾಭವನ ಉದ್ಘಾಟನೆಯನ್ನು ಶ್ರೀ ವಿಧುಶೇಖರ ಭಾರತಿ ಸ್ವಾಮೀಜಿ ನೆರವೇರಿಸಿದರು. ಜಿಲ್ಲಾ ಬ್ರಾಹ್ಮಣ ಸಂಘದ ಅಧ್ಯಕ್ಷ ಜಿ.ಎಂ.ಹೆಗಡೆ, ಪ್ರಧಾನ ಕಾರ್ಯದರ್ಶಿ ಸುರೇಶ್ ಎನ್.ಋಗ್ವೇದಿ, ಖಜಾಂಚಿ ಬಾಲಸುಬ್ರಹ್ಮಣ್ಯಂ, ಚಾ.ನಗರ ತಾಲೂಕು ಬ್ರಾಹ್ಮಣದ ಸಂಘದ ಅಧ್ಯಕ್ಷ ನಾಗರಾಜು, ಕೊಳ್ಳೇಗಾಲ ಅಧ್ಯಕ್ಷ ಶೇಖರ್ ಶಾಸ್ತ್ರಿ, ಯಳಂದೂರು ಅಧ್ಯಕ್ಷ ಮುರಳಿ, ಹೆಬ್ಬಸೂರು ಶೃಂಗೇರಿ ಶಂಕರ ಮಠದ ಶಾಖಾ ಮಠದ ಧರ್ಮಾಧಿಕಾರಿ ಶ್ರೀಧರ್ ಪ್ರಸಾದ್, ಬ್ರಾಹ್ಮಿ ಮಹಿಳಾ ಸಂಘದ ಅಧ್ಯಕ್ಷರು, ಶ್ರೀರಾಮಮಂದಿರ, ವಿವಿಧ ಸಂಘಟನೆಗಳ ಸದಸ್ಯರು, ನಗರಸಭಾ ಸದಸ್ಯರು ಉಪಸ್ಥಿತರಿದ್ದರು.

ಮದ್ದೂರು, ಬಂಡೀಪುರ ಚೆಕ್‌ಪೋಸ್ಟ್‌ನಲ್ಲಿ 4.98 ಲಕ್ಷ ರೂ. ವಶ



ಗುಂಡ್ಲುಪೇಟೆ, ಮಾ.29– ಗುಂಡ್ಲುಪೇಟೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಮದ್ದೂರು ಹಾಗೂ ಬಂಡೀಪುರ ಚೆಕ್‌ಪೋಸ್ಟ್‌ಗಳಲ್ಲಿ ಯಾವುದೇ ದಾಖಲೆ ಇಲ್ಲದೆ ಸಾಗಿಸುತ್ತಿದ್ದ 4,98,500 ರೂ.ಗಳನ್ನು ಎಸ್‌ಎಫ್‌ಟಿ ತಂಡದ ಅಧಿಕಾರಿಗಳು ಶುಕ್ರವಾರ ವಶಪಡಿಸಿಕೊಂಡಿದ್ದಾರೆ.

ಮದ್ದೂರು ಚೆಕ್‌ಪೋಸ್ಟ್‌ನಲ್ಲಿ ಕೇರಳದಿಂದ ಬರುತ್ತಿದ್ದ ಲಘು ಗೂಡ್ಸ್ ವಾಹನದಲ್ಲಿದ್ದ ಮಹಮ್ಮದ್ ಸಾದಿಕ್ ಮತ್ತು ಲೀನಿಸ್ ಅವರಿಂದ ದಾಖಲೆ ಇಲ್ಲದ 94 ಸಾವಿರ ರೂ.ಗಳನ್ನು ಮತ್ತು ಕೇರಳದಿಂದ ಬರುತ್ತಿದ್ದ ಬೋಲೆರೋ ವಾಹನದಲ್ಲಿ ಪಿ.ಕೆ.ಮೋಹನ್ ಅವರಿಂದ ದಾಖಲೆ ಇಲ್ಲದೆ ಸಾಗಿಸುತ್ತಿದ್ದ 1 ಲಕ್ಷರೂ ಅನ್ನು ಎಸ್‌ಎಫ್‌ಟಿ ಅಧಿಕಾರಿ ಡಿ.ಎಂ.ಗುರು ಮಲ್ಲೇಶ್ ತಂಡದವರು ಜಪ್ತಿ ಮಾಡಿದ್ದಾರೆ.

ಬಂಡೀಪುರ ಚೆಕ್‌ಪೋಸ್ಟ್‌ನಲ್ಲಿ ಕೇರಳದಿಂದ ಬರುತ್ತಿದ್ದ ಲಘು ಗೂಡ್ಸ್ ವಾಹನದಲ್ಲಿದ್ದ ರಫೀಕ್ ಅವರಿಂದ ದಾಖಲೆ ಇಲ್ಲದೆ 1.06 ಲಕ್ಷ ರೂ. ಅನ್ನು ಎಸ್‌ಎಫ್‌ಟಿ ಅಧಿಕಾರಿ ಎಂ.ಪಿ.ಶಿವಸ್ವಾಮಿ ತಂಡ ವಶಪಡಿಕೊಂಡಿದೆ. ಬಂಡೀಪುರ ಚೆಕ್‌ಪೋಸ್ಟ್‌ನಲ್ಲಿ ಗೂಡ್ಸ್ ವಾಹನದಲ್ಲಿ ಸಾಗಿಸುತ್ತಿದ್ದ 94,500 ರೂ. ದಿನೇಶ್ ಅವರಿಂದ ಹಾಗೂ ಮತ್ತೊಂದು ಗೂಡ್ಸ್ ವಾಹನದಲ್ಲಿ ಕಿಶೋರ ಸಾಗಿಸುತ್ತಿದ್ದ 1.04 ಲಕ್ಷ ರೂ.ಅನ್ನು ಎಸ್‌ಎಫ್‌ಟಿ ತಂಡದ ಅಧಿಕಾರಿ ಎಸ್.ಮಂಜುನಾಥ್ ಜಪ್ತಿ ಮಾಡಿದ್ದಾರೆ. ವಶಕ್ಕೆ ಪಡೆದ ಹಣವನ್ನು ಗುಂಡ್ಲುಪೇಟೆ ಉಪ ಖಜಾನೆಯಲ್ಲಿ ಇರಿಸಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಶಿಲ್ಪನಾಗ್ ತಿಳಿಸಿದ್ದಾರೆ.

ವರ್ಗೀಕೃತ ಜಾಹೀರಾತು

ಪ್ರತಿ ಸೋಮವಾರ, ಗುರುವಾರ ಮತ್ತು ಶನಿವಾರ

ರೂ. 600 + 30 ಮಾತ್ರ

ಜಾಹೀರಾತಿಗೆ ಸಂಪರ್ಕಿಸಿ 0821–2496522/23

MUDA ಸೈಟ್ ಮಾರಾಟಕ್ಕಿದೆ
ನಾಗವಾಲದ ಸೈಂಟ್ ಜೋಸೆಫ್ಸ್ ಶಾಲೆ ಹಿಂಭಾಗ ಮಯೂರ ಲೇಔಟ್‌ನಲ್ಲಿ 30×50 ಅಳತೆಯ East facing ಸೈಟು ಮಾರಾಟಕ್ಕಿದೆ.
ಬೆಲೆ : 33 ಲಕ್ಷ
9886048471

Commercial Building for Sale
1st, 2nd, 3rd & 4th Floor, 1200 sq. Ring Road, Ananda Nagar.
Contact:
9844713445, 9066637156

ತಕ್ಷಣ ಬೇಕಾಗಿದ್ದಾರೆ
ಪೆಟ್ರೋಲ್ ಬಂಕ್‌ನಲ್ಲಿ ಪಂಪ್ ಕ್ಯಾಷಿಯರ್ ಹುದ್ದೆಗೆ ಪುರುಷರು / ಮಹಿಳೆಯರು. ಅನುಭವಿಗಳಿಗೆ ಆದ್ಯತೆ.
ಖುದ್ದಾಗಿ ಸಂಪರ್ಕಿಸಿ:
ಶ್ರೀ ಸರ್ವೀಸ್ ಸ್ಟೇಷನ್ ಸರಸ್ವತಿಪುರಂ, ಮೈಸೂರು
7353592364, 9880567272

ಬೇಕಾಗಿದ್ದಾರೆ
ಹನುಮಂತು ಹೋಟೆಲ್‌ಗೆ ಹುಡುಗರು ಬೇಕಾಗಿದ್ದಾರೆ.
ಸಂಬಳ: 12000 ದಿಂದ 14000.
ಬಿ.ಎನ್. ಸ್ಟ್ರೀಟ್, ಮಾರ್ಕೆಟ್ ಬಿಲ್ಡಿಂಗ್, ಮಂಡಿ ಮೊಹಲ್ಲಾ, ಮೈಸೂರು.
ಸಂದರ್ಶನಕ್ಕೆ ಸಂಪರ್ಕಿಸಿ:
Mob: 9611431188

SUMMER CAMP
Focus on Handwriting
It's Mother root to Education.
Activities: Drawing, Painting etc.
KALA SPANDANA
at Mahila Samaj, JLB Road, Mysore.
Contact: S. Narayan
Mob: 9980337759

ಹೊಸ ಮನೆ ಮಾರಾಟಕ್ಕಿದೆ
ಸರ್ದಾರ್ ವಲ್ಲಭಾಯಿಪಟೇಲ್ ನಗರ ಮುಡಾ ಅನುಮೋದಿತ ಲೇಔಟ್ 20*40 ಅಡಿ, ಪೂರ್ವ ದಿಕ್ಕು, 3 ಬಿಹೆಚ್‌ಕೆ, ಬೋರ್‌ವೆಲ್ ಮತ್ತು ಪಿಲ್ಲರ್ ಹೊಂದಿದೆ, 100% ವಾಸ್ತು, ಉತ್ತಮ ಗುಣಮಟ್ಟದ ಹೊಸ ಮನೆ
Call: 9380284276

WANTED
ಹೆಲ್ಪರ್ಸ್ ಹುಡುಗರು
ಐಟಿಐ ಎಲೆಕ್ಟ್ರಿಕಲ್ಸ್ ಆದವರಿಗೆ ಆದ್ಯತೆ ದ್ವಿಚಕ್ರ ವಾಹನ ಹೊಂದಿರಬೇಕು ವಯಸ್ಸು 18–25 ವರ್ಷ
ಸರಸ್ವತಿಪುರಂ, ಮೈಸೂರು
98808 28999

ಬೇಕಾಗಿದ್ದಾರೆ
ಮೈಸೂರಿನ ಇಂಟೀರಿಯರ್ ಡಿಸೈನ್ ವುಡ್ ಫ್ಯಾಕ್ಟರಿಯಲ್ಲಿ ಕೆಲಸ ಮಾಡಲು ನುರಿತ ಕಾರ್ಪೆಂಟರ್‌ಗಳು ಮೆಷೀನ್ ಆಪರೇಟರ್ಸ್, ಹೆಲ್ಪರ್ಸ್ ಬೇಕಾಗಿದ್ದಾರೆ.
9353125911

MOBILE ರಿಪೇರಿ ಟ್ರೈನಿಂಗ್
18 ವರ್ಷದಿಂದ Mobile, Electrical, Electronics ಮತ್ತು Computer Hardware ರಿಪೇರಿ ಹೇಳಿಕೊಡುತ್ತಿರುವ ಏಕೈಕ ಸಂಸ್ಥೆಯಲ್ಲಿ ಶೀಘ್ರದಲ್ಲಿ ಹೊಸ ಬ್ಯಾಚ್ ಪ್ರಾರಂಭ. ಯಾವುದೇ ವಿದ್ಯಾರ್ಹತೆ ಹಾಗೂ ವಯೋಮಿತಿಯ ಅಗತ್ಯವಿಲ್ಲ. PG ವ್ಯವಸ್ಥೆಯು ಇರುತ್ತದೆ. ಕೂಡಲೇ ಸಂಪರ್ಕಿಸಿ:
SMM Institute,
ಶ್ರೀ ವೀರಭದ್ರೇಶ್ವರಸ್ವಾಮಿ ದೇವಸ್ಥಾನದ ಎದುರು, ದಳವಾಯಿ ಶಾಲೆಯ ರಸ್ತೆ, ಕೆ.ಆರ್.ಮೊಹಲ್ಲಾ ಮೈಸೂರು.
Mob.: 9986926101

SITE FOR SALE
30x40 Corner Site at Rajajnagara Near R T Layout Opposite University Layout Contact
8951820020

DTCP SITES FOR SALE
DTCP Sites
Rs. 699 per sq.ft.,
Near Jayapura,
H.D. Kote Road, Mysore.
9590491194,9606783264

RAVI SCHOOL OF MUSIC
Since 2012
Keyboard, Guitar & Ukulele Clases
Siddarthanagar, Gokulam & Dattagalli, 30 Days Summer Camp !
9343830673
9483761161

ಬೋಳು ತಲೆಯ ಸಮಸ್ಯೆಯೇ?

SMART HAIR FIXING
574, 9th Cross, Anikethara Road, kuvempunagar, Mysuru
MYSURU 9611028523 MANGALORE 9343142258

HOUSE FOR RENT
at E&F Block Kuvempunagar, Behind Shanthi Sagar Complex, 1st Floor, Independent Entrance, 3 BHK, 3 Bath Rooms, Living room, Dining Hall, Park Facing and Traffic Free Residential area
Call: 93432 89398
Also 2 BHK available for rent

SITE FOR SALE
60 X 40 North Face Sri Rampura near KSRTC Layout near Ring Road. MUDA Site, Ready for Construction, official area, 90 Lakh (Negotiable)
6360049827

GLOBAL AGENCY WANTED
SSLC, PUC, ITI FAIL / PASS
CANTEEN FREE
SALARY : 15000/-
9916739611

HOME LIFTs
Local & Branded
Stair Lifts Starting From 3.00 Lakhs
Freight / Travelators To Hotels / Godowns
Also in Existing / Old Houses – New Buildings
8660051998

ಬರವಣಿಗೆ ಕೆಲಸ
ಮನೆಯಿಂದಲೇ ಫಾರಂ ಭರ್ತಿ ಮಾಡುವ ಉದ್ಯೋಗ ಮಾಡಿ ಪ್ರತಿ 1 ಫಾರಂಗೆ 30 ರೂ.ಗಳನ್ನು ಪಡೆಯಿರಿ.
9731891409

ಸಂಪು ಮತ್ತು ಟ್ಯಾಂಕ್ ಕ್ಲೀನಿಂಗ್
Mob: 9591815191

40x60 HEBBAL 2nd Stg
Commercial Site
East Facing,MUDA,
Price - 7800/sqft
Near Kitturu Rani Chennamma Circle,40 Feet Road
8660105902

Buy / Sell SITES
Suitable To Start Construction
@ 3500 to 4000 /-
30 X 40 – 40 to 50 Lakhs
40 X 60 – 80 lacks to 1.00 Cr.
Areas Surrounding Dattagally, Vijayanagara -4, Kote Road, T.N. Pura Road, Hunusur Road
9886697052

MUDA ಸೈಟ್ ಮಾರಾಟಕ್ಕಿದೆ
ದಟ್ಟಗಳ್ಳಿಯ ಆದಿತ್ಯ ಸರ್ಕಲ್ ಪಕ್ಕದಲ್ಲಿರುವ ಅಶ್ವತ್ಥಾಮ ಲೇಔಟ್‌ನಲ್ಲಿ 40×60 ಅಳತೆಯ East facing ಕಾರ್ನರ್ ಸೈಟು ಮಾರಾಟಕ್ಕಿದೆ.
9886048471

ಬೇಕಾಗಿದ್ದಾರೆ
ಮೈಸೂರಿನ ಮೇಟಗಳ್ಳಿ KRS Road ಕೆಲಸ ನಿರ್ವಹಿಸಲು ಪುರುಷ Helpers (7th, 8th, 9th, or 10th Pass ಬೇಕಾಗಿದ್ದಾರೆ. 40 ವರ್ಷದೊಳಗಿನವರು, ಒಳ್ಳೆಯ ವೇತನ ಹಾಗೂ ಇ.ಎಸ್.ಐ., ಪಿ.ಎಫ್, ಕ್ಯಾಂಟೀನ್ ಸೌಲಭ್ಯವಿರುತ್ತದೆ. ಸಂಪರ್ಕಿಸಿ:
9611238376
7795794028

ಬೇಕಾಗಿದ್ದಾರೆ
ಹೂಟಗಳ್ಳಿ ಕೈಗಾರಿಕಾ ಪ್ರದೇಶದಲ್ಲಿರುವ ಅನಿಮಲ್ ಫೀಡ್ ಕಂಪನಿಗೆ 18 ರಿಂದ 45 ವರ್ಷದ ಪುರುಷರು ಲೋಡಿಂಗ್ ಅನ್ ಲೋಡಿಂಗ್ ಕೆಲಸಕ್ಕೆ ಹೆಲ್ಪರ್‌ಗಳು ಮತ್ತು ITI Fitter (Maintenance) ಕೆಲಸಕ್ಕೆ ಬೇಕಾಗಿದ್ದಾರೆ. ಸಂಬಳ: 19,000 OT extra 1 ಗಂಟೆಗೆ ರೂ. 100. ಸಂಪರ್ಕಿಸಿ:
ಚಾಮುಂಡೇಶ್ವರಿ ಎಂಟರ್‌ಪ್ರೈಸಸ್
ಲೋಕೇಶ ಎಸ್. 8722844236

ಸೈಟು ಮಾರಾಟಕ್ಕಿದೆ
ಜೆ.ಪಿ. ನಗರ, ಮೈಸೂರು, ರಾಘವೇಂದ್ರ ಸ್ವಾಮಿ ಮಠ ಪಕ್ಕ, ಕೃಷ್ಣಧಾಮ ಪಕ್ಕ
35x50, sq.ft. 6700,
ಸೈಟು ನಂ. 596, ಪಶ್ಚಿಮ ದಿಕ್ಕು.
Mob: 9845570573

ಮುಡಾ ಅಪ್ರೂವ್ಡ್ ಸೈಟ್ ಮಾರಾಟಕ್ಕಿದೆ
ಬ್ರಾಹ್ಮಿನ್ಸ್ ಲೇಔಟ್ 'A' ಬ್ಲಾಕ್, 60 ಅಡಿ ರಸ್ತೆ (ಪೂ.ಪ. 46 ಅಡಿ, ದ.ಉ 127 ಅಡಿ) 2 ವಿಸ್ತೀರ್ಣ 2900 ಸ್ಕ್ವೇರ್ ಫೀಟ್ ಚದರ ಅಡಿಗೆ ರೂ. 1950/–
8618644886, 9880280299

ಮನೆ ಬಾಡಿಗೆಗೆ ಇದೆ
ಸುಭಾಷ್‌ನಗರದಲ್ಲಿ (ರಾಜೇಂದ್ರನಗರದ ಹತ್ತಿರ), ಎನ್.ಆರ್. ಮೊಹಲ್ಲಾ, ಮೈಸೂರು. 3 BHK ಮನೆ, ಎಲ್ಲಾ ಸೌಕರ್ಯಗಳು ಇರುತ್ತದೆ.
7348831599 (Owner)

ಮಾರಾಟಕ್ಕಿದೆ
Mr. ಸೋಡಾ ಮಿಷನ್, 10+2, 6 ಸಿಲಿಂಡರ್, 2 ಗ್ಯಾಸ್ ಸಿಲಿಂಡರ್, ಕೂಲರ್ ಮತ್ತು ಕೌಂಟರ್ ಟೇಬಲ್.
Mob: 9742271775

SALE/RENT/LEASE
ಪ್ರಶಾಂತ ನಗರ ಗ್ರಾವಿಟಿ ನಂ. 1 ಬಡಾವಣೆ, ಮೂಡಾ ಅಪ್ರೂವಡ್ ದಡದಹಳ್ಳಿ, ಜೈಪುರ ಹೋಬಳಿ ಮೈಸೂರ್ ತಾಲ್ಲೂಕು
30X45 w/s Face Corner 3BHK, 14 sqft Independent House New Home
Rs. 75,00,000/-
(Slightly Negotiable)
8050257887, 8762705887

WEIGHT-LOSS
Cooking Classes and Weight Management Programme for Ladies, New Mothers and Housewives: Contact
9535325223

ಸಾಲ / LOANS
* House / Site Purchase
* Construction Loan
* Mortgage Loan
Loans for MUDA, Corporation, Revenue, 11A & 11B Property.
77605-98705

ಸಂಪು ಮತ್ತು ಟ್ಯಾಂಕ್ ಕ್ಲೀನಿಂಗ್
Mob: 8880558064

ಬೇಕಾಗಿದ್ದಾರೆ
ಮೈಸೂರಿನ ಟ್ರಾವಲ್ಸ್ ಕಂಪನಿಗೆ
ಕ್ಯಾಬ್ ಡ್ರೈವರ್ಸ್ ಬೇಕಾಗಿದ್ದಾರೆ
ಸಂಪರ್ಕಿಸಿ:
98806 86345

MUDA APPROVED SITES FOR SALE
30 X 40 EAST FACING 40 Lakhs
40 X 60 EAST FACING 75 Lakhs
30 X 40 WEST FACING 20 Lakhs
Near Infosys Off Hunsur Road, Mysore
Ph: 77956 09173/98800 65122

ಸಂಪು ಮತ್ತು ಟ್ಯಾಂಕ್ ಕ್ಲೀನಿಂಗ್
Mob: 7204494854

S.K. CONSTRUCTION
ಹೊಸ ಮನೆ ಕಟ್ಟಬೇಕೇ? ನಿಮ್ಮಕೈಗೆಟುಕುವ ಬೆಲೆಯಲ್ಲಿ ಅತಿ ಉತ್ತಮ ಗುಣಮಟ್ಟದಲ್ಲಿ Engineering Plan , 3D Elivation ಸಹಿತ ನಾವೇ Loan ಮಾಡಿ ನಿಮ್ಮ ಕನಸಿನ ಮನೆ ನಿರ್ಮಿಸಿ ಕೊಡುತ್ತೇವೆ.
9620528490

ಬೇಕಾಗಿದ್ದಾರೆ
ಬೋಗಾದಿ ಅಪಾರ್ಟ್‌ಮೆಂಟ್‌ನಲ್ಲಿ ಕೆಲಸ ಮಾಡಲು ಕಂಪ್ಯೂಟರ್‌ನಲ್ಲಿ ಅನುಭವವುಳ್ಳ ನುರಿತ ಸೆಕ್ಯೂರಿಟಿ ಗಾರ್ಡ್‌ಗಳು ಬೇಕಾಗಿದ್ದಾರೆ.
ವಿದ್ಯಾರ್ಹತೆ : SSLC
9900212487

ಟ್ಯಾಂಕ್ ಮತ್ತು ಸೋಲಾರ್ ಸರ್ವೀಸ್
ಜರ್ಮನ್ ಟೆಕ್ನಾಲಜಿ ಬಳಸಿ ಸಂಪು, ಟ್ಯಾಂಕ್ ಮತ್ತು ಸೋಲಾರ್ ಸರ್ವೀಸ್ ಮಾಡಲಾಗುತ್ತದೆ.
Mob: 9008711654

ಕಳೆದಿದೆ
ಮೈಸೂರು ನಗರ, ಚಾಮರಾಜ ಮೊಹಲ್ಲಾ, ಕೃಷ್ಣಮೂರ್ತಿಪುರಂ 1ನೇ ಕ್ರಾಸ್, ಮನೆ ನಂ. 1347/2 ಸಿ.ಹೆಚ್ 9/2 ಸಂಬಂಧಿಸಿದ ಕ್ರಯ ಪತ್ರವು ದಿನಾಂಕ: 25–3–2024ರಂದು ಶಿವರಾಂ ಪೇಟೆ ರಸ್ತೆಯಲ್ಲಿ ಆಕಸ್ಮಿಕವಾಗಿ ಕಳೆದುಹೋಗಿದೆ. ಸಿಕ್ಕಿದವರು ಸಂಪರ್ಕಿಸಿ: ಪಿ.ಕೆ. ಚಿದಂಬರ್
Mob: 9035041130

ನಿರ್ಮಲ ಸರ್ವೀಸ್
ಸಂಪು
ಕ್ಲೀನಿಂಗ್‌ಗಾಗಿ ಸಂಪರ್ಕಿಸಿ:
6364079244

JOB VACANCY
1) Marketing Sales Executive male (any Degree) - 2 Nos.
2) Showroom Sales Executive (female): 2 Nos.
Contact:
Century Enterprises
9341333133, 7899163458

ಗಿಚ್ಚಿ ಗಿಲಿಗಿಲಿ ಕಾರ್ಯಕ್ರಮ
31–3–2024 ಭಾನುವಾರ ಮೈಸೂರಿನ ಪುರಭವನದಲ್ಲಿ ಬೆಳಿಗ್ಗೆ 11 ಗಂಟೆಗೆ ಹಾಸ್ಯ ಕಾರ್ಯಕ್ರಮ. ಉಚಿತ ಪ್ರವೇಶ.
ಕಸ್ತೂರಿ ಚಂದ್ರು
Mob: 88676-88676

ಹೊಸ ಮನೆ ಮಾರಾಟಕ್ಕಿದೆ
20x30 ಉತ್ತರ ದಿಕ್ಕು GF+FF ರೈಲ್ವೆ ಲೇಔಟ್ ಜೆ.ಪಿ.ನಗರ, ಮೈಸೂರು
9538956060
8660108796

ಬೇಕಾಗಿದ್ದಾರೆ
1) ಸೆಕ್ಯೂರಿಟಿ ಗಾರ್ಡುಗಳು– 10 ಮಂದಿ
2) ಮಹಿಳಾ ಹೌಸ್ ಕೀಪರ್– 15 ಮಂದಿ
ESI & PF ಸೌಲಭ್ಯವಿರುತ್ತದೆ.
9686422400
9242406261

SITE FOR SALE
40x60 North, Opp. Park, Gaddige Road, Suvarna Nagar.
Mob: 9880273834

SITE FOR SALE
30x40 East face site, Gaddige Main Road, Near Ganigara Hundi (Bogadi 3 km).
Mob: 9880273834

For Rent / Lease
ವಿಜಯನಗರ 4ನೇ ಹಂತದಲ್ಲಿ 2 ರೂಮ್ ಹೊಂದಿರುವ 30x40, 2ನೇ ಮಹಡಿಯ ಮನೆ ಬಾಡಿಗೆಗೆ ಮತ್ತು ಭೋಗ್ಯಕ್ಕೆ ಇದೆ.
9206380489,7899790448

ಮನೆ ಮಾರಾಟಕ್ಕಿದೆ
30X40
New Duplex House, 4BHK Mysore Srirampura, Kandayanagara 1st stage
9945615736

ಮನೆ ಮಾರಾಟಕ್ಕಿದೆ
20x30 ಸಿಂಗಲ್‌ಫ್ಲೋರ್, ವಿಜಯನಗರ, 4ನೇ ಸ್ಟೇಜ್
9901676619|9741076619

SITES FOR SALE
30x40, North & South Facing Bank Loan Available Hale Kesare Main Road Near to Mysore Bangalore Express way
9900375763

ದಾಖಲಾತಿ ಕಳೆದಿದೆ
ನಿಂಗಪ್ಪ ಆದ ನಾನು ನಂ.229, ಕುದುರೆ ಉಮ್ಮತ್ತೂರಯ್ಯನ ತೋಟ, ಜಿ.ಎಂ.ರಸ್ತೆ, ಮಳವಳ್ಳಿ ಮಂಡ್ಯ–571430 ಇಲ್ಲಿ ವಾಸವಿದ್ದು, ಮೂಲ ನೋಂದಣಿ ಕ್ರಮಪತ್ರ, ನಂ. ಎಂಎಲ್‌ವಿ–1–00189/2005–06 ಸಿ.ಡಿ.ನಂ. ಎಂಎಲ್‌ವಿಡಿ –8 ನೋ.ದಿ.20–04–2005 ಇದು ದಿನಾಂಕ: 23–3–2024ರಂದು ಕಳೆದಿದ್ದು ಸಿಕ್ಕವರು ಸಂಪರ್ಕಿಸಿ
9964117875

HOUSE FOR SALE
South face
30x50
Duplex with 3 BHK in KSRTC LAYOUT SRIRAMPURA . CALL
9844443399

ಮೈಸೂರಿನ ರೆಸ್ಟೋರೆಂಟ್‌ನಲ್ಲಿ
ಕೌಂಟರ್ ಕೆಲಸ (ಪಾರ್ಸಲ್ ಕಟ್ಟಲು) ಮಾಡಲು ಹುಡುಗರು ಬೇಕಾಗಿದ್ದಾರೆ. ಒಳ್ಳೆಯ ಸಂಬಳ ನೀಡಲಾಗುವುದು. ಸಂಪರ್ಕಿಸಿ :
9900661620

Hiring Back office
Hiring Immidiately Male Candidates Qualification : PUC/Diploma/Any Degree, Salary: 12 to 20k, Front Office Executive Well Computer Knowledge & Responsible Person Only.
9880151303

Change of Name
I sumanth Kanti Residing @ 338, 11th cross, 4th Main, A1 Block, Vijayanagar, 3rd stage, Mysore - 570030 Have changed my Minor's child name from Sukanth Kanti to Atharv on my Own Free Will Sworn in Before Notary C Mangala, mysuru Wide Affidavit Dated 27.3.2024
Sd/- Sumanth Kanti

ಸೈಟು ಮಾರಾಟಕ್ಕಿದೆ
(MUDA APPROVED) 30×50 West face ಸರ್ಕಾರಿ ನೌಕರರ ಕ್ಷೇಮಾಭಿವೃದ್ಧಿ ಸಂಘದ ಬಡಾವಣೆ, ವಿಜಯನಗರ 4ನೇ ಹಂತದ ನಂತರ, Rastrothana ಸ್ಕೂಲ್ ನಿಂದ ಕೇವಲ 400ಮೀಟರ್,
9986174154

ತಕ್ಷಣ ಬೇಕಾಗಿದ್ದಾರೆ
1) ಸೆಕ್ಯೂರಿಟಿ ಗಾರ್ಡ್ಸ್–(ಹೂಟಗಳ್ಳಿ, ಒಂಟಿಕೊಪ್ಪಲ್, ಮೇಟಗಳ್ಳಿ)
2) ಹೌಸ್ ಕೀಪಿಂಗ್ – ಹುಡುಗರು (ರಾತ್ರಿ ಪಾಳಯದಲ್ಲಿ ಕೆಲಸ ಮಾಡಲು) ಒಂಟಿಕೊಪ್ಪಲ್, ವಿಜಯನಗರ, ಹಿನಕಲ್) ಊಟದ ವ್ಯವಸ್ಥೆ ಇರುತ್ತದೆ.
9739166772
9880419847

ಸೈಟುಗಳು ಮಾರಾಟಕ್ಕಿವೆ
ಮೈಸೂರಿನ ಬನ್ನೂರು ರಸ್ತೆಗೆ ಹತ್ತಿರವಿರುವ ಮುಡಾ ಅನುಮೋದನೆಗೊಂಡು ತಕ್ಷಣ ನೋಂದಣಿಗೆ ಸಿದ್ಧವಿರುವ ಹಾಗೂ ಸುಲಭ ಕಂತುಗಳಲ್ಲಿ ಸೈಟುಗಳು ಮಾರಾಟಕ್ಕಿವೆ.
6360633036
8088689211

FOR SALE
1. 20x30, 30x40, 30x50 Near Defence Apartments, HD Kote Road
2. 30x50 Near Varuna Lake
3. 2&3 BHK Flats at Ramkrishna Nagar
4. 100x100 Farm House @ KRS Back Water Attach 20L
5. 40x72, 35x45 House Vidyaranyapuram
6. 20x30 House Giridarshini Layout
7. 30x45 New House Near JP Nagar
PRAKRUTHI PROPERTIES
95386 90359, 90359 90359

ಮನೆಯಿಂದಲೇ ಕೆಲಸ
ನಿಮ್ಮ ಬಿಡುವಿನ ವೇಳೆಯಲ್ಲಿ ನಾವು ಕೊಡುವ ಸ್ಟೋರಿ ಬುಕ್ ರೈಟಿಂಗ್ ಫಾರಂ ಫಿಲ್ಲಿಂಗ್ ಡೇಟಾ ಎಚಿಟ್ರ ಕೆಲಸ ಮಾಡಿ ಗಳಿಸಿ 10000/- ದಿಂದ 18000/- ಕನ್ನಡ ಇಂಗ್ಲಿಷ್ ಓದಲು ಬರೆಯಲು ಬರುವ ಎಲ್ಲರಿಗೂ ಮುಕ್ತ ಅವಕಾಶ
7349338372

SITES for SALE JP Nagar Ring Road
20 x 30 - 17 Lakhs,
30 x 40 - 33 Lakhs,
Near Gurur Bus Stop, Ramabainagar,Mysore.
DTCP approved (Corporation limits)
1.5 Kms from JP Nagar Ring Road
8660105902

SITE FOR SALE
50x60 Corner S/W Kuberananda Sagar -I Very Good Location. Very near to Hunsur Road and Proposed Kushalnagar, Sri Rangapatna Highway. (Presently Construct House)
9845953653

ನಿವೇಶನಗಳು ಬೇಕಾಗಿವೆ
ಹ್ಯಾಪಿಟೌನ್ ಬಡಾವಣೆ ಹಾಗೂ ಇಲವಾಲ ಸುತ್ತಾ ಮುತ್ತಾ ನೊಂದಣಿಗೆ ಸಿದ್ಧವಿರುವ ನಿವೇಶನಗಳು ಬೇಕಾಗಿವೆ.
9019562901 | 8217596732

COMMERCIAL SPACE FOR RENT
Ground floor 1324 sqft
First floor 1534 sqft
Second floor 1534 sqft
Apolo Hospital Road, Opp. HDFC Bank Kuvempunagar, Mysore
9844405624
9738365333

ಸೈಟುಗಳನ್ನು ಕೊಳ್ಳಲು/ ಮಾರಲು ಸಂಪರ್ಕಿಸಿ
9538412881

ಉದ್ಯೋಗವಕಾಶಗಳು
1) ಸೆಕ್ಯೂರಿಟಿ ಸೂಪರ್‌ವೈಸರ್, ಸೆಕ್ಯೂರಿಟಿ ಗಾರ್ಡ್‌ಗಳು, ಮೆಷಿನ್ ಆಪರೇಟರ್‌ಗಳು, ಹೆಲ್ಪರುಗಳು ಹಾಗೂ ಕೆಫೆಗೆ ಹೆಲ್ಪರ್‌ಗಳು (ಮಹಿಳೆಯರು) ಕೆಲಸ ಮಾಡಲು ಅನುಭವವಿರುವ ಅಭ್ಯರ್ಥಿಗಳು ಬೇಕಾಗಿದ್ದಾರೆ. ಸಂಪರ್ಕಿಸಿ:
Mob: 97391 99355

SITE FOR SALE
30x40 East Face Site
MUDA APPROVED
80% Bank Loan available
Ready to Construction
Adjacent to Lal Bahadur Shastri Nagar
Close to VTU Compus
Call 9538583377

ಸೈಟುಗಳು ಮಾರಾಟಕ್ಕಿವೆ
ಮೈಸೂರು–ನಂಜನಗೂಡು ಹೈವೆ ರಸ್ತೆಯಿಂದ ಕೇವಲ 1 ಕಿ.ಮೀ ದೂರದಲ್ಲಿರುವ "ಶಿವಂ ಬಡಾವಣೆಯಲ್ಲಿ" ವಿವಿಧ ಅಳತೆಯ ಮುಡಾ ಸೈಟುಗಳು ಮಾರಾಟಕ್ಕಿವೆ.
7760591291
6363798472

ಸ್ಟಾರ್ ಮ್ಯಾರೇಜಸ್
ಎಲ್ಲಾ ಜನಾಂಗದ ವಧು–ವರರು ವಿಧುರರು–ವಿಧವೆಯರು ಹಾಗೂ ವಿಚ್ಛೇದಿತರು
8105747339

ತಕ್ಷಣ ಬೇಕಾಗಿದ್ದಾರೆ
EXPERIENCED PHARMA AIDE
(ಔಷಧಿಗಳ ಬಗ್ಗೆ ಅನುಭವವುಳ್ಳ ಸಹಾಯಕರು)
For Medical Shop
9880587586

FOR SALE
FARM LAND WITH AN AREA OF 5 ACRES HOLENARASIPURA TALUK HASSAN DISTRICT
9845073953
9845016564

ಮನೆ ಬಾಡಿಗೆಗೆ
ಮೈಸೂರು ದೇವೇಗೌಡ ಸರ್ಕಲ್ ಹತ್ತಿರ KSFC Layoutನಲ್ಲಿ 2BHK ಸೋಲಾರ್ ಸೌಲಭ್ಯವುಳ್ಳ ಮನೆ ಬಾಡಿಗೆಗೆ ದೊರೆಯುತ್ತದೆ
9620038280
9901085342

ಮನೆ ಮಾರಾಟಕ್ಕಿದೆ
NEW HOUSE FOR SALE
30x40 ಅಳತೆಯ ಉತ್ತರ ದಿಕ್ಕಿನ ಮನೆ ಹಾಗೂ ಕಾವೇರಿ ನೀರಿನ ಸೌಲಭ್ಯವುಳ್ಳ 2 ಬೆಡ್ ರೂಂ, ಗ್ರಾನೈಟ್, ಫ್ಲೋರಿಂಗ್ ಆರ್ಕಿಟೆಕ್ ವಿನ್ಯಾಸದ ಮನೆ ಚಾಮುಂಡೇಶ್ವರಿ ರೈಲ್ವೆ ಲೇಔಟ್ ಕೆ.ಆರ್.ಎಸ್. ಮುಖ್ಯ ರಸ್ತೆ, ಮಾರಾಟಕ್ಕಿದೆ.
9880268474
9482746287

SITES FOR SALE
Near Srirampura Ring Road
30x40, 30x50, 40x60
MUDA APPROVED
Bank Loan available
8296832513

SITES FOR SALE
30x50
South Face Site
ಜೊತೆಗೆ 30x10 ಅಳತೆಯ ಹೆಚ್ಚುವರಿ ಜಾಗವು ಸಿಗಲಿದೆ.
Near Rainbow School
ಗದ್ದಿಗೆ –ಬೋಗಾದಿ ರಸ್ತೆ, ಮೈಸೂರು
8151977115

ಮೈಸೂರು ಮಿತ್ರ ಓದುಗರ ಗಮನಕ್ಕೆ
ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
–ಜಾಹೀರಾತು ವ್ಯವಸ್ಥಾಪಕರು

ಮತ್ತಷ್ಟು ವರ್ಗೀಕೃತ ಜಾಹೀರಾತು ಪುಟ 10 ರಲ್ಲಿ

ಆದಾಯ ತೆರಿಗೆ ಇಲಾಖೆಯಿಂದ ಕಾಂಗ್ರೆಸ್‌ಗೆ 1,700 ಕೋಟಿ ರೂ. ಹೊಸ ನೋಟಿಸ್!

ನವದೆಹಲಿ: ಹಿಂದಿನ ವರ್ಷಗಳ ತೆರಿಗೆ ರಿಟರ್ನ್ಸ್‌ನಲ್ಲಿನ ವ್ಯತ್ಯಾಸಗಳಿಗಾಗಿ ಆದಾಯ ತೆರಿಗೆ ಇಲಾಖೆಯು 1,700 ಕೋಟಿ ರೂಪಾಯಿ ಮೊತ್ತದ ಹೊಸ ನೋಟಿಸ್ ಅನ್ನು ಕಾಂಗ್ರೆಸ್‌ಗೆ ರವಾನಿಸಿದ್ದು, ಲೋಕಸಭೆ ಚುನಾವಣೆಗೆ ಮುನ್ನ ಹಣದ ಕೊರತೆಯಿರುವ ಪಕ್ಷಕ್ಕೆ ಮತ್ತೊಂದು ಹೊಡೆತ ನೀಡಿದೆ ಎಂದು ಮೂಲಗಳು ಶುಕ್ರವಾರ ತಿಳಿಸಿವೆ.

2017-18 ರಿಂದ 2020-21 ರವರೆಗಿನ ತೆರಿಗೆ ಬಾಕಿ, ಬಡ್ಡಿ ಮತ್ತು ದಂಡಕ್ಕೆ ಸಂಬಂಧಿಸಿದಂತೆ ಹೊಸದಾಗಿ ಕಾಂಗ್ರೆಸ್‌ಗೆ ಈ ನೋಟಿಸ್ ನೀಡಲಾಗಿದೆ ಎಂದು ಮೂಲಗಳು ತಿಳಿಸಿವೆ.

2018-19ನೇ ಸಾಲಿಗೆ ಸಂಬಂಧಿಸಿದಂತೆ ಐ-ಟಿ ರಿಟರ್ನ್ಸ್ ಸಲ್ಲಿಸದ ಕಾರಣಕ್ಕೆ 201 ಕೋಟಿ ರೂ. ದಂಡ ಪಾವತಿಸಬೇಕು ಎಂದು ನೋಟಿಸ್ ನೀಡಿದ್ದ ಆದಾಯ ತೆರಿಗೆ ಇಲಾಖೆಯು, ಕಾಂಗ್ರೆಸ್ ಪಕ್ಷದ ಒಂಬತ್ತು ಬ್ಯಾಂಕ್ ಖಾತೆಗಳನ್ನು ಸ್ಥಗಿತಗೊಳಿಸಿತ್ತು.

2017 ರಿಂದ 2021ರ ಅವಧಿಯ ತೆರಿಗೆ ಮರುಮೌಲ್ಯಮಾಪನಕ್ಕೆ ಸಂಬಂಧಿಸಿದಂತೆ ಆದಾಯ ತೆರಿಗೆ ಇಲಾಖೆ ಅಧಿಕಾರಿಗಳು ಆರಂಭಿಸಿದ್ದ ಪ್ರಕ್ರಿಯೆಯ ವಿರುದ್ಧ ಕಾಂಗ್ರೆಸ್ ಸಲ್ಲಿಸಿದ್ದ ಮೇಲ್ಮನವಿಯನ್ನು ದೆಹಲಿ ಹೈಕೋರ್ಟ್ ಗುರುವಾರ (ಮಾ.28) ವಜಾ ಮಾಡಿದೆ. ಈ ಹಿನ್ನೆಲೆಯಲ್ಲಿ ಕಾಂಗ್ರೆಸ್ ಸುಪ್ರೀಂ ಕೋರ್ಟ್ ಮೆಟ್ಟಿಲೇರುವ ಸಾಧ್ಯತೆಯಿದೆ.

ಆದಾಯ ತೆರಿಗೆ ಇಲಾಖೆಯ ಕ್ರಮದಿಂದಾಗಿ ಪಕ್ಷದ ಎಲ್ಲ ರಾಜಕೀಯ ಚಟುವಟಿಕೆಗಳ ಮೇಲೆ ಪರಿಣಾಮ ಉಂಟಾಗಿದೆ. ಏಪ್ರಿಲ್ 19 ರಿಂದ ಪ್ರಾರಂಭವಾಗುವ ಲೋಕಸಭೆ ಚುನಾವಣೆಗೆ ಮುಂಚಿತವಾಗಿ ಬಿಜೆಪಿ ಆರ್ಥಿಕವಾಗಿ ಪಕ್ಷದ ಕತ್ತು ಹಿಸುಕಿದೆ ಮತ್ತು ತೆರಿಗೆ ಅಧಿಕಾರಿಗಳನ್ನು ಪಕ್ಷದ ವಿರುದ್ಧ ಬಳಸುತ್ತಿದೆ ಎಂದು ಕಾಂಗ್ರೆಸ್ ಆರೋಪಿಸಿದೆ.

ಜಮ್ಮು ಮತ್ತು ಕಾಶ್ಮೀರದಲ್ಲಿ ಕಮರಿಗೆ ಬಿದ್ದ ಎಸ್‌ಯುವಿ; 10 ಮಂದಿ ದಾರುಣ ಸಾವು

ಜಮ್ಮು: ಜಮ್ಮು-ಶ್ರೀನಗರ ರಾಷ್ಟ್ರೀಯ ಹೆದ್ದಾರಿಯಲ್ಲಿ ಸ್ಕಿಡ್ ಆಗಿ ಎಸ್‌ಯುವಿ ಕಮರಿಗೆ ಬಿದ್ದ ಪರಿಣಾಮ 10 ಮಂದಿ ಸಾವಿಗೀಡಾಗಿರುವ ಘಟನೆ ರಾಂಬನ್ ಜಿಲ್ಲೆಯಲ್ಲಿ ಶುಕ್ರವಾರ ಸಂಭವಿಸಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ವಾಹನವು ಶ್ರೀನಗರದಿಂದ ಜಮ್ಮುವಿಗೆ ತೆರಳುತ್ತಿತ್ತು ಮತ್ತು ಅದು ಜಿಲ್ಲೆಯ ಬ್ಯಾಟರಿ ಚೆಶ್ಮಾ ಪ್ರದೇಶದಲ್ಲಿ 1.15 ರ ಸುಮಾರಿಗೆ 300 ಅಡಿ ಆಳದ ಕಮರಿಗೆ ಬಿದ್ದಿದೆ. ಘಟನೆಯಲ್ಲಿ ಹತ್ತು ಮಂದಿ ಸಾವಿಗೀಡಾಗಿದ್ದಾರೆ ಎಂದು ಅವರು ಹೇಳಿದ್ದಾರೆ.

ಪೊಲೀಸರು ಮತ್ತು ರಾಜ್ಯ ವಿಪತ್ತು ನಿರ್ವಹಣಾ ಪಡೆ (ಎಸ್‌ಡಿಆರ್‌ಎಫ್) ಸಿಬ್ಬಂದಿ ಭಾರೀ ಮಳೆಯ ನಡುವೆಯೇ 10 ಪ್ರಯಾಣಿಕರ ಮೃತದೇಹಗಳನ್ನು ಕಮರಿಯಿಂದ ಹೊರತೆಗೆಯಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಜನ, ಜಾನುವಾರುಗಳಿಗೆ ನೀರನ್ನೂ ಕೊಡದ ಕಾಂಗ್ರೆಸ್ ಸರ್ಕಾರ

ಮೈಸೂರು ನಗರ ಬಿಜೆಪಿ ವಕ್ತಾರ ಎಂ.ಎ.ಮೋಹನ್ ಕಿಡಿ



ಮೈಸೂರು, ಮಾ.29(ಜಿಎ)- ರಾಜ್ಯದಲ್ಲಿ ಬರಗಾಲದಿಂದ ತತ್ತರಿಸುತ್ತಿರುವ ಜನರಿಗೆ, ಪ್ರಾಣಿ ಪಕ್ಷಗಳಿಗೆ ಅನ್ನ, ನೀರು ನೀಡದ ರಾಜ್ಯ ಕಾಂಗ್ರೆಸ್ ಸರ್ಕಾರ ನಿಷ್ಕರುಣೆಯಂತೆ ವರ್ತಿಸುತ್ತಿದೆ ಎಂದು ಬಿಜೆಪಿ ಮೈಸೂರು ನಗರ ವಕ್ತಾರ ಎಂ.ಎ.ಮೋಹನ್ ಕಿಡಿಕಾರಿದರು.

ನಗರದ ಬಿಜೆಪಿ ಕಚೇರಿಯಲ್ಲಿ ಶುಕ್ರವಾರ ನಡೆದ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ತೀವ್ರ ಬರಗಾಲದಿಂದಾಗಿ ನದಿ, ಕೆರೆ, ಅಂತರ್ಜಲವೆಲ್ಲಾ ಬತ್ತಿ ಹೋಗಿವೆ. ಜನರು, ಜಾನುವಾರುಗಳು, ಪ್ರಾಣಿ ಪಕ್ಷಿಗಳೂ ಕೂಡ ಕುಡಿಯುವ ನೀರಿಗಾಗಿ ಹಾಹಾಕಾರ ಪಡುತ್ತಿದ್ದಾರೆ. ಬೆಂಗಳೂರಿನಲ್ಲಂತೂ ಜನರಿಗೆ ಕುಡಿಯುವ ನೀರು ಸಿಗದೆ ಜನ ಗುಳೆ ಹೋಗುತ್ತಿದ್ದಾರೆ. ಹೀಗಿದ್ದರೂ ಕೂಡ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಜನರಿಗೆ ಕುಡಿಯುವ ನೀರಿನ ಪೂರೈಕೆ ಮಾಡುವಲ್ಲಿ ಸಂಪೂರ್ಣವಾಗಿ ವಿಫಲವಾಗಿದೆ ಜನರ ನೀರಿನ ಹಾಹಾಕಾರವನ್ನು ಈ ಸರ್ಕಾರ ಗಂಭೀರವಾಗಿಯೇ ಪರಿಗಣಿಸಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಬಿಪಿಎಲ್ ಕಾರ್ಡ್‌ದಾರರಿಗೆ 10 ಕೆ.ಜಿ ಅಕ್ಕಿ ಕೊಡುವುದಾಗಿ ಹೇಳಿದ ಕಾಂಗ್ರೆಸ್ ಸರ್ಕಾರ ಪ್ರಧಾನಮಂತ್ರಿ ನರೇಂದ್ರ ಮೋದಿಯವರು ನೀಡುತ್ತಿರುವ ಐದು ಕೆಜಿ ಉಚಿತ ಅಕ್ಕಿಯನ್ನೂ ಕೂಡ ಜನರಿಗೆ ಸರಿಯಾಗಿ ತಲುಪಿಸುತ್ತಿಲ್ಲ. ಇನ್ನುಳಿದ ಐದು ಕೆಜಿ ಅಕ್ಕಿಯ ಬದಲು ಹಣ ನೀಡುವುದಾಗಿ ಹೇಳಿದ್ದ ಕಾಂಗ್ರೆಸ್ ಸರ್ಕಾರ ಆ ಹಣವನ್ನೂ ಕೂಡ ಕೊಟ್ಟಿಲ್ಲ, ಎಪಿಎಲ್ ಕಾರ್ಡ್‌ದಾರರಿಗೂ ಅಕ್ಕಿ ಕೊಡುತ್ತಿಲ್ಲ. ಹೀಗಾದರೆ ಜನರೇನು ಹಸಿವಿನಿಂದ ಸಾಯಬೇಕೇ? ಎಂದು ಪ್ರಶ್ನಿಸಿದರು.

ಕಳೆದ ಎರಡು ದಿನಗಳ ಹಿಂದೆ ಮೈಸೂರಿನಲ್ಲಿ ನಡೆದ ಕಾರ್ಯಕ್ರಮವೊಂದರಲ್ಲಿ ಸಿಎಂ ಸಿದ್ದರಾಮಯ್ಯನವರು ಬಿಜೆಪಿ ಸರ್ಕಾರ ಮೈಸೂರಿನ ಲ್ಯಾನ್ಸ್‌ಡೌನ್ ಬಿಲ್ಡಿಂಗ್, ದೇವರಾಜ ಮಾರುಕಟ್ಟೆಯ ಪುನರ್ ನಿರ್ಮಾಣ ಮಾಡಲಿಲ್ಲ ಎಂದು ಆರೋಪಿಸಿದ್ದಾರೆ. ಆದರೆ, ಸಿದ್ದರಾಮಯ್ಯನವರು ಐದು ವರ್ಷಗಳ ಕಾಲ ಮುಖ್ಯಮಂತ್ರಿಯಾಗಿದ್ದರೂ ಇವರು ಯಾಕೇ ಆ ಕೆಲಸ ಮಾಡಲಿಲ್ಲ. ಈಗ ಬಜೆಟ್‌ನಲ್ಲಿ ಈ ಎರಡು ಪಾರಂಪರಿಕ ಕಟ್ಟಡಗಳನ್ನು ಪುನರ್ ನಿರ್ಮಾಣ ಮಾಡುವುದಾಗಿ ಹೇಳಿದ್ದಾರೆಯೇ ವಿನಃ ಅನುದಾನವನ್ನು ಮಾತ್ರ ನಿಗದಿಪಡಿಸಿಲ್ಲ. ಅಭಿವೃದ್ಧಿ ಕೆಲಸಗಳಿಲ್ಲ. ದುಡ್ಡಿಲ್ಲದಂತಹ ಪರಿಸ್ಥಿತಿಯನ್ನು ನಿರ್ಮಾಣ ಮಾಡಿದ್ದು, ಜನರು ಇವರ ಮಾತಿಗೆ ಮರುಳಾಗುವುದಿಲ್ಲ ಎಂದರು.

ಜಗತ್ತಿನಲ್ಲಿ ಸಂಸ್ಕೃತಿ ಇಲ್ಲದ ಯಾವುದಾದರೂ ಪಕ್ಷವಿದ್ದರೆ ಅದು ಕಾಂಗ್ರೆಸ್ ಮಾತ್ರ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಪುತ್ರರಾದ ಮಾಜಿ ಶಾಸಕ ಡಾ.ಯತೀಂದ್ರ ಸಿದ್ದರಾಮಯ್ಯ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರನ್ನು ಗೂಂಡಾ ಎಂದು ಕರೆಯುವ ಮೂಲಕ ತಮ್ಮ ಸಂಸ್ಕೃತಿ ಎಂತಹದ್ದು ಎಂಬುದನ್ನು ತೋರಿಸಿ ಕೊಂಡಿದ್ದಾರೆ. ಕೇಂದ್ರ ಗೃಹ ಸಚಿವರನ್ನು ಅವಹೇಳನ ಮಾಡಿರುವ ಡಾ.ಯತೀಂದ್ರ ಸಿದ್ದರಾಮಯ್ಯ ಕೂಡಲೇ ಬಹಿರಂಗವಾಗಿ ದೇಶದ ಜನರಲ್ಲಿ ಕ್ಷಮೆ ಯಾಚಿಸಬೇಕು ಎಂದು ಒತ್ತಾಯಿಸಿದರು. ಸುದ್ದಿಗೋಷ್ಠಿಯಲ್ಲಿ ಬಿಜೆಪಿ ಮೈಸೂರು ನಗರ ಮಾಧ್ಯಮ ಸಂಚಾಲಕ ಮಹೇಶ್ ರಾಜೇ ಅರಸ್ ಉಪಸ್ಥಿತರಿದ್ದರು.



ಆರ್‌ಸಿಬಿ ವಿರುದ್ಧ ಕೆಕೆಆರ್‌ಗೆ ಭರ್ಜರಿ ಜಯ



ಬೆಂಗಳೂರು, ಮಾ.29- ವೆಂಕಟೇಶ್ ಅಯ್ಯರ್ ಅವರ ಅರ್ಧಶತಕ ಹಾಗೂ ಸುನೀಲ್ ನರೇನ್ ಅವರ ಆಲ್‌ರೌಂಡ್ ಆಟದ ನೆರವಿನಿಂದ ಕೋಲ್ಕತ್ತಾ ನೈಟ್ ರೈಡರ್ಸ್, ರಾಯಲ್ ಚಾಲೆಂಜರ್ಸ್ ಬೆಂಗಳೂರು ವಿರುದ್ಧ 7 ವಿಕೆಟ್‌ಗಳ ಜಯ ಸಾಧಿಸಿದೆ. ಆ ಮೂಲಕ ಸತತ 2 ಜಯ ಸಾಧಿಸುವ ಮೂಲಕ ಕೆಕೆಆರ್ ಅಂಕ ಪಟ್ಟಿಯಲ್ಲಿ ಎರಡನೇ ಸ್ಥಾನ ಅಲಂಕರಿಸಿದೆ.

ಇಲ್ಲಿನ ಎಂ.ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆದ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಲೂರು ನೀಡಿದ 183 ರನ್‌ಗಳ ಗೆಲುವಿನ ಗುರಿ ಬೆನ್ನತ್ತಿದ ಕೋಲ್ಕತ್ತಾ ನೈಟ್ ರೈಡರ್ಸ್ 16.5 ಓವರ್‌ಗಳಲ್ಲಿ 3 ವಿಕೆಟ್ ನಷ್ಟಕ್ಕೆ 186 ರನ್ ಗಳಿಸಿ ಜಯ ಸಾಧಿಸಿತು. ಇದರೊಂದಿಗೆ ಇಲ್ಲಿವರೆಗೆ ತವರಿನಲ್ಲಿ ನಡೆದ ಎಲ್ಲಾ 9 ಪಂದ್ಯಗಳನ್ನು ತವರಿನ ತಂಡಗಳೇ ಜಯಗಳಿಸಿದ್ದವು. ಆದರೆ ಆರ್‌ಸಿಬಿ ತವರಿನ ಎರಡನೇ ಪಂದ್ಯದಲ್ಲಿ ಎಡವಿದೆ.

ಆರಂಭಿಕ ಆಟಗಾರರಾದ ಫಿಲ್ ಸಾಲ್ಟ್ ಮತ್ತು ಸುನೀಲ್ ನರೈನ್ ಮೊದಲ ವಿಕೆಟ್‌ಗೆ 86 ರನ್ ಜೊತೆಯಾಟವಾಡುವ ಮೂಲಕ ತಂಡಕ್ಕೆ ಭದ್ರ ಅಡಿಪಾಯ ಹಾಕಿಕೊಟ್ಟರು. ನರೈನ್ 22 ಎಸೆತಗಳಲ್ಲಿ 2 ಬೌಂಡರಿ, 5 ಸಿಕ್ಸರ್ ಒಳಗೊಂಡ 47 ರನ್ ಗಳಿಸಿದರೇ, ಇವರ ಹಿಂದೆಯೇ ಫಿಲ್ ಸಾಲ್ಟ್ 30 ರನ್ ಗಳಿಸಿ ಔಟಾದರು. ನಂತರ ಬಂದ ವೆಂಕಟೇಶ್ ಅಯ್ಯರ್ ಬಿರುಸಿನ ಆಟವಾಡಿ 20 ಎಸೆತಗಳಲ್ಲಿ 3 ಬೌಂಡರಿ, 4 ಸಿಕ್ಸರ್ ಒಳಗೊಂಡ 50 ರನ್ ಸಿಡಿಸಿ ಕ್ಯಾಚ್ ನೀಡಿ ಹೊರ ನಡೆದರು. ನಾಯಕ ಶ್ರೇಯಸ್ ಅಯ್ಯರ್ ಔಟಾಗದೇ 39, ರಿಂಕು ಸಿಂಗ್ ಔಟಾಗದೇ 5 ರನ್ ಹೊಡೆದರು. ಬೆಂಗಳೂರು ಪರ ಯಶ್ ದಯಾಳ್, ಮಾಯಾಂಕ್ ಡಾಗರ್, ವಿಜಯ್ ಕುಮಾರ್ ವೈಶಾಕ್ ತಲಾ ಒಂದೊಂದು ವಿಕೆಟ್ ಉರುಳಿಸಿದರು.

ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ರಾಯಲ್ ಚಾಲೆಂಜರ್ಸ್ ಬೆಂಗಳೂರು ವಿರಾಟ್ ಕೊಹ್ಲಿ ಅವರ ಅಕರ್ಷಕ ಅರ್ಧಶತಕದ ನೆರವಿನಿಂದ ನಿಗದಿತ 20 ಓವರ್‌ಗಳಲ್ಲಿ 6 ವಿಕೆಟ್ ನಷ್ಟಕ್ಕೆ 182 ರನ್ ಗಳಿಸಿತು.

ತಂಡದ ಪರ ಇನ್ನಿಂಗ್ಸ್ ಆರಂಭಿಸಿದ ನಾಯಕ ಫಾಫ್ ಡು ಪ್ಲೆಸಿಸ್ 8 ರನ್ ಗಳಿಸಿ ಬಹುಬೇಗ ನಿರ್ಗಮಿಸಿದರು. ಈ ವೇಳೆ ಜೊತೆಯಾದ ಕ್ಯಾಮರೋನ್ ಗ್ರೀನ್ ಹಾಗೂ ವಿರಾಟ್ ಕೊಹ್ಲಿ ಅರ್ಧಶತಕದ ಜತೆಯಾಟವಾಡುವ ಮೂಲಕ ತಂಡಕ್ಕೆ ಆಸರೆಯಾದರು. ಎರಡನೇ ವಿಕೆಟ್‌ಗೆ ಈ ಜೋಡಿ 65 ರನ್‌ಗಳ ಜತೆಯಾಟವಾಡಿತು. ಕ್ಯಾಮರೋನ್ ಗ್ರೀನ್ ಕೇವಲ 21 ಎಸೆತಗಳನ್ನು ಎದುರಿಸಿ 4 ಬೌಂಡರಿ ಹಾಗೂ 2 ಸಿಕ್ಸರ್ ಸಹಿತ 33 ರನ್ ಬಾರಿಸಿ ಆಂಡ್ರೆ ರಸೆಲ್‌ಗೆ ವಿಕೆಟ್ ಒಪ್ಪಿಸಿದರು.

ಕೊಹ್ಲಿ ಭರ್ಜರಿ ಬ್ಯಾಟಿಂಗ್: ಆರಂಭದಿಂದಲೇ ಸ್ಫೋಟಕ ಬ್ಯಾಟಿಂಗ್ ನಡೆಸಿದ ಕೊಹ್ಲಿ 36 ಎಸೆತಗಳಲ್ಲಿ ಆಕರ್ಷಕ ಅರ್ಧಶತಕ ಪೂರೈಸಿದರು. ಇದಾದ ಬಳಿಕ ಆರ್‌ಸಿಬಿ ದಿಢೀರ್ ವಿಕೆಟ್ ಕಳೆದು ಕೊಂಡ ಹಿನ್ನೆಲೆಯಲ್ಲಿ ಜವಾಬ್ದಾರಿಯುತ ಬ್ಯಾಟಿಂಗ್ ನಡೆಸಿದರು. ಅಂತಿಮವಾಗಿ ವಿರಾಟ್ ಕೊಹ್ಲಿ 59 ಎಸೆತಗಳಲ್ಲಿ ತಲಾ 4 ಬೌಂಡರಿ, ಸಿಕ್ಸರ್ ಸಹಿತ ಅಜೇಯ 83 ರನ್ ಸಿಡಿಸಿದರು.

ಕೈಕೊಟ್ಟ ಮಧ್ಯಮ ಕ್ರಮಾಂಕ: ಗ್ರೀನ್ ವಿಕೆಟ್ ಪತನದ ಬಳಿಕ ಕ್ರೀಸ್‌ಗಿಳಿದ ಗ್ಲೆನ್ ಮ್ಯಾಕ್ಸ್‌ವೆಲ್ ಫಾರ್ಮ್ ಕಂಡುಕೊಳ್ಳುವ ಯತ್ನ ನಡೆಸಿದರಾದರೂ, ದೊಡ್ಡ ಮೊತ್ತ ಕಲೆಹಾಕಲು ಯಶಸ್ವಿಯಾಗಲಿಲ್ಲ. ಮ್ಯಾಕ್ಸಿ 19 ಎಸೆತಗಳಲ್ಲಿ 3 ಬೌಂಡರಿ ಹಾಗೂ ಒಂದು ಸಿಕ್ಸರ್ ಸಹಿತ 28 ರನ್ ಬಾರಿಸಿ ನರೈನ್‌ಗೆ ವಿಕೆಟ್ ಒಪ್ಪಿಸಿದರು. ಇನ್ನು ರಜತ್ ಪಾಟೀದಾರ್ ಹಾಗೂ ಅನೂಜ್ ರಾವತ್ ತಲಾ 3 ರನ್ ಗಳಿಸಿ ವಿಕೆಟ್ ಒಪ್ಪಿಸುವ ಮೂಲಕ ನಿರಾಸೆ ಅನುಭವಿಸಿದರು. ಇನ್ನು ಕೊನೆಯಲ್ಲಿ ದಿನೇಶ್ ಕಾರ್ತಿಕ್ ಮತ್ತೊಮ್ಮೆ ಸ್ಫೋಟಕ ಬ್ಯಾಟಿಂಗ್ ನಡೆಸಿ ಆಸರೆಯಾದರು. ಡಿಕೆ 8 ಎಸೆತಗಳಲ್ಲಿ 3 ಬೌಂಡರಿ ಸಹಿತ 20 ರನ್ ಬಾರಿಸಿ ಕೊನೆಯ ಎಸೆತದಲ್ಲಿ ರನೌಟ್ ಆದರು. ಕೆಕೆಆರ್ ಪರ ಹರ್ಷಿತ್ ರಾಣಾ, ರಸೆಲ್ ತಲಾ 2, ಸುನೀಲ್ ನರೈನ್ 1 ವಿಕೆಟ್ ಪಡೆದರು. ಸುನೀಲ್ ನರೈನ್ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು.

ಅಂಕಪಟ್ಟಿ ವಿವರ

ತಂಡ	ಪಂದ್ಯಗಳು	ಗೆಲುವು	ಸೋಲು	ಡ್ರಾ	ಅಂಕ
ಚೆನ್ನೈ	2	2	0	0	4
ಕೊಲ್ಕತ್ತಾ	2	2	0	0	4
ರಾಜಸ್ಥಾನ್	2	2	0	0	4
ಹೈದರಾಬಾದ್	2	1	1	0	2
ಪಂಜಾಬ್	2	1	1	0	2
ಬೆಂಗಳೂರು	3	1	2	0	2
ಗುಜರಾತ್	2	1	1	0	2
ಡೆಲ್ಲಿ	2	0	2	0	0
ಮುಂಬೈ	2	0	2	0	0
ಲಕ್ನೋ	1	0	1	0	0

ಇಂದಿನ ಪಂದ್ಯ
ಲಕ್ನೋ ಸೂಪರ್ ಜೈಂಟ್ಸ್ V/S ಪಂಜಾಬ್ ಕಿಂಗ್ಸ್
ಸ್ಥಳ: ಅಟಲ್ ಬಿಹಾರಿ ವಾಜಪೇಯಿ ಕ್ರೀಡಾಂಗಣ, ಲಕ್ನೋ
ಸಮಯ: ಸಂಜೆ 7.30ಕ್ಕೆ


ಮೈಸೂರು-ಕೊಡಗು ಕಾಂಗ್ರೆಸ್ ಅಭ್ಯರ್ಥಿ ಲಕ್ಷ್ಮಣಗೆ 'ಬಿ' ಫಾರಂ ನೀಡಿದ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್

ಮೈಸೂರು, ಮಾ.29(ಎಸ್‌ಬಿಡಿ)- ಮೈಸೂರು-ಕೊಡಗು ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಎಂ.ಲಕ್ಷ್ಮಣಗೆ ಕೆಪಿಸಿಸಿ ಅಧ್ಯಕ್ಷರೂ ಆದ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಬೆಂಗಳೂರಿನಲ್ಲಿ ಶುಕ್ರವಾರ 'ಬಿ' ಫಾರಂ ನೀಡಿ, ಶುಭ ಹಾರೈಸಿದ್ದಾರೆ.

ಪಕ್ಷದ ಎಲ್ಲಾ ನಾಯಕರು, ಮುಖಂಡರು, ಸಾವಿರಾರು ಕಾರ್ಯಕರ್ತರೊಂದಿಗೆ ಮೆರವಣಿಗೆ ಮೂಲಕ ತೆರಳಿ ನಾಮಪತ್ರ ಸಲ್ಲಿಸಲು ಕಾಂಗ್ರೆಸ್ ಯೋಜನೆ ರೂಪಿಸಿದೆ. ಅದರಂತೆ ಏಪ್ರಿಲ್ 3 ರಂದು ಬೆಳಗ್ಗೆ 11ಕ್ಕೆ ಚಾಮರಾಜನಗರ ಲೋಕಸಭಾ ಅಭ್ಯರ್ಥಿ ಹಾಗೂ ಮಧ್ಯಾಹ್ನ 1ಕ್ಕೆ ಮೈಸೂರು-ಕೊಡಗು ಅಭ್ಯರ್ಥಿ ಉಮೇದುವಾರಿಕೆ ಸಲ್ಲಿಕೆಗೆ ಮುಹೂರ್ತ ನಿಗದಿಪಡಿಸಲಾಗಿದೆ.

ನಾಮಪತ್ರ ಸಲ್ಲಿಸುವ ಸಂದರ್ಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಕೆಪಿಸಿಸಿ ಕಾರ್ಯಾಧ್ಯಕ್ಷ ತನ್ವೀರ್ ಸೇಠ್, ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ, ಚಾಮರಾಜನಗರ ಉಸ್ತುವಾರಿ ಸಚಿವ ಕೆ.ವೆಂಕಟೇಶ್, ಮೈಸೂರು, ಕೊಡಗು ಹಾಗೂ ಚಾಮರಾಜನಗರ ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷರು, ಶಾಸಕರು, ಮಾಜಿ ಶಾಸಕರು, ಮುಖಂಡರು ಉಪಸ್ಥಿತರಿರಲಿದ್ದಾರೆ ಎಂದು ಮೈಸೂರು ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಡಾ.ಬಿ.ಜೆ.ವಿಜಯ್‌ಕುಮಾರ್ ತಿಳಿಸಿದ್ದಾರೆ.

ಪ್ರತಿಷ್ಠೆಯ ಕಣ: ಮೈಸೂರು-ಕೊಡಗು ಲೋಕಸಭಾ ಕ್ಷೇತ್ರ ಕಾಂಗ್ರೆಸ್ ಮತ್ತು ಬಿಜೆಪಿ-ಜೆಡಿಎಸ್ ಮೈತ್ರಿಕೂಟಕ್ಕೆ ಪ್ರತಿಷ್ಠೆಯ ಕಣವಾಗಿ ಮಾರ್ಪಟ್ಟಿದೆ. ಎರಡು ಅವಧಿಯಿಂದ ಬಿಜೆಪಿ ತೆಕ್ಕೆಯಲ್ಲಿರುವ ಕ್ಷೇತ್ರವನ್ನು ಮರಳಿ ಪಡೆಯಲು ಕಾಂಗ್ರೆಸ್ ಎಲ್ಲಾ ರೀತಿಯ ತಂತ್ರಗಾರಿಕೆಯೊಂದಿಗೆ ಪ್ರಯತ್ನ ನಡೆಸಿದೆ. ಇತ್ತ ಕ್ಷೇತ್ರವನ್ನು ಉಳಿಸಿಕೊಳ್ಳಲು ಬಿಜೆಪಿ, ದೋಸ್ತಿ ಜೆಡಿಎಸ್‌ನೊಂದಿಗೆ ಕಸರತ್ತು ನಡೆಸಿದೆ. ಈಗಾಗಲೇ ಸಮ್ಮಿಲನ ಸಭೆ ಮೂಲಕ ಮೈತ್ರಿ ಪಕ್ಷಗಳು ರಣ ಕಹಳೆ ಮೊಳಗಿಸಿವೆ. ಬಿಜೆಪಿ ಅಭ್ಯರ್ಥಿ ಯದುವೀರ್ ಹಾಗೂ ಕಾಂಗ್ರೆಸ್ ಅಭ್ಯರ್ಥಿ ಬಿರುಸಿನ ಪ್ರಚಾರದಲ್ಲಿ ನಿರತರಾಗಿದ್ದಾರೆ. ಈ ನಡುವೆ ನಾಮಪತ್ರ ಸಲ್ಲಿಕೆ ದಿನವೇ ಕಾಂಗ್ರೆಸ್ ನಾಯಕರು ಶಕ್ತಿ ಪ್ರದರ್ಶಿಸುವ ಯೋಜನೆ ರೂಪಿಸಿದ್ದಾರೆ. ಇದಕ್ಕೆ ಪೂರ್ವಭಾವಿಯಾಗಿ ಎಲ್ಲಾ ವಿಧಾನಸಭಾ ಕ್ಷೇತ್ರಗಳಲ್ಲೂ ಸಭೆ ನಡೆಸಲು ವೇಳಾಪಟ್ಟಿ ಸಿದ್ಧಪಡಿಸಲಾಗಿದೆ.



ಕೆಪಿಸಿಸಿ ಅಧ್ಯಕ್ಷರೂ ಆದ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಬೆಂಗಳೂರಿನಲ್ಲಿ ಶುಕ್ರವಾರ ಮೈಸೂರು-ಕೊಡಗು ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಎಂ.ಲಕ್ಷ್ಮಣಗೆ 'ಬಿ' ಫಾರಂ ನೀಡಿದರು.

ಕಾಂಗ್ರೆಸ್ ಅಭ್ಯರ್ಥಿಗಳಿಗೆ ಬಿ-ಫಾರಂ ವಿತರಿಸಿದ ಡಿಕೆಶಿ

ಬೆಂಗಳೂರು: ರಾಜ್ಯದಲ್ಲಿ ಒಂದೆಡೆ ಬೇಸಿಗೆ ಬಿಸಿಲಿನ ಝಳ ಹೆಚ್ಚಾಗತೊಡಗಿದ್ದರೆ, ಮತ್ತೊಂದೆಡೆ ಲೋಕಸಭಾ ಚುನಾವಣೆ ಕಾವು ದಿನದಿಂದ ದಿನಕ್ಕೆ ರಂಗೇರತೊಡಗುತ್ತಿದೆ. ನಾಮಪತ್ರ ಸಲ್ಲಿಕೆ ಕಾರ್ಯ ಪ್ರಾರಂಭವಾಗಿದ್ದು, ಅಲ್ಲಲ್ಲಿ ಪ್ರಮುಖ ರಾಜಕೀಯ ಪಕ್ಷಗಳ ಅಭ್ಯರ್ಥಿಗಳು ತಮ್ಮ ಉಮೇದುವಾರಿಕೆ ಸಲ್ಲಿಸುತ್ತಿದ್ದಾರೆ.

ಈ ನಡುವೆ ಲೋಕಸಭಾ ಚುನಾವಣೆಯಲ್ಲಿ ಸ್ಪರ್ಧಿಸುತ್ತಿರುವ ಕಾಂಗ್ರೆಸ್ ಅಭ್ಯರ್ಥಿಗಳಿಗೆ ಕೆಪಿಸಿಸಿ ಅಧ್ಯಕ್ಷರು ಆಗಿರುವ ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಶುಕ್ರವಾರ ತಮ್ಮ ನಿವಾಸದಲ್ಲಿ ಬಿ-ಫಾರಂ ವಿತರಿಸಿದರು. ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರದಿಂದ ಬಿಜೆಪಿ ಅಭ್ಯರ್ಥಿ ತೇಜಸ್ವಿ ಸೂರ್ಯ ಅವರ ವಿರುದ್ಧ ಸ್ಪರ್ಧಿಸುತ್ತಿರುವ ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಅವರ ಪುತ್ರಿ ಸೌಮ್ಯರೆಡ್ಡಿ ಸೇರಿದಂತೆ ಹಲವು ಬಿ-ಫಾರಂ ಪಡೆದರು. ತುಮಕೂರು ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಮುದ್ದಹನುಮೇಗೌಡ, ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಬಿ.ಎನ್ ಚಂದ್ರಪ್ಪ, ಉಡುಪಿ-ಚಿಕ್ಕಮಗಳೂರು ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಜಯಪ್ರಕಾಶ್ ಹೆಗ್ಡೆ, ಮಂಡ್ಯ ಲೋಕಸಭಾ ಕ್ಷೇತ್ರದ ಅಭ್ಯರ್ಥಿ ವೆಂಕಟರಮಣೇಗೌಡ (ಸ್ಟಾರ್ ಚಂದ್ರು) ಅವರಿಗೆ ಡಿಕೆ ಶಿವಕುಮಾರ್ ಬಿ-ಫಾರಂ ವಿತರಿಸಿದರು.

ಗೃಹ ರಕ್ಷಕ ದಳ ಪೊಲೀಸ್ ಇಲಾಖೆಗೆ ಬೆನ್ನೆಲುಬಾಗಿ ಕಾರ್ಯ ನಿರ್ವಹಿಸುತ್ತಿದೆ

• ಎಎಸ್‌ಪಿ ಡಾ.ಬಿ.ಎನ್.ನಂದಿನಿ ಅಭಿಮತ • ಗೃಹ ರಕ್ಷಕರ ಮೂಲ ತರಬೇತಿ ಶಿಬಿರದ ಮೊದಲನೇ ಬ್ಯಾಚ್‌ನ ಸಮಾರೋಪ



ಮೈಸೂರು ಜಿಲ್ಲಾ ಗೃಹ ರಕ್ಷಕ ದಳದ ವತಿಯಿಂದ ಆಯೋಜಿಸಿದ್ದ ಗೃಹ ರಕ್ಷಕರ ಮೂಲ ತರಬೇತಿ ಶಿಬಿರದ ಮೊದಲ ಬ್ಯಾಚ್ ಸಮಾರೋಪ ಹಾಗೂ ಎರಡನೇ ಬ್ಯಾಚ್‌ನ ಉದ್ಘಾಟನಾ ಸಮಾರಂಭದಲ್ಲಿ ಎಎಸ್‌ಪಿ ಡಾ.ಬಿ.ಎನ್.ನಂದಿನಿ(ಬಲದಿಂದ 3ನೆಯವರು), ತರಬೇತಿ ಪಡೆದವರಿಗೆ ಪ್ರಮಾಣ ಪತ್ರ ವಿತರಿಸಿದರು.

ಮೈಸೂರು, ಮಾ.29(ಎಸ್‌ಬಿಡಿ)- ಗೃಹ ರಕ್ಷಕ ದಳವು ಪೊಲೀಸ್ ಇಲಾಖೆಗೆ ಬೆನ್ನೆಲುಬಾಗಿ ಕಾರ್ಯ ನಿರ್ವಹಿಸುತ್ತಿದೆ ಎಂದು ಅಪರ ಪೊಲೀಸ್ ಅಧೀಕ್ಷಕಿ (ಎಎಸ್‌ಪಿ) ಡಾ.ಬಿ.ಎನ್.ನಂದಿನಿ ಅಭಿಪ್ರಾಯಿಸಿದರು.

ಮೈಸೂರು ಜಿಲ್ಲಾ ಗೃಹ ರಕ್ಷಕ ದಳದ ವತಿಯಿಂದ ನಗರದ ಜ್ಯೋತಿನಗರ ಡಿಎಆರ್ ಸಮುದಾಯ ಭವನದಲ್ಲಿ ಶುಕ್ರವಾರ ಆಯೋಜಿಸಿದ್ದ ಗೃಹ ರಕ್ಷಕರ ಮೂಲ ತರಬೇತಿ ಶಿಬಿರದ ಮೊದಲನೇ ಬ್ಯಾಚ್ ಸಮಾರೋಪ ಹಾಗೂ ಎರಡನೇ ಬ್ಯಾಚ್‌ನ ಉದ್ಘಾಟನಾ ಸಮಾರಂಭಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಅಗ್ನಿಶಾಮಕ ಇಲಾಖೆ, ಗೃಹ ರಕ್ಷಕ ಇಲಾಖೆ ಹಾಗೂ ನಾಗರಿಕ ರಕ್ಷಣಾ ಸೇವೆ(ಸಿವಿಲ್ ಡಿಫೆನ್ಸ್ ಸರ್ವೀಸ್) ಘಟಕಗಳ ಸೇವೆ ಮಹತ್ವದ್ದಾಗಿದೆ. ಅದರಲ್ಲೂ ಗೃಹ ರಕ್ಷಕ ದಳ, ಪೊಲೀಸ್ ಇಲಾಖೆಗೆ ಬೆನ್ನೆಲುಬಾಗಿದೆ. ಹಾಸನ ಹಾಗೂ ಮೈಸೂರಿನಲ್ಲಿ ಜಿಲ್ಲಾ ಗೃಹ ರಕ್ಷಕ ದಳದ ಇನ್‌ಚಾರ್ಜ್ ಕಮಾಂಡೆಂಟ್ ಆಗಿ ಕಾರ್ಯ ನಿರ್ವಹಿಸುವ ಅವಕಾಶ ನನಗೆ ಸಿಕ್ಕಿತ್ತು. ನಿಜಕ್ಕೂ ಅದೊಂದು ಜವಾಬ್ದಾರಿಯುತ ಹುದ್ದೆ. ಸದ್ಯ ಡಾ.ಎಂ.ಕಾಂತರಾಜು ಸಮರ್ಥವಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ ಎಂದರು.

ಪೊಲೀಸ್, ಗೃಹ ರಕ್ಷಕ ದಳ ಸೇರಿದಂತೆ ಎಲ್ಲಾ ಸೇವಾ ಘಟಕದವರು ಧರಿಸುವುದು ಖಾಕಿ ಸಮವಸ್ತ್ರವನ್ನೇ. ಇಲಾಖೆ ಯಾವುದೇ ಇರಲಿ, ವೈಯಕ್ತಿಕ ಹಾಗೂ ಇಲಾಖೆ ಗೌರವವು ನಮ್ಮ ಕಾರ್ಯ ನಿರ್ವಹಣೆಯನ್ನು ಅವಲಂಬಿಸಿರುತ್ತದೆ. ಸಾರ್ವಜನಿಕ ಸೇವೆಯಲ್ಲಿ ಶಿಸ್ತು, ಸಭ್ಯತೆ ಹಾಗೂ ಸಮರ್ಪಣಾ ಮನೋಭಾವ ಬಹಳ ಮುಖ್ಯ. ಶ್ರದ್ಧೆಯಿಂದ ಕೆಲಸ ಮಾಡಿದಷ್ಟೂ ಸಮಾಜದಲ್ಲಿ ಗೌರವ ಹೆಚ್ಚುತ್ತದೆ. ಸೇವೆಯಲ್ಲಿ ಆತ್ಮತೃಪ್ತಿ ಗಳಿಸಿಕೊಳ್ಳಬೇಕು ಎಂದು ಕಿವಿಮಾತು ಹೇಳಿದರು.

ಖಾಕಿ ಸಮವಸ್ತ್ರ ಧರಿಸಿದ ಕ್ಷಣದಿಂದ ಶಿಸ್ತು ಪಾಲನೆ ಬಹಳ ಮುಖ್ಯ. ನಡೆ-ನುಡಿಯನ್ನು ಜನ ಗಮನಿಸುತ್ತಾರೆ. ತುಂಬಾ ಎಚ್ಚರಿಕೆಯಿಂದ ನಡೆದುಕೊಳ್ಳಬೇಕು. ಸಣ್ಣ ವ್ಯತ್ಯಾಸವಾದರೂ ಸಾಮಾಜಿಕ ಜಾಲತಾಣದ ಮೂಲಕ ದೊಡ್ಡದಾಗುವ ಸಾಧ್ಯತೆ ಇರುತ್ತದೆ. ಯಾವುದೋ ಆಮಿಷ ಅಥವಾ ಸಣ್ಣಮಟ್ಟ ವಿಚಾರಕ್ಕೆ ಒಳಗಾಗಿ ಗೌರವ ಕಳೆದುಕೊಳ್ಳಬಾರದು. ಸಮವಸ್ತ್ರದ ಘನತೆ ಕಾಪಾಡಿಕೊಳ್ಳಬೇಕು. ಇದರಿಂದ ನಿಮ್ಮ ಕುಟುಂಬವೂ ಹೆಮ್ಮೆ ಪಡುತ್ತದೆ ಎಂದರು.

ವೈಯಕ್ತಿಕ ಗೌರವ ಕಾಪಾಡಿಕೊಂಡು ಸಕಾರಾತ್ಮಕ ಚಿಂತನೆ, ಒಳ್ಳೆಯ ಭಾವನೆಯಿಂದ ಇಲಾಖೆಗೆ ಒಳ್ಳೆ ಹೆಸರು ಬರುವಂತೆ ಕೆಲಸ ಮಾಡಬೇಕು. ರಾಷ್ಟ್ರಕವಿ ಕುವೆಂಪು ಅವರ ವಿಶ್ವಮಾನವ ಪರಿಕಲ್ಪನೆಯಂತೆ ಎಲ್ಲರೂ ಒಂದೇ ಎಂಬ ಭಾವನೆ ಗಟ್ಟಿಯಾಗಿರಬೇಕು. ಜಾತಿ, ಮತ ನಿಮ್ಮಗಳ ಮಧ್ಯೆ ಬರಬಾರದು. ಅದು ಸಮಾಜಕ್ಕೆ ಮಾರಕ ಎಂಬುದನ್ನು ಮರೆಯಬಾರದು. ಸೇವೆಯಲ್ಲಿ ಮಾನವೀಯತೆ, ದೃಢ ನಿರ್ಧಾರ, ಸಮಯ ಪ್ರಜ್ಞೆ, ಆತ್ಮ ವಿಶ್ವಾಸ ಇರಬೇಕು ಎಂದು ಕಿವಿಮಾತು ಹೇಳಿದರು.

ಇದೇ ವೇಳೆ ಗೃಹ ರಕ್ಷಕರಾಗಿ ನೇಮಕಗೊಂಡು ಮೊದಲ ಬ್ಯಾಚ್‌ನಲ್ಲಿ ತರಬೇತಿ ಪಡೆದಿರುವ 147 ಮಂದಿಯಲ್ಲಿ ಕೆಲವರಿಗೆ ಸಾಂಕೇತಿಕವಾಗಿ ಪ್ರಮಾಣ ಪತ್ರ ವಿತರಿಸಲಾಯಿತು. ಹಾಗೆಯೇ ಎರಡನೇ ಬ್ಯಾಚ್‌ನಲ್ಲಿ ಶಿಬಿರಕ್ಕೆ ಆಗಮಿಸಿದ ಸುಮಾರು 142 ಮಂದಿಗೆ ಸ್ವಾಗತಿಸಲಾಯಿತು.

ಕಾರ್ಯಕ್ರಮದಲ್ಲಿ ಸಾಹಿತಿ ಪ್ರೊ.ಎನ್.ಆರ್.ಶಿವರಾಂ, ಜಿಲ್ಲಾ ಗೃಹ ರಕ್ಷಕ ದಳದ ಗೌರವ ಕಮಾಂಡೆಂಟ್(ಗೌರವ ಸಮಾದೇಷ್ಟರು) ಡಾ.ಎಂ.ಕಾಂತರಾಜು, ಬೋಧಕ ಎಂ.ಆರ್.ಚಂದನ್, ಸಹಾಯಕ ಬೋಧಕ ಎಸ್.ಮಂಜುನಾಥ್, ಸಹಾಯಕ ಆಡಳಿತಾಧಿಕಾರಿ ಎಂ.ಎನ್.ವಿಶ್ವನಾಥ್, ಘಟಕಾಧಿಕಾರಿಗಳು ಮತ್ತಿತರರು ಉಪಸ್ಥಿತರಿದ್ದರು.

ಸಾರ್ವತ್ರಿಕ ಲೋಕಸಭಾ ಚುನಾವಣೆ

ಚಾ.ನಗರ, ಮಂಡ್ಯ, ಮೈಸೂರಿನಲ್ಲಿ 'ಕೈ' ಅಭ್ಯರ್ಥಿಗಳಿಗೆ ಜಯ

ವಿಧಾನ ಪರಿಷತ್ ಸದಸ್ಯ ಡಾ.ಡಿ.ತಿಮ್ಮಯ್ಯ ಭವಿಷ್ಯ



ವಿಧಾನ ಪರಿಷತ್ ಸದಸ್ಯ ಡಾ.ಡಿ.ತಿಮ್ಮಯ್ಯ ಅವರನ್ನು ಸುನೀಲ್ ಬೋಸ್ ಸನ್ಮಾನಿಸಿದರು.

ತಿ.ನರಸೀಪುರ, ಮಾ.29– ಕಾಂಗ್ರೆಸ್‌ನ ಜನಪರ ಆಡಳಿತ ಹಾಗೂ ಯೋಜನೆಗಳು ಎಲ್ಲಾ ವರ್ಗದ ಜನರಿಗೆ ಮೆಚ್ಚುಗೆ ಆಗಿರುವುದರಿಂದ ಸಾರ್ವತ್ರಿಕ ಲೋಕಸಭಾ ಚುನಾವಣೆಯಲ್ಲಿ ಚಾಮರಾಜನಗರ, ಮಂಡ್ಯ ಹಾಗೂ ಮೈಸೂರು–ಕೊಡಗು ಕ್ಷೇತ್ರಗಳಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳು ಅಧಿಕ ಮತಗಳ ಅಂತರದಲ್ಲಿ ಗೆಲುವು ಸಾಧಿಸಲಿದ್ದಾರೆ ಎಂದು ವಿಧಾನ ಪರಿಷತ್ ಸದಸ್ಯ ಡಾ.ಡಿ.ತಿಮ್ಮಯ್ಯ ಭವಿಷ್ಯ ನುಡಿದರು.

ತಮ್ಮ ನಿವಾಸದಲ್ಲಿ ತಮ್ಮನ್ನು ಭೇಟಿಯಾದ ಚಾಮರಾಜನಗರ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಸುನೀಲ್ ಬೋಸ್ ಅವರಿಂದ ಸನ್ಮಾನ ಸ್ವೀಕರಿಸಿ ಮಾತನಾಡಿದ ಅವರು, ರಾಜ್ಯದಲ್ಲಿ ಅಧಿಕಾರಕ್ಕೆ ಬಂದ ಕಾಂಗ್ರೆಸ್ ಸರ್ಕಾರ 9 ತಿಂಗಳ ಅಲ್ಪ ಅವಧಿಯಲ್ಲೇ ಚುನಾವಣೆ ಪೂರ್ವ ನೀಡಿದ್ದ ಗ್ಯಾರಂಟಿ ಭರವಸೆಗಳನ್ನು ಈಡೇರಿಸಿದೆ. ಗ್ಯಾರಂಟಿ ಯೋಜನೆಗಳು ಪ್ರತಿಯೊಂದು ಧರ್ಮ ಮತ್ತು ಸಮುದಾಯಗಳ ಜನರಿಗೆ ತಲುಪಿರುವುದು ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಗೆಲುವಿಗೆ ಸಹಕಾರಿಯಾಗಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ರಾಷ್ಟ್ರೀಯ ಯುವ ನಾಯಕ ರಾಹುಲ್ ಗಾಂಧಿ ನಾಯಕತ್ವದಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅಧ್ಯಕ್ಷತೆಯಲ್ಲಿ ಕೇಂದ್ರದಲ್ಲಿ ಕಾಂಗ್ರೆಸ್ ಸರ್ಕಾರವನ್ನು ಅಧಿಕಾರಕ್ಕೆ ತರಬೇಕಾದ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ. ಯುವಕರಿಗೆ ಅವಕಾಶ ಕಲ್ಪಿಸಲು ಈ ಬಾರಿ ಚಾಮರಾಜನಗರ ಲೋಕಸಭಾ ಕ್ಷೇತ್ರದಲ್ಲಿ ಸುನೀಲ್ ಬೋಸ್ ಅವರಿಗೆ ಹೈಕಮಾಂಡ್ ಅವಕಾಶ ಮಾಡಿಕೊಟ್ಟಿದೆ. ರಾಜ್ಯದ ಕಾಂಗ್ರೆಸ್ ಸರ್ಕಾರಕ್ಕೆ ಶಕ್ತಿ ತುಂಬಲು, ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನಾಯಕತ್ವ ಬಲಪಡಿಸಲು ಈ ಭಾಗದ 3 ಲೋಕಸಭಾ ಕ್ಷೇತ್ರಗಳು ಕಾಂಗ್ರೆಸ್ ತೆಕ್ಕೆಗೆ ಸೆಳೆಯಲು ಕಾರ್ಯಕರ್ತರು ಹಾಗೂ ಮುಖಂಡರು ಜೊತೆಯಾಗಿ ಸಂಘಟಿತರಾಗಿ ಹೋರಾಟ ಮಾಡಬೇಕು ಎಂದು ತಿಳಿಸಿದರು.

ಚಾಮರಾಜನಗರ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಸುನೀಲ್ ಬೋಸ್ ಮಾತನಾಡಿ, ಕಾಂಗ್ರೆಸ್ ಪಕ್ಷದಲ್ಲಿ ಸಾಮಾಜಿಕ ನ್ಯಾಯ ಎಲ್ಲಾ ಸಮುದಾಯದವರಿಗೆ ಸಿಗಲಿದೆ. ಸಾರ್ವತ್ರಿಕ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಗೆಲುವಿಗೆ ಹಿರಿಯ ಮುಖಂಡರಾದ, ವಿಧಾನ ಪರಿಷತ್ ಸದಸ್ಯ ಡಾ.ಡಿ.ತಿಮ್ಮಯ್ಯ ಸಂಪೂರ್ಣ ಸಹಕಾರ ನೀಡಬೇಕು. ಸಿಎಂ ಸಿದ್ದರಾಮಯ್ಯ ಸೇರಿದಂತೆ ಡಿಸಿಎಂ ಡಿ.ಕೆ. ಶಿವಕುಮಾರ್ ಹಾಗೂ ಸಚಿವ ಹೆಚ್.ಸಿ.ಮಹದೇವಪ್ಪ ಅವರ ನಾಯಕತ್ವ ಬಲಪಡಿಸಬೇಕು ಎಂದು ಮನವಿ ಮಾಡಿದರು. ಜಿಲ್ಲಾ ಕಾಂಗ್ರೆಸ್ ವಕ್ತಾರ ಹುಣಸೂರು ಬಸವಣ್ಣ, ಮುಖಂಡ ಲಕ್ಷ್ಮಿನಾರಾಯಣ ಹಾಗೂ ಇನ್ನಿತರರು ಹಾಜರಿದ್ದರು.

ಆಸೆ ಆಮಿಷಗಳಿಗೆ ಬಲಿಯಾಗದೇ ಮತದಾನ ಮಾಡಿ



ಭೇರ್ಯದಲ್ಲಿ ಮತದಾನದ ಬಗ್ಗೆ ಜಾಗೃತಿ ಮೂಡಿಸಲಾಯಿತು.

ಭೇರ್ಯ, ಮಾ.29– ಯಾವುದೇ ಆಸೆ ಆಮಿಷಗಳಿಗೆ ಬಲಿಯಾಗದೇ ನಿಷ್ಪಕ್ಷಪಾತ ಹಾಗೂ ನಿರ್ಭೀತಿಯಿಂದ ಮತದಾನ ಮಾಡುವಂತೆ ಮತದಾರರಲ್ಲಿ ಅರಿವು ಮೂಡಿಸಲಾಗುತ್ತಿದೆ ಎಂದು ಭೇರ್ಯ ಗ್ರಾಪಂ ಅಧಿಕಾರಿ ಜಯಂತ್ ತಿಳಿಸಿದರು.

ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಗ್ರಾಮದಲ್ಲಿ ಪೌರ ಕಾರ್ಮಿಕರ ಜೊತೆಗೂಡಿ ಸ್ವಚ್ಛತಾ ವಾಹನದೊಂದಿಗೆ ತೆರಳಿ ಗ್ರಾಮದ ಪ್ರಮುಖ ಬೀದಿಗಳಲ್ಲಿ ಮತದಾನದ ಬಗ್ಗೆ ಜಾಗೃತಿ ಮೂಡಿಸಿ ಅವರು ಮಾತನಾಡಿದರು.

ತಾಲೂಕಿನ ಚುನಾವಣಾ ನೋಡಲ್ ಅಧಿಕಾರಿ ಹಾಗೂ ತಾಪಂ ಇಓ ಜಿ.ಕೆ. ಹರೀಶ್ ಅವರ ಸೂಚನೆ ಮೇರೆಗೆ ಪಂಚಾಯತಿ ವ್ಯಾಪ್ತಿಯಲ್ಲಿ ಮತದಾನದ ಬಗ್ಗೆ ಜನರಿಗೆ ಅರಿವು ಮೂಡಿಸುತ್ತಿದ್ದೇವೆ ಎಂದರು.

ಪ್ರಜಾಪ್ರಭುತ್ವ ವ್ಯವಸ್ಥೆ ಬಲಗೊಳಿಸುವ ನಿಟ್ಟಿನಲ್ಲಿ ಮತದಾನ ಪ್ರಮುಖ ಅಸ್ತ್ರ. ಹಾಗೆಯೇ ಪ್ರತಿಯೊಬ್ಬ ಪ್ರಜೆಯ ಹಕ್ಕು ಇದರ ಆಧಾರದ ಮೇಲೆ ಸರ್ಕಾರ ಆಡಳಿತ ನಡೆಸುತ್ತಿದೆ. ಆದ್ದರಿಂದ ಲೋಕಸಭೆ ಚುನಾವಣೆಯಲ್ಲಿ ಪ್ರತಿಯೊಬ್ಬರೂ ಕಡ್ಡಾಯವಾಗಿ ಮತದಾನ ಮಾಡುವ ಮೂಲಕ ತಮ್ಮ ಹಕ್ಕು ಚಲಾಯಿಸುವಂತೆ ಮನವಿ ಮಾಡಿದರಲ್ಲದೆ ಯಾವುದೇ ಕಾರಣಕ್ಕೂ ಮತದಾನದಿಂದ ದೂರ ಉಳಿಯದಂತೆ ಮನವಿ ಮಾಡಿದರು.

ಸ್ವಚ್ಛತಾ ಕಾರ್ಯ: ಭೇರ್ಯದಲ್ಲಿ ಯುಗಾದಿ ಹಬ್ಬ ಹಾಗೂ ಮುಂದಿನ ದಿನಗಳಲ್ಲಿ ನಡೆಯುವ ಕರಿಯಮ್ಮ ದೊಡ್ಡಮ್ಮ ಜಾತ್ರೆಗೆ ರಾಜ್ಯದ ವಿವಿಧೆಡೆಯಿಂದ ಭಕ್ತರು ಆಗಮಿಸುವುದರಿಂದ ಪ್ಲಾಸ್ಟಿಕ್ ವಸ್ತುಗಳು ಹಾಗೂ ರಸ್ತೆ ಬದಿ ಬಿಸಾಡಿದ್ದ ಕಸವನ್ನು ತೆರವುಗೊಳಿಸಲಾಯಿತು. ಅಲ್ಲದೇ ಪಂಚಾಯಿತಿ ವ್ಯಾಪ್ತಿಯ ಸಂಬ್ರವಳ್ಳಿ, ಬಟಿಗನಹಳ್ಳಿ, ಸೋಮನಹಳ್ಳಿ ಕಾಲೋನಿ ಸೇರಿದಂತೆ ವಿವಿಧೆಡೆ ಸಾರ್ವಜನಿಕರಿಗೆ ಮತದಾನದ ಬಗ್ಗೆ ಜಾಗೃತಿ ಮೂಡಿಸಲಾಯಿತು.

ಈ ವೇಳೆ ವಾಟರ್‌ಮನ್‌ಗಳಾದ ಮಹದೇವ, ಚೆನ್ನರಾಜು, ನಾಗರಾಜು, ಪೌರ ಕಾರ್ಮಿಕ ನಾಗರಾಜ್, ಚೆನ್ನ, ವಾಹನ ಚಾಲಕ ಸೋಮ ಇದ್ದರು.

ಕುಡಿಯುವ ನೀರು ಪೂರೈಕೆಗೆ ಒತ್ತಾಯಿಸಿ ಪ್ರತಿಭಟನೆ



ಮಲ್ಕುಂಡಿ, ಮಾ.29– ಕುಡಿಯುವ ನೀರು ಪೂರೈಸುವಂತೆ ಒತ್ತಾಯಿಸಿ ಇಲ್ಲಿಗೆ ಸಮೀಪದ ಕಡಬೂರು ಗ್ರಾಮದ ನಾಯಕ ಸಮುದಾಯದವರು ಖಾಲಿ ಬಿಂದಿಗೆ ಹಿಡಿದು ಪ್ರತಿಭಟನೆ ನಡೆಸಿದರು.

ಸಮುದಾಯದ ಮುಖಂಡ ಶಿವರಾಜು ಮಾತನಾಡಿ, ಕುಡಿಯುವ ನೀರು ಪೂರೈಸುವಂತೆ ಒತ್ತಾಯಿಸಿ ನಲ್ಲಿತಾಳಪುರ ಗ್ರಾಪಂ ಪಿಡಿಓಗೆ ಹಲವು ಬಾರಿ ಮನವಿ ಮಾಡಿದರೂ ಯಾವುದೇ ಪ್ರಯೋಜನವಾಗಿಲ್ಲ. 1 ಕಿ.ಮೀ ದೂರದಿಂದ ನೀರನ್ನು ತಂದು ಕುಡಿಯುವ ಪರಿಸ್ಥಿತಿ ಎದುರಾಗಿದೆ. ಸುತ್ತಮುತ್ತಲಿನ ಕೆರೆಗಳು ಬತ್ತಿ ಹೋಗಿ ರುವುದರಿಂದ ಜನ ಜಾನುವಾರುಗಳ ಕುಡಿಯುವ ನೀರಿಗೆ ಪರದಾಡುವಂತಾಗಿದೆ. ಗ್ರಾಮದಲ್ಲಿನ ಬೋರ್‌ವೆಲ್‌ಗಳು ಕೆಟ್ಟು ನಿಂತಿವೆ. ಓವರ್‌ಹೆಡ್ ಟ್ಯಾಂಕ್ ಪೈಪ್ ಒಡೆದು ಹೋಗಿದ್ದರೂ ಇಲ್ಲಿನ ಗ್ರಾಪಂ ಕಣ್ಮುಚ್ಚಿ ಕುಳಿತಿದೆ. ಗ್ರಾಮದಲ್ಲಿ ವಾರದಿಂದ ಕುಡಿಯುವ ನೀರಿಗೆ ಹಾಹಾಕಾರ ಉಂಟಾಗಿದೆ. ಹೀಗಾಗಿ ಸಂಬಂಧಪಟ್ಟ ಅಧಿಕಾರಿಗಳು ಕುಡಿಯುವ ನೀರು ಪೂರೈಕೆಗೆ ಕ್ರಮ ವಹಿಸಬೇಕು ಎಂದು ಒತ್ತಾಯಿಸಿದರು. ಪ್ರತಿಭಟನೆಯಲ್ಲಿ ಸಮುದಾಯದ ಮಹಿಳೆಯರು ಭಾಗವಹಿಸಿದ್ದರು.

ಶ್ರೀದುರ್ಗಾಪರಮೇಶ್ವರಿ ಜಾತ್ರಾ ಮಹೋತ್ಸವ

ಹಂಪಾಪುರ, ಮಾ.29– ಹೆಚ್.ಡಿ.ಕೋಟೆ ತಾಲೂಕಿನ ಹೊಮ್ಮರಗಳ್ಳಿಯಲ್ಲಿ ಮಾ.30ರಿಂದ ಮೂರು ದಿನಗಳ ಕಾಲ ಶ್ರೀದುರ್ಗಾಪರಮೇಶ್ವರಿ ಜಾತ್ರಾ ಮಹೋತ್ಸವ ನಡೆಯಲಿದೆ.

ಮಾ.30ರಂದು ಶನಿವಾರ ಸಂಜೆ 7.30ಕ್ಕೆ ಹೆಬ್ಬರ ಪ್ರವೇಶಿಸುವುದು. ಮಾ.31 ರಂದು ರಾತ್ರಿ 9.30ಕ್ಕೆ ಅಮ್ಮನವರ ಚಂದ್ರ ಮಂಡಲ ವಾಹನ ಕಪಿಲಾ ನದಿಗೆ ಹೋಗಿ ಹೋಮ ಸೇರಿದಂತೆ ಪೂಜಾ ವಿಧಿ ವಿಧಾನ ನೆರವೇರಿಸಿ ವಾಪಸ್ ದೇವಾಲಯಕ್ಕೆ ಆಗಮಿಸಿ ವಾಸ್ತವ್ಯ ಹೂಡುವುದು. ನಂತರ ಗ್ರಾಮದ ಪ್ರಮುಖ ಬೀದಿಗಳಲ್ಲಿ ಶ್ರೀದುರ್ಗಾಪರಮೇಶ್ವರಿ ಅಮ್ಮನವರ ಮೆರವಣಿಗೆ ನಡೆಯಲಿದೆ. ಏ.1 ರಂದು ಉತ್ಸವ ಮೂರ್ತಿಗಳ ಮೆರವಣಿಗೆ ಮುಗಿದ ನಂತರ ಮಧ್ಯಾಹ್ನ 3 ರಿಂದ ರಾತ್ರಿ 8 ರವರೆಗೆ ತಂಪಿನ ಪೂಜಾ ಕಾರ್ಯಕ್ರಮ ನಡೆಯುತ್ತದೆ. ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ದೇವಿ ಕೃಪೆಗೆ ಪಾತ್ರರಾಗಬೇಕು ಎಂದು ಪ್ರಕಟಣೆ ತಿಳಿಸಿದೆ.

ಹುಣಸೂರಲ್ಲಿ ವಿಶ್ವ ಜಲ ದಿನಾಚರಣೆ



ಕಾರ್ಯಕ್ರಮವನ್ನು ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶರಾದ ಜೈಬುನ್ನೀಸಾ ಉದ್ಘಾಟಿಸಿದರು.

ಹುಣಸೂರು, ಮಾ.29– ಇತ್ತೀಚಿನ ದಿನಗಳಲ್ಲಿ ಜಲಕ್ಷಾಮ ದೇಶದ ಜ್ವಲಂತ ಸಮಸ್ಯೆಯಾಗಿದೆ ಎಂದು ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶರಾದ ಜೈಬುನ್ನೀಸಾ ತಿಳಿಸಿದರು.

ನಗರದ ಅಂಬೇಡ್ಕರ್ ಭವನದಲ್ಲಿ ತಾಲೂಕಿನ ಸ್ವೀಪ್ ಸಮಿತಿ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ವಿಶ್ವ ಜಲ ದಿನಾಚರಣೆ ಉದ್ಘಾಟಿಸಿ ಮಾತನಾಡಿದ ಅವರು, ನೀರು ಉಳಿಸಬೇಕೆಂಬುದು ಎಲ್ಲರಿಗೂ ಗೊತ್ತಿರುವ ವಿಚಾರ. ನೀರಿಲ್ಲದೇ ನಾವಿಲ್ಲ. ಯಾವುದೇ ಪ್ರಾಣಿ ಪಕ್ಷಿಗಳಿಲ್ಲ. ನಮಗೆ ಆಹಾರ ಸಿಗುವುದಿಲ್ಲ. ನೀರಿಲ್ಲದೇ ಜೀವನ ನಡೆಸುವುದು ಕಷ್ಟಕರ ಎಂದರು.

ನಾವು ನೀರನ್ನು ಇತಿಮಿತಿಯಾಗಿ ಬಳಸಬೇಕು. ಅನವಶ್ಯಕವಾಗಿ ಬಳಸಿದರೆ ಶಿಕ್ಷಾರ್ಹ ಅಪರಾಧ ಹಾಗೂ ದಂಡ ವಿಧಿಸಲಾಗುವುದು ಎಂದು ಸರ್ಕಾರ ಸುತ್ತೋಲೆ ಹೊರಡಿಸಿದೆ. ನೀರನ್ನು ಮಿತಿಯಾಗಿ ಬಳಸದಿದ್ದರೆ ಮುಂದೆ ನಾವು ಇಂತಹ ಸಮಸ್ಯೆ ಎದುರಿಸಬೇಕಾಗುತ್ತದೆ ಎಂದರು.

ಪ್ರಧಾನ ಸಿವಿಲ್ ನ್ಯಾಯಾಧೀಶ ಬಿ.ವೈ ಮನು ಪಟೇಲ್ ಮಾತನಾಡಿ, ನಾವು ಭೂಮಿ ಮೇಲಿರಲು ನೀರು ಅವಶ್ಯಕ. ನೀರಿಲ್ಲದೇ ಬದುಕುವುದು ಕಷ್ಟ. ಹಾಗೆಯೇ ಸದೃಢ ಭಾರತ ನಿರ್ಮಾಣಕ್ಕೆ ಮತದಾನ ಮಾಡುವುದು ನಮ್ಮ ಆದ್ಯ ಕರ್ತವ್ಯ ಎಂದರು.

ಉಪವಿಭಾಗಾಧಿಕಾರಿ ಮೊಹಮ್ಮದ್ ಹ್ಯಾರೀಸ್ ಸುಮೇರ್ ಮಾತನಾಡಿದರು. ಕಾರ್ಯಕ್ರಮದಲ್ಲಿ ವಕೀಲರ ಸಂಘದ ಅಧ್ಯಕ್ಷ ಎಸ್.ಶಿವಣ್ಣೇಗೌಡ, ಉಪಾಧ್ಯಕ್ಷ ಹರೀಶ್ ಕುವಾರ್, ಕಾರ್ಯದರ್ಶಿ ಎಚ್.ಜೆ.ಸಂದೀಪ, ಸಹಾಯಕ ಸರ್ಕಾರಿ ಅಭಿಯೋಜಕರಾದ ಪಾರ್ವತಿ, ತಹಸೀಲ್ದಾರ್ ಕುಮಾರಿ ನಯನ, ತಾಪಂ ಇಓ ಶಿವಕುಮಾರ್, ನಗರಸಭೆ ಪೌರಾಯುಕ್ತೆ ಲಕ್ಷ್ಮಿ, ಎಇಇ ಮಹಮ್ಮದ್ ಕಲೀಂ ಇನ್ನಿತರಿದ್ದರು.

ನಂ.ಗೂಡಲ್ಲಿ ಶಾಸಕ ದರ್ಶನ್ ಹುಟ್ಟುಹಬ್ಬ ಆಚರಣೆ



ನಂಜನಗೂಡು, ಮಾ.29– ಸರಳ ಸಜ್ಜನಿಕೆಗೆ ಹೆಸರಾದ ಶಾಸಕ ದರ್ಶನ್ ಧ್ರುವನಾರಾಯಣ್ ಅವರು ತಮ್ಮ ತಂದೆ ಮಾರ್ಗದಲ್ಲಿ ನಡೆಯುವ ಮೂಲಕ ಸಾರ್ವಜನಿಕರ ಸಮಸ್ಯೆಗೆ ಸ್ಪಂದಿಸುತ್ತಾ ತಮ್ಮ ಜೀವನವನ್ನು ಜನಸೇವೆಗೆ ಮುಡುಪಾಗಿಟ್ಟಿದ್ದಾರೆ ಎಂದು ಕಾಂಗ್ರೆಸ್ ಯುವ ಮುಖಂಡ ರಾಜೇಶ್ ತಿಳಿಸಿದರು.

ಶಾಸಕ ದರ್ಶನ್ ಧ್ರುವನಾರಾಯಣ್ ಹುಟ್ಟುಹಬ್ಬದ ಅಂಗವಾಗಿ ತಾಲೂಕಿನ ಸಿಂಧುವಳ್ಳಿ ಬಳಿಯ ಕರುಣಾಲಯ ಮಾನಸಿಕ ಆಸ್ಪತ್ರೆ ರೋಗಿಗಳಿಗೆ ಉಪಹಾರ ವಿತರಿಸಿ ಮಾತನಾಡಿದ ಅವರು, ಶಾಸಕ ದರ್ಶನ್ ಅವರು ತಮ್ಮನ್ನು ವಕೀಲ ವೃತ್ತಿಯಲ್ಲಿ ತೊಡಗಿಸಿಕೊಂಡಿದ್ದರು. ಅವರು ರಾಜಕಾರಣಕ್ಕೆ ಬರಬೇಕೆಂದು ಅಂದುಕೊಂಡಿರಲಿಲ್ಲ. ಆದರೆ ಬದಲಾದ ರಾಜಕೀಯ ಸನ್ನಿವೇಶದಲ್ಲಿ ನಮ್ಮ ನೆಚ್ಚಿನ ನಾಯಕ ದಿ.ಆರ್.ಧ್ರುವನಾರಾಯಣ್ ಅವರ ಅಕಾಲಿಕ ಮರಣದಿಂದಾಗಿ ಮತ್ತು ಕ್ಷೇತ್ರದ ಮತದಾರರ ಒತ್ತಾಯದ ಮೇರೆಗೆ ರಾಜಕಾರಣಕ್ಕೆ ಬಂದರು. ಆದರೆ ಕೆಲವೇ ದಿನಗಳಲ್ಲಿ ತಮ್ಮ ತಂದೆಯಂತೆಯೇ ಬಡವರ ಸೇವೆಯಲ್ಲಿ ತೊಡಗಿಸಿಕೊಂಡಿದ್ದಾರೆ. ಅಲ್ಲದೇ ಕ್ಷೇತ್ರವನ್ನು ಮಾದರಿ ಕ್ಷೇತ್ರವನ್ನಾಗಿ ರೂಪಿಸಲು ಮುಂದಾಗಿದ್ದಾರೆ. ಅವರ ಮುಂದಿನ ರಾಜಕೀಯ ಭವಿಷ್ಯ ಉತ್ತಮವಾಗಿರಲಿ, ಅವರಿಗೆ ಶ್ರೀಕಂಠೇಶ್ವರ ಆಯಸ್ಸು ಆರೋಗ್ಯ ಕೊಟ್ಟು ಕಾಪಾಡಲಿ ಎಂದರು.

ಇದೇ ವೇಳೆ ಬ್ಲಾಕ್ ಕಾಂಗ್ರೆಸ್ ವತಿಯಿಂದ ಶ್ರೀಕಂಠೇಶ್ವರ ದೇವಾಲಯದಲ್ಲಿ ವಿಶೇಷ ಪೂಜೆ ಸಲ್ಲಿಸಲಾಯಿತು. ಅಲ್ಲದೆ ತಾಲೂಕಿನ ವೆಂಕಟಗಿರಿ ಕಾಲೋನಿಯಲ್ಲಿ ಹೊದಿಕೆಗಳನ್ನು ವಿತರಿಸಲಾಯಿತು. ಈ ಸಂದರ್ಭ ಕರುಣಾಲಯ ಚಾರಿಟಬಲ್ ಟ್ರಸ್ಟ್‌ನ ಸಿಸ್ಟರ್ ಶೋಶೆ, ಮುಖಂಡರಾದ ಶಿವಣ್ಣ ಸೋಮು, ಜಗದೀಶ್, ಮಹದೇವು, ರಘು, ಮಹೇಂದ್ರ ಸೇರಿದಂತೆ ಹಲವರಿದ್ದರು.

ಬೆಟ್ಟದಪುರದಲ್ಲಿ ಮತದಾನ ಜಾಗೃತಿ ಜಾಥಾ



ಬೆಟ್ಟದಪುರ, ಮಾ.29– ಗ್ರಾಮದ ಪ್ರಥಮ ದರ್ಜೆ ಕಾಲೇಜು ಆವರಣದಲ್ಲಿ ಗ್ರಾಪಂ ಹಾಗೂ ಆರೋಗ್ಯ ಇಲಾಖೆ ವತಿಯಿಂದ ಮತದಾನ ಜಾಗೃತಿ ಜಾಥಾ ನಡೆಯಿತು.

ಮತದಾನ ಜಾಗೃತಿ ಜಾಥಾ ಉದ್ಘಾಟಿಸಿ ಮಾತನಾಡಿದ ತಾಪಂ ಇಓ ಸುನೀಲ್ ಕುಮಾರ್, ಮತದಾನ ಪವಿತ್ರವಾದದ್ದು. ಹೀಗಾಗಿ ಪ್ರತಿಯೊಬ್ಬರೂ ತಮ್ಮ ಹಕ್ಕನ್ನು ಚಲಾಯಿಸಬೇಕು. ಅದರಲ್ಲೂ ಯುವಕರು ತಪ್ಪದೇ ಮತದಾನ ಮಾಡಬೇಕು ಎಂದು ತಿಳಿಸಿದರು. ಪಿಡಿಓ ಮಂಜುನಾಥ್, ಡಾ.ಪೂಜಾ ಮಾತನಾಡಿ, ಮತದಾನ ಮಾಡಿ ದೇಶದ ಭವಿಷ್ಯ ರೂಪಿಸುವ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದರು. ಕಾರ್ಯಕ್ರಮದಲ್ಲಿ ಕಾಲೇಜು ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿ, ಅಂಗನವಾಡಿ, ಆಶಾ, ಆರೋಗ್ಯ ಇಲಾಖೆ ಕಾರ್ಯಕರ್ತರು ಹಾಜರಿದ್ದರು.

ಚೈತ್ರಾ ನಿಧನ



ಸರಗೂರು, ಮಾ.29– ತಾಲೂಕಿನ ಕೊತ್ತೇಗಾಲ ಗ್ರಾಮದ ನ್ಯಾಯಬೆಲೆ ಅಂಗಡಿ ಮಾಲೀಕ ಬಸವರಾಜು ಅವರ ಸೊಸೆ, ವರ್ತಕ ಪ್ರದೀಪ್ ಅವರ ಪತ್ನಿ ಚೈತ್ರಾ (27) ಶುಕ್ರವಾರ ನಿಧನರಾದರು. ಮೃತರು ಪತಿ, ಓರ್ವ ಪುತ್ರ ಪುತ್ರಿ ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಶನಿವಾರ ಮೃತರ ಜಮೀನಿನಲ್ಲಿ ನೆರವೇರಿತು.

ಓಂಕಾರಮೂರ್ತಿ



ಹುಣಸೂರು, ಮಾ.29– ತಾಲೂಕಿನ ಬನ್ನಿಕುಪ್ಪೆ ಪಿಎಸಿಎಸ್ ಮಾಜಿ ಅಧ್ಯಕ್ಷ, ತೆಂಕಲಕೊಪ್ಪಲು ಗ್ರಾಮದ ನಿವಾಸಿ ಓಂಕಾರಮೂರ್ತಿ (71) ಗುರುವಾರ ರಾತ್ರಿ ನಿಧನರಾದರು. ಮೃತರು ಪತ್ನಿ, ಮೂವರು ಮಕ್ಕಳು ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಸ್ವಗ್ರಾಮದಲ್ಲಿ ಶುಕ್ರವಾರ ನೆರವೇರಿತು.

ಭಗವಂತನ ಕೃಪೆಗೆ ಪಾತ್ರರಾಗಿ ಜನ್ಮ ಸಾರ್ಥಕಪಡಿಸಿಕೊಳ್ಳಿ

ಶೃಂಗೇರಿ ಶಾರದ ಪೀಠದ ಜಗದ್ಗುರು ಶ್ರೀವಿಧುಶೇಖರ ಭಾರತೀ ಶ್ರೀ



ಶ್ರೀವಿಧುಶೇಖರ ಭಾರತೀ ಶ್ರೀಗಳು ಭಕ್ತರಿಗೆ ಆಶೀರ್ವಚನ ನೀಡಿದರು.

ತಿ.ನರಸೀಪುರ, ಮಾ.29– ಗುರುವರೇಣ್ಯರು ನಮಗೆ ಯಾವ ಧರ್ಮ, ಮಾರ್ಗವನ್ನು ಉಪದೇಶ ಮಾಡಿದ್ದಾರೋ ಅದನ್ನು ಶ್ರದ್ಧೆಯಿಂದ ಅನುಷ್ಠಾನಗೊಳಿಸಿ ಭಗವಂತನ ಕೃಪೆಗೆ ಪಾತ್ರರಾಗುವ ಮೂಲಕ ಮನುಷ್ಯ ಜನ್ಮ ಸಾರ್ಥಕಪಡಿಸಿಕೊಳ್ಳಬೇಕು ಎಂದು ಶೃಂಗೇರಿ ಶಾರದ ಪೀಠದ ಗುರು ಕರಕಮಲ ಸಂಜಾತ ಜಗದ್ಗುರು ಶ್ರೀವಿಧುಶೇಖರ ಭಾರತೀ ಶ್ರೀಗಳು ತಿಳಿಸಿದರು.

ಹಳೇ ತಿರುಮಕೂಡಲಿನ ಶೃಂಗೇರಿ ಶಂಕರ ಮಠದಲ್ಲಿ ಶ್ರೀಶಂಕರ ಸೇವಾ ಸಮಿತಿ ಆಶ್ರಯದಲ್ಲಿ ಏರ್ಪಡಿಸಿದ್ದ ಗುರುವಂದನಾ ಕಾರ್ಯಕ್ರಮದಲ್ಲಿ ಭಕ್ತರಿಗೆ ಆಶೀರ್ವಚನ ನೀಡಿ ಮಾತನಾಡಿದ ಅವರು, ಪ್ರಾಚೀನ ಕಾಲದಿಂದಲೂ ಈ ಪ್ರಾಂತ್ಯದ ಆಸ್ತಿಕ ಮಹಾಜನರು ಮಠದೊಂದಿಗೆ ಗುರು–ಶಿಷ್ಯರ ಸಂಬಂಧವಿರಿಸಿಕೊಂಡಿದ್ದಾರೆ. ಇಲ್ಲಿಯವರು ಶೃಂಗೇರಿಗೆ ಬಂದು ಗುರು ದರ್ಶನ ಮಾಡುವ ಹಾಗೂ ಗುರುಗಳು ತಮ್ಮ ಯಾತ್ರಾ ಕಾಲದಲ್ಲಿ ಇಲ್ಲಿಗೆ ಆಗಮಿಸಿ ಶಿಷ್ಯರಿಗೆ ಅನುಗ್ರಹ ಮಾಡುವುದು ಅನಾದಿ ಕಾಲದಿಂದಲೂ ಬೆಳೆದು ಬಂದ ಸಂಪ್ರದಾಯವಾಗಿದೆ. ಪವಿತ್ರ ಕಾವೇರಿ ನದಿ ತೀರದಲ್ಲಿ ಶಂಕರ ಮಠವಿದೆ. ಶೃಂಗೇರಿ ಶಾರದಾ ಪೀಠಕ್ಕೆ ಸಂಬಂಧಪಟ್ಟ ಅಧಿಷ್ಠಾನವೂ ಸಹ ಇದೆ. ಹಾಗಾಗಿ ಕ್ಷೇತ್ರದಲ್ಲಿ ಅಭಿವೃದ್ಧಿ ಕಾರ್ಯಗಳು ಹೆಚ್ಚಿನ ರೀತಿ ಆಗಬೇಕಿದೆ. ಅಭಿವೃದ್ಧಿಯಾಗಬೇಕೆಂಬ ಸಂಕಲ್ಪ, ಪ್ರಾರ್ಥನೆ ಹಿಂದಿನಿಂದಿಲೂ ನಿಮ್ಮ ಮನದಲ್ಲಿದೆ. ಶೀಘ್ರ ಅಭಿವೃದ್ಧಿ ಕಾರ್ಯ ನೆರವೇರಲಿದೆ. ಅದಕ್ಕಾಗಿ ಬೇಕಾದ ವ್ಯವಸ್ಥೆ, ಪ್ರಕ್ರಿಯೆಗಳು ಈಶ್ವರನ ಅನುಗ್ರಹದಿಂದ ಆಗಲಿ ಎಂದರು.

ಜೀರ್ಣೋದ್ಧಾರ ಅನಿವಾರ್ಯ: ಕಾವೇರಿ ನದಿ ತೀರದಲ್ಲಿರುವ ಈ ಕ್ಷೇತ್ರದಲ್ಲಿ ಶೃಂಗೇರಿ ಪರಂಪರೆಗೆ ಸಂಬಂಧವಿರುವ ಗುರುಗಳ ಅಧಿಷ್ಠಾನ ಮಂದಿರವಿದೆ. ಶಂಕರರ ಸಾನಿಧ್ಯವಿದೆ. ಇವೆಲ್ಲದರ ಜೀರ್ಣೋದ್ಧಾರ ಶೀಘ್ರವಾಗಿ ನಡೆದು ವಿಶಿಷ್ಟ ದೇವತಾ ಸನ್ನಿಧಿಯಾಗಲಿದೆ. ಧಾರ್ಮಿಕ ಆಚರಣೆಗಳು, ಧರ್ಮಷ್ಠಾನಾದಿಗಳು ಮತ್ತಷ್ಟು ಅನುಷ್ಠಾನಗೊಳ್ಳಲು ಜೀರ್ಣೋದ್ಧಾರ ಅನಿವಾರ್ಯ. ಹೀಗಾಗಿ ಎಲ್ಲಾ ಕಾರ್ಯಗಳು ನಡೆದು ಇಲ್ಲಿ ವಿಶಿಷ್ಟವಾದ ರೀತಿ ಧರ್ಮ ಪ್ರಚಾರವಾಗಲಿ ಎಲ್ಲರಿಗೂ ಒಳ್ಳೆಯದಾಗಲಿ ಎಂದರು.

ಕಾರ್ಯಕ್ರಮದಲ್ಲಿ ನೂರಾರು ಭಕ್ತರು ಶ್ರೀಗಳಿಂದ ಆಶೀರ್ವಾದ ಪಡೆದರು. ಈ ವೇಳೆ ಶ್ರೀಶಂಕರ ಸೇವಾ ಸಮಿತಿಯ ಟಿ.ಎನ್.ರಾಜು, ವೆಂಕಟೇಶ್ ಶಾಸ್ತ್ರಿ, ಎಂ.ಎಸ್.ಕೃಷ್ಣ, ಪವನ್, ಅಶ್ವತ್ ನಾರಾಯಣ್ ಜೋಯಿಷ್, ಸುಮಂತ್, ಶ್ರೀನಿಧಿ ಶಂಕರ್, ಪ್ರಸಾದ್, ಸುಂದರ ರಾಮನ್, ಅಡಿಗೆ ಮಂಜುನಾಥ್, ಮಣಿ ಸೇರಿದಂತೆ ಗ್ರಾಮಸ್ಥರು, ಭಕ್ತರು ಹಾಜರಿದ್ದರು.

ಮೈಸೂರು ಚಿತ್ರಮಂದಿರಗಳಲ್ಲಿ



ಪದ್ಮ ಚಿತ್ರಮಂದಿರ	(ದೂ: 2521923)
ಟಿಲ್ಲು–2 (ತೆ)	4 ಪ್ರದರ್ಶನಗಳು,
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ಯುವ (ಕ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಸೈತಾನ್ (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಯುವ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಯುವ (ಕ)	4 ಪ್ರದರ್ಶನಗಳು
ರಾಜಕಮಲ್	
ಗಾಡ್ಜಿಲ್ಲಾ ಕಾಂಗ್ (ಇಂ)	4 ಪ್ರದರ್ಶನಗಳು
ಸಂಗಂ	
ಟಿಲ್ಲು–2 (ತೆ)	4 ಪ್ರದರ್ಶನಗಳು
ಲಿಡೋ	
Mr. & Mrs. ಮನ್ಮಥ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ಮಗಧೀರ (ತೆ)	4 ಪ್ರದರ್ಶನಗಳು
ಪ್ರಭಾ	
ದಿ ಗೋಟ್ ಲೈಫ್ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	ಯುವ (ಕ): ಬೆ.10.30ಕ್ಕೆ, ಸಂ.4ಕ್ಕೆ, ಗಾಡ್ಜಿಲ್ಲಾ ಎಕ್ಸ್ ಕಾಂಗ್ ದಿ ನ್ಯೂ ಎಂಪೈರ್ (3ಡಿ)(ಇಂ): ಮ.1.30ಕ್ಕೆ, ರಾ.7.05ಕ್ಕೆ, ಆಡುಜೀವಿತಂ (ಮ): ರಾ.9.30ಕ್ಕೆ.
ಸ್ಕ್ರೀನ್ 2	ಯುವ (ಕ): ಬೆ.9.50ಕ್ಕೆ, ಕುಂಗ್ ಫು ಪಾಂಡ 4(3ಡಿ) (ಇಂ): ಮ.12.50ಕ್ಕೆ, ಮ.2.50ಕ್ಕೆ, ಕ್ರೂವ್ (ಹಿಂ): ಸಂ.4.50ಕ್ಕೆ, ರಾ.7.20ಕ್ಕೆ, ಟಿಲ್ಲು ಸ್ಕ್ವೇರ್ (ತೆ): ರಾ.9.55ಕ್ಕೆ.
ಸ್ಕ್ರೀನ್ 3	ಗಾಡ್ಜಿಲ್ಲಾ ಎಕ್ಸ್ ಕಾಂಗ್ ದಿ ನ್ಯೂ ಎಂಪೈರ್ (3ಡಿ)(ಇಂ): ಬೆ.10.25ಕ್ಕೆ, ರಾ.10.10ಕ್ಕೆ, ಮಂಜುಮ್ಮೆಲ್ ಬಾಯ್ಸ್ (ಮ): ಮ.12.45ಕ್ಕೆ, ಸ್ವತಂತ್ರ್ಯ ವೀರ ಸಾವರ್ಕರ್ (ಹಿಂ): ಮ.3.30ಕ್ಕೆ, ಆಡುಜೀವಿತಂ (ಮ): ಸಂ.6.50ಕ್ಕೆ.
ಸ್ಕ್ರೀನ್ 4	ಯುವ (ಕ): ಬೆ.9.50ಕ್ಕೆ, ಮ.1.10ಕ್ಕೆ, ರಾ.7ಕ್ಕೆ, ರಾ.10ಕ್ಕೆ, ಟಿಲ್ಲು ಸ್ಕ್ವೇರ್ (ತೆ): ಸಂ.4.10ಕ್ಕೆ.

ಐನಾಕ್ಸ್ ಮೂವೀಸ್
INOX LIVE THE MOVIE
ದೂ : 2533444 / 2433456

ಸ್ಕ್ರೀನ್ 1	ಟಿಲ್ಲು ಸ್ಕ್ವೇರ್ (ತೆ): ಬೆ.9.05ಕ್ಕೆ, ಗಾಡ್ಜಿಲ್ಲಾ ಎಕ್ಸ್ ಕಾಂಗ್ ದಿ ನ್ಯೂ ಎಂಪೈರ್ (3ಡಿ)(ಇಂ): ಮ.12.05ಕ್ಕೆ, ಮಂಜುಮ್ಮೆಲ್ ಬಾಯ್ಸ್ (ಮ): ಮ.2.45ಕ್ಕೆ, ಯುವ (ಕ): ಸಂ.6ಕ್ಕೆ, ಆಡುಜೀವಿತಂ (ಮ): ರಾ.9.15ಕ್ಕೆ.
ಸ್ಕ್ರೀನ್ 2	ಯುವ (ಕ): ಬೆ.9ಕ್ಕೆ, ಮ.12.15ಕ್ಕೆ, ಮ.3.30ಕ್ಕೆ, ಸಂ.6.45ಕ್ಕೆ, ರಾ.10ಕ್ಕೆ.
ಸ್ಕ್ರೀನ್ 3	ಕ್ರೂವ್ (ಹಿಂ): ಬೆ.10.55ಕ್ಕೆ, ಮ.1.40ಕ್ಕೆ, ರಾ.7.25ಕ್ಕೆ, ಟಿಲ್ಲು ಸ್ಕ್ವೇರ್ (ತೆ): ಸಂ.4.25ಕ್ಕೆ, ರಾ.10.10ಕ್ಕೆ.
ಸ್ಕ್ರೀನ್ 4	ಗಾಡ್ಜಿಲ್ಲಾ ಎಕ್ಸ್ ಕಾಂಗ್ ದಿ ನ್ಯೂ ಎಂಪೈರ್ (3ಡಿ)(ಇಂ): ಬೆ.11.25ಕ್ಕೆ, ಸಂ.5ಕ್ಕೆ, ರಾ.7.40ಕ್ಕೆ, ರಾ.10.20ಕ್ಕೆ, ಕುಂಗ್ ಫು ಪಾಂಡ 4(3ಡಿ) (ಇಂ): ಮ.2.45ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821–2973519

ಸ್ಕ್ರೀನ್ 1	ಪಾರ್ಕಿಂಗ್ (ಕ): ಬೆ.10.35ಕ್ಕೆ, ಸಪ್ತ ಸಾಗರದಾಚೆ ಎಲ್ಲೋ 2 (ಕ): ಮ.1.10ಕ್ಕೆ, ಬ್ಯಾಡ್ ಮ್ಯಾನರ್ಸ್ (ಕ): ಸಂ.4ಕ್ಕೆ, ಅರ್ಧಂಬರ್ಧ ಪ್ರೇಮಕಥೆ (ಕ): ಸಂ.6.35ಕ್ಕೆ, ಅನ್ನಪೂರ್ಣಿ (ತ): ರಾ.9.15ಕ್ಕೆ.
ಸ್ಕ್ರೀನ್ 2	ಅನಿಮಲ್ (ಹಿಂ): ಬೆ.10ಕ್ಕೆ, ಸಂ.6ಕ್ಕೆ, ರಾ.9.45ಕ್ಕೆ, ಸ್ಯಾಮ್ ಬಹದ್ದೂರ್ (ಹಿಂ): ಮ.1.45ಕ್ಕೆ.
ಸ್ಕ್ರೀನ್ 3	ಸ್ಯಾಮ್ ಬಹದ್ದೂರ್ (ಹಿಂ): ಬೆ.10.10ಕ್ಕೆ, ಸಂ.4.50ಕ್ಕೆ, ಅನಿಮಲ್ (ಹಿಂ): ಮ.1.05ಕ್ಕೆ, ರಾ.7.45ಕ್ಕೆ.
ಸ್ಕ್ರೀನ್ 4	ಸಪ್ತ ಸಾಗರದಾಚೆ ಎಲ್ಲೋ 2 (ಕ): ಬೆ.10.45ಕ್ಕೆ, ಅನಿಮಲ್ (ಹಿಂ): ಮ.2.40ಕ್ಕೆ, ನೆಪೋಲಿಯನ್ (ಇಂ): ಸಂ.6.25ಕ್ಕೆ, ಸ್ಯಾಮ್ ಬಹದ್ದೂರ್ (ಹಿಂ): ರಾ.9.30ಕ್ಕೆ.

ಪಿವಿಆರ್ ಸಿನಿಮಾಸ್
ಮೊ.ನಂ: 8951357139
ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ,

ಆರ್ಟಿಕಲ್ 370 (ಹಿಂ): ಬೆ.9ಕ್ಕೆ, ಮ.12.20ಕ್ಕೆ, ಮ.3.40ಕ್ಕೆ, ರಾ.7ಕ್ಕೆ, ರಾ.10.20ಕ್ಕೆ, ಡ್ಯೂನ್ ಪಾರ್ಟ್ 2 (ಇಂ): ಬೆ.8.30ಕ್ಕೆ, ಮ.12ಕ್ಕೆ, ಮ.3.30ಕ್ಕೆ, ರಾ.7ಕ್ಕೆ, ರಾ.10.30ಕ್ಕೆ, ಡೆಮೋನ್ ಸ್ಲೇಯರ್ (ಜ): ಸಂ.4.30ಕ್ಕೆ, ಆಪರೇಷನ್ ವ್ಯಾಲೆಂಟೈನ್ (ತೆ & ಹಿಂ): ಬೆ.9.45ಕ್ಕೆ, ಮ.3.40ಕ್ಕೆ, ಸಂ.6.35ಕ್ಕೆ, ರಾ.9.30ಕ್ಕೆ, ಲಾಪತಾ ಲೇಡೀಸ್ (ಹಿಂ): ಬೆ.10.35ಕ್ಕೆ, ಸಂ.4.10ಕ್ಕೆ, ರಾ.9.45ಕ್ಕೆ, ಮಂಜುಮ್ಮೆಲ್ ಬಾಯ್ಸ್ (ಮ): ಬೆ.10.20ಕ್ಕೆ, ಮ.1.25ಕ್ಕೆ, ರಾ.7.25ಕ್ಕೆ, ತೇರಿ ಬತೂನ್ ಮೇ ಐಸಾ ಉಲ್ಜಾ ಜಿಯಾ (ಹಿಂ): ಬೆ.11.55ಕ್ಕೆ, ಕ್ರೀಂ (ಕ): ಸಂ.6.55ಕ್ಕೆ, ಪ್ರೇಮಲು (ಮ): ರಾ.10.20ಕ್ಕೆ, ಜೋಶುವಾ (ತ): ಮ.1.20ಕ್ಕೆ, ಸಂ.6.55ಕ್ಕೆ, ಭ್ರಮಯುಗಂ (ಮ): ರಾ.9.45ಕ್ಕೆ, ವಾರನಂ ಆಯಿರಂ (ತ): ಮ.3.40ಕ್ಕೆ.

ಸೂಚನೆ: ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ವೈಭವದ ಶ್ರೀಲಕ್ಷ್ಮಿಕಾಂತಸ್ವಾಮಿ ರಾಜಮುಡಿ ಉತ್ಸವ



ಕಳಲೆಯಲ್ಲಿ ಲಕ್ಷ್ಮಿಕಾಂತಸ್ವಾಮಿ ಪುಷ್ಪಮಂಟಪ ರಾಜಮುಡಿ ಉತ್ಸವ ನಡೆಯಿತು

ನಂಜನಗೂಡು, ಮಾ.29– ತಾಲೂಕಿನ ಕಳಲೆ ಗ್ರಾಮದ ಶ್ರೀಲಕ್ಷ್ಮಿಕಾಂತಸ್ವಾಮಿ ಜಾತ್ರಾ ಮಹೋತ್ಸವದ ಅಂಗವಾಗಿ ಗುರುವಾರ ರಾತ್ರಿ ಪುಷ್ಪಮಂಟಪ ರಾಜಮುಡಿ ಉತ್ಸವ ವೈಭವದಿಂದ ನೆರವೇರಿತು.

ಜಾತ್ರಾ ಮಹೋತ್ಸವ ಅಂಗವಾಗಿ ಗುರುವಾರ ಬೆಳಗ್ಗೆ ರಥೋತ್ಸವದ ಬಳಿಕ ರಥದಿಂದ ಶ್ರೀ ಅರವಿಂದ ನಾಯಕಿ ಮತ್ತು ಶ್ರೀಆಂಡಾಳಮ್ಮ ಉತ್ಸವ ಮೂರ್ತಿಗಳನ್ನು ಕೆಳಗಿಳಿಸಲಾಯಿತು. ನಂತರ ಪುಷ್ಪಮಂಟಪ ರಾಜಮುಡಿ ಉತ್ಸವ ಅಂಗವಾಗಿ ವಿವಿಧ ಧಾರ್ಮಿಕ ವಿಧಿ ವಿಧಾನಗಳನ್ನು ಪೂರೈಸಿದ ನಂತರ ವಿಶೇಷ ಪೂಜೆ ನೆರವೇರಿಸಲಾಯಿತು. ನಂತರ ಮೇಲುಕೋಟೆಯ ಶ್ರೀವೈರಮುಡಿ ಉತ್ಸವದ ಮಾದರಿ ಶ್ರೀಲಕ್ಷ್ಮಿಕಾಂತಸ್ವಾಮಿ ಅವರನ್ನು ಮುತ್ತಿನ ಪಲ್ಲಕ್ಕಿಯಲ್ಲಿರಿಸಿ ಗ್ರಾಮದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಮಾಡಲಾಯಿತು.

ಜಾತ್ರೆ ಅಂಗವಾಗಿ ಗುರುವಾರ ರಾತ್ರಿ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮ ಆಯೋಜಿಸಲಾಗಿತ್ತು. ಭರತನಾಟ್ಯ, ನಾಟಕ, ಭಕ್ತಿಗೀತೆ ಕಾರ್ಯಕ್ರಮಗಳು ನೋಡುಗರ ಮನಸೂರೆಗೊಂಡವು. ಮಾ.31ರಂದು ಮಹಾಭಿಷೇಕ ಜರುಗಲಿದ್ದು, ಆ ಮೂಲಕ ಶ್ರೀಲಕ್ಷ್ಮಿಕಾಂತಸ್ವಾಮಿಯವರ ಜಾತ್ರಾ ಮಹೋತ್ಸವಕ್ಕೆ ತೆರೆ ಬೀಳಲಿದೆ.

ಈ ವೇಳೆ ದೇವಾಲಯದ ಆಗಮಿಕ ವಿನಯ್, ಅರ್ಚಕರಾದ ಲಕ್ಷ್ಮಣಚಾರ್, ನರಸಿಂಹನ್, ವರದರಾಜನ್, ದೇವಾಲಯದ ಪಾರುಪತ್ತೇದಾರ್ ಜಯರಾಮ್ ಸೇರಿದಂತೆ ಗ್ರಾಮದ ಯಜಮಾನರು ಮತ್ತು ಗ್ರಾಮಸ್ಥರು ಇದ್ದರು.

ಸಾಧಕ ಮಹಿಳೆಯರಿಗೆ ಸುತ್ತೂರು ಶ್ರೀಗಳ ಸಾನ್ನಿಧ್ಯದಲ್ಲಿ ಸನ್ಮಾನ



ಬೆಂಗಳೂರು ಆಕಾಶವಾಣಿ ಕೇಂದ್ರದ ಗಾಯಕಿ ವಿದುಷಿ ಪಾವನಿ ಭಾರಧ್ವಾಜ್, ಚಾಮರಾಜನಗರ ಜಿಲ್ಲೆಯ ಉಮ್ಮತ್ತೂರಿನ ಸಾಧಕ ಮಹಿಳೆ ವರ್ಷ ಶ್ರೀಕಂಠಸ್ವಾಮಿ ಅವರನ್ನು ಸುತ್ತೂರು ಮಠದ ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ನೇತೃತ್ವದಲ್ಲಿ ಶುಕ್ರವಾರ ಸನ್ಮಾನಿಸಲಾಯಿತು.

ಮೈಸೂರು, ಮಾ.29(ಎಸ್‌ಪಿಎನ್)– ಮಹಿಳಾ ಕ್ಷೇತ್ರದ ಸಾಧಕರಾದ ಬೆಂಗಳೂರು ಆಕಾಶವಾಣಿ ಕೇಂದ್ರದ ಗಾಯಕಿ ವಿದುಷಿ ಪಾವನಿ ಭಾರಧ್ವಾಜ್, ಚಾಮರಾಜನಗರ ಜಿಲ್ಲೆಯ ಉಮ್ಮತ್ತೂರಿನ ಆಕೃತಿ ಇಕೋ ಫ್ರೆಂಡ್ಲಿ ಎಂಟರ್‌ಪ್ರೈಸಸ್ ಮಾಲಕಿ, 107ನೇ ಮನ್ ಕೀ ಬಾತ್ ಪ್ರಧಾನ ಮಂತ್ರಿ ಮೋದಿ ಅವರ ಭಾಷಣದಲ್ಲಿ ಪ್ರಶಂಸೆಗೊಳಗಾದ ಮಹಿಳೆ ವರ್ಷ ಶ್ರೀಕಂಠಸ್ವಾಮಿ ಅವರನ್ನು ಸುತ್ತೂರು ಮಠದ ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ನೇತೃತ್ವದಲ್ಲಿ ಶುಕ್ರವಾರ ಸನ್ಮಾನಿಸಲಾಯಿತು

ಮೈಸೂರು ಸರಸ್ವತಿಪುರಂನಲ್ಲಿರುವ ಜೆಎಸ್‌ಎಸ್ ಮಹಿಳಾ ಕಾಲೇಜಿನ ನವ ಜ್ಯೋತಿ ಸಭಾಂಗಣದಲ್ಲಿ ಚಾಮರಾಜೇಶ್ವರಿ ಅಕ್ಕನ ಬಳಗದ ಉದ್ಘಾಟನಾ ಸಮಾರಂಭದಲ್ಲಿ ಇವರನ್ನು ಸನ್ಮಾನಿಸಲಾಯಿತು. ಈ ವೇಳೆ ವಕೀಲೆ, ಮಹಿಳಾ ಚಿಂತಕಿ ಸುಮನಾ ಮಾತನಾಡಿ, ಇಪ್ಪತ್ತೊಂದನೇ ಶತಮಾನದಲ್ಲೂ ಮಹಿಳೆ ರಾಜಕೀಯ, ಸಾಮಾಜಿಕ, ಶೈಕ್ಷಣಿಕ ಹಾಗೂ ಆರ್ಥಿಕ ಸ್ವಾತಂತ್ರಕ್ಕಾಗಿ ಹೋರಾಡುವ ಪರಿಸ್ಥಿತಿಯಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಮಹಿಳೆ ಅಡುಗೆ ಮನೆಗೆ ಮಾತ್ರ ಸೀಮಿತ ಎನ್ನುವ ಕಾಲಘಟ್ಟದಲ್ಲಿ ಮಹಿಳಾ ಸಂಘಟನೆಗಳನ್ನು ಸ್ಥಾಪಿಸಿ, ಸಮಾಜ ಸೇವೆಯಲ್ಲಿ ತೊಡಗಿಸಿಕೊಳ್ಳಲು ಸ್ವಾವಲಂಭಿ ಮಹಿಳೆಯರು ಪ್ರಯತ್ನಿಸುತ್ತಿರುವುದು ಸಂತೋಷದ ಸಂಗತಿ. ಮಹಿಳೆಯರು, ಮಹಿಳಾ ಸಬಲೀಕರಣ, ಸಮಸ್ಯೆಗಳಿಗೆ ಸ್ಪಂದನೆ ಹಾಗೂ ಪ್ರತಿಭಾವಂತ ಗ್ರಾಮೀಣ ವಿದ್ಯಾರ್ಥಿನಿಯರನ್ನು ಗುರುತಿಸಿ, ಆರ್ಥಿಕ ಸಹಾಯ ಮಾಡುವ ಧ್ಯೇಯೋದ್ದೇಶಗಳನ್ನು ಹೊಂದಿರುವುದು ಸಂತೋಷ ಸಂಗತಿ ಎಂದರು.


ಸುತ್ತೂರು ಮಠ ಹಿಂದಿನಿಂದಲೂ ಮಹಿಳಾ ಸಾಧಕರನ್ನು ಗುರುತಿಸಿ, ಪ್ರೋತ್ಸಾಹಿಸುವುದರಲ್ಲಿ ಮುಂಚೂಣಿಯಲ್ಲಿರುವುದು ಸ್ವಾಗತಾರ್ಹ. ಇದೇ ವೇಳೆ ಸಮಾಜ ಸೇವೆಯಲ್ಲಿ ತೊಡಗಿಸಿಕೊಳ್ಳಲು ಮುಂದಾಗಿರುವ ಕೆಲ ಮಹಿಳೆಯರು 'ಚಾಮರಾಜೇಶ್ವರಿ' ಹೆಸರಿನಲ್ಲಿ ಅಕ್ಕನ ಬಳಗ ಸ್ಥಾಪಿಸಿ, ಮಹಿಳೆಯರ ಸಮಸ್ಯೆಗಳಿಗೆ ದನಿಯಾಗುವಂತೆ ಪದಾಧಿಕಾರಿಗಳಿಗೆ ಕಿವಿ ಮಾತು ಹೇಳಿದರು.

ಈ ವೇಳೆ ಶರಣ ಸಾಹಿತ್ಯ ಪರಿಷತ್ತು ಮೈಸೂರು ನಗರ ಘಟಕದ ಅಧ್ಯಕ್ಷ ಮ.ಗು. ಸದಾನಂದಯ್ಯ, ಕದಳಿ ಮಹಿಳಾ ವೇದಿಕೆ ಅಧ್ಯಕ್ಷೆ ಶಾರದಾ ಶಿವಲಿಂಗಸ್ವಾಮಿ, ಬಳಗದ ಅಧ್ಯಕ್ಷೆ ಮಾದಲಾಂಬಿಕೆ ನಂಜುಂಡಸ್ವಾಮಿ, ಉಪಾಧ್ಯಕ್ಷೆ ಮಂಜುಳಾ ನಂಜುಂಡಸ್ವಾಮಿ, ಕಾರ್ಯದರ್ಶಿ ಪ್ರತಿಮಾ ಮಂಜುನಾಥ್, ಸಹ ಕಾರ್ಯದರ್ಶಿ ಸುಮಾ ನಂದೀಶ್, ಕೋಶಾಧ್ಯಕ್ಷೆ ಪ್ರಭಾವತಿ ಚಂದ್ರಶೇಖರ್, ಉಪಕೋಶಾಧ್ಯಕ್ಷೆ ಮಮತಾ ಶಿವಶಂಕರ್, ಹಿರಿಯ ಸಲಹೆಗಾರರಾದ ಮಂಗಳಾ ಮುದ್ದುಮಾದಪ್ಪ, ವಿಜಯಾ ಚಿನ್ನಸ್ವಾಮಿ, ಇಂದಿರಾ ಪರಮಶಿವಯ್ಯ, ಸದಸ್ಯರಾದ ಉಮಾ ಮಹದೇವಸ್ವಾಮಿ, ಶೈಲಜಾ ಮಹಾದೇವಸ್ವಾಮಿ, ಸುಜಾತ ಶಿವಪ್ರಕಾಶ್, ಸವಿತಾ ಛಾಯಾಕುಮಾರ್, ವಾಣಿ ಬಸಪ್ಪ ಸುಧಾ ವಿಜಯ್ ಕುಮಾರ್, ನಿತ್ಯಾ ಪ್ರವೀಣ್, ರೇಖ ನಾಗಸುಂದರ್, ತೇಜಸ್ವಿನಿ ಸುರೇಶ್, ರೇಣುಕಾ ಮಲ್ಲಿಕಾರ್ಜುನ, ಸುನೀತಾ ಗುರು, ಸುಧಾ ವಿಜಯ್ ಕುಮಾರ್ ಉಪಸ್ಥಿತರಿದ್ದರು.

ನಾಳೆ ವಿವಿಧೆಡೆ ವಿದ್ಯುತ್ ವ್ಯತ್ಯಯ

ಮೈಸೂರು,ಮಾ.29– ರಾಮಕೃಷ್ಣನಗರ ಉಪವಿಭಾಗದ ದೂರವಿದ್ಯುತ್ ವಿತರಣಾ ಕೇಂದ್ರ ನಿರ್ವಹಣಾ ಕೆಲಸದ ನಿಮಿತ್ತ ಮಾ.31 ರಂದು ಬೆಳಗ್ಗೆ 10 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ಟಿ.ಕಾಟೂರು, ಮಾರ್ಬಳ್ಳಿ, ಉದ್ಬೂರು ಗ್ರಾಮಗಳ ವ್ಯಾಪ್ತಿ ಹಾಗೂ ಸುತ್ತಮುತ್ತಲಿನ ಪ್ರದೇಶಗಳಿಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗುವುದು ಎಂದು ಸೆಸ್ಕ್ ಪ್ರಕಟಣೆ ತಿಳಿಸಿದೆ.

4ನೇ ವರ್ಷದ ಸವಿನೆನಪು



ಸಣ್ಣೈದೆ ಗೌಡ

ನೀವು ನಮ್ಮನ್ನಗಲಿ ಇಂದಿಗೆ 4 ವರ್ಷವಾಯಿತು ಸದಾ ನಿಮ್ಮ ನೆನೆಪಿನಲ್ಲಿರುವ

ದುಃಖತಪ್ತರು: ಚಿಕ್ಕಣ್ಣಮ್ಮ, ಮಕ್ಕಳು, ಸೊಸೆಯಂದಿರು, ಅಳಿಯಂದಿರು, ಮೊಮ್ಮಕ್ಕಳು ಕುಟುಂಬವರ್ಗ, ಬೊಂತಗಳ್ಳಿ

ಉಚಿತ ಪರಿಚಯ ಕಾರ್ಯಕ್ರಮ

ಮೈಸೂರು: ಕುವೆಂಪುನಗರದ ಋಷಿ ಸಂಸ್ಕೃತಿ ವಿದ್ಯಾ ಕೇಂದ್ರದಲ್ಲಿ ಏ.1ರಂದು ಬೆಳಗ್ಗೆ 10 ಗಂಟೆಗೆ ಮಕ್ಕಳ ಸ್ಮರಣ ಶಕ್ತಿ ಯೋಗ ಶಿಬಿರದ ಉಚಿತ ಪರಿಚಯ ಕಾರ್ಯ ಕ್ರಮ ಹಮ್ಮಿಕೊಳ್ಳಲಾಗಿದೆ. ಹೆಚ್ಚಿನ ವಿವರಗಳಿಗೆ ಸಂಸ್ಥೆ ಧರ್ಮದರ್ಶಿ ರಮೇಶ್‌ಚಂದ್ರ, ಮೊ.94484–58050, ಮನೋಹರ್‌ರಾವ್, ಮೊ. 8618762110 ಸಂಪರ್ಕಿಸಿ.

ಮಹಿಳೆಯರು ಅಡುಗೆ ಮಾಡೋಕೆ ಮಾತ್ರ ಲಾಯಕ್ಕು!

ಹಿರಿಯ ಕಾಂಗ್ರೆಸ್ ಮುಖಂಡ, ಶಾಸಕ ಶಾಮನೂರು ಶಿವಶಂಕರಪ್ಪ ವಿವಾದಾತ್ಮಕ ಹೇಳಿಕೆ

ದಾವಣಗೆರೆ: ರಾಜ್ಯದ ಹಿರಿಯ ರಾಜಕಾರಣಿಗಳಲ್ಲಿ ಒಬ್ಬರಾದ, ಕಾಂಗ್ರೆಸ್ ಹಾಲಿ ಶಾಸಕ ಶಾಮನೂರು ಶಿವಶಂಕರಪ್ಪ ಮಹಿಳೆಯರ ಕುರಿತಾಗಿ ವಿವಾದಾತ್ಮಕ ಹೇಳಿಕೆ ನೀಡಿದ್ದಾರೆ. ಲೋಕಸಭಾ ಚುನಾವಣೆ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ಅವರು, ಮಹಿಳೆಯರು ಅಡುಗೆ ಮಾಡೋಕೆ ಮಾತ್ರ ಲಾಯಕ್ಕು ಎಂದು ಟೀಕಿಸಿದ್ದಾರೆ.



ದಾವಣಗೆರೆ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಗಾಯಿತ್ರಿ ಸಿದ್ದೇಶ್ವರ್ ಅವರನ್ನು ಟೀಕಿಸುವ ಭರದಲ್ಲಿ ಶಾಮನೂರು ಲಘು ಹೇಳಿಕೆಗೆ ಬಿಜೆಪಿ ನಾಯಕರು ಕಿಡಿಕಾರಿದ್ದಾರೆ. ಅಲ್ಲದೇ ದಾವಣಗೆರೆ ಬಿಜೆಪಿ ಅಭ್ಯರ್ಥಿ ಗಾಯಿತ್ರಿ ಸಿದ್ದೇಶ್ವರ್ ಕೂಡ ತಿರುಗೇಟು ನೀಡಿದ್ದಾರೆ.

ಎದುರಾಳಿ ಅಭ್ಯರ್ಥಿಗೆ ಜನರ ಮಧ್ಯೆ ಮಾತನಾಡೋಕೆ ಬರಲ್ಲ. ಅವರು ಮನೆಯಲ್ಲಿ ಅಡುಗೆ ಮಾಡೋಕೆ ಮಾತ್ರ ಲಾಯಕ್ಕು ಎಂದು ಗಾಯಿತ್ರಿ ಸಿದ್ದೇಶ್ವರ್ ಅವರನ್ನು ಟೀಕಿಸಿದ್ದಾರೆ.

ಹಿಂದೆ ಗೆದ್ದಾಗ ಮೋದಿಗೆ ಕಮಲದ ಹೂ ಕಳಿಸಿದ್ರಾ?: ಕಮಲ ಗೆಲ್ಲಿಸಿ ಮೋದಿಯವರಿಗೆ ಕೊಡೋಣ ಎಂದು ಬಿಜೆಪಿ ಅಭ್ಯರ್ಥಿ ಗಾಯತ್ರಿ ಹೇಳುತ್ತಾರೆ. ಮತ್ತೆ ಈ ಹಿಂದೆ ಗೆದ್ದಿದ್ದು ನೀವೇ ಅಲ್ಲವೇ, ಆಗ ಕಮಲ ಹೂವನ್ನು ಕಳುಹಿಸಿದ್ರಾ? ಎಂದು ಶಾಮನೂರು ಶಿವಶಂಕರಪ್ಪ ಪ್ರಶ್ನಿಸಿದ್ದಾರೆ.

ಕಮಲ ಹೂವನ್ನು ಕಳುಹಿಸಿದರೆ ಅಭಿವೃದ್ಧಿ ಆಗಲ್ಲ. ಇಲ್ಲಿ ಅಭಿವೃದ್ಧಿ ಕೆಲಸಗಳನ್ನು ಮಾಡಬೇಕು. ಕೇವಲ ಮೋದಿ ಮೋದಿ ಎನ್ನುವುದಲ್ಲ ಎಂದು ಗಾಯಿತ್ರಿ ಸಿದ್ದೇಶ್ವರ್‌ಗೆ ಶಾಮನೂರು ಟಾಂಗ್ ಕೊಟ್ಟಿದ್ದಾರೆ.

ಶಾಮನೂರು ಹೇಳಿಕೆಗೆ ಬಿಜೆಪಿ ನಾಯಕರು ಕಿಡಿ: ಇನ್ನು ತಮ್ಮದೇ ಸೊಸೆ ಡಾ. ಪ್ರಭಾ ಮಲ್ಲಿಕಾರ್ಜುನ್ ದಾವಣಗೆರೆ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿಯಾಗಿದ್ದರೂ ಶಾಮನೂರು ಶಿವಶಂಕರಪ್ಪ ಮಹಿಳೆಯರ ಕುರಿತು ಲಘು ಹೇಳಿಕೆ ನೀಡಿದ್ದಾರೆ. ಹಿರಿಯ ಶಾಸಕನ ಹೇಳಿಕೆಗೆ ಬಿಜೆಪಿ ನಾಯಕರು ಕಿಡಿ ಕಾರಿದ್ದಾರೆ.

ಶಾಮನೂರು ಶಿವಶಂಕರಪ್ಪ ಹೇಳಿಕೆಗೆ ಬಿಜೆಪಿ ಅಭ್ಯರ್ಥಿ ಗಾಯಿತ್ರಿ ಸಿದ್ದೇಶ್ವರ್ ಕೆಂಡಾಮಂಡಲ ರಾಗಿದ್ದಾರೆ. ಮಹಿಳೆ ಅಡಿಗೆ ಮಾಡೋಕೆ ಸೀಮಿತ ಎಂಬ ಶಾಮನೂರು ಹೇಳಿಕೆ ವಿಚಾರ ಅವರು ಟಾಂಗ್ ಕೊಟ್ಟಿದ್ದಾರೆ. ಎಲ್ಲಾ ಕ್ಷೇತ್ರ ದಲ್ಲೂ ಮಹಿಳೆಯರು ಮುನ್ನುಗ್ಗುತ್ತಿದ್ದಾರೆ. ಆಕಾಶದಲ್ಲಿ ಹಾರುವ ಹಂತಕ್ಕೂ ಹೋಗಿ ದ್ದಾರೆ. ಎಲ್ಲಾ ಕ್ಷೇತ್ರದಲ್ಲಿ ಮುನ್ನುಗ್ಗುತ್ತಿರುವ ವಿಚಾರ ಅಜ್ಜನಿಗೆ ಗೊತ್ತಿಲ್ಲ ಅಂತಾ ಕಾಣಿಸುತ್ತಿದೆ ಎಂದು ಟಾಂಗ್ ಕೊಟ್ಟರು. ಶಾಮನೂರು ಶಿವಶಂಕರಪ್ಪ ಮಹಿಳೆಯರಿಗೆ ಅಗೌರವ ತೋರಿದ್ದಾರೆ. ಅಡುಗೆ ಮಾಡಿ, ಕೈ ತುತ್ತು ಕೊಡೋ ಪ್ರೀತಿ ಅವರಿಗೆ ಗೊತ್ತಿಲ್ಲ. ನಾವೆಲ್ಲ ಮಹಿಳೆಯರು ಅಡುಗೆ ಮಾಡೋಕೆ ಮಾತ್ರ ಸೀಮಿತಾನಾ? ಎಂದು ಪ್ರಶ್ನಿಸಿದ್ದಾರೆ.

ಮಹಿಳೆಯರನ್ನು ಸಾರ್ವಜನಿಕವಾಗಿ ಕಲ್ಲಿನಿಂದ ಹೊಡೆದು ಕೊಲ್ಲುವ ನಿಯಮ ಶೀಘ್ರದಲ್ಲೇ ಜಾರಿ: ತಾಲಿಬಾನ್ ಘೋಷಣೆ

ನವದೆಹಲಿ: ವ್ಯಭಿಚಾರ ಮಾಡಿ ಸಿಕ್ಕಿಬೀಳುವ ಮಹಿಳೆಯರನ್ನು ಸಾರ್ವಜನಿಕವಾಗಿ ಕಲ್ಲಿನಿಂದ ಹೊಡೆದು ಸಾಯಿಸುವ ನಿಯಮವನ್ನು ಶೀಘ್ರದಲ್ಲೇ ಮತ್ತೆ ಜಾರಿಗೆ ತರುವುದಾಗಿ ಅಫ್ಘಾನಿಸ್ತಾನದ ತಾಲಿಬಾನ್ ಸರ್ಕಾರ ಘೋಷಣೆ ಮಾಡಿರುವುದಾಗಿ ವರದಿಯಾಗಿದೆ.

ತಾಲಿಬಾನ್‌ನ ಸುಪ್ರೀಂ ನಾಯಕ ಮುಲ್ಲಾ ಹಿಬತುಲ್ಲಾ ಅಖುಂಡ್‌ಜಾದಾ ಈ ಘೋಷಣೆ ಮಾಡಿದ್ದಾನೆ. ಸಾರ್ವಜನಿಕವಾಗಿ ಮಹಿಳೆಯರನ್ನು ಕಲ್ಲಿನಿಂದ ಹೊಡೆದು ಕೊಲ್ಲುವ ನಿಯಮವನ್ನು ಶೀಘ್ರದಲ್ಲೇ ಮರು ಜಾರಿಗೆ ತರಲಾಗುವುದು ಎಂಬ ಧ್ವನಿ ಸಂದೇಶವನ್ನು ಕಳೆದ ಶನಿವಾರ ಸ್ಥಳೀಯ ಮಾಧ್ಯಮಗಳು ವರದಿ ಮಾಡಿವೆ ಎಂದು ಟೆಲಿಗ್ರಾಫ್ ವರದಿ ಮಾಡಿದೆ.

ಅಖುಂಡ್‌ಜಾದಾ, ಅಂತಾರಾಷ್ಟ್ರೀಯ ಸಮುದಾಯವು ಪ್ರತಿಪಾದಿಸುತ್ತಿರುವ ಮಹಿಳಾ ಹಕ್ಕುಗಳು ಇಸ್ಲಾಮಿಕ್ ಷರಿಯಾದ ತಾಲಿಬಾನ್ ವ್ಯಾಖ್ಯಾನಕ್ಕೆ ವಿರುದ್ಧವಾಗಿದೆ ಎಂದು ಪ್ರತಿಪಾದಿಸಿದ್ದಾನೆ. ನಾವು ಕಲ್ಲಿನಿಂದ ಹೊಡೆದು ಸಾಯಿಸುವುದನ್ನು ಮಹಿಳಾ ಹಕ್ಕುಗಳ ಉಲ್ಲಂಘನೆ ಎಂದು ನೀವು ಹೇಳುತ್ತೀರಿ. ಆದರೆ, ನಾವು ವ್ಯಭಿಚಾರ ಮಾಡುವವರಿಗೆ ಈ ಶಿಕ್ಷೆಯನ್ನು ಶೀಘ್ರದಲ್ಲೇ ಅನುಷ್ಠಾನಕ್ಕೆ ತರಲಿದ್ದೇವೆ. ನಾವು ಸಾರ್ವಜನಿಕವಾಗಿ ಮಹಿಳೆ ಯರಿಗೆ ಥಳಿಸುತ್ತೇವೆ. ಸಾರ್ವಜನಿಕವಾಗಿಯೇ ಕಲ್ಲಿನಿಂದ ಹೊಡೆದು ಸಾಯಿಸುತ್ತೇವೆ ಎಂದಿದ್ದಾನೆ.

ಕಾಬೂಲ್ ಅನ್ನು ಸ್ವಾಧೀನಪಡಿಸಿಕೊಳ್ಳುವುದರೊಂದಿಗೆ ತಾಲಿಬಾನ್‌ನ ಕೆಲಸವು ಕೊನೆಗೊಂಡಿಲ್ಲ, ಅದು ಈಗಷ್ಟೇ ಪ್ರಾರಂಭವಾಗಿದೆ ಎಂದು ಅಖುಂಡ್‌ಜಾದಾ ಹೇಳಿದ್ದಾನೆ.

ಉಚಿತ ಸ್ತ್ರೀರೋಗ ತಪಾಸಣೆ ಶಿಬಿರ

ಮೈಸೂರು, ಮಾ. 29– ಮೈಸೂರಿನ ರಾಮಕೃಷ್ಣನಗರದ ಸುಯೋಗ್ ಆಸ್ಪತ್ರೆಯಲ್ಲಿ ಏ. 1 ರಿಂದ 6 ರವರೆವಿಗೆ ಪ್ರಸೂತಿ ಮತ್ತು ಸ್ತ್ರೀರೋಗ ತಜ್ಞವೈದ್ಯರಾದ ಡಾ. ಗೀತಾ ಅವರ ನೇತೃತ್ವದಲ್ಲಿ ಉಚಿತ ಸ್ತ್ರೀರೋಗ ತಪಾಸಣಾ ಶಿಬಿರವನ್ನು ಆಯೋಜಿಸಲಾಗಿದೆ. ಶಿಬಿರದಲ್ಲಿ ಅನಿಯಮಿತ ಋತುಚಕ್ರ, ಮುಟ್ಟಿನಲ್ಲಿ ರಕ್ತಸ್ರಾವ, ಹೊಟ್ಟೆನೋವು, ಅಕಾಲಿಕ ಮುಟ್ಟು, ಬಿಳಿಬಟ್ಟೆ ಮುಂತಾದ ಸಮಸ್ಯೆಗಳಿಗೆ ತಪಾಸಣೆ ಹಾಗೂ ಉಚಿತ ಸಮಾಲೋಚನೆ ಇದ್ದು, ವೈದ್ಯರು ಸೂಚಿಸುವ ರಕ್ತಪರೀಕ್ಷೆ, ಗರ್ಭಕೋಶ ಸ್ಕ್ಯಾನಿಂಗ್ ಸಿ.ಟಿ. ಎಂ ಆರ್ ಐ ಪರೀಕ್ಷೆಗಳಿಗೆ ವಿಶೇಷ ಪ್ಯಾಕೇಜ್ ಲಭ್ಯವಿರುತ್ತದೆ. ಹೆಚ್ಚಿನ ಮಾಹಿತಿಗಾಗಿ 0821–2533600, 9986399862 ಸಂಪರ್ಕಿಸಬಹುದು.